ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಫೆಬ್ರವರಿ 7 ಶುಕ್ರವಾರ 2025

ಸಂಪುಟ: 45 | ಸಂಚಿಕೆ: 290 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮುಡಾ ಹಗರಣ ಸಿಬಿಐ ತನಿಖೆಗೆ ವಹಿಸಬೇಕೇ...: ಇಂದು ಬೆಳಿಗ್ಗೆ 10.30ಕ್ಕೆ ಹೈಕೋರ್ಟ್ ತೀರ್ಪು

ಸಿದ್ದರಾಮಯ್ಯ ಅಗ್ನಿಪರೀಕ್ಷೆ!



ಮೈಸೂರು, ಫೆ.6(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ತನಿಖೆಯನ್ನು ಸಿಬಿಐಗೆ ನೀಡಬೇಕೇ ಎಂಬುದರ ಬಗ್ಗೆ ಹೈಕೋರ್ಟ್ ತೀರ್ಪು ನಾಳೆ (ಫೆ.7) ಬೆಳಗ್ಗೆ 10.30ಕ್ಕೆ ಪ್ರಕಟವಾಗಲಿದೆ.

ಹೈಕೋರ್ಟ್‌ನ ಧಾರವಾಡ ಪೀಠದಲ್ಲಿ ಈ ಪ್ರಕರಣದ ವಿಚಾರಣೆ ಪೂರ್ಣಗೊಂಡಿದ್ದು, ನ್ಯಾಯಮೂರ್ತಿ ನಾಗಪ್ರಸನ್ನ ಅವರು ತೀರ್ಪನ್ನು ನಾಳೆಗೆ ಕಾಯ್ದಿರಿಸಿದ್ದರು. ಅದರಂತೆ ತೀರ್ಪು ಪ್ರಕಟವಾಗಲಿದ್ದು, ರಾಜಕೀಯ ಪಕ್ಷಗಳೂ ಸೇರಿದಂತೆ ಎಲ್ಲರ ಚಿತ್ತ ಈ ತೀರ್ಪಿನತ್ತ ನೆಟ್ಟಿದೆ.

ಹಿನ್ನೆಲೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಪತ್ನಿ ಶ್ರೀಮತಿ ಬಿ.ಎಂ.




ಪಾರ್ವತಿ ಹೆಸರಿನಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ಸುಮಾರು 56 ಕೋಟಿ ರೂ. ಮೌಲ್ಯದ 14 ನಿವೇಶನಗಳನ್ನು ಅಕ್ರಮವಾಗಿ ಪಡೆದಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಹೂಡಿದ್ದ ಮೊಕದ್ದಮೆಯ ■6ನೇ ಪುಟಕ್ಕೆ

ಹೈಕೋರ್ಟ್ ನನ್ನ ಪರವಾಗಿ ತೀರ್ಪು ನೀಡಲಿದೆ ಎಂಬ ಸಂಪೂರ್ಣ ವಿಶ್ವಾಸವಿದೆ. ಲೋಕಾಯುಕ್ತ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ತನಿಖೆ ನಡೆಸದೇ ಆರೋಪಿಗಳನ್ನು ರಕ್ಷಿಸುತ್ತಿದ್ದಾರೆ ಎಂಬುದಕ್ಕೆ ಸಂಬಂಧಿಸಿದಂತೆ ಬಹಳಷ್ಟು ದಾಖಲಾತಿಗಳನ್ನು ಹೈಕೋರ್ಟ್‌ಗೆ ಸಲ್ಲಿಸಲಾಗಿದೆ. ಒಂದು ವೇಳೆ ನನ್ನ ಪರವಾಗಿ ತೀರ್ಪು ಬಾರದಿದ್ದರೆ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುತ್ತೇನೆ.

–ಸ್ನೇಹಮಯಿ ಕೃಷ್ಣ, ಸಾಮಾಜಿಕ ಕಾರ್ಯಕರ್ತ

ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣ ಸಂಬಂಧವೂ ಇಂದು ಹೈಕೋರ್ಟ್ ತೀರ್ಪು



ಬೆಂಗಳೂರು, ಫೆ.6–ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣ ರದ್ದುಪಡಿಸುವ ಬಗ್ಗೆ ಹಾಗೂ ಇದೇ ಪ್ರಕರಣದಲ್ಲಿ ಅವರಿಗೆ ನಿರೀಕ್ಷಣಾ ಜಾಮೀನು ನೀಡುವ ಕುರಿತು ಹೈಕೋರ್ಟ್‌ನಿಂದ ನಾಳೆ (ಫೆ.7) ಬೆಳಗ್ಗೆ 10.30ಕ್ಕೆ ತೀರ್ಪು ಹೊರ ಬೀಳಲಿದೆ. ಒಂದು ವೇಳೆ ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿ ತೀರ್ಪು ನೀಡಿದ್ದೇ ಆದಲ್ಲಿ ಅವರಿಗೆ ನಿರೀಕ್ಷಣಾ ಜಾಮೀನು ನೀಡುವ ಸಂಬಂಧ ಸಲ್ಲಿಸಲಾಗಿರುವ ಅರ್ಜಿ ಸಹಜವಾಗಿಯೇ ವಜಾಗೊಳ್ಳುತ್ತದೆ. ಯಡಿಯೂರಪ್ಪ ಅವರು 2024ರ ಫೆ.2ರಂದು ತಮ್ಮ ನಿವಾಸಕ್ಕೆ ತಾಯಿಯೊಂದಿಗೆ ಬಂದಿದ್ದ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ್ದರು ಎಂಬ ಆರೋಪದ ದೂರನ್ನಾಧರಿಸಿ ಸದಾಶಿವನಗರ ಪೊಲೀಸ್ ಠಾಣೆ ಪೊಲೀಸರು 2024ರ ಮಾ.3ರಂದು ಅವರ ವಿರುದ್ಧ ■6ನೇ ಪುಟಕ್ಕೆ

ಬ್ಯಾಂಕ್‌ಗೆ ವಂಚನೆ ಪ್ರಕರಣ

ಮಾಜಿ ಸಚಿವ ಕೃಷ್ಣಯ್ಯ ಶೆಟ್ಟಿ ಸೇರಿ ನಾಲ್ವರಿಗೆ 3 ವರ್ಷ ಶಿಕ್ಷೆ

22 ವರ್ಷದ ಹಿಂದಿನ ಪ್ರಕರಣ ಸಂಬಂಧ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತೀರ್ಪು



ಎಸ್.ಎನ್.ಕೃಷ್ಣಯ್ಯ

ಬೆಂಗಳೂರು, ಫೆ.6–ಮಾಲೂರು ವಿಧಾನಸಭಾ ಕ್ಷೇತ್ರದ ಬಿಜೆಪಿ ಮಾಜಿ ಸಚಿವ ಎಸ್.ಎನ್.ಕೃಷ್ಣಯ್ಯ ಶೆಟ್ಟಿ, ಬ್ಯಾಂಕ್ ವಂಚನೆ ಪ್ರಕರಣದಲ್ಲಿ ತಪ್ಪಿತಸ್ಥ ಎಂದು ಸಾಬೀತಾಗಿದ್ದು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಐಪಿಸಿ 120ಬಿ, 420, 467, 471 ಸೆಕ್ಷನ್‌ಗಳಡಿ ಕೃಷ್ಣಯ್ಯ ಶೆಟ್ಟಿ, ಎಂಟಿವಿ ರೆಡ್ಡಿ, ಮುನಿರಾಜು, ಕೆ.ಶ್ರೀನಿವಾಸ್‌ಗೆ ತಲಾ 1 ಲಕ್ಷ ರೂ. ದಂಡದ ಜತೆಗೆ 3 ವರ್ಷ ಶಿಕ್ಷೆ ವಿಧಿಸಿದೆ. ಆದರೆ, ಕೋರ್ಟ್ ಕೃಷ್ಣಯ್ಯಶೆಟ್ಟಿಗೆ ವಿಧಿಸಲಾಗಿರುವ ಶಿಕ್ಷೆಯನ್ನು ಒಂದು ತಿಂಗಳ ಕಾಲ ಅಮಾನತ್ತಿನಲ್ಲಿಟ್ಟಿದೆ.

ಶಿಕ್ಷೆ ಅಮಾನತ್ತಿನಲ್ಲಿಟ್ಟು ಜಾಮೀನು ನೀಡುವಂತೆ ಕೃಷ್ಣಯ್ಯ ಶೆಟ್ಟಿ ಪರ ವಕೀಲ ನಾಗೇಂದ್ರ ನಾಯಕ್ ಅವರು ಕೋರ್ಟ್‌ಗೆ ಮನವಿ ಮಾಡಿದರು. ಈ ಮನವಿಯನ್ನು ಪುರಸ್ಕರಿಸಿದ ನ್ಯಾಯಾಲಯ, ಒಂದು ತಿಂಗಳ ಕಾಲ ಶಿಕ್ಷೆ ಅಮಾನತ್ತಿನಲ್ಲಿಟ್ಟಿದ್ದು, 5 ಲಕ್ಷ ಬಾಂಡ್, ಒಬ್ಬರ ಶ್ಯೂರಿಟಿ ಒದಗಿಸಲು ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಸೂಚನೆ ನೀಡಿದ್ದಾರೆ. ಅಲ್ಲದೇ ಇದಕ್ಕೆ ಮೇಲ್ಮನವಿ ಸಲ್ಲಿಸಲು ಅವಕಾಶ ನೀಡಿದ್ದಾರೆ.

ಏನಿದು ಪ್ರಕರಣ?: 1993ರಲ್ಲಿ ಬಾಲಾಜಿ ಕೃಪಾ ಎಂಟರ್‌ಪ್ರೈಸಸ್‌ನ ಮಾಲೀಕರಾಗಿದ್ದ ಕೃಷ್ಣಯ್ಯ ಶೆಟ್ಟಿ ಸಾರ್ವಜನಿಕ ಉದ್ದಿಮೆಗಳ ನೌಕರರಿಗೆ ಗೃಹ ನಿರ್ಮಾಣಕ್ಕೆ ಸಾಲ ಕೊಡಿಸುವುದಾಗಿ ಹೇಳಿ ವಂಚನೆ ಮಾಡಿದ್ದರು. ಬಿಟಿಎಸ್, ಕೆಎಸ್‌ಆರ್‌ಟಿಸಿ, ಬಿಎಸ್‌ಎನ್‌ಎಲ್, ಐಟಿಐ, ಎಚ್‌ಎಎಲ್, ಬಿಇಎಂಎಲ್, ಎಡಿಇ ಸಂಸ್ಥೆಗಳ 181 ಮಂದಿಗೆ 7.17 ಕೋಟಿ ರೂ.ಬ್ಯಾಂಕ್ ಸಾಲವನ್ನು ನಕಲಿ ದಾಖಲೆ ಸೃಷ್ಟಿಸಿ ಪಡೆದ ಆರೋಪ ಇತ್ತು. ಇದರಲ್ಲಿ 3.53 ಕೋಟಿ ಸಾಲ ತೀರಿಸಿಲ್ಲ ಎಂದು ಸಿಸಿಬಿ ಆರೋಪಿಸಿತ್ತು ಅಂದಿನ ಮುಖ್ಯ ವಿಚಕ್ಷಣೆ ದಳದ ಮುಖ್ಯಸ್ಥ ಆರ್.ಡಿ.ನಾಯ್ಡು ನೀಡಿರುವ ದೂರು ಆಧರಿಸಿ ಸಿಬಿಐ ತನಿಖೆ ಕೈಗೆತ್ತಿಕೊಂಡಿತ್ತು. ಬ್ಯಾಂಕ್ ಖಾತೆಗಳು, ಸಾಲ ವಿತರಣೆಯಾದ ಮಾಹಿತಿ ಕಲೆ ಹಾಕಿ ■6ನೇ ಪುಟಕ್ಕೆ





ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಮಾಜಿ ಸಚಿವರೂ ಹಾಗೂ ಮಳವಳ್ಳಿಯ ಜನಪ್ರಿಯ ಶಾಸಕರಾದ ಶ್ರೀ ಪಿ ಎಂ ನರೇಂದ್ರಸ್ವಾಮಿ ಅವರನ್ನು ಅವರ ಸ್ವಗ್ರಾಮ ಪುರಿಗಾಲಿಯಲ್ಲಿ ಭೇಟಿ ಮಾಡಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಮೈಸೂರು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ಶ್ರೀ ಬಿ.ಎಂ.ರಾಮು, ಮುಖಂಡರಾದ ಶ್ರೀ.ಪಿ ಎಂ.ಪರಶಿವಮೂರ್ತಿ, ಶ್ರೀಕಾಂತ್ ಚೆನ್ನಿಗ ಹಾಗೂ ಜೆ.ಪಿ.ಪ್ರವೀಣ್ ಹಾಜರಿದ್ದರು.

ಶ್ರೀ ಕಾಶಿ ಜಂಗಮವಾಡಿ ಮಠಕ್ಕೆ ಸುತ್ತೂರು ಶ್ರೀ ಭೇಟಿ



ಸುತ್ತೂರು ಶ್ರೀಗಳು ಪ್ರಯಾಗ್‌ರಾಜ್‌ನಲ್ಲಿ ಮಹಾ ಕುಂಭಮೇಳಕ್ಕೆ ತೆರಳಿದ್ದಾಗ ಅಲ್ಲಿಯ ಶ್ರೀ ಕಾಶಿ ಜಂಗಮವಾಡಿ ಮಠಕ್ಕೆ ಭೇಟಿ ನೀಡಿದ್ದರು. ಈ ವೇಳೆ ಕಾಶಿ ಮತ್ತು ಸುತ್ತೂರು ಜಗದ್ಗುರುಗಳು, ವಿವಿಧ ಮಠಾಧೀಶರು, ಇತರರಿದ್ದಾರೆ.

ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ...



ಮೈಸೂರಿನ ಡಾ.ಶಿವರಾಜ್‌ಕುಮಾರ್ ಅಭಿಮಾನಿಗಳ ಸಂಘ ಹೊರತಂದಿರುವ ನೂತನ ವರ್ಷದ ಕ್ಯಾಲೆಂಡರ್ ಅನ್ನು ಮೇಘಾಲಯ ರಾಜ್ಯಪಾಲ ಸಿ.ಹೆಚ್. ವಿಜಯಶಂಕರ್ ಬಿಡುಗಡೆ ಮಾಡಿದರು. ಈ ವೇಳೆ ಚಿತ್ರನಟ ಸೋಮಣ್ಣ, ಬಿ.ಎಸ್.ರವಿ, ಮಹೇಶ್, ರೇವಣ್ಣ, ರವಿ, ಕೆ.ಆರ್.ನಗರ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಡಿ ಪಾಲ್ ಕಾಲೇಜಿನಿಂದ ಇಂದು ಶೈಕ್ಷಣಿಕ ಸಮಾವೇಶ



ಡಾ.ಚಂದ್ರ ಜೆ.ಘೂಟೆ ಡಾ.ಜೇಮ್ಸ್ ಮಹರ್ ಹರ್ಷಿತಾ ಕಪೂರ್ ಡಾ.ಬೈಜು ಆಂತೋಣಿ

ಮೈಸೂರು,ಫೆ6–ಮೈಸೂರಿನ ಬೆಳಗೊಳದಲ್ಲಿರುವ ಡಿಪಾಲ್ ಕಾಲೇಜು, ಐಕ್ಯೂಎಸಿ ಸಹಯೋಗದೊಂದಿಗೆ ಉನ್ನತ ಶಿಕ್ಷಣದ ಅಂತರರಾಷ್ಟ್ರೀಕರಣ ಕುರಿತು ಶೈಕ್ಷಣಿಕ ಸಮಾವೇಶವನ್ನು ನಾಳೆ (ಫೆ.7) ಬೆಳಗ್ಗೆ 11 ಗಂಟೆಗೆ ಕಾಲೇಜು ಆವರಣದಲ್ಲಿ ಏರ್ಪಡಿಸಲಾಗಿದೆ. ಅಮೆರಿಕಾದ ನಯಾಗರ ವಿಶ್ವವಿದ್ಯಾನಿಲಯದ ಸ್ಕೂಲ್ ಆಫ್ ಎಜುಕೇಷನ್ ಡೀನ್ ಡಾ.ಚಂದ್ರ ಜೆ.ಘೂಟೆ, ನಯಾಗರ ವಿವಿ ಛೇರ್ಮನ್ ಡಾ.ಜೇಮ್ಸ್ ಜೆ. ಮಹರ್ ಸಿಎಂ ಮತ್ತು ನಯಾಗರ ವಿವಿ ಕೋ–ಆರ್ಡಿನೇಟರ್ ಹರ್ಷಿತಾ ಕಪೂರ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ. ಡಿ ಪಾಲ್ ಕಾಲೇಜು ಪ್ರಿನ್ಸಿಪಾಲ್ ರೆ.ಡಾ. ಬೈಜು ಆಂತೋಣಿ ಸಿಎಂ, ಎಜುಕೇಷನ್ ಬೋರ್ಡ್ ಸೆಕ್ರೆಟರಿ ರೆ.ಫಾ. ಸೆಬಾಸ್ಟಿಯನ್ ವೆಟ್ಟಿಕ್ಕಲ್ ಸಿಎಂ, ಡೀನ್ ಆಫ್ ಸ್ಟಡೀಸ್ ರೆ.ಡಾ.ಶಿಜೋ ಆಂತೋಣಿ ಸಿಎಂ, ಫೈನಾನ್ಷಿಯಲ್ ಅಡ್ಮಿನಿಸ್ಟ್ರೇಟರ್ ರೆ. ಫಾ. ಸಂತಾಯ್ ಕುರಿಯನ್ ಸಿಎಂ, ಕಾರ್ಯಕ್ರಮ ಸಂಯೋಜಕ ಡಾ.ಕೆ.ಜಿ. ಲಿಸಿ ಮತ್ತು ಐಕ್ಯೂಎಸಿ ಕೋಆರ್ಡಿನೇಟರ್ ಪಿ.ಜೆ. ಜೋಶಿ ಮತ್ತು ಡಿ ಪಾಲ್ ಇಂಟರ್‌ನ್ಯಾಷನಲ್ ರೆಸಿಡೆನ್ಷಿಯಲ್ ಸ್ಕೂಲ್ (ಡಿಪಿಐಆರ್‌ಎಸ್) ಪ್ರಿನ್ಸಿಪಾಲ್ ರೆ. ಫಾ. ಅನಿಶ್ ಗ್ಸೇವಿಯರ್ ಸಿಎಂ ಒಳಗೊಂಡ ಸಂಘಟನಾ ತಂಡ ಕಾರ್ಯಕ್ರಮ ನಿರ್ವಹಣೆ ಮಾಡಲಿದೆ.

ನಿಧನ

ಶ್ರೀರಾಂಪುರ ಆರ್.ಭಗವಾನ್



ಮೈಸೂರು, ಫೆ. 6– ಮೈಸೂರಿನ ಶ್ರೀರಾಂಪುರ ನಿವಾಸಿ ಹಾಗೂ ರಿಯಲ್ ಎಸ್ಟೇಟ್ ಏಜೆಂಟ್ ಆರ್.ಭಗವಾನ್ (54) ಗುರುವಾರ ಬೆಳಗ್ಗೆ ನಿಧನರಾದರು. ಮೃತರು ತಾಯಿ, ಪತ್ನಿ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

ದಾಸ್ ದುರೈರಾಜ್



ಮೈಸೂರಿನ ವಿಜಯನಗರ 4ನೇ ಹಂತದ ನಿವಾಸಿ ದಾಸ್ ದುರೈರಾಜ್ (77) ಹೃದಯಾಘಾತದಿಂದ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಗುರುವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಫೆ.7) ಗಾಂಧಿನಗರದ ಮಹದೇವಪುರ ರಸ್ತೆಯಲ್ಲಿರುವ ರೋಮನ್ ಕ್ಯಾಥೋಲಿಕ್ ಸಿಮೆಟ್ರಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಾನಸಿನಗರದ ಸುಶೀಲಮ್ಮ



ಮೈಸೂರಿನ ಮಾನಸೀನಗರದ ನಿವಾಸಿ ದಿವಂಗತ ಕಣ್ಣನ್ ಅವರ ಪತ್ನಿ ಸುಶೀಲಮ್ಮ (74) ದೀರ್ಘಕಾಲದ ಅನಾರೋಗ್ಯದಿಂದ ಗುರುವಾರ ಬೆಳಗ್ಗೆ ನಿಧನರಾದರು. ಮೃತರು ಪುತ್ರ ಶ್ರೀನಿವಾಸ್ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸುಲೋಚನ



ಮೈಸೂರು ಜನತಾನಗರ ನಿವಾಸಿ ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಡಿ ಗ್ರೂಪ್ ನೌಕರರ ಸಂಘದ ಮಾಜಿ ಅಧ್ಯಕ್ಷರೂ ಆದ ವಿ.ಶ್ರೀನಿವಾಸ್ ಅವರ ಪತ್ನಿ ಶ್ರೀಮತಿ ಸುಲೋಚನ (69) ಅವರು ಫೆ.1 (ಶನಿವಾರ) ರಂದು ರಾತ್ರಿ ಹೃದಯಾಘಾತದಿಂದ ನಿಧನರಾದರು. ಮೃತರು ಪತಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಮಾರನೇ ದಿನ ಭಾನುವಾರ ತೊಣಚಿಕೊಪ್ಪಲು ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಿದ್ದರಾಮಯ್ಯ ಮನೆಗೇ ಅಕ್ರಮ ನಿವೇಶನ ಮಂಜೂರಾತಿ ಪತ್ರ ಸಲ್ಲಿಸ್ತಿರಾ...!

ಯೋಧನಿಗೆ ನಿವೇಶನ ನೀಡಲು ಅಸಡ್ಡೆ: ಮುಡಾ ಅಧಿಕಾರಿಗಳ ವಿರುದ್ಧ ಬಿಜೆಪಿ ರಾಜ್ಯ ವಕ್ತಾರ ಎಂ.ಜಿ.ಮಹೇಶ್ ಕಿಡಿ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಗುರುವಾರ ಬಿಜೆಪಿ ರಾಜ್ಯ ವಕ್ತಾರ ಎಂ.ಜಿ.ಮಹೇಶ್ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಬಿಜೆಪಿ ಜಿಲ್ಲಾ ವಕ್ತಾರ ದಯಾನಂದ ಪಟೇಲ್, ನಗರ ಮಾಧ್ಯಮ ಸಂಚಾಲಕ ಮಹೇಶ್‌ರಾಜ್ ಅರಸ್ ಚಿತ್ರದಲ್ಲಿದ್ದಾರೆ.

ಮೈಸೂರು, ಫೆ.6(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮನೆಗೇ ಹೋಗಿ ಅವರ ಪತ್ನಿ ಪಾರ್ವತಿ ಅವರಿಗೆ ಅಕ್ರಮವಾಗಿ ನಿವೇಶನ ಮಂಜೂರಾತಿ ಪತ್ರ ನೀಡುವ ಮುಡಾ ಅಧಿಕಾರಿಗಳು, ಕಾರ್ಗಿಲ್ ಯುದ್ಧದಲ್ಲಿ ಹೋರಾಡಿದ ಯೋಧನಿಗೆ ಇನ್ನೂ ನಿವೇಶನ ನೀಡಿಲ್ಲ ಎಂದು ಬಿಜೆಪಿ ರಾಜ್ಯ ವಕ್ತಾರ ಎಂ.ಜಿ. ಮಹೇಶ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದ ಬಿಜೆಪಿ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಯೋಧನಿಗೆ ನಿವೇಶನ ನೀಡದಿರುವ ಮುಡಾ ಅಧಿಕಾರಿಗಳಿಗೆ ಹೈಕೋರ್ಟ್ ಛೀಮಾರಿ ಹಾಕಿದೆ. ಸರ್ಕಾರಕ್ಕೆ ನಾಚಿಕೆಯಾಗಬೇಕು ಎಂದರು.

ಭೂ ಮಾಫಿಯಾದವರಿಗೆ ಮುಡಾ ಅಧಿಕಾರಿಗಳು ರತ್ನಗಂಬಳಿ ಹಾಸಿ ಸ್ವಾಗತಿಸುತ್ತಾರೆ. ಆದರೆ ದೇಶಕ್ಕಾಗಿ ಹೋರಾಡಿದ ಯೋಧನಿಗೆ ನಿವೇಶನ ನೀಡಲು ಅಲೆದಾಡಿಸುತ್ತಿದ್ದಾರೆ. ಮುಡಾ ಅಧಿಕಾರಿಗಳ ಈ ವರ್ತನೆಯನ್ನು ಜನರು ಗಮನಿಸಿದ್ದು, ಇವರ ವಿರುದ್ಧ ಸಿಡಿದೇಳುವ ದಿನ ದೂರವಿಲ್ಲ ಎಂದು ಮಹೇಶ್ ಎಚ್ಚರಿಸಿದರು.

ತಾಕತ್ತಿಲ್ಲ!: ಇವರದೇ ಪಕ್ಷದ ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿ, ಕೇವಲ ಮೂರು ತಿಂಗಳಲ್ಲಿ ಜಾತಿ ಸಮೀಕ್ಷೆ ನಡೆಸಿ ವರದಿಯನ್ನು ಕೂಡ ಬಿಡುಗಡೆ ಮಾಡಿದ್ದಾರೆ. ಆದರೆ ಸಿದ್ದರಾಮಯ್ಯ, ಈ ತನಕ ಕಾಂತರಾಜು ವರದಿಯನ್ನು ಬಿಡುಗಡೆ ಮಾಡಿಲ್ಲ. ಜಾತಿ ಗಣತಿ ವರದಿ ಬಿಡುಗಡೆ ಮಾಡುವ ಬದ್ಧತೆ ಹಾಗೂ ತಾಕತ್ತು ಇಲ್ಲದಿದ್ದರೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು.


ಜಾತಿಗಣತಿ ವರದಿ ಬಿಡುಗಡೆ ಮಾಡಲು ರೇವಂತ್ ರೆಡ್ಡಿಗೆ ಸಾಧ್ಯವಾಗಿರುವುದು ಸಿದ್ದರಾಮಯ್ಯಗೆ ಏಕೆ ಸಾಧ್ಯವಾಗುತ್ತಿಲ್ಲ ಎಂದು ಪ್ರಶ್ನಿಸಿದ ಮಹೇಶ್, ತಾನು ಹಿಂದುಳಿದ ವರ್ಗಗಳ ಚಾಂಪಿಯನ್ ಎಂದೇಳಿಕೊಳ್ಳುವ ಸಿದ್ದರಾಮಯ್ಯರಿಗೆ ಹಿಂದುಳಿದ ವರ್ಗಗಳ ಬಗ್ಗೆ ಕಾಳಜಿ ಇಲ್ಲ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು.

ಮೂರ್ನಾಲ್ಕು ದಿನದಲ್ಲಿ ಗೊಂದಲ ನಿವಾರಣೆ: ಇದೇ ವೇಳೆ ಮಾತನಾಡಿದ ಬಿಜೆಪಿ ವಕ್ತಾರ ಎಂ.ಜಿ.ಮೋಹನ್, ದೆಹಲಿ ಚುನಾವಣೆ ಮುಗಿದಿದ್ದು, ಇನ್ನು ಮೂರ್ನಾಲ್ಕು ದಿನದಲ್ಲಿ ಕರ್ನಾಟಕ ಬಿಜೆಪಿಯಲ್ಲಿ ಎದುರಾಗಿರುವ ಸಮಸ್ಯೆ ಪರಿಹಾರ ಮಾಡುತ್ತಾರೆ. ಈ ಮೂಲಕ ಎಲ್ಲಾ ಭಿನ್ನಾಭಿಪ್ರಾಯ ಸರಿ ಹೋಗಲಿದೆ ಎಂದು ಅಭಿಪ್ರಾಯಪಟ್ಟರು.

ಪಕ್ಷದ ಚೌಕಟ್ಟಿನಲ್ಲಿ ಹೇಳಬೇಕಾದ ವಿಚಾರವನ್ನು ಬಹಿರಂಗವಾಗಿ ಪ್ರಸ್ತಾಪಿಸುತ್ತಿದ್ದಾರೆ. ಇಲ್ಲಿ ಕಾರ್ಯಕರ್ತರ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಆದರೆ ನಾಯಕರ ನಡುವೆ ಭಿನ್ನಾಭಿಪ್ರಾಯ ಇರುವುದು ಸತ್ಯ. ಹೈಕಮಾಂಡ್ ಸಂಧಾನಕ್ಕೆ ಕಳುಹಿಸಿರುವ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಶೀಘ್ರವೇ ಭಿನ್ನಾಭಿಪ್ರಾಯ ಸರಿಪಡಿಸಲಿದ್ದಾರೆ ಎಂದು ಮೋಹನ್ ವಿಶ್ವಾಸ ವ್ಯಕ್ತಪಡಿಸಿದರು. ಬಿಜೆಪಿ ಜಿಲ್ಲಾ ವಕ್ತಾರ ದಯಾನಂದ ಪಟೇಲ್, ನಗರ ಮಾಧ್ಯಮ ಸಂಚಾಲಕ ಮಹೇಶ್ ರಾಜ್ ಅರಸ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ನಿಸ್ವಾರ್ಥ ಸೇವೆಯೇ ನಿಜವಾದ ಸಮಾಜ ಸೇವೆ

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಅಭಿಮತ



ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಅವರಿಗೆ 'ಜೀವರಕ್ಷಕ ಸೇವಾ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಮೈಸೂರು, ಫೆ. 6– ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದವರ ಸೇವೆ ಮೂಲಕ ಸಮಾಜ ಸೇವೆ ಮಾಡುತ್ತಿದ್ದಾರೆ ಎಂದು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಶ್ಲಾಘಿಸಿದರು.

ಮೈಸೂರಿನ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜೀವಧಾರ ರಕ್ತನಿಧಿ ಕೇಂದ್ರದ ಆವರಣದಲ್ಲಿ ಶ್ರೀ ದುರ್ಗಾ ಫೌಂಡೇಶನ್ ಹಾಗೂ ಅರಿವು ಸಂಸ್ಥೆ ವತಿಯಿಂದ ಸ್ವಯಂಪ್ರೇರಿತ ರಕ್ತದಾನ ಶಿಬಿರ, 20 ವರ್ಷ ನಿರಂತರ ಸಾಮಾಜಿಕ ಸೇವೆ ಹಾಗೂ ಸಂಘಟನೆಯಿಂದ ಸೇವೆ ಸಲ್ಲಿಸುತ್ತಿರುವ ಎಸ್‌ಇ ಗಿರೀಶ್ ಅವರಿಗೆ 'ಜೀವರಕ್ಷಕ ಸೇವಾ' ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ನಿಸ್ವಾರ್ಥ ಸೇವಾಕಾರರು ಸಮಾಜದ ಸ್ವಾಸ್ಥ್ಯ ಕಾಪಾಡಲು ಸಹಕಾರಿ ಎಂದು ಗಿರೀಶ್‌ರ 20 ವರ್ಷದ ಸುದೀರ್ಘ ಕಾಲದ ಸೇವೆಯನ್ನು ಕೊಂಡಾಡಿದರು.

ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಲಿಂಗರಾಜು ಮಾತನಾಡಿ, ರಕ್ತದಾನಕ್ಕಿಂತ ಶ್ರೇಷ್ಠವಾದ ದಾನ ಮತ್ತೊಂದಿಲ್ಲ. ಅಪಘಾತ ಮತ್ತಿತರ ಸಂದರ್ಭದಲ್ಲಿ ರಕ್ತದ ಕೊರತೆಯಿಂದ ಪ್ರಾಣ ಕಳೆದುಕೊಳ್ಳುವ ಸ್ಥಿತಿಯಲ್ಲಿರುವ ರೋಗಿಗಳಿಗೆ ರಕ್ತದಾನ ಮಾಡುವವರೇ ಎರಡನೇ ದೇವರಾಗುತ್ತಾರೆ. ಅಂತಹ ಕೆಲಸವನ್ನು ಜೀವಧಾರ ರಕ್ತನಿಧಿ ಕೇಂದ್ರ 20 ವರ್ಷದಿಂದ ನಿರಂತರವಾಗಿ ನಡೆಸುತ್ತಾ ಬಂದಿದೆ.

ಜೀವಧಾರ ರಕ್ತನಿಧಿ ಕೇಂದ್ರ ಮೈಸೂರು ನಗರದ ಅತ್ಯುತ್ತಮ ರಕ್ತ ನಿಧಿ ಕೇಂದ್ರ ಎಂಬ ಪ್ರಶಂಸೆಗೆ ಪಾತ್ರವಾಗಿದೆ ಎಂಬುದು ಹೆಮ್ಮೆಯ ವಿಚಾರ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ದುರ್ಗಾ ಫೌಂಡೇಶನ್ ಹಾಗೂ ಅರಿವು ಸಂಸ್ಥೆಯ ಪದಾಧಿಕಾರಿಗಳು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.

ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ರಾಜ್, ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಜಿ.ರಾಘವೇಂದ್ರ, ಆನಂದ್, ಮುತ್ತಣ್ಣ, ಎಂ.ಗಂಟಯ್ಯ (ಕೃಷ್ಣಪ್ಪ), ದುರ್ಗಾ ಫೌಂಡೇಶನ್ ಅಧ್ಯಕ್ಷೆ ರೇಖಾ ಶ್ರೀನಿವಾಸ್, ಅರಿವು ಸಂಸ್ಥೆಯ ಅಧ್ಯಕ್ಷ ಶ್ರೀಕಾಂತ್ ಕಶ್ಯಪ್, ಕೇಬಲ್ ವಿಜಿ, ಸೂರಜ್, ಸದಾಶಿವ್, ವಿನಯ್ ಕಣಗಾಲ್, ರಾಕೇಶ್, ಕೆಂಪಣ್ಣ, ನಂದೀಶ್, ರಾಘವೇಂದ್ರ ಇನ್ನಿತರರು ಹಾಜರಿದ್ದರು.

ಕರ್ನಾಟಕದಲ್ಲಿ ದ್ವೇಷ ಭಾಷಣಕ್ಕೆ 3 ವರ್ಷ ಜೈಲು: ಹೊಸ ಬಿಲ್ ತರಲು ರಾಜ್ಯ ಸರ್ಕಾರ ಸಿದ್ಧತೆ

ಬೆಂಗಳೂರು, ಫೆ.6– ದ್ವೇಷ ಭಾಷಣ ಮಾಡಿದ್ದು ಸಾಬೀತಾದರೆ ಕರ್ನಾಟಕದಲ್ಲಿ ಇನ್ನು ಮೇಲೆ 3 ವರ್ಷ ಜೈಲು ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.


ರಾಜ್ಯ ಸರ್ಕಾರದಿಂದ ಮಹತ್ವದ ಮಸೂದೆಯೊಂದನ್ನು ತರಲು ಸಿದ್ಧತೆ ನಡೆಸಿದ್ದು, ಬಜೆಟ್ ಅಧಿವೇಶನದಲ್ಲಿ ಬಿಲ್ ಮಂಡಿಸುವ ಸಾಧ್ಯತೆ ಇದೆ. ದ್ವೇಷ ಅಪರಾಧಗಳು ಮತ್ತು ದ್ವೇಷ ಭಾಷಣ (ಹೋರಾಟ, ತಡೆಗಟ್ಟುವಿಕೆ ಮತ್ತು ಶಿಕ್ಷೆ) ವಿಧೇಯಕ 2025 ಕರಡನ್ನು ಕಾನೂನು ಇಲಾಖೆ ಸಿದ್ಧಪಡಿಸಿದೆ. ಜಾತಿ, ಧರ್ಮ ಆಧರಿಸಿ ದ್ವೇಷ ಭಾಷಣ ಮಾಡಿದರೆ ಜೈಲು ಗ್ಯಾರಂಟಿ. ಧಾರ್ಮಿಕ, ಜನಾಂಗೀಯ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನ್ಮ ಸ್ಥಳ, ಭಾಷೆ, ಅಂಗವೈಕಲ್ಯ ಬುಡಕಟ್ಟುವಿನ ಕುರಿತು ದ್ವೇಷ ಭಾಷಣ ಮಾಡುವಂತಿಲ್ಲ. ಭಾಷೆ, ಧಾರ್ಮಿಕ, ಜನಾಂಗೀಯ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನ್ಮ ಸ್ಥಳ ವಿಚಾರವಾಗಿ ದ್ವೇಷ ಭಾಷಣ ಮಾಡುವಂತಿಲ್ಲ. ಯಾವುದೇ ವ್ಯಕ್ತಿಗೆ ಹಾನಿ ಮಾಡುವ, ದ್ವೇಷ ಉತ್ತೇಜಿಸುವ, ಅದನ್ನು ಪ್ರಚಾರ ಮಾಡುವ ವ್ಯಕ್ತಿ ಅಥವಾ ಗುಂಪಿಗೆ ಮೂರು ವರ್ಷಗಳ ಕಾಲ ಜೈಲು ಶಿಕ್ಷೆ, 5 ಸಾವಿರ ತನಕ ದಂಡ.

ಯಾವುದೇ ಭಾವನಾತ್ಮಕ, ಮಾನಸಿಕ, ದೈಹಿಕ, ಸಾಮಾಜಿಕ ಅಥವಾ ಆರ್ಥಿಕ ಹಾನಿಯೂ ಶಿಕ್ಷೆ ವ್ಯಾಪ್ತಿಗೆ ತರಲು ಕರಡು ಸಿದ್ಧತೆ. ಯಾವುದೇ ದತ್ತಾಂಶ, ಸಂದೇಶ, ಪಠ್ಯ ಚಿತ್ರಗಳು, ಧ್ವನಿ, ಧ್ವನಿ, ಸಂಕೇತಗಳು, ಕಂಪ್ಯೂಟರ್ ಪ್ರೋಗ್ರಾಮ್‌ಗಳು ಸಾಫ್ಟ್‌ವೇರ್ ಮತ್ತು ಡೇಟಾಬೇಸ್‌ಗಳು ಕಾನೂನು ವ್ಯಾಪ್ತಿಗೆ ತರಲಾಗುತ್ತಿದೆ.

ರೈಲು ಹರಿದು ಮೂವರು ಕುಂಭಮೇಳ ಭಕ್ತಾದಿಗಳು ಸಾವು!

ಪಾಟ್ನ, ಫೆ.6–ರೈಲು ಹರಿದು ಮೂವರು ಮಹಾಕುಂಭಮೇಳ ಭಕ್ತಾದಿಗಳು ಸಾವನ್ನಪ್ಪಿರುವ ಘಟನೆ ಫೆ6ರಂದು ನಡೆದಿದೆ. ಬಿಹಾರದ ಮುಂಗೇರ್ ಜಿಲ್ಲೆಯಲ್ಲಿ ಗುರುವಾರ ಮುಂಜಾನೆ ನಡೆದ ಅಪಘಾತದಲ್ಲಿ ಮೃತಪಟ್ಟವರನ್ನು ರಾಮ್ ರುಚಿದೇವಿ (65), ಅಮಿತ್ ಕುಮಾರ್ (41) ಮತ್ತು ಉಷಾ ದೇವಿ (61) ಎಂದು ಗುರುತಿಸಲಾಗಿದೆ. ಇವರು ಮಹಾ ಕುಂಭಮೇಳದಲ್ಲಿ ಸಂಗಮ (ಪ್ರಯಾಗ್‌ರಾಜ್)ನಲ್ಲಿ ಪವಿತ್ರ ಸ್ನಾನ ಮಾಡಿ ಮನೆಗೆ ಹಿಂತಿರುಗುತ್ತಿದ್ದರು. ಪೂರ್ವ ಮಧ್ಯ ರೈಲ್ವೆಯ ಜಮಾಲ್ಪುರ್–ಸುಲ್ತಾಂ ಗಂಜ್ ರೈಲ್ವೆ ವಿಭಾಗದ ಋಷಿಕುಂಡ್ ರೈಲ್ವೆ ನಿಲುಗಡೆಯ ಬಳಿ ಇವರು ರೈಲು ಹಳಿ ದಾಟುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಹಳಿ ದಾಟುವಾಗ ಗಯಾ–ಹೌರಾ ಎಕ್ಸ್‌ಪ್ರೆಸ್ ವೇಗವಾಗಿ ಬಂದಿದ್ದು ಭಕ್ತಾದಿಗಳು ಅದಕ್ಕೆ ಸಿಲುಕಿ ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯರು ಹೇಳಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

7.02.2025 ಶುಕ್ರವಾರ, ಮಳೆ ನಕ್ಷತ್ರ: ಧನಿಷ್ಠ 06.02.2025 ರಿಂದ 18.02.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಶುಕ್ಲ ಪಕ್ಷ,
ತಿಥಿ: ದಶಮಿ, ನಕ್ಷತ್ರ: ರೋಹಿಣಿ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯ, ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ :** ರಕ್ತದಾನ ಶಿಬಿರ, ಅಧ್ಯಕ್ಷತೆ : ಎಂಎಂಸಿ ಮತ್ತು ಆರ್‌ಐ ಡೀನ್ ಮತ್ತು ನಿರ್ದೇಶಕರಾದ ಡಾ. ಕೆ.ಆರ್. ದಾಕ್ಷಾಯಿಣಿ, ಮುಖ್ಯ ಅತಿಥಿಗಳು : ಮುಖ್ಯ ಆಡಳಿತಾಧಿಕಾರಿ ಶ್ರೀಮತಿ ಸಿ.ಆರ್. ಕಲ್ಪಶ್ರೀ, ಪ್ರಾಂಶುಪಾಲ ಡಾ. ಸತೀಶ್, ವೈದ್ಯಕೀಯ ಅಧೀಕ್ಷಕ ಡಾ. ಹೆಚ್.ಪಿ. ಶೋಭಾ, ರಕ್ತನಿಧಿ ಅಧಿಕಾರಿ ಡಾ. ಕುಸುಮ, ಸ್ಥಳ: ರಕ್ತನಿಧಿ ಕೇಂದ್ರ, ಕೆ.ಆರ್. ಆಸ್ಪತ್ರೆ ಆವರಣ, ಬೆಳಗ್ಗೆ 10 ರಿಂದ.

■ **ದೀಪಾ ಸಂಯುಕ್ತ ಪದವಿಪೂರ್ವ ಕಾಲೇಜು :** ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ, ಮುಖ್ಯ ಅತಿಥಿಗಳು : ಕರ್ನಾಟಕ ರಾಜಕೀಯ ವಿಜ್ಞಾನ ಅಸೋಸಿಯೇಷನ್ ಅಧ್ಯಕ್ಷ ಡಾ. ಗುರುಬಸವರಾಜಸ್ವಾಮಿ ಪಂಡಿತ, ಅಧ್ಯಕ್ಷತೆ : ಕಾಲೇಜು ಅಧ್ಯಕ್ಷ ಎಂ. ರಾಮಪ್ಪ, ಸ್ಥಳ: ವಿವೇಕಾನಂದ ಸಭಾಂಗಣ, ಕಾಲೇಜು ಆವರಣ, ರೂಪಾನಗರ, ಬೆಳಗ್ಗೆ 11ಕ್ಕೆ.

■ **ಶ್ರೀ ಶ್ರೀ 101 ಗಣಪತಿ ದೇವಸ್ಥಾನ ಟ್ರಸ್ಟ್ :** ಶ್ರೀ ವೀರಭದ್ರೇಶ್ವರ ಪ್ರತಿಷ್ಠಾನ ಮಹೋತ್ಸವ, ಬ್ರಾಹ್ಮೀ ಮುಹೂರ್ತದಲ್ಲಿ ಅಷ್ಟಬಂಧನ್ಯಾಸಗಳು, ನಾಡೀ ಸಂದಾನ ಪ್ರಾಣ ಪ್ರತಿಷ್ಠೆ ಪ್ರಧಾನ ಹೋಮ, ಬೆಳಗ್ಗೆ 9.45ಕ್ಕೆ ಪೂರ್ಣಾಹುತಿ, 10ಕ್ಕೆ ಕುಂಭಾಭಿಷೇಕ ಅಲಂಕಾರ ನಿರೀಕ್ಷಣೆ, ಮಧ್ಯಾಹ್ನ 12.20ಕ್ಕೆ ದರ್ಪಣಾ ದರ್ಶನ, ಹಸುಕರು ದರ್ಶನ ರಂಭಾವೃಕ್ಷ ಛೇದನ ಮಹಾಮಂಗಳಾರತಿ, 12.30ಕ್ಕೆ ರಾಜೋಪಚಾರ, ರಾಷ್ಟ್ರಾಶೀರ್ವಾದ, ತೀರ್ಥಪ್ರಸಾದ ವಿನಿಯೋಗ, ದಿವ್ಯ ಸಮ್ಮುಖ: ಗದಗ ಜಿಲ್ಲೆ, ಬನ್ನಿಕೊಪ್ಪ ಬೃಹನ್ಮಠ, ಶ್ರೀ ಅರಮನೆ ಜಪದಕಟ್ಟೆ ಮಠದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು, ವಿಶೇಷ ಆಹ್ವಾನಿತರು : ನಿವೃತ್ತ ಡೈರೆಕ್ಟರ್ ಆಫ್ ಜನರಲ್ ಪೊಲೀಸ್ ಎಲ್. ರೇವಣ್ಣಸಿದ್ದಯ್ಯ, ಸ್ಥಳ: ದೇವಸ್ಥಾನ ಟ್ರಸ್ಟ್ ಆವರಣ, ತ್ಯಾಗರಾಜ ರಸ್ತೆ, ಕೆ.ಆರ್. ಮೊಹಲ್ಲಾ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ :** ವಚನ ಗಾಯನ ಮತ್ತು ಉಪನ್ಯಾಸ, ಉದ್ಘಾಟನೆ : ಶ್ರೀ ಗೋಕುಲ ಶಾಲೆ ಪ್ರಾಂಶುಪಾಲರಾದ ಶ್ರೀಮತಿ ಕೆ.ಎಸ್. ವಸಂತಕುಮಾರಿ, ಸಾಹಿತಿ ರಾಜು ಕೆ. ಬನ್ನೂರು ಅವರಿಂದ ವಚನ ಸಾಹಿತ್ಯ ಮೌಲ್ಯಗಳು ಕುರಿತು ಉಪನ್ಯಾಸ, ವಿದ್ಯಾರ್ಥಿಗಳಿಂದ ವಚನ ಗಾಯನ, ಪ್ರಶಸ್ತಿ ವಿತರಣೆ : ಶ್ರೀ ಗೋಕುಲ ಶಾಲೆ ಮುಖ್ಯೋಪಾಧ್ಯಾಯ ಜೆ. ಸುಧೀರ್‌ಕುಮಾರ್, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ಶ್ರೀ ಗೋಕುಲ ಶಾಲೆ, ಕುವೆಂಪುನಗರ, ಮಧ್ಯಾಹ್ನ 2 ಗಂಟೆಗೆ.

■ **ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್ :** ರಂಗಭೂಮಿ ಮತ್ತು ಜನಪದ ಕಲಾಪ್ರಕಾರಗಳ ಉಚಿತ ತರಬೇತಿ ಶಿಬಿರ, ಉದ್ಘಾಟನೆ: ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಅಧ್ಯಕ್ಷತೆ: ಪ್ರಸಾರಾಂಗ ನಿರ್ದೇಶಕ ಡಾ.ನಂಜಯ್ಯ ಹೊಂಗನೂರು, ಮುಖ್ಯ ಅತಿಥಿಗಳು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಸಿ.ಸುದರ್ಶನ್, ರಾಜೇಶ್ವರಿ ವಸ್ತ್ರಾಲಂಕಾರ ಮಾಲೀಕ ಬಿ.ಎಂ.ರಾಮಚಂದ್ರು, ರಾಜೇಶ್ ತಲಕಾಡು, ಉಪಸ್ಥಿತರು : ಗೌತಮ ಟ್ರಸ್ಟ್ ಅಧ್ಯಕ್ಷ ಕೃಷ್ಣಮೂರ್ತಿ ತಲಕಾಡು, ಸ್ಥಳ: ಬಿ.ವಿ.ಕಾರಂತರ ರಂಗ ಚಾವಡಿ, ರಂಗಾಯಣ, ಸಂಜೆ 4ಕ್ಕೆ.

■ **ನೃತ್ಯ ವಿದ್ಯಾಪೀಠ :** ಸಂಜೆ 4.30ಕ್ಕೆ ವಾರ್ಷಿಕೋತ್ಸವ ಸಮಾರಂಭ, ನರ್ತನ ವೃಕ್ಷಾವಳಿ–2025, ಕೃಷ್ಣಾಯ ತುಭ್ಯಂ ನಮಃ, ಉದ್ಘಾಟನೆ : ರಂಗರಾವ್ ಸ್ಮಾರಕ ವಿಶೇಷಚೇತನರ ಶಾಲೆ ಶಿಕ್ಷಕಿ ವಿದುಷಿ ಶ್ರೀಮತಿ ಸಿ.ಎಸ್. ಲಕ್ಷ್ಮೀ, ವಿಶೇಷ ಆಹ್ವಾನಿತರ : ಲೆಫ್ಟಿನೆಂಟ್ ಕರ್ನಲ್ (ನಿವೃತ್ತ) ಕೆ.ಎ. ಗೀತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಹೊಳೆನರಸೀಪುರ ಸ್ವರ್ಣ ಶಿಕ್ಷಣ ಸಂಸ್ಥೆ ಶ್ರೀಮತಿ ಶೋಭಾ ಬಾಲಕೃಷ್ಣ, ಎಲ್ ಅಂಡ್ ಟಿ ಟೆಕ್ನಾಲಜಿ ಸರ್ವೀಸಸ್ ವ್ಯವಸ್ಥಾಪಕರಾದ ಶ್ರೀಮತಿ ಜಿ.ಕೆ. ಕಮಲ, ನೃತ್ಯ ವಿದ್ಯಾಪೀಠ ಸಂಸ್ಥಾಪಕ ನಿರ್ದೇಶಕ ಗುರು ವಿದುಷಿ ಸಿ.ಎನ್. ಅನಿತಾ, ಸಂಜೆ 5ಕ್ಕೆ ಗುರು ವಿದುಷಿ ಸಿ.ಎನ್. ಅನಿತಾ ಅವರಿಂದ ನರ್ತನ ವೃಕ್ಷಾವಳಿ, ಸಂಜೆ 6.30ಕ್ಕೆ ಭಾರತ ಕೇಸರಿ ಪ್ರಶಸ್ತಿ ಪ್ರದಾನ ಸಮಾರಂಭ, ಸ್ಥಳ: ಕಲಾಮಂದಿರ.

■ **ಬನಶಂಕರಿ ವಿದ್ಯಾಸಂಸ್ಥೆ :** ಶಾಲಾ ವಾರ್ಷಿಕೋತ್ಸವ, ಉದ್ಘಾಟನೆ : ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ, ಅಧ್ಯಕ್ಷತೆ : ಬನಶಂಕರಿ ವಿದ್ಯಾಸಂಸ್ಥೆ ಗೌರವಾಧ್ಯಕ್ಷ ಎ. ಗಂಗಾಧರ, ಸನ್ಮಾನಿತರು : ಬಿಇಓ, ಮೈಸೂರು ಗ್ರಾಮಾಂತರ ಪ್ರಕಾಶ್ ಎಂ., ಆರಕ್ಷಕ ಉಪ ನಿರೀಕ್ಷಕ ಸದಾಶಿವ ತಿಪ್ಪಾರೆಡ್ಡಿ, ಪ್ರಾಸ್ತಾವಿಕ ನುಡಿ : ಪ್ರಾಧ್ಯಾಪಕರಾದ ಪ್ರೊ. ಡಿ. ವಿಜಯಲಕ್ಷ್ಮಿ, ಬಹುಮಾನ ವಿತರಣೆ : ಪಿಡಿಓ ಬಿ. ಬಸವರಾಜು, ಬಿ.ಟಿ. ಭಾಸ್ಕರ್, ಸ್ಥಳ: ಶಾಲಾ ಆವರಣ, ವಾಜಮಂಗಲ, ಸಂಜೆ 5ಕ್ಕೆ.

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ವಿಭಾಗ :** ಬೆಳಗ್ಗೆ 10ಕ್ಕೆ ದೈಹಿಕ ಶಿಕ್ಷಣ ಮತ್ತು ಸಂಬಂಧಿತ ವಿಜ್ಞಾನಗಳು ಕುರಿತು ಅಂತರರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಶಾಸಕ ಕೆ. ಹರೀಶ್‌ಗೌಡ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಪ್ರೊ. ಸೋಮಣ್ಣ, ಮುಖ್ಯ ಅತಿಥಿಗಳು : ಶಾಸಕ ದರ್ಶನ್ ಧ್ರುವನಾರಾಯಣ, ಪ್ರೊ. ಮೊಹಮ್ಮದ್ ತಾರೆಕ್ ಮಲಾಸ್, ಖೋ ಖೋ ವಿಶ್ವಕಪ್ ವಿಜೇತ ಆಟಗಾರ್ತಿ ಕು.ಬಿ. ಚೈತ್ರ, ಉದ್ಘಾಟನಾ ಭಾಷಣ : ಕಾಲೇಜು ಶಿಕ್ಷಣ ವಿಭಾಗದ ಪ್ರಾದೇಶಿಕ ಜಂಟಿ ನಿರ್ದೇಶಕರಾದ ಡಾ. ಎ.ಹೆಚ್.ಎಂ. ವಿಜಯಲಕ್ಷ್ಮಿ, ಡಾಕ್ಟರ್‌ಪ್ರಿನ್ಯೂರ್ ಡಾ. ಬಿ.ಎಸ್. ಅಜಯ್‌ಕುಮಾರ್, ಪ್ರಾಸ್ತಾವಿಕ ನುಡಿ : ಪ್ರೊ. ಮಣಿಅಳಗು, ಉಪಸ್ಥಿತರು : ಡಾ. ಕೃಷ್ಣಸ್ವಾಮಿ, ಡಾ. ಆರ್. ನಳಿನಿ, ಡಾ. ಎಸ್. ಮುತ್ತುರಾಜ, ಡಾ. ಡಿ. ರಮಣಿ, ಎಸ್.ಟಿ. ಉದಯ್‌ಕುಮಾರ್, ಎಂ.ಎನ್. ಪ್ರಭು, ಅಧ್ಯಕ್ಷತೆ : ಪ್ರಿನ್ಸಿಪಾಲ್ ಪ್ರೊ. ಸೋಮಣ್ಣ; ಸಂಜೆ 4.30ಕ್ಕೆ ಸಮಾರೋಪ ಸಮಾರಂಭ, ಸಮಾರೋಪ ಭಾಷಣ : ಪ್ರೊ. ಜ್ಯೋತಿ ಧರ್ಮಪ್ರಕಾಶ್, ಅಧ್ಯಕ್ಷತೆ : ಪ್ರಿನ್ಸಿಪಾಲ್ ಪ್ರೊ. ಸೋಮಣ್ಣ, ಮುಖ್ಯ ಅತಿಥಿಗಳು : ಕೆಜಿಸಿಟಿಎ ಅಧ್ಯಕ್ಷ ಡಾ. ಟಿ.ಎಂ. ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಡಾ.ಹೆಚ್.ಜಿ. ನಾರಾಯಣ, ಸ್ಥಳ:ಕಾಲೇಜು ಸಭಾಂಗಣ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ :** ಶ್ರೀ ತ್ಯಾಗರಾಜ ಆರಾಧನೆ ಪ್ರಯುಕ್ತ ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ, ವಿದುಷಿ ಅದಿತಿ ಪ್ರಹ್ಲಾದ್ ಅವರಿಂದ ಗಾಯನ, ಸಹಕಾರ : ವಿದುಷಿ ಕೃತಿಕ್ ಕೌಶಿಕ್, ವಿದ್ವಾನ್ ಬಿ.ಜಿ. ಶ್ರೀನಿವಾಸ್, ವಿದ್ವಾನ್ ಬಿ. ಹರೀಶ್‌ಚಂದ್ರ, ಸ್ಥಳ: ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನ, ಎಸ್‌ಬಿಎಂ ಕಾಲೋನಿ, ಶ್ರೀರಾಂಪುರ, ಸಂಜೆ 6 ರಿಂದ 8.30 ರವರೆಗೆ.

■ **ಶ್ರೀ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ :** 59ನೇ ವರ್ಷದ ತೈಪೂಸಂ ಮಹೋತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು, ಸಂಜೆ 6.30ಕ್ಕೆ ನಾಟ್ಯ ಸಂಸ್ಕೃತಿ ಕಲಾನಿಕೇತನದ ವಿದುಷಿ ಎಸ್.ಎನ್. ಮೇಘನರಾವ್ ಅವರಿಂದ ಭರತನಾಟ್ಯ ನೃತ್ಯ ಪ್ರದರ್ಶನ, ಸ್ಥಳ: ದೇವಸ್ಥಾನದ ಆವರಣ, ವಿಶ್ವೇಶ್ವರನಗರ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ : ಡಾ. ಕಲೀಂವುಲ್ಲಾ, ಪ್ರಸ್ತುತಿ: ಜಿ. ಶಾಂತಕುಮಾರ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ. ಎ. ಶೋಭಾ, ವ್ಯಾಖ್ಯಾನ–ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 KABHI-ಕರ್ನಾಟಕ, ಮೆದುಳು ಆರೋಗ್ಯ ಕುರಿತ ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ನಿಮ್ಹಾನ್ಸ್ ಸಂಸ್ಥೆ, ಬೆಂಗಳೂರು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ 'ರುಮೆಟಾಯ್ಡ್ ಆರ್ಥ್ರೈಟಿಸ್ ಡೇ' ಕುರಿತು ಮಾಹಿತಿ ನೀಡುತ್ತಾರೆ, ಮೈಸೂರಿನ ಜೆ. ಎಸ್. ಎಸ್ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಯ ಸಂಧಿವಾತ ಮತ್ತು ಕೀಲುರೋಗ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಮಹಬಲೇಶ್ವರ ಮಮದಾಪುರ ಮತ್ತು ವಿಶ್ವ ಕ್ಯಾನ್ಸರ್ ದಿನಾಚರಣೆಯ ಸಂಬಂಧವಾಗಿ 'ಕ್ಯಾನ್ಸರ್ ಜಾಗೃತಿ' ಕುರಿತು ಮಾಹಿತಿ ನೀಡುತ್ತಾರೆ ಡಾ. ತರಂಗಿಣಿ ದುರುಗಪ್ಪ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 9.40 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸೈಕಲ್ ಸವಾರಿ ಮಾತಿನ ಲಹರಿ', ಪ್ರಸ್ತುತಿ : ಜಾಂಪಣ್ಣ ಆಶೀಹಾಳ್

ಮಧ್ಯಾಹ್ನ: 12.35 ದೇವರನಾಮ, 12.45 ಕಾದಂಬರಿ ವಿಹಾರ –ಎಂ.ಆರ್.ಶ್ರೀನಿವಾಸಮೂರ್ತಿಯವರ 'ರಂಗಣ್ಣನ ಕನಸಿನ ದಿನಗಳು' ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ: ಉಮೇಶ್. ಎಸ್.ಎಸ್., 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ: ಜಿ.ಕೆ.ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ, 6.50 ಕೃಷಿರಂಗ: ಸಂಬಾರು ಈರುಳ್ಳಿ ಬೇಸಾಯ ಈ ಕುರಿತು ಬಾಗಲಕೋಟೆಯ ತೋಟಗಾರಿಕಾ ಮಹಾವಿದ್ಯಾಲಯದ ವಿಜ್ಞಾನಿ ಡಾ.ಹೆಚ್.ಎಂ.ಪಲ್ಲವಿ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ–ನಾಟಕರಂಗದ ಇಂದಿನ ಸ್ಥಿತಿಗತಿಗಳು. ಮಾತನಾಡುತ್ತಾರೆ ಆಲೂರು ದೊಡ್ಡನಿಂಗಪ್ಪ, 8.00 –ಸಂಸದ್ ಸಮೀಕ್ಷಾ, 8.15 ವಿಜ್ಞಾನ ಭಾರತೀ–ಕ್ವಾಂಟಂ ಭೌತ ವಿಜ್ಞಾನದಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ಮಾತನಾಡುತ್ತಾರೆ ಕೆ.ಎಸ್.ಮಲ್ಲೇಶ್, ಬಾಹ್ಯಾಕಾಶದಲ್ಲಿ ವಾಯೇಜರ್ ನೌಕೆಯ ಅಪ್ರತಿಮಯಾನ ಈ ಬಗ್ಗೆ ಎನ್. ಶಂಕರ್ ಅವರಿಂದ ಮಾಹಿತಿ, ಪ್ರಸ್ತುತಿ: ಜಿ.ಶಾಂತಕುಮಾರ್, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00–ಸಂಸತ್ತಿನ ಪ್ರಶ್ನೋತ್ತರ ಕಲಾಪಗಳ ಧ್ವನಿಮುದ್ರಣದ ಪ್ರಸಾರ

ಬೆಂಗಳೂರು: ನಿರ್ಮಾಣ ಹಂತದ ಕಟ್ಟಡದಲ್ಲಿ ಬೆಂಕಿ; ಇಬ್ಬರು ಕಾರ್ಮಿಕರು ಸಜೀವ ದಹನ



ಬೆಂಗಳೂರು, ಫೆ.6– ಬೆಂಗಳೂರಿನ ಉತ್ತರ ತಾಲೂಕಿನ ಸೀಗೆಹಳ್ಳಿಯಲ್ಲಿ ನಿರ್ಮಾಣ ಹಂತದ ನಾಲ್ಕು ಅಂತಸ್ತಿನ ಕಟ್ಟಡವೊಂದರಲ್ಲಿ ಗುರುವಾರ ಮಧ್ಯಾಹ್ನ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಅಗ್ನಿ ಅವಘಡದಲ್ಲಿ ಇಬ್ಬರು ಸಜೀವ ದಹನವಾಗಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಅಗ್ನಿ ಅವಘಡ ಸಂಭವಿಸಿದ್ದು, ಮೃತರನ್ನು ಉತ್ತರ ಪ್ರದೇಶ ಮೂಲದ ಉದಯ್ ಭಾನು(40) ಮತ್ತು ಬಿಹಾರ ಮೂಲದ ರೋಷನ್ (23) ಎಂದು ಗುರುತಿಸಲಾಗಿದೆ.

ಮೃತ ಕಾರ್ಮಿಕರಲ್ಲಿ ಒಬ್ಬ ಪೇಂಟರ್, ಮತ್ತೊಬ್ಬರು ಕಾರ್ಪೆಂಟರ್ ವೃತ್ತಿ ಮಾಡುತ್ತಿದ್ದರು. ಕಡಬಗೆರೆ ಕ್ರಾಸ್‌ನಲ್ಲಿ ಸತೀಶ್ ಎಂಬುವರು 4 ಅಂತಸ್ತಿನ ಮನೆ ನಿರ್ಮಾಣ ಮಾಡುತ್ತಿದ್ದು, ಕೆಲ ಕಾರ್ಮಿಕರು ಈ ಕಟ್ಟಡದಲ್ಲೇ ಅಡುಗೆ ಮಾಡಿಕೊಂಡು ಅಲ್ಲೇ ವಾಸವಿದ್ದರು.

ಇಂದು ಮಧ್ಯಾಹ್ನ ಈ ಕಟ್ಟಡದಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣ ಅಕ್ಕ–ಪಕ್ಕದವರು ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸಿದ್ದಾರೆ. 4 ಅಗ್ನಿಶಾಮಕ ವಾಹನಗಳೊಂದಿಗೆ ಧಾವಿಸಿದ ಸಿಬ್ಬಂದಿ ಬೆಂಕಿಯನ್ನು ನಂದಿಸಿದರಾದರೂ ಅಷ್ಟರಲ್ಲಾಗಲೇ ಇಬ್ಬರು ಕಾರ್ಮಿಕರು ಸಜೀವ ದಹನವಾಗಿದ್ದು, ಮತ್ತೊಬ್ಬ ಕಾರ್ಮಿಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮಾದನಾಯಕನಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುವ ಅಗ್ನಿ ಅವಘಡಕ್ಕೆ ಕಾರಣವೇನೆಂದು ಪತ್ತೆ ಮಾಡುವಲ್ಲಿ ನಿರತರಾಗಿದ್ದಾರೆ.

24ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 24 ವರ್ಷ ಕಳೆದರೂ ಸದಾ ನಿಮ್ಮ ಆಶೀರ್ವಾದ ಹಾಗೂ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು:
ಪತಿ: ಸಿ. ಮಹದೇವು (ರೈಲ್ವೆ ನಿವೃತ್ತ)ರವರು ಮತ್ತು ಗಂಡುಮಕ್ಕಳು, ಸೊಸೆಯಂದಿರು, ಹೆಣ್ಣುಮಕ್ಕಳು ಹಾಗೂ ಅಳಿಯಂದಿರು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು

ಗೌರಮ್ಮ ಸಿ. ಮಹದೇವು
ಇಟ್ಟಿಗೆಗೂಡು

ದಿವಾನಿ ಸಿವಿಲ್ ನ್ಯಾಯಾಧೀಶ ನ್ಯಾಯಾಲಯ,
ಕೊಡಗು ಜಿಲ್ಲೆ, ಕುಶಾಲನಗರ.

ಪಿ.ಅಂಡ್ ಎಸ್.ಸಿ.ಸಂಖ್ಯೆ 1/2024

ಅರ್ಜಿದಾರರು : 1). ಶ್ರೀಮತಿ. ಹಾಲಿ ಅನಿತಾ ತಂದೆ ಟಿ.ಜಯಶೀಲ, ಪ್ರಾಯ 37 ವರ್ಷ, ವಾಸ ಸುಂದರ ನಗರ ಗ್ರಾಮ, ಮುಳ್ಳುಸೋಗೆ ಅಂಚೆ, ಕುಶಾಲನಗರ ತಾಲ್ಲೂಕು. ಕೊಡಗು ಜಿಲ್ಲೆ.
2). ಶ್ರೀಮತಿ, ಜರಿನ್ ಪ್ರಭಾವತಿ, ತಂದೆ ಟಿ.ಜಯಶೀಲ, ಪ್ರಾಯ 40 ವರ್ಷ, ವಾಸ ಮನೆ ಸಂಖ್ಯೆ 3, ಮಿಷನ್ ಕಾಂಪೌಂಡ್, ನಜರಬಾದ್, ಸರ್ಕಾರಿ ಮನೆ ರಸ್ತೆ, ಮೈಸೂರು. ವಿರುದ್ಧ
ಪ್ರತಿವಾದಿಗಳು ಇಲ್ಲ:

ಸಾರ್ವಜನಿಕರ ಅಮಿತ ಅರಿವಿಗಾಗಿ

ಮೇಲ್ಕಾಣಿಸಿದ ಹೆಸರಿನ ಅರ್ಜಿದಾರರು ಈ ಕೆಳಕಾಣಿಸಿದ ಅನುಸೂಚಿತ ಚರಾಸ್ತಿಗೆ ಭಾರತೀಯ ಉತ್ತರಾಧಿಕಾರ ಕಾಯಿದೆ ಪರಿಚ್ಛೇದ 372ರ ಕೆಳಗೆ ಉತ್ತರಾಧಿಕಾರ ಪ್ರಮಾಣ ಪತ್ರವನ್ನು ಪಡೆಯುವ ಸಲುವಾಗಿ ಅರ್ಜಿ ಸಲ್ಲಿಸಿರುತ್ತಾರೆ. ಸದ್ರಿ ಹೆಸರಿನ ಅರ್ಜಿದಾರರು ಮೃತ ಟಿ.ಜಯಶೀಲ ಮತ್ತು ರೀಟಾ ಸರೋಜಿನಿರವರ ಮಕ್ಕಳಾಗಿರುತ್ತಾರೆ. ಸದ್ರಿ ಟಿ.ಜಯಶೀಲರವರು ಅರಣ್ಯ ಇಲಾಖೆಯಲ್ಲಿ ಸರ್ಕಾರಿ ನೌಕರರಾಗಿ ವಾಚರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಸದ್ರಿ ಟಿ.ಜಯಶೀಲರವರು ದಿನಾಂಕ 27–6–2018 ರಂದು ಯಾವುದೇ ವಿಲುನಾಮೆಯನ್ನು ಮಾಡದೆ ದೈವಾಧೀನರಾಗಿದ್ದಾರೆ. ಟಿ.ಜಯಶೀಲರವರಿಗೆ ಸರ್ಕಾರಿ ನೌಕರಿ ಮೇಲಿನ ಭವಿಷ್ಯ ನಿಧಿ ಬರಬೇಕಾಗಿದ್ದು ಅವನ್ನು ಈ ಕೆಳಗೆ ಕಾಣಿಸಿದ ಅನುಸೂಚಿಯಲ್ಲಿ ವಿವರಿಸಲ್ಪಟ್ಟಿರುತ್ತದೆ. ಆ ಹಿನ್ನಲೆಯಲ್ಲಿ ಸದ್ರಿ ಅನುಸೂಚಿ ಸ್ವತ್ತಿನ ಮೇಲೆ ಯಾರಾದಾದರೂ ಯಾವುದಾದರೂ ಹಕ್ಕುಗಳು, ವಿಶೇಷ ಮಾನ್ಯತೆ, ಹಿತಾಸಕ್ತಿ ಹಾಗೂ ಇನ್ನು ಮುಂತಾದವುಗಳು ಇದ್ದಂತಹ ಪಕ್ಷಕ್ಕೆ ಅಂತಹ ಬೇಡಿಕೆ, ಮಾಗಣೆ, ತಕರಾರುಗಳನ್ನು ಸದ್ರಿ ಅರ್ಜಿಯ ವಾಯಿದೆ ದಿನಾಂಕ 19/3/25 ವಾದ ಬೆಳಿಗ್ಗೆ 11 ಗಂಟೆಗೆ ವೈಯುಕ್ತಿಕ ಹಾಜರಾತಿಯ ಲಾಗಲೀ ಅಥವಾ ವಕೀಲರ ಮುಖಾಂತರವಾಗಲೀ ಸಲ್ಲಿಸಬಹುದಾಗಿರುತ್ತದೆ. ಸದ್ರಿ ಅರ್ಜಿಯ ಗುಣಾವಗುಣಗಳ ಮೇಲೆ ಏಕಪಕ್ಷೀಯವಾಗಿ ನಿರ್ಧಾರ ಮಾಡಲ್ಪಡುತ್ತದೆಂದು ತಿಳಿಸಲಾಗಿದೆ.

ಅನುಸೂಚಿ:

ಭವಿಷ್ಯನಿಧಿ ಇಲಾಖೆಯವರು ಕಾಯ್ದೆಯ ಅನ್ವಯ ಭಾಗ–4ರಲ್ಲಿ ತೋರಿಸಿದಂತೆ ಒಟ್ಟಾಗಿ ಬರತಕ್ಕಂತಹ ಮೌಲ್ಯವು ರೂ. 1,01,200/– [ಒಂದು ಲಕ್ಷದ ಒಂದು ಸಾವಿರದ ಇನ್ನೂರು ರೂಪಾಯಿಗಳು ಮಾತ್ರ]

ನನ್ನ ಸ್ವಹಸ್ತ ಮತ್ತು ನ್ಯಾಯಾಲಯದ ದಸ್ಕತ್ ಮೊಹರು ನೊಂದಿಗೆ ದಿನಾಂಕ 31/1/25ರಂದು ನೀಡಲ್ಪಟ್ಟಿರುತ್ತದೆ.
ಘನ ನ್ಯಾಯಾಲಯದ ಆದೇಶ ಮೇರೆ

ಸ್ಥಳ: ಕುಶಾಲನಗರ
ದಿನಾಂಕ: 31/01/25

ಸಹಿ/– ಶಿರಸ್ತೇದಾರ್
ಸಿವಿಲ್ ನ್ಯಾಯಾಧೀಶ ನ್ಯಾಯಾಲಯ
ಕುಶಾಲನಗರ ತಾಲೂಕು,
ಕೊಡಗು ಜಿಲ್ಲೆ.

ಸಹಿ/– ಬಿ.ಕೆ.ನಾಗೇಂದ್ರ,
ವಕೀಲರು
(ಅರ್ಜಿದಾರರ ಪರ)

ಸಾರ್ವಜನಿಕ ಪ್ರಕಟಣೆ

ಸಮಸ್ತ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ನಮ್ಮ –ಕಕ್ಷಿದಾರರಾದ ಮೈಸೂರು ಸಿಟಿ ರಾಮಕೃಷ್ಣ ನಗರ, ಹೆಚ್ ಬ್ಲಾಕ್, ಮನೆ ನಂ. 17/4 ರಲ್ಲಿ ವಾಸವಾಗಿರುವ ಜೆ. ಪುಟ್ಟಸ್ವಾಮಿ ರವರ ಮಗನಾದ ಶ್ರೀ ಪಿ. ರವಿರವರಿಗೆ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಡಜನ ಅಂಚೆ, ಏಳಿಗೆಹುಂಡಿ ಗ್ರಾಮ, ಮನೆ ನಂ. 105 ರಲ್ಲಿ ವಾಸವಾಗಿರುವ ಲೇಟ್ ತಮ್ಮಯ್ಯರವರ – ಧರ್ಮಪತ್ನಿಯಾದ ಶ್ರೀಮತಿ ಮಾಯಮ್ಮ ಹಾಗೂ ಕುಟುಂಬ ಸದಸ್ಯರಿಂದ ದಿನಾಂಕ 14.12.2017 ರಂದು ಸ್ಥಿರ ಸ್ವತ್ತಿನ ಶುದ್ಧ ಕ್ರಯದ ಕರಾರು ಪತ್ರ ಆಗಿರುತ್ತದೆ. ಹಲವಾರು ಬಾರಿ ಶ್ರೀಮತಿ, ಮಾಯಮ್ಮ ಮತ್ತು ಅವರ ಕುಟುಂಬದವರನ್ನು ಕೇಳಿಕೊಂಡಾಗಲೂ ಸಹ ಶುದ್ಧ ಕ್ರಯಪತ್ರವನ್ನು ಈವರೆವಿಗೂ ನೋಂದಣಿ ಮಾಡಿಸಿಕೊಟ್ಟಿರುವುದಿಲ್ಲ. ಈ ಸಂಬಂಧ ಮೈಸೂರಿನ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ಸದರಿ ದಾವಾ ಸಂಖ್ಯೆ: 85/2025 ಆಗಿರುತ್ತದೆ. ಈ ಷೆಡ್ಯೂಲ್ ಸ್ವತ್ತಿನ ಸಂಬಂಧ ಇತರೆ ಬೇರೆ ಯಾರಿಗಾದರೂ ಮಾಲೀಕತ್ವದ ಹಕ್ಕುಬಾಧ್ಯತೆ, ಭಾಗಾಂಶ, ಹಿತಾಸಕ್ತಿ ಇತ್ಯಾದಿಗಳು ಇದ್ದಲ್ಲಿ ಕೂಡಲೇ ನಮ್ಮ ಕೂಡಲೇ ನಮ್ಮ ಕಕ್ಷಿದಾರರಿಗೆ ಅಥವಾ ಅವರ ವಕೀಲರಿಗೆ ಈ ದಿನದಿಂದ ಏಳು (07) ದಿನಗಳ ಒಳಗಾಗಿ ಸೂಕ್ತ ದಾಖಲಾತಿಗಳೊಡನೆ ಒಳಗಾಗಿ ಸೂಕ್ತ ದಾಖಲಾತಿಗಳೊಡನೆ ಖುದ್ದು ಭೇಟಿಯಾಗಿ ತಕರಾರು ಸಲ್ಲಿಸಬಹುದಾಗಿರುತ್ತದೆ ಎಂದು ಈ ಮೂಲಕ ಸಾರ್ವಜನಿಕ ರಲ್ಲಿ ತಿಳಿಯಪಡಿಸುತ್ತೇವೆ. ಒಂದು ವೇಳೆ ಈ ನಿಗದಿತ ವೇಳೆಯಲ್ಲಿ ಯಾವುದೇ ವ್ಯಕ್ತಿಗಳಿಂದ ಷೆಡ್ಯೂಲ್ ಸ್ವತ್ತಿನ ಸಂಬಂಧ ತಕರಾರು ಬಾರದೇ ಇದ್ದ ಪಕ್ಷದಲ್ಲಿ ಷೆಡ್ಯೂಲ್ ಸ್ವತ್ತಿನ ಸಂಬಂಧ ಬೇರೆ ಯಾವುದೇ ವ್ಯಕ್ತಿಗಳಿಗೆ ಹಕ್ಕು ಹಿತಾಸಕ್ತಿ ಹಾಗೂ ತಕರಾರು ಇಲ್ಲವೆಂದು ಪರಿಗಣಿಸಿ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಮಾಲೀಕರಿಂದ ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಖರೀದಿಸಲು ಹಕ್ಕುಳ್ಳವರಾಗಿರುತ್ತಾರೆ ಎಂದು ಸಾರ್ವಜನಿಕರಲ್ಲಿ ಈ ಮೂಲಕ ತಿಳಿಯಪಡಿಸುತ್ತೇವೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣಾ ಹೋಬಳಿ, ಸರ್ಕಾರಿ ಉತ್ತನಹಳ್ಳಿ, ಗ್ರಾಮಕ್ಕೆ ಸೇರಿದ ಸರ್ವೆ ನಂ.11/1 ರ ವಿಸ್ತೀರ್ಣ 0.21 ಗುಂಟೆ ಜಮೀನಿನ ಪೈಕಿ 13 ಗುಂಟೆ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ: ಸರ್ವೆ ನಂ. 11/2 ರ ಜಮೀನು, ಪಶ್ಚಿಮಕ್ಕೆ: ಸಣ್ಣಮಲ್ಲಯ್ಯನ ಸಿದ್ದಯ್ಯರವರ ಜಮೀನು, ಉತ್ತರಕ್ಕೆ :ಸರ್ವೆ ನಂ.11/1 ರ 0–07 ಗುಂಟೆ ಜವರಪ್ಪ ರವರಿಗೆ ಸೇರಿದ ಜಮೀನು, ದಕ್ಷಿಣಕ್ಕೆ: ವರ್ತುಲ ರಸ್ತೆ.

ಆರ್.ಎಸ್.ಜಗದೀಶಮೂರ್ತಿ, ಎಂ.ಎ. ಎಲ್ ಎಲ್ .ಬಿ..
ವಕೀಲರು
ನಂ.1, 1ನೇ ಕ್ರಾಸ್, 2ನೇ ಮುಖ್ಯರಸ್ತೆ, ಜಯನಗರ, ಮೈಸೂರು
ಮೊ: 8970120781

STAR OF MYSORE
SPECIAL ISSUE
Star of Mysore is completing 47 years of service on 16th February 2025 and entering 48th year of publication. As in the past, this year too we will be publishing a Special Issue.
We request our advertisers and patrons to release their advertisements before 10th February to facilitate printing as per schedule.
HEAD OFFICE
0821-2496520 (5-LINES)
Ad Dept. - 0821-2496522 / 23
Email : ad@starofmysore.com
Maria G. Fernandes
Advt. Manager: 94485-25060
Joy Anthony Dove
Sr. Executive-Ad Sales
89516-68960
Prema
Sr. Executive Advertising
98805-49879
K.R. Circle Office: 0821-2431774
D.D. Urs Road Office: 0821-2428695
Kodagu Office: 97314-69871
Mandya Office: 87629-60325
Chamarajanagar: 92422-65657
Nanjangud: 98805-09200 / 99016-02226
T.N. Pura: 94483-05750
Bengaluru: 98440-46761

27ನೇ ವರ್ಷದ ಸವಿನೆನಪು



ನೀವು ಇಂದಿಗೆ ನಮ್ಮನ್ನಗಲಿ 27 ವರ್ಷ ಕಳೆದರು ಸದಾ ನಿಮ್ಮ ನೆನಪಿನಲ್ಲಿ ಇರುವ

ದುಃಖತಪ್ತರು:
ಪತ್ನಿ ಪಾರ್ವತಿ ಶಂಕರ್, ಬೆಲ್ಲದ ಬೋರಪ್ಪನವರ ಕುಟುಂಬ, ನಗುವನಹಳ್ಳಿ ಗ್ರಾಮಸ್ಥರು, ಯಜಮಾನ್ ವಿಷಕಂಠೇಗೌಡರ ಕುಟುಂಬ, ಕುಂಬಾರಕೊಪ್ಪಲು

ಬಿ. ಶಂಕರ್
ಎಂಬಿಎ, ಜಿಡಿಸಿ

4ನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ 4 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು: ತಾಯಿ, ಅಕ್ಕ ಮತ್ತು ಕುಟುಂಬ ವರ್ಗದವರು ಮತ್ತು ಸ್ನೇಹಿತರು. #6/1, ಗೌರಿಶಂಕರನಗರ, ಊಟಿ ರಸ್ತೆ, ಮೈಸೂರು.

ಎನ್.ಲೋಹಿತ್ (ಕಿರಣ)

ಚುನಾವಣೆ ಪ್ರಕಟಣೆ

ಕೊಡಗು ಸಹಕಾರ ಸಂಘ ನಿಯಮಿತ
ನಂ.71, ಆಸ್ಪತ್ರೆ ರಸ್ತೆ, ಜಯಲಕ್ಷ್ಮೀಪುರಂ, ಮೈಸೂರು.

ಈ ಸಂಘದ ಮುಂದಿನ 5 ವರ್ಷದ ಆಡಳಿತ ಮಂಡಳಿ ಚುನಾವಣೆಯನ್ನು ದಿನಾಂಕ 22.02.2025 ರಂದು ಶನಿವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಸಂಘದ ಕಛೇರಿಯಲ್ಲಿ ನಡೆಸಲು ನಿಗದಿಪಡಿಸಲಾಗಿದೆ. ಚುನಾವಣೆಯಲ್ಲಿ ಸ್ಪರ್ಧಿಸಲು ಇಚ್ಛಿಸುವವರು ನಾಮಪತ್ರಗಳನ್ನು ದಿನಾಂಕ 07.02.2025 ರಿಂದ ದಿನಾಂಕ 14.02.2025 ರವರೆಗೆ ಬೆಳಿಗ್ಗೆ 11–00 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಸ್ವೀಕರಿಸಲಾಗುವುದು. ನಾಮಪತ್ರಗಳ ಪರಿಶೀಲನೆಯನ್ನು ದಿನಾಂಕ 15.02.2025 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾಗುವುದು ಹಾಗೂ ನಾಮಪತ್ರಗಳನ್ನು ವಾಪಸ್ಸು ಪಡೆಯಲು ಕೊನೆಯ ದಿನಾಂಕ 16.02.2025 ನೇ ಭಾನುವಾರ. ಚುನಾವಣಾ ವೇಳಾಪಟ್ಟಿಯನ್ನು ಎಲ್ಲಾ ಅರ್ಹ ಸದಸ್ಯರುಗಳಿಗೆ ಅಂಚೆ ಮೂಲಕ ಈಗಾಗಲೇ ರವಾನಿಸಲಾಗಿದ್ದು ಹೆಚ್ಚಿನ ವಿವರಗಳಿಗೆ ಸಂಘದ ಕಾರ್ಯದರ್ಶಿ / ರಿಟರ್ನಿಂಗ್ ಅಧಿಕಾರಿಯನ್ನು ಸಂಪರ್ಕಿಸಲು ಕೋರಲಾಗಿದೆ.

ದಿನಾಂಕ: 06.02.2025
ಸ್ಥಳ : ಮೈಸೂರು.

ಸಹಿ/– **(ಸವಿತ)**
ರಿಟರ್ನಿಂಗ್ ಅಧಿಕಾರಿ, ಕೊಡಗು ಸಹಕಾರ ಸಂಘ ನಿ.,

ನಕ್ಕರೆ ಅದೇ ಸ್ವರ್ಗ

ಕಿಟ್ಟಿ : ಪುಟ್ಟಿ ಸ್ನಾನ ಆಯ್ತಾ?
ಪುಟ್ಟಿ : ನಾನು ನಿನ್ನಷ್ಟು ಸೋಮಾರಿ ಅಲ್ಲ ಕಣೋ? ಒಂದು ತಿಂಗಳ ಮುಂಚೇನೇ ಸ್ನಾನ ಮಾಡ್ಕೊಂಡ್ ಬಿಟ್ಟಿದ್ದೀನಿ.

ಮೈಸೂರು ಮಿತ್ರ

ಶುಕ್ರವಾರ, 7 ಫೆಬ್ರವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಜೀವನ ಇರುವುದೇ ಎರಡು ದಿನ. ಒಂದು ನಿನ್ನ ಪರವಾದ ದಿನ...! ಮತ್ತೊಂದು ನಿನ್ನ ವಿರುದ್ಧವಾದ ದಿನ. ಪರವಾದ ದಿನದಲ್ಲಿ ಅಹಂಕಾರ ತೋರಿಸಬೇಡ...! ವಿರುದ್ಧವಾದ ದಿನದಲ್ಲಿ ತಾಳ್ಮೆ ಕಳೆದುಕೊಳ್ಳಬೇಡ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಪ್ರಯತ್ನಕ್ಕೆ ಪರಮೇಶ್ವರನೂ ಸಹಾಯ ಮಾಡುವನು.

ನಿಮ್ಮ ಪತ್ರಗಳು

■ ಹಿಂದೂಗಳ ಭಾವನೆಗೆ ಧಕ್ಕೆ ತರುವ ಹೇಳಿಕೆಗಳಿಗೆ ಧಿಕ್ಕಾರವಿರಲಿ

ಮಾನ್ಯರೆ,

ಹಿಂದೂಗಳು ತಮ್ಮ ಧಾರ್ಮಿಕ ಶ್ರದ್ಧೆಯಿಂದ ಸ್ವಯಂಪ್ರೇರಿತರಾಗಿ ಮಹಾ ಕುಂಭಮೇಳದಲ್ಲಿ ಭಾಗವಹಿಸಿ ಪುನೀತರಾಗಿ ಭಾವುಕರಾಗುತ್ತಿದ್ದರೆ, ನೆಹರೂ ವಂಶದ ಓಲೈಕೆಗಾಗಿ ಕೆಲವು ರಾಜಕಾರಣಿಗಳು ತಮ್ಮ ಧರ್ಮದ ವಿರುದ್ಧವೇ ಮಾತನಾಡಿ, ಸ್ನಾನ ಮಾಡುವುದರಿಂದ ಬಡತನ ನಿರ್ಮೂಲನೆ ಆಗುತ್ತದೆಯೇ ಎಂದು ಎಲುಬಿಲ್ಲದ ನಾಲಿಗೆಯಿಂದ ಅರ್ಥವಿಲ್ಲದ ಮಾತು ಉಗುಳಿದ್ದಾರೆ.

ಸ್ವತಃ ತಾವೇ ಅದೇ ಕೆಲಸವನ್ನು ಹಾಗೆಯೇ ತಮ್ಮ ವಿದೇಶಿ ಅಧಿನಾಯಕಿಯೂ ಗಂಗಾ ಸ್ನಾನ ಮಾಡಿರುವ ಫೋಟೋಗಳು ಈಗಾಗಲೇ ಎಲ್ಲೆಡೆ ಪ್ರಚಾರವಾಗಿದೆ. ಈ ಬಗ್ಗೆ ಜಾಣ ಕುರುಡರಾಗಿರುವ ಮಹನೀಯರು ತಮ್ಮ ಅಂಗಪಕ್ಷದ ಅಧ್ಯಕ್ಷ ಅಖಿಲೇಶ್ ಅಧಿಕಾರದಲ್ಲಿ ನಡೆದ ಇಂತಹ ಧಾರ್ಮಿಕ ಸಮಾರಂಭಗಳ ಬಗ್ಗೆ ಧ್ವನಿ ಎತ್ತಲು ಮತ್ತು ಇತರೆ ಕೋಮಿನ ಯಾವುದೇ ಆಚರಣೆ ಬಗ್ಗೆ ಧೈರ್ಯದಿಂದ ಮಾತನಾಡುವ ತಾಕತ್ತು ಪ್ರದರ್ಶಿಸದಿರುವುದು ಸೋಗಲಾಡಿತನದ ಪರಮಾವಧಿ ಅಲ್ಲವೇ?

ನಿಮ್ಮದೇ ಒಂದು ರಾಜಕೀಯ ಸಮಾವೇಶ ಮಾಡಿ, ಅದರಲ್ಲಿ ಆಗುವ ಅವ್ಯವಸ್ಥೆಯ ಆಗರಗಳ ಬಗ್ಗೆ ಕ್ಷಮೆ ಕೇಳುವ ನಾಯಕರೇ, ಮೂವತ್ತೈದು ಕೋಟಿ ಜನರಿಗೆ ಅಷ್ಟೆಲ್ಲಾ ವ್ಯವಸ್ಥೆ ಮಾಡಿರುವುದನ್ನು ಪ್ರತ್ಯಕ್ಷ ನೋಡಿಕೊಂಡು ಮಾತನಾಡಿ, ಹವಾ ನಿಯಂತ್ರಿತ ಕೊಠಡಿಯಿಂದ ಸ್ವಾಮಿನಿಷ್ಠೆ ಪ್ರದರ್ಶಿಸುವ ನಿಮ್ಮ ನಡೆಗೆ ಏನನ್ನಬೇಕು? ಹೇಳಿ. ಹಿಂದೂಗಳ ಭಾವನೆಗೆ ಧಕ್ಕೆ ತರುವ ಇಂತಹ ಹೇಳಿಕೆಗಳಿಗೆ ಧಿಕ್ಕಾರವಿರಲಿ. ಇನ್ನಾದರೂ ತಮ್ಮ ಸ್ಥಾನಕ್ಕೆ ಘನತೆ ತರುವ ಕೆಲಸ ಆಗಲಿ.

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು

■ ರಸ್ತೆ ರಿಪೇರಿ ಮಾಡಿಸಲು ಮನವಿ



ಮಾನ್ಯರೆ,

ಕೆಆರ್‌ಎಸ್ ಅಣೆಕಟ್ಟೆಯ ಹಿನ್ನೀರಿನಲ್ಲಿ ಖೋಡೆ ಫೌಂಡೇಶನ್ ಅವರು ಮನ ಮೋಹಕವಾಗಿ ಪುರಾತನ ವೇಣು ಗೋಪಾಲಸ್ವಾಮಿ ದೇವಾಲಯವನ್ನು 12ನೇ ಶತಮಾನದಲ್ಲಿರುವಂತೆಯೇ ಬಹು ಸುಂದರ ವಾಗಿ ನಿರ್ಮಿಸಿದ್ದಾರೆ. ಇಲ್ಲಿಗೆ ತೆರಳುವ ಹೊಸ ಕನ್ನಂಬಾಡಿ ಗ್ರಾಮದಿಂದ ರಸ್ತೆಯು ತುಂಬಾ ಹದಗೆಟ್ಟಿದ್ದು, ವಾಹನ ಸವಾರರು ಹಳ್ಳ ಕೊಳ್ಳಗಳಿಂದ ಸರ್ಕಸ್ ಮಾಡಿಕೊಂಡು ಧೂಳನ್ನು ಸೇವಿಸಿಕೊಂಡು ಹೋಗುವಂತಹ ಪರಿಸ್ಥಿತಿ ಉಂಟಾಗಿದೆ. ಪ್ರವಾಸಿಗರಂತು ಹಿಡಿಶಾಪ ಹಾಕುತ್ತಿದ್ದಾರೆ. ಸುಮಾರು ವರ್ಷಗಳಿಂದ ಡಾಂಬರ್ ರಸ್ತೆ ಇಲ್ಲದೆ ಮಣ್ಣಿನ ರಸ್ತೆ ಇರುವುದು ದೊಡ್ಡ ದುರಂತವಾಗಿದೆ. ದೇಶದ ನಾನಾ ಭಾಗಗಳಿಂದ ಈ ದೇವಾಲಯ ಮತ್ತು ರಮಣೀಯ ಸೌಂದರ್ಯವನ್ನು ಸವಿಯಲು ಪ್ರತಿನಿತ್ಯ ಸಹಸ್ರಾರು ಪ್ರವಾಸಿಗರು ತಂಡೋಪತಂಡವಾಗಿ ಆಗಮಿಸುತ್ತಾರೆ. ಕೇವಲ ಮೂರು ಕಿಲೋಮೀಟರ್‌ಗಳು ಮಾತ್ರ ರಸ್ತೆ ಹದಗೆಟ್ಟಿದ್ದು, ಪ್ರವಾಸಿಗರು ತುಂಬಾ ಬೇಸರವನ್ನು ಮಾಡಿಕೊಂಡು ಇಲ್ಲಿಂದ ತೆರಳುತ್ತಾರೆ. ಹಲವಾರು ಬಾರಿ ಸಂಬಂಧಪಟ್ಟವರ ಗಮನಕ್ಕೆ ತಂದಿದ್ದರೂ ರಸ್ತೆ ಮಾತ್ರ ಹಾಗೆ ಇದೆ. ಮಳೆಗಾಲದಲ್ಲಂತೂ ಅಧೋಗತಿ. ಕೆಸರಿನ ಗುಂಡಿಯಲ್ಲಿ ಅನೇಕ ಜನರು ಬಿದ್ದಿರುವುದು ಉಂಟು. ಅನೇಕರಿಗೆ ಗಾಯ ಗಳಾಗಿರುವುದು ತುಂಬಾ ಬೇಸರ ತರಿಸುತ್ತದೆ. ಒಟ್ಟಿನಲ್ಲಿ ಪ್ರಯಾಣಿಕರಿಗೆ ನರಕ ಸದೃಶ್ಯವನ್ನು ತೋರಿಸುತ್ತಿದೆ. ದಯವಿಟ್ಟು ಇದಕ್ಕೆ ಸಂಬಂಧಪಟ್ಟವರು ಶೀಘ್ರದಲ್ಲಿ ಈ ರಸ್ತೆ ಯನ್ನು ರಿಪೇರಿ ಮಾಡಿಸಿ ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಬೇಕೆಂಬುದು ಮನವಿ.

–ಪರಶಿವಮೂರ್ತಿ ಎನ್ ಪಿ, ನಂಜೀಪುರ, ಸರಗೂರು ತಾಲೂಕು.

■ ಮಹಾರಾಣಿ ಕಾಲೇಜು ಸಮೀಪದ ದೊಡ್ಡ ಗುಂಡಿ ಮುಚ್ಚಿ

ಮಾನ್ಯರೆ,

ಮೈಸೂರು–ಮಂಗಳೂರು ಮುಖ್ಯರಸ್ತೆಯ ಮಹಾರಾಣಿ ವಾಣಿಜ್ಯ ಕಾಲೇಜು (ಪಡುವಾರಹಳ್ಳಿ) ಸಿಗ್ನಲ್‌ನ ಮುಂಭಾಗದಿಂದ ಕೆಲವು ಅಡಿಗಳ ಅಂತರದಲ್ಲೇ ರಸ್ತೆಯ ಮಧ್ಯ ಭಾಗದಲ್ಲೇ ಒಂದು ಅಡಿ ಆಳವಿರುವ ದೊಡ್ಡ ಗುಂಡಿ ಇದೆ.

ಈ ರಸ್ತೆಯಲ್ಲಿ ಅತ್ಯಧಿಕ ವಾಹನ ದಟ್ಟಣೆ ಇರುತ್ತದೆ ಹಾಗೂ ಮುಖ್ಯ ರಸ್ತೆ ಆದ ಕಾರಣ ವೇಗವಾಗಿ ವಾಹನಗಳನ್ನು ಚಲಾಯಿಸುತ್ತಾರೆ. ದ್ವಿಚಕ್ರ ವಾಹನ ಸವಾರರೇ ನಾದರೂ ಈ ಗುಂಡಿಗೆ ವಾಹನವನ್ನು ಬಿಟ್ಟರೆ ಅಪಘಾತವಾಗುವುದು ನಿಶ್ಚಿತ.

ಸಂಬಂಧಪಟ್ಟ ಅಧಿಕಾರಿ ವರ್ಗದವರು ಈ ಗುಂಡಿಯನ್ನು ಮುಚ್ಚಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕಾಗಿ ವಿನಂತಿ. ಮಹಾರಾಣಿ ವಾಣಿಜ್ಯ ಕಾಲೇಜು ಮುಂಭಾಗದಲ್ಲಿ ಹೊಸದಾಗಿ ಡಾಂಬರೀಕರಣ ನಡೆಯುತ್ತಿದೆ. ಸ್ಥಳೀಯ ಅಧಿಕಾರಿ ವರ್ಗ ಗಮನಹರಿಸಿದರೆ ಈ ಸಮಸ್ಯೆಯನ್ನು ಇಂದೇ ಬಗೆಹರಿಸಬಹುದು.

–ಮಂಜೇಶ್ ದೇವಗಳ್ಳಿ, ಮೈಸೂರು

■ ಅತ್ಯಾಚಾರ ಆರೋಪಿಗಳಿಗೆ ಕಠಿಣ ಶಿಕ್ಷೆ ಹೊರತು, ಕಡಿವಾಣ ಸಾಧ್ಯವಿಲ್ಲ

ಮಾನ್ಯರೆ,

ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ 2,803 ಮಹಿಳೆಯರ ಮೇಲೆ ಅತ್ಯಾಚಾರಗಳು ನಡೆದಿದ್ದು, ಕೇವಲ 75 ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆಯಾಗಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಅಂದರೆ ಶೇಕಡ 3 ರಿಂದ 4 ರಷ್ಟು ಮಾತ್ರ ಅತ್ಯಾಚಾರ ಆರೋಪಗಳು ಸಾಬೀತಾಗಿವೆ ಎಂದಾಯಿತು. ಇದಕ್ಕೆ ಮುಖ್ಯ ಸಾಕ್ಷ್ಯಾಧಾರಗಳ ಕೊರತೆ, ಸುಳ್ಳು ಪ್ರಕರಣಗಳು ಹಾಗೂ ವಿಚಾರಣೆ ವಿಳಂಬವಾಗುವುದು ಕಾರಣವೆಂದು ವರದಿಯಾಗಿದೆ. ಆದರೆ ಈ ಕಾರಣಗಳಿಗಿಂತಲೂ, ಹಣ, ರಾಜಕೀಯ ಒತ್ತಡಗಳಿಗಾಗಿ, ಪೊಲೀಸರು ಎಫ್‌ಐಆರ್ ಹಂತದಲ್ಲಿಯೇ ಕೇಸ್ ಅನ್ನು ದುರ್ಬಲಗೊಳಿಸುವುದು, ಇನ್ನು ಕೆಲವು ಪ್ರಕರಣಗಳು ಪೊಲೀಸ್ ಠಾಣೆಯಲ್ಲೇ ರಾಜಿಯಾಗಿ ಪ್ರಕರಣಗಳೇ ದಾಖಲಾಗುವುದಿಲ್ಲ. ಕೆಲವು ಗ್ರಾಮಾಂತರ ಪ್ರದೇಶದಲ್ಲಿ ಪಂಚಾಯಿತಿ ಕಟ್ಟೆಯಲ್ಲಿ ತೀರ್ಮಾನವಾಗಿ, ಅತ್ಯಾಚಾರ ಆರೋಪಿಗೆ ಲಕ್ಷಾಂತರ ರೂಪಾಯಿಗಳ ದಂಡ ವಿಧಿಸಿ ಸಂತ್ರಸ್ತೆಗೆ ಅರ್ಧ ಭಾಗ ಹಣ ಕೊಟ್ಟು ಉಳಿದದ್ದನ್ನು ಪಂಚಾಯಿತಿ ಕಟ್ಟೆಯವರು ಹಂಚಿಕೊಂಡಿರು ವುದುಂಟು. ಹೀಗಾಗಿ ಅತ್ಯಾಚಾರದಂತಹ ಪ್ರಕರಣಗಳಲ್ಲಿ ಅರ್ಧದಷ್ಟು ಪ್ರಕರಣಗಳು ಬಹಿರಂಗವಾಗಿ ದಾಖಲಾಗುವುದೇ ಇಲ್ಲ. ತೆರೆ – ಮರೆಯಲ್ಲೇ ಇತ್ಯರ್ಥಗೊಳ್ಳುತ್ತವೆ. ಅತ್ಯಾಚಾರ ಆರೋಪಿಗಳಿಗೆ ಕಠಿಣ ಶಿಕ್ಷೆಯಾಗದ ಹೊರತು ದೇಶದಲ್ಲಿ ಅತ್ಯಾಚಾರ ಪ್ರಕರಣಗಳು ಹೆಚ್ಚಾಗುತ್ತಲೇ ಹೋಗುತ್ತವೆ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಜೆ.ಬಿ.ರಂಗಸ್ವಾಮಿ
ವಿಶ್ರಾಂತ ಪೊಲೀಸ್ ಅಧಿಕಾರಿ,
ಮೈಸೂರು

ಕಸ್ಟಡಿ

ಮಹಾ ಕುಂಭಮೇಳದ ಕಾಲ್ತುಳಿತ ಸಾವಿನ ಸಂಖ್ಯೆಯ ರಗಳೆ!

ಪ್ರತಿದಿನ ಹನ್ನೆರಡು ಕೋಟಿ ಜನರ ಸಮಾವೇಶವಾಗುವ ಮಹಾಮೇಳ ದಲ್ಲಿ ಇದು ನಿರೀಕ್ಷಿತ ದುರಂತ. ಮೂವತ್ತಲ್ಲ ಮೂವತ್ತು ಸಾವಿರ ಸಾವಾದರೂ ಅಚ್ಚರಿ ಪಡಬೇಕಿಲ್ಲ. ಕೇವಲ ಒಂದೆರಡು ಸಾವಿರ ಜನಜಂಗುಳಿಯಲ್ಲಿ ಚಿಕ್ಕ ಎಳೆದಾಟವಾದರೆ ಸಾಕು 10–12 ಜನ ಹೊಸಕಿ ಹೋಗುತ್ತಾರೆ. ಕೋಟಿ ಕೋಟಿ ಜನಗಳ ಸಮಾವೇಶ ಹೇಗಿರಬೇಕು ಹೇಳಿ?

ಹೆಣಗಳ ವಿಚಾರದಲ್ಲಿ ಯಾವುದೇ ಸರ್ಕಾರವೂ ಬೇಕಾಬಿಟ್ಟಿ ಸುಳ್ಳು ಹೇಳ ಲಾಗದು; ಹೇಳುವುದಿಲ್ಲ. ಸಾವಿನ ಲೆಕ್ಕದಲ್ಲಿ ಏರುಪೇರಾದರೆ ಸಂಬಂಧಿಸಿದ ಎಲ್ಲಾ ಅಧಿ ಕಾರಿಗಳೂ ಜೈಲಿಗೆ ಹೋಗಬೇಕಾ ಗುತ್ತದೆ. ಶವವೆಂದರೆ ಯಾವುದೋ ಬೇವರ್ಸಿ ಕಳೇ ಬರವಲ್ಲ. ಅದು ದೇಶದ ಪ್ರಜೆಯದು.

ಹೆಣ ದೇಶೀಯರದೋ ವಿದೇಶಿಯ ರದೋ? ಹೇಗೆ, ಯಾಕೆ, ಎಲ್ಲಿ ಸತ್ತ ಎಂಬುದರ ಮಾಹಿತಿ ಸಂಗ್ರಹದ ಗುರುತರ ಜವಾಬ್ದಾರಿ ಇತ್ಯಾದಿ ಎಲ್ಲವೂ ಸಂಬಂಧಿಸಿದ ಅಧಿಕಾರಿಗಳದ್ದು. ಸಾವಿನ ಪರಿಹಾರ, ಆಸ್ತಿ ಹಕ್ಕು, ವಾರಸುದಾರಿಕೆ, ಮರಣದ ನಿಜವಾದ ಕಾರಣ. ಹೀಗೆ ನಾನಾ ಜವಾಬ್ದಾರಿಕೆಯ ಉತ್ತರದಾಯಿತ್ವ ಇರುತ್ತದೆ. ಹೆಣವೆಂಬುದು ನಿರ್ಜೀವ ಕಸವಲ್ಲ. ಯಾವ ಶವದ ಲೆಕ್ಕವನ್ನೂ ಬಿಡು ವಂತಿಲ್ಲ. ಪ್ರತಿಯೊಂದಕ್ಕೂ ಲೆಕ್ಕ ಇರಲೇಬೇಕು.

ಸಾಮಾನ್ಯವಾಗಿ ಇಂಥದೊಂದು ಅವಘಡ ವಾದರೆ ಸಾಕು ಅನೇಕರ ನಾಲಿಗೆ ಕಡಿಯು ತ್ತಿರುತ್ತದೆ. ಸಾವಿನ ಸುದ್ದಿಯನ್ನು ಒಂದಕ್ಕೆ ನಾಲ್ಕರಷ್ಟು ಹೆಚ್ಚಿಸಿ ಮಾತಾಡಿದರೇ ಅವರ ಆತ್ಮಕ್ಕೆ ಶಾಂತಿ.

ಇನ್ನು ರಾಜಕಾರಣಿಗಳು ಹೊತ್ತು–ಗೊತ್ತಿನ ಅರಿ ವಿಲ್ಲ. ಅವರು ಯಾವತ್ತೂ ಜವಾಬ್ದಾರಿ ಯುತರಾಗಿ ನಡೆದುಕೊಂಡು ಬಂದಿಲ್ಲ ಬಿಡಿ! ಉನ್ನತ ಹುದ್ದೆ ಗಳನ್ನು ಅಲಂಕರಿಸಿದ್ದರೆ ಏನು ಬಂತು? ಶುದ್ಧ ಎಡಬಿಡಂಗಿಗಳಂತೆ, ಅತಿರಂಜಿತವಾಗಿ ಮಾತಾ ಡ್ತಾರೆ. ಬಹುತೇಕ ಪುಡಾರಿಗಳು, ಕಡು ಮೂರ್ಖರು ಎಂದು ಊರಿಗೇ ಗೊತ್ತು. ಅದನ್ನವನು ಮಾತಾ ಡಿಯೇ ಖಚಿತಪಡಿಸುತ್ತಾನೆ. ಇಂತಹ ಘಟನೆ ಹೇಗೆ ನಡೆದಿದೆ. ಜನಜಂಗುಳಿ ತಿಕ್ಕಾಟದಲ್ಲಿ ಎಷ್ಟು ಜನ ಸಾಯಬಹುದು. ಅಲ್ಲಿ ಏನೇನಾ ಗುತ್ತದೆ ಎಂಬು ದರ ಕನಿಷ್ಠ ಜ್ಞಾನವೂ ಇರುವು ದಿಲ್ಲ. ಅಸಲಿಗೆ ಅವರು ಅಧಿಕಾರದಲ್ಲಿದ್ದಾಗ ಆಡಳಿತಾತ್ಮಕವಾಗಿ ಮೂರು ಕಾಸಿನ ಕೆಲಸ ವನ್ನೂ ಮಾಡಿರುವುದಿಲ್ಲ. ಬೊಗಳೆ ಹೊಡೆದು ಕೊಂಡು ತಿರುಗಿರುತ್ತಾರೆ. ಕೆಲಸ ಕಡಿದಿ ದ್ದರೆ ಕೊಂಚವಾದರೂ ಅದರ ಜ್ಞಾನ ಇರುತ್ತಿತ್ತು.

ಸಂಸದೆ ಜಯಾ ಬಚ್ಚನ್ ಹೇಳುತ್ತಾರೆ. 'ಸಾವಿನ ಸಂಖ್ಯೆ ಮುಚ್ಚಿಡಲು ಶವಗಳನ್ನು ತ್ರಿವೇಣಿ ಸಂಗಮಕ್ಕೆ ಅರ್ಥಾತ್ ನದಿಗೆ ಎಸೆದಿ ದ್ದಾರಂತೆ!. ಆಮೇಲಾದರೂ ಅವು ತೇಲಿಬಂದು ಘೋರ ಫಜೀತಿ ಎಬ್ಬಿಸುವುದಿಲ್ಲವೇ? ಅಖಿ ಲೇಶ್ ಎಂಬ ಅವಿವೇಕಿ, ಮುಖ್ಯ ಮಂತ್ರಿ ಯಾಗಿದ್ದೇ ಆಕಸ್ಮಿಕ. ಓಟ್ಲಾ ಹೊಡೆದುಕೊಂಡಿದ್ದ ಎಂಬುದಕ್ಕೆ ಬೇಜವಾಬ್ದಾರಿ ಮಾತುಗಳೇ ಸಾಕ್ಷಿ. ಇನ್ನು ಖರ್ಗೆಯವರ ತಲೆ ಯಾವ ಕಡೆ ಇತ್ತೋ? ಅವರ ಲೆಕ್ಕದಂತೆ ಕನಿಷ್ಠ ಒಂದು ಸಾವಿರ ಜನ ಸತ್ತಿ ದ್ದಾರಂತೆ!. ಸಾವಿನ ಲೆಕ್ಕವನ್ನು ಯಾರು ಕೊಟ್ಟರೋ, ಯಾವ ರೀತಿಯಲ್ಲಿ ಲೆಕ್ಕಾಚಾರ ಮಾಡಿದರೋ... ಇವರ ತಂಡಕ್ಕೆ ಸಿಕ್ಕ ಮಾಹಿತಿ ಸಾವಿರಾರು ಮಾಧ್ಯಮದವರಿಗೂ ಸಿಕ್ಕಿರಬೇಕಲ್ಲವೇ? ಕತ್ತಲೆಯಲ್ಲಿ ಗುಂಡು ಹಾರಿಸುವ ಮಾತು. ಹೋಗಲಿ ಹಾಗೆ ಸಾವಿರ ಸಾವಿರ ಜನ ಕಣ್ಮರೆಯಾಗಿದ್ದಾರೆ ಅಂತ ಇಟ್ಟುಕೊಂ ಡರೂ, ಆಯಾ ಮನೆಯವರು ಮಿಸ್ಸಿಂಗ್ ಕಂಪ್ಲೇಂಟ್ ಕೊಡಬೇಕಿತ್ತಲ್ಲಾ? ತಾವಾಡಿದ ಮಾತಿನ ಪರಿಣಾಮ ಏನಾಗುತ್ತದೆ ಎಂಬುದರ ಕನಿಷ್ಠ ಪರಿಜ್ಞಾನ ಇಲ್ಲ ದಿದ್ದಾಗ ಇಂತಹ ಅರಿವುಗೇಡಿ ಮಾತು ಬರುತ್ತವೆ.



> ಇಂತಹ ದುರಂತಗಳು ಸಂಭವಿಸಿದಾಗ ಗಾಳಿಮಾತುಗಳಿಗೆ ಬರವಿಲ್ಲ. ಬಾಯಿಗೆ ಬಂದ ಬುಲೆಟಿನ್‌ಗಳು ಅಡ್ಡಾದಿಡ್ಡಿ ಹಾರುತ್ತಿರುತ್ತವೆ. ಕಡ್ಡಿಯನ್ನು ಗುಡಿಸಿ ಗುಡ್ಡ ಮಾಡಿ ಮಾತಾಡಿದರೇ ಜನರ ಆತ್ಮಕ್ಕೆ ಶಾಂತಿ. ಯಾಕಾಗಿ ಇಂತಹ ಗಾಳಿಸುದ್ದಿಗಳು? ಸರ್ಕಾರವೇಕೆ ಸಾವಿನ ಸರಿಯಾದ ಮಾಹಿತಿಯನ್ನು ಕಾಲ ಕಾಲಕ್ಕೆ ಬಿಡುಗಡೆ ಮಾಡಬಾರದು?

ಇಂತಹ ದುರಂತಗಳು ಸಂಭವಿಸಿದಾಗ ಗಾಳಿ ಮಾತುಗಳಿಗೆ ಬರವಿಲ್ಲ. ಬಾಯಿಗೆ ಬಂದ ಬುಲೆ ಟಿನ್‌ಗಳು ಅಡ್ಡಾದಿಡ್ಡಿ ಹಾರುತ್ತಿರುತ್ತವೆ. ಕಡ್ಡಿ ಯನ್ನು ಗುಡಿಸಿ ಗುಡ್ಡ ಮಾಡಿ ಮಾತಾಡಿದರೇ ಜನರ ಆತ್ಮಕ್ಕೆ ಶಾಂತಿ. ಯಾಕಾಗಿ ಇಂತಹ ಗಾಳಿಸುದ್ದಿಗಳು? ಸರ್ಕಾರವೇಕೆ ಸಾವಿನ ಸರಿಯಾದ ಮಾಹಿತಿಯನ್ನು ಕಾಲ ಕಾಲಕ್ಕೆ ಬಿಡುಗಡೆ ಮಾಡಬಾರದು?

ಈವರೆಗೆ 14 ಸಾವು ಸಂಭವಿಸಿದೆ ಎಂಬ ಸರ್ಕಾರದ ಬುಲೆಟಿನ್ ಬಿಡುಗಡೆಯಾಗುತ್ತದೆ. ಮುಂದಿನ ಗಂಟೆಗಳ ಮಾಧ್ಯಮ ಸುದ್ದಿಯಲ್ಲಿ ಫೋಟೋ ಸಮೇತ ಸಾವು 18ಕ್ಕೇರಿರುತ್ತದೆ. ಎರಡೂ ನಿಜ! ಸರ್ಕಾರ ವೇಕೆ ಸಾವಿನ ಸಂಖ್ಯೆ ಕಡಿಮೆ ಸೂಚಿಸುತ್ತದೆ? ಸತ್ತಿರುವುದು 18 ಜನ ಅಂತ ಗೊತ್ತಿದ್ದರೂ ಹಳೇ ಸಂಖ್ಯೆಯನ್ನೇಕೆ ಪ್ರಕಟಿಸುತ್ತದೆ, ಯಾವುದನ್ನು ಮುಚ್ಚಿಡಲು, ಯಾರ ವೈಫಲ್ಯ ಕಾಪಾಡಲು?

ಅದ್ಯಾವುದೂ ಅಲ್ಲ. ಒಮ್ಮೆಲೇ ಇಷ್ಟೊಂದು ಅಸಂಖ್ಯ ಸತ್ತಿದ್ದಾರೆ ಎಂದರೆ ಪರಿಣಾಮ ಅಲ್ಲೋಲ–ಕಲ್ಲೋಲ. ಅದರಲ್ಲೂ ಕೋಮು ವಿಚಾರವಿದ್ದಾಗ ಇಡೀ ದೇಶ ಕ್ಷೋಭೆಗೊಳಗಾಗು ತ್ತದೆ. ನಾನಾ ಬಗೆಯ ವಿಕೃತ ಸುದ್ದಿ ಹಬ್ಬುತ್ತದೆ. ಗುಂಪು ಗಲಭೆ, ಘರ್ಷಣೆಗೆ ಕಾರಣ ವಾಗುತ್ತದೆ. ಆದ್ದರಿಂದ ಡೋಸ್ ಬೈ ಡೋಸ್ ಸುದ್ದಿ ಬಿಡುತ್ತಾ ಹೋಗುತ್ತಾರೆ. ಹೆಣಗಳು ಎಷ್ಟೆಷ್ಟು ಸಿಕ್ಕಿದಂತೆ, ಪ್ರಥಮ ತನಿಖೆ ಮುಗಿದಂತೆ ಸಂಖ್ಯೆಯನ್ನು ಅಧಿಕೃತವಾಗಿ ಪ್ರಕಟಿಸುತ್ತಾರೆ. ಬೇಕಾಬಿಟ್ಟಿಯಾಗಿ ಹೇಳಿದರೆ ಮುಜುಗರಗಳು ಹೆಚ್ಚು. ಆಗ ಮೂವತ್ತು ಎಂದಿದ್ದೀರಿ. ಈಗ ಇರೋದು ಇಪ್ಪತ್ತೆರಡೇ ಹೆಣ!. ಉಳಿದ ಎಂಟು ಎಲ್ಲಿ, ಅವನ್ನೇನು ಮಾಡಿದಿರಿ ಎಂದರೆ ಏನು ಹೇಳಬೇಕು?

ಮೊದಲಿಗೆ ಇಪ್ಪತ್ತು ಜನ ಎಂಬ ಸುದ್ದಿಗೆ ಪ್ರಕ್ಷುಬ್ಧ ಗೊಂಡಿದ್ದ ಜನ ಎರಡನೇ ಹಂತದಲ್ಲಿ ಎಪ್ಪತ್ತು ಸಾವನ್ನು ಸಮಾಧಾನವಾಗಿ ಸ್ವೀಕರಿಸ ಬಲ್ಲರು. ನಂತರ ನೂರಿಪ್ಪತ್ತು ಎಂದರೂ ಅರಗಿಸಿಕೊಳ್ಳಬಲ್ಲರು. ಇಂದಿರಾ ಹತ್ಯೆ ಸುದ್ದಿ ಸ್ಫೋಟಿಸಿದಾಗ ಸಾವಿರಾರು ಜನ ಕೊಲ್ಲಲ್ಪಟ್ಟರು. ಡಾ.ರಾಜ್ ಅಪಹರಣ ವಾದಾಗ ಏನೆಲ್ಲ ಸಂಭವಿಸಿತು ನೆನಪಿದೆಯೇ?

ಜನತೆ ಯಾವುದಕ್ಕೆ ಎಷ್ಟು ತೀಕ್ಷ್ಣವಾಗಿ ಪ್ರತಿಕ್ರಿಯಿ ಸುತ್ತಾರೆ ಎಂಬುದನ್ನು ಯಾರಿಗೂ ಹೇಳಲಾಗು ವುದಿಲ್ಲ. ಫುಟ್‌ಬಾಲ್ ಕೂಟ, ಕ್ರಿಕೆಟ್ ಪಂದ್ಯ, ಗಣಪತಿ ಉತ್ಸವ ಮುಂತಾದ ಹರ್ಷೋದ್ಗಾರದ ಜನಜಂಗುಳಿಯಲ್ಲಿ ಏನೇ ಹಾರಾಟ, ಚೀರಾಟ ನಡೆಯಲಿ ಜನರು ಉದ್ರಿಕ್ತರಾಗರು. ಆದರೆ, ಅದೇ ಗುಂಪಿಗೆ ಒಂದೇ ಒಂದು ಚಿಕ್ಕ ಕೋಮುಕಿಡಿಯ ಅಂಶ ಸೇರಲಿ. ತಕ್ಷಣವೇ ಸಿಡಿದೆದ್ದ ಜ್ವಾಲಾಮುಖಿಯಾಗಿ ಬಿಡುತ್ತಾರೆ. Mob Mentality ಎಂದರೆ ಇದೇ. ಹರ್ಷೋದ್ಗಾರ ಹಾಕಿಕೊಂಡು ಸಡಗರದಲ್ಲಿದ್ದ ಗುಂಪು ಸಡನ್ನಾಗಿ ಸ್ಫೋಟಿಸಿ ಉದ್ರಿಕ್ತವಾಗಿ ಬಿಡುತ್ತೆ. ಅದನ್ನು ನಿಯಂತ್ರಿಸುವುದು ಸುಲಭವಲ್ಲ. ನಾನಾ ದಿಕ್ಕಿಗೆ ಕಾಳ್ಗಿಚ್ಚು ಹಬ್ಬುತ್ತದೆ.

ಒಂದೊಂದು ಸಾವಿನ ಸಂಗತಿ ಖಚಿತ ವಾಗದ ಹೊರತು ಸರ್ಕಾರ ಪ್ರಕಟಿಸದು. ಸುದ್ದಿಯ ಸೆನ್ಸೇಷನ್ ಅದಕ್ಕೆ ಮುಖ್ಯವಲ್ಲ. ಆಗುವ ಪರಿ ಣಾಮಗಳನ್ನು ಅನುಲಕ್ಷಿಸಿ ವಾಸ್ತವವನ್ನು ನಿರ್ದಿಷ್ಟವಾಗಿ ಮಂಡಿಸುವ ಹೊಣೆಗಾರಿಕೆ ಅದರದು. ಮಾಹಿತಿಯಲ್ಲಿ ಕೊಂಚ ಏರು ಪೇರಾದರೂ ನಾನಾ ಟೀಕೆ ಗಳಿಗೆ ಗುರಿಯಾ ಗಬೇಕಾಗುತ್ತದೆ. ಅದರಲ್ಲೂ ಜಾತಿಗೆ ಸಂಬಂಧಿ ಸಿದ ಸಾವುಗಳು. ನಾನಾ ವಿಕೃತ ರೂಪ ಪಡೆದುಕೊಳ್ಳುತ್ತವೆ. ಸರ್ಕಾರ ಪ್ರಕಟಿಸಿದ ಸಂಖ್ಯೆ ಏನಿದೆಯೋ ಅದಷ್ಟು ಮಾತ್ರ ಪಕ್ಕಾ ಇರುತ್ತದೆ.

ಮಹಾಮೇಳದ ಬಂದೋಬಸ್ತ್ ವ್ಯವಸ್ಥೆ ಯುಪಿ ಪೊಲೀಸರಿಗೆ ಹೊಸದೇನೂ ಅಲ್ಲ. ನೂರಾರು ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವ ಭದ್ರತಾ ವ್ಯವಸ್ಥೆ ಅದು. ಪ್ರತಿ ಉತ್ಸವ ಮುಗಿದ ಮೇಲೆ ಏನೆಲ್ಲ ಲೋಪದೋಷಗಳಾಗಿದ್ದವು ಎಂಬುದರ ಮುಕ್ತ ಚರ್ಚೆ ನಡೆಯುತ್ತದೆ. ಹಿಂದಿನ ದೋಷಗಳನ್ನು ಗುರ್ತು ಹಾಕಿಕೊಂಡು ಅವು ಸಂಭವಿಸದಂತೆ ಮುಂಜಾಗ್ರತಾ ವ್ಯವಸ್ಥೆ ಮಾಡಿಕೊಳ್ಳುತ್ತಾರೆ. ಇಷ್ಟಾದರೂ ಅವಘಡ ಗಳು ಸಂಭವಿಸುವುದಿಲ್ಲ ಎನ್ನಲಾಗದು. ದಸರಾ ಮೆರವಣಿಗೆಯಲ್ಲಿ ಬನ್ನಿಮಂಟಪ ಗೇಟು, ಕೆ.ಆರ್. ಆಸ್ಪತ್ರೆ ಸರ್ಕಲ್ ಮುಂತಾದ ಕಡೆ ವಿಪರೀತ ನೂಕು ನುಗ್ಗಲಾಗುತ್ತದೆ. ಅವನ್ನು ಹೇಗೆ ನಿಭಾಯಿಸಬೇಕು ಎಂದು ಅಧಿಕಾರಿಗಳು ದಶಕಗಳಿಂದ ನಾನಾ ವ್ಯವಸ್ಥೆ ಮಾಡುತ್ತಲೇ ಬಂದಿದ್ದಾರೆ. ಆದರೂ ಪೂರ್ಣ ಯಶಸ್ಸು ಕಂಡಿಲ್ಲ. ಮೈಸೂರಿನ ಬಸ್‌ಸ್ಟ್ಯಾಂಡ್ ಬಳಿ ಜೋರು ಮಳೆ ಬಂದರೆ ನಾಲ್ಕೈದು ದಿನ ದೊಡ್ಡ ಕೆರೆ ಉಂಟಾಗುತ್ತಿತ್ತು. ಈಗದನ್ನು ಸರಿಪಡಿಸಿದ್ದಾರೆ. ಇದೇ ಜೀವ–ನಿರ್ಜೀವದ ವ್ಯತ್ಯಾಸ. ಆದರೆ ಜನ ಜಂಗುಳಿ ಸಮಾಚಾರ ಹಾಗಲ್ಲ. ಪ್ರತಿಕ್ಷಣ ಊಹೆಗೂ ಮೀರಿ ಅವಘಡ ಸಂಭವಿಸಿಬಿಡುತ್ತದೆ.

ಬಂದೋಬಸ್ತ್ ವ್ಯವಸ್ಥೆಯ ಆಸಕ್ತಿಯಿಂದಾಗಿ ಮಹಾ ಮೇಳ ಆರಂಭವಾದಾಗಿನಿಂದಲೂ ಟೀವಿಯಲ್ಲಿ ಅದರ ಏರ್ಪಾಡುಗಳ ಅಚ್ಚುಕಟ್ಟು ತನ ನೋಡಿ ವಿಸ್ಮಯಗೊಳ್ಳುತ್ತಿದ್ದೆ. ಆ ಸುಸಂಬದ್ಧತೆ ನೋಡಿ ಸಂತೋಷವೂ ಆಗು ತ್ತಿತ್ತು. ಜನಸಂಚಾರವನ್ನು ಸುಗಮಗೊಳಿಸಿರುವ ರೀತಿ; ಕಂಭ ಕಂಭಕ್ಕೂ ನಂಬರ್ ಹಾಕಿ ಗೊಂದಲಕ್ಕೆ ಅವಕಾಶವಿಲ್ಲದಂತೆ ಮಾಡಿರುವುದು. ಪರಸ್ಪರ ಜಗಳ, ತಿಕ್ಕಾಟ, ಘರ್ಷಣೆಯೇ ಆಗ ಕೂಡದು ಎಂಬಂತೆ ಮಾಡಿರುವ streamline ವ್ಯವಸ್ಥೆ ಕಂಡು ಸಂತೋಷ ವಾಗುತ್ತಿತ್ತು. ಆ ಮುಂಗಾಣ್ಕೆಯ ಅಚ್ಚುಕಟ್ಟು ತನವೇ ಉತ್ಸವದ ಯಶಸ್ಸಿಗೆ ಕಾರಣ.

ಸಂಬಂಧಿಸಿದ ಅಧಿಕಾರಿಗಳು ಏನೆಲ್ಲಾ ಪೂರ್ವ ಭಾವಿ ಸಿದ್ಧತೆ ನಡೆಸಿರಬೇಕು ಎಂಬುದ ನೆನೆದರೇ ಅದರ ಅಗಾಧತೆ ಗೋಚರವಾಗು ತ್ತಿತ್ತು. ಗಂಟೆಗೆ ಎರಡು ಲಕ್ಷ ಜನರನ್ನು ಸುರ ಕ್ಷಿತವಾಗಿ ಸಂಗಟಲ್ ಘಾಟಿಗೆ ಬಿಡುತ್ತಿದ್ದರು ಎಂದರೆ ಆ ಪೊಲೀಸರ ಕರ್ತವ್ಯ ಪ್ರಜ್ಞೆ ಉನ್ನತ ಮಟ್ಟದ್ದೇ ಸರಿ. ಅಲ್ಲಿ ಕೊಂಚ ಎಡವಟ್ಟಾಗಿದ್ದಿದ್ದರೆ, ಅನುಮಾನವೇ ಬೇಡಿ. ಲಕ್ಷಗಟ್ಟಲೆ ಜನ ಪುತು ಪುತು ಉದುರಿ ಹೋಗುತ್ತಿದ್ದರು. ಜನ ಸಾಗುವಾಗ ನಿಧಾನದ ಸರೋವರವೇ ಸ್ಥಳಾಂತರವಾಗುತ್ತಿರುವಂತೆ ಕಂಡುಬರುತ್ತದೆ. ಇದ್ದಕ್ಕಿದ್ದಂತೆ ಏನೋ ನಡೆದು ಜನ ಉದ್ರಿಕ್ತರಾಗಿ ನುಗ್ಗಿದರೆಂದರೆ ಅಲ್ಲೋಲ–ಕಲ್ಲೋಲವಾದಂತೆ. ಅದನ್ನು ನಿಯಂತ್ರಿಸುವುದರೊಳಗೆ ಆಗಬಾರದ ಅನಾಹುತಗಳೆಲ್ಲವೂ ಆಗಿಬಿಟ್ಟಿರುತ್ತವೆ.

ಇಷ್ಟೆಲ್ಲ ಮುಂಜಾಗ್ರತೆ ವಹಿಸಿದ್ದರೂ ಮೂವತ್ತು ಸಾವಿನ ಅನಾಹುತ ಜರುಗಿದೆ. ಅದು ಆ ದಿನದ ಕೈಮೀರಿದ ಘಟನೆ ಎಂಬು ದರಲ್ಲಿ ಅನುಮಾನವಿಲ್ಲ. ಅದು ನಡೆಯಿ ತೆಂದು ಯುಪಿ ಪೊಲೀಸರ ಕಾರ್ಯ ಸಾಧನೆಯನ್ನು ಕಳಪೆ ಮಾಡುವಂತಿಲ್ಲ.

ನನ್ನ ಪೊಲೀಸ್ ಅನುಭವದಲ್ಲಿ ಹೇಳುವು ದಾದರೆ ತಿಂಗಳೊಪ್ಪತ್ತಿನಿಂದ ಅವರು ಮಾಡು ತ್ತಿರುವ ಸುರಕ್ಷತಾ ಸಾಧನೆ, ಜೀವರಕ್ಷಣೆ ಯಾವ ಬಗೆಯ ಸೇವೆಗೂ ಕಡಿಮೆಯಿಲ್ಲ. ಈಗಾಗಲೇ 37 ಕೋಟಿ ಜನರನ್ನು ಕ್ಷೇಮವಾಗಿ ದಾಟಿಸಿದ್ದಾರೆ. ಇನ್ನುಳಿದ ಹತ್ತು ಕೋಟಿ ಜನರನ್ನು ಸಂಭಾಳಿಸುವುದು ಅವರಿಗೆ ಕಷ್ಟವೇನಲ್ಲ.

KUDOS TO UP POLICE!

अक्रम ಸಂಬಂಧದಿಂದ ಪತಿಯ ಆತ್ಮಹತ್ಯೆಗೆ ಕಾರಣರಾದ

ಪತ್ನಿ ಸೇರಿ ಮೂವರಿಗೆ ಐದು ವರ್ಷ ಜೈಲು ಶಿಕ್ಷೆ

ಮೈಸೂರು, ಫೆ.6(ಆರ್‌ಕೆ)–ತನ್ನ ಕಣ್ಣೆದುರೇ ಬೇರೊಬ್ಬನೊಂದಿಗೆ ಅಕ್ರಮ ಚಟುವಟಿಕೆ ಯಲ್ಲಿ ತೊಡಗಿದ್ದರಿಂದ ಅವಮಾನ ತಾಳಲಾರದೇ ವಿಷ ಕುಡಿದು ಪತಿ ಆತ್ಮಹತ್ಯೆ ಮಾಡಿಕೊಂಡ ಪ್ರಕರಣ ದಲ್ಲಿ ಆತನ ಪತ್ನಿ ಸೇರಿ ಮೂವರಿಗೆ ಮೈಸೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲ ಯದ ನ್ಯಾಯಾಧೀಶರಾದ ಕೆ.ಭಾಗ್ಯ ಅವರು 5 ವರ್ಷಗಳ ಕಠಿಣ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ.

ನಂಜನಗೂಡು ತಾಲೂಕು ಚಿಕ್ಕಾಟಿ ಗ್ರಾಮದ ಜ್ಯೋತಿ, ಸಹೋದರ ಮಂಜುನಾಥ್ ಹಾಗೂ ಅಕ್ರಮ ಸಂಬಂಧ ಹೊಂದಿದ್ದ ಅದೇ ಗ್ರಾಮದ ಪ್ರಸನ್ನ ಕುಮಾರ್ ಶಿಕ್ಷೆಗೊಳಗಾದವರು. 2010ರ ಏಪ್ರಿಲ್ 9ರಂದು ಜ್ಯೋತಿಯನ್ನು ತಾಲೂಕಿನ ಬಿಳಿಗೆರೆ ಗ್ರಾಮದ ಕುಮಾರ ಎಂಬುವರಿಗೆ ವಿವಾಹ ಮಾಡಿಕೊಡಲಾಗಿತ್ತು.

ಅವರಿಗೆ ಒಂದು ಗಂಡು, ಒಂದು ಹೆಣ್ಣು ಮಗು ಇತ್ತು. ಪತಿ ಮನೆಯಲ್ಲಿದ್ದಾಗಲೆಲ್ಲಾ ಮಾನಸಿಕ ಸ್ಥಿಮಿತತೆ ಕಳೆದುಕೊಂಡಂತೆ ವರ್ತಿಸುತ್ತಿದ್ದ ಜ್ಯೋತಿಯನ್ನು, ತವರು ಮನೆಗೆ ಕಳುಹಿಸಿದಾಗ ಅಲ್ಲಿ ಸಂತೋಷವಾಗಿರುತ್ತಿದ್ದಳು. ಮತ್ತೆ ಗಂಡನ ಮನೆಗೆ ಕರೆತಂದಾಗ ದೆವ್ವ ಹಿಡಿದಂತೆ ಆಡುತ್ತಿ ದ್ದಳು. ಅವಳ ಆರೋಗ್ಯ ಸುಧಾರಿಸಲೆಂದು ಆಕೆ ಯನ್ನು ಹೆಚ್ಚಾಗಿ ತವರು ಮನೆಯಲ್ಲೇ ಬಿಡಲಾ ಗುತ್ತಿತ್ತು. ಹೀಗಿರುವಾಗ 2018ರ ಜನವರಿ 21 ಮತ್ತು 22ರಂದು ನಂಜನಗೂಡಿನ ಯಾತ್ರಿ ಭವನದಲ್ಲಿ ಜ್ಯೋತಿ ಅಣ್ಣ ಬೀರೇಶನ ಮದುವೆ ಇದ್ದ ಕಾರಣ, ಎಲ್ಲರೂ ಪಾಲ್ಗೊಂಡಿದ್ದರು.

ರಾತ್ರಿ ಶಾಸ್ತ್ರಗಳು ಮುಗಿದ ಬಳಿಕ ಎಲ್ಲರೂ ಊಟ ಮಾಡುತ್ತಿದ್ದಾಗ ಮಧ್ಯದಲ್ಲೇ ಪಂಕ್ತಿಯಿಂದ ಎದ್ದು ಹೋದ ಜ್ಯೋತಿ ಸುಮಾರು ಹೊತ್ತಾದರೂ ಬಾರದ ಕಾರಣ ಗಂಡ ಕುಮಾರ ಹುಡುಕಿಕೊಂಡು ಹೋದಾಗ ಆಕೆ ಛತ್ರದ ಕೊಠಡಿಯೊಂದರಲ್ಲಿ ಪ್ರಸನ್ನಕುಮಾರನೊಂದಿಗೆ ರಾಸಲೀಲೆಯಲ್ಲಿ ತೊಡ ಗಿರುವುದು ಕಂಡಿತು. ಆ ಬಗ್ಗೆ ಜ್ಯೋತಿಯ ಸಹೋ ದರ ಮಂಜುನಾಥನಿಗೆ ವಿಷಯ ತಿಳಿಸಿದಾಗ, ಅದನ್ನು ಸಮರ್ಥಿಸಿಕೊಂಡ ಜ್ಯೋತಿ ಮತ್ತು ಮಂಜುನಾಥ್ 'ನಿನಗೆ ಅವಮಾನವಾಗಿದ್ದರೆ ವಿಷ ಕುಡಿದು ಸಾಯಿ' ಎಂದು ಉಡಾಫೆ ಮಾತನಾಡಿ, ಹೊರಟು ಹೋದರು.

ಅದರಿಂದ ಅವಮಾನಿತನಾದ ಕುಮಾರ, 2018ರ ಜನವರಿ 23ರಂದು ರಾತ್ರಿ 8.30ರಲ್ಲಿ ಕೀಟನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದ. ಬಿಳಿಗೆರೆ ಠಾಣೆಯ ಅಂದಿನ ಸಬ್ ಇನ್ಸ್‌ಪೆಕ್ಟರ್ ಯಶವಂತ ಕುಮಾರ್ ಪ್ರಕರಣ ದಾಖಲಿಸಿ ಕೊಂಡು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾ ಧೀಶರು ಮೂವರು ಆರೋಪಿಗಳಿಗೂ ತಲಾ 5 ವರ್ಷಗಳ ಕಠಿಣ ಸಜೆ ಹಾಗೂ 1,25,000 ರೂ. ದಂಡ ವಿಧಿಸಿ ತೀರ್ಪು ನೀಡಿದರು. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಟಿ.ಹೆಚ್. ಲೋಲಾಕ್ಷಿ ವಾದ ಮಂಡಿಸಿದ್ದರು.

ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ಮೊದಲು ಅನುಮತಿ ಕೊಡಿಸಲಿ...

ಕೇಂದ್ರ ಸಚಿವ ಕುಮಾರಸ್ವಾಮಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು




ಬೆಂಗಳೂರು, ಫೆ.6(ಕೆಎಂಶಿ)–ಮೇಕೆದಾಟು ಅಣೆ ಕಟ್ಟೆ ನಿರ್ಮಾಣಕ್ಕೆ ಅನುಮತಿಯನ್ನು ಒಂದೇ ದಿನದಲ್ಲಿ ಕೊಡಿಸುತ್ತೇನೆ ಎಂಬು ದಾಗಿ ಎಚ್.ಡಿ.ಕುಮಾರಸ್ವಾಮಿ ಹೇಳಿ ದ್ದರಲ್ಲ, ಮೊದಲು ಈ ಕೆಲಸ ಮಾಡಲಿ, ಆ ಮೇಲೆ ಮಾತಾಡಲಿ. ಅವರು ಅಧಿ ಕಾರದಲ್ಲಿ ಇದ್ದಾಗ ಎರಡನೇ ವಿಮಾನ ನಿಲ್ದಾಣ ಮಾಡಲು ಯಾವುದೇ ಹೆಜ್ಜೆಯಿಡಲಿಲ್ಲ. ನಾವು ಈಗ ಪ್ರಯತ್ನಿಸಿದ್ದೇವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಿರುಗೇಟು ನೀಡಿದ್ದಾರೆ.

ಎರಡನೇ ವಿಮಾನ ನಿಲ್ದಾಣ ನಿರ್ಮಾಣ ನಮ್ಮ ಕೈಲಿಲ್ಲ: ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿಗೆ ಎರಡನೇ ವಿಮಾನ ನಿಲ್ದಾಣ ಬಿಡದಿ, ನೆಲಮಂಗಲ, ತುಮಕೂರು, ಸೋಲೂರು ಸೇರಿದಂತೆ ಯಾವ ಸ್ಥಳದಲ್ಲಿ ಸ್ಥಾಪಿಸಬೇಕೆಂಬ ತೀರ್ಮಾನ ನಮ್ಮ ವ್ಯಾಪ್ತಿಯಲ್ಲಿಲ್ಲ, ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ಹಾಗೂ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದವರು ತೀರ್ಮಾನ ಮಾಡುತ್ತಾರೆ ಎಂದರು.

ಬೆಂಗಳೂರಿಗೆ ಎರಡನೇ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಕಾಲಮಿತಿ ಒಪ್ಪಂದವಿದೆ, ಈ ಕುರಿತು ಎರಡೂ ಸಂಸ್ಥೆಗಳು ಸೇರಿ ತೀರ್ಮಾನ ಮಾಡುತ್ತವೆ.

ರಾಜ್ಯ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ನೇತೃತ್ವ ದಲ್ಲಿ ಸ್ಥಳ ಪರಿಶೀಲನೆ ನಡೆಯುತ್ತಿದೆ, ಮುಖ್ಯಮಂತ್ರಿ ಹಾಗೂ ತಮ್ಮ ಬಳಿ ಮಾತನಾಡಿದ ನಂತರ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಿ ಪ್ರಾಧಿಕಾರದ ಅನುಮತಿ ಪಡೆದು ಅಂತಿಮ ತೀರ್ಮಾನ ತೆಗೆದು ಕೊಳ್ಳಲಾಗುವುದು ಎಂದು ಹೇಳಿದರು.

ನಮ್ಮ ಊರಿನಲ್ಲಿ ವಿಮಾನ ನಿಲ್ದಾಣ ಬರಬೇಕು ಎನ್ನುವ ಆಸೆ ನನಗಿದೆ. ಆದರೆ, ಆ ರೀತಿ ಮಾಡಲು ಆಗುವುದಿಲ್ಲ. ವಿಮಾನ ನಿಲ್ದಾಣ ನಿರ್ಮಾಣ ಆಗ ಬೇಕೆಂ ದರೆ ಸಾಕಷ್ಟು ರೀತಿ, ರಿವಾಜುಗಳಿವೆ. ಸಮೀಪದಲ್ಲಿ ಗುಡ್ಡಗಳು ಇರಬಾರದು, ಫ್ಲೈಯಿಂಗ್ ಜೋನ್ ಇರಬೇ ಕೆಂಬ ನಿಯಮಗಳಿವೆ, ಒಟ್ಟು 4,400 ಎಕರೆ ಭೂಮಿಯ ಅಗತ್ಯವಿದೆ. ವಿಮಾನ ನಿಲ್ದಾಣಕ್ಕೆ ಒತ್ತಡವನ್ನು ಕುಮಾರ ಸ್ವಾಮಿ ಜಮೀನಿನ ಪಕ್ಕದವರು ಒತ್ತಾಯ ತರುತ್ತಾರೆ. ನಾನೂ ನನ್ನ ಜಮೀನು ಪಕ್ಕದಲ್ಲಿ ಇದ್ದವರಿಂದ ಮನವಿ ಮಾಡಿಕೊಳ್ಳುತ್ತೇನೆ ಎಂದು ಮಾರ್ಮಿಕವಾಗಿ ನುಡಿದರು.



ಎಕ್ಸಿಟ್ ಪೋಲ್ ಬಗ್ಗೆ ನಂಬಿಕೆ ಇಲ್ಲ: ದೆಹಲಿ ವಿಧಾನಸಭಾ ಚುನಾವಣೆಯ ಕುರಿತ ಎಕ್ಸಿಟ್ ಪೋಲ್ ಬಗ್ಗೆ ನಂಬಿಕೆಯಿಲ್ಲ, ಮತದಾರರ ತೀರ್ಮಾನದ ಫಲಿತಾಂಶಕ್ಕಾಗಿ ಕಾಯೋಣ. ಮೈಕ್ರೋ ಫೈನಾನ್ಸ್‌ಗಳ ಹಾವಳಿಗೆ ಅಂಕುಶ ಹಾಕುವ ಸುಗ್ರೀವಾಜ್ಞೆ ರಾಜ್ಯ ಪಾಲರ ಅಂಕಿತಕ್ಕೆ ಮುಖ್ಯಮಂತ್ರಿ ಕಳುಹಿಸುತ್ತಿದ್ದಾರೆ. ಸಹಿ ನಂತರ ಜಾರಿಗೆ ತರಲಾಗುವುದು ಎಂದರು.

ಬಿಟ್ ಕಾಯಿನ್ ಪ್ರಕರಣದಲ್ಲಿ ಕಾಂಗ್ರೆಸ್ ಯುವ ನಾಯಕ ಮೊಹಮ್ಮದ್ ನಲಪಾಡ್‌ಗೆ ಎಸ್‌ಐಟಿ ನೋಟಿಸ್ ನೀಡಿರುವ ಬಗ್ಗೆ ನನಗೆ ಗೊತ್ತಿಲ್ಲ, ತನಿಖೆ ನಿಯಮದಂತೆ ನಡೆಯುತ್ತದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581/1980 E-mail address: mysoorumithra@gmail.com For advertisements: mysoorumithra@gmail.com

ಮೊದಲ ಏಕದಿನ ಪಂದ್ಯ: ಭಾರತಕ್ಕೆ ಭರ್ಜರಿ ಜಯ



ನಾಗ್ಪುರ, ಫೆ.6– ಇಂಗ್ಲೆಂಡ್ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿ ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಭಾರತ 4 ವಿಕೆಟ್‌ಗಳಿಂದ ಜಯ ಗಳಿಸಿದೆ. ಆ ಮೂಲಕ 3 ಪಂದ್ಯಗಳ ಸರಣಿಯಲ್ಲಿ 1–0 ಅಂತರದ ಮುನ್ನಡೆ ಸಾಧಿಸಿದೆ.

ಇಲ್ಲಿನ ವಿದರ್ಭ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ 47.4 ಓವರ್‌ಗಳಲ್ಲಿ 248 ರನ್‌ಗಳಿಗೆ ಆಲೌಟಾಯಿತು. ಬಳಿಕ ಗೆಲುವಿನ ಗುರಿ ಬೆನ್ನತ್ತಿದ ಭಾರತ 38.4 ಓವರ್‌ಗಳಲ್ಲಿ 251ರನ್ ಭಾರೀ ಜಯ ಗಳಿಸಿತು.

ಭಾರತದ ಪರ ಇನ್ನಿಂಗ್ಸ್ ಆರಂಭಿಸಿದ ನಾಯಕ ರೋಹಿತ್ ಶರ್ಮಾ 2, ಯಶಸ್ವಿ ಜೈಸ್ವಾಲ್ 15 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಬಂದ ಶ್ರೇಯಸ್ ಅಯ್ಯರ್ ಶುಭ್‌ಮನ್ ಗಿಲ್ ಜೊತೆಗೂಡಿ 3ನೇ ವಿಕೆಟ್‌ಗೆ 94 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಆಸರೆಯಾದರು. ಪಂದ್ಯದಲ್ಲಿ ಬಿರುಸಿನ ಬ್ಯಾಟಿಂಗ್ ಮಾಡಿದ ಶ್ರೇಯಸ್ ಅಯ್ಯರ್ 36 ಎಸೆತಗಳಲ್ಲಿ 9 ಬೌಂಡರಿ, 2 ಸಿಕ್ಸರ್ ಒಳಗೊಂಡ 59 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ಅಕ್ಷರ್ ಪಟೇಲ್ ಇಂಗ್ಲೆಂಡ್ ಬೌಲರ್‌ಗಳನ್ನು ದಂಡಿಸಲು ಆರಂಭಿಸಿದರು. ನಾಲ್ಕನೇ ವಿಕೆಟ್‌ಗೆ ಶುಭಮನ್ ಗಿಲ್ ಮತ್ತು ಅಕ್ಷರ್ 107 ಎಸೆತಗಳಲ್ಲಿ 108 ರನ್ ಜೊತೆಯಾಟವಾಡಿದರು. ಆದರೆ 47 ಎಸೆತಗಳಲ್ಲಿ 6 ಬೌಂಡರಿ, 1 ಸಿಕ್ಸರ್ ಒಳಗೊಂಡ 52 ರನ್ ಗಳಿಸಿದ್ದ ಅಕ್ಷರ್ ಪಟೇಲ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಅರ್ಧಶತಕ ಸಿಡಿಸಿ ಶತಕದತ್ತ ಮುನ್ನಡೆಯುತ್ತಿದ್ದ ಶುಭಮನ್ ಗಿಲ್ 14 ಬೌಂಡರಿ ಒಳಗೊಂಡ 87 ರನ್ ಗಳಿಸಿ ಔಟಾದರು. ನಂತರ ಬಂದ ಹಾರ್ದಿಕ್ ಪಾಂಡ್ಯ 9, ರವೀಂದ್ರ ಜಡೇಜಾ 12 ರನ್ ಗಳಿಸಿದರು.


ಇಂಗ್ಲೆಂಡ್ ಪರ ಸಾಕಿಬ್ ಮಹಮೂದ್, ಆದೀಲ್ ರಶೀದ್ ತಲಾ 2, ಜೋಫ್ರಾ ಆರ್ಚರ್, ಜಾಕಬ್ ಬೇಥಲ್ ತಲಾ ಒಂದೊಂದು ವಿಕೆಟ್ ಒಪ್ಪಿಸಿದರು.

ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ಪರ ಫಿಲ್ ಸಾಲ್ಟ್ 43, ಬೆನ್ ಡಕಟ್ 32, ಜೋಸ್ ಬಟ್ಲರ್ 52, ಜಾಕೋಬ್ ಬೆಥೆಲ್ 51, ಜೋಫ್ರಾ ಆರ್ಚರ್ 21, ಬ್ರೈಡನ್ ಕಾರ್ಸೆ 10 ರನ್ ಗಳಿಸಿದರು. ಭಾರತದ ಪರ ಹರ್ಷಿತ್ ರಾಣಾ ಮತ್ತು ಜಡೇಜಾ ತಲಾ 3, ಮೊಹಮದ್ ಶಮಿ, ಅಕ್ಷರ್ ಪಟೇಲ್, ಕುಲದೀಪ್ ಯಾದವ್ ತಲಾ ಒಂದೊಂದು ವಿಕೆಟ್ ಪಡೆದರು. ಶುಭಮನ್ ಗಿಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು. ಎರಡನೇ ಏಕದಿನ ಪಂದ್ಯ ಒಡಿಶಾದ ಕಟಕ್‌ನಲ್ಲಿ ಫೆ9ರಂದು ನಡೆದರೆ, ಮೂರನೇ ಏಕದಿನ ಪಂದ್ಯ ಅಹಮದಾಬಾದ್‌ನಲ್ಲಿ ಫೆ12ರಂದು ನಡೆಯಲಿದೆ

ದಿ ಮೈಸೂರು ಮರ್ಚೆಂಟ್ಸ್ ಕೋ–ಆಪರೇಟಿವ್ ಬ್ಯಾಂಕ್ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ

ಆರ್.ಆನಂದ್ ನೇತೃತ್ವದ ತಂಡ ಜಯಭೇರಿ

ಒಟ್ಟು 13 ಸ್ಥಾನಗಳಲ್ಲಿ ಒಂದು ಅವಿರೋಧ ಆಯ್ಕೆ, ಉಳಿದ ಸ್ಥಾನಗಳಲ್ಲಿ ಪುನರಾಯ್ಕೆ



ಮೈಸೂರಿನ ಶಿವರಾಂಪೇಟೆಯ ಶ್ರೀಮತಿ ಆಲಮ್ಮನ ಛತ್ರದಲ್ಲಿ ಗುರುವಾರ ಮತ ಎಣಿಕೆ ಪ್ರಕ್ರಿಯೆ ಬಳಿಕ ಗೆದ್ದ ಅಭ್ಯರ್ಥಿಗಳನ್ನು ಅಭಿನಂದಿಸಲಾಯಿತು.

ಮೈಸೂರು,ಫೆ.6(ಪಿಎಂ)– ಜಗನ್ಮೋಹನ ಅರಮನೆ ರಸ್ತೆಯಲ್ಲಿರುವ ದಿ ಮೈಸೂರು ಮರ್ಚೆಂಟ್ಸ್ ಕೋ–ಆಪರೇಟಿವ್ ಬ್ಯಾಂಕ್‌ನ 2025–2030ನೇ ಸಾಲಿನ ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆಯ ಮತ ಎಣಿಕೆ ಪ್ರಕ್ರಿಯೆ ಗುರುವಾರ ನಡೆದು ಎಲ್ಲಾ 12 ಸ್ಥಾನಗಳಿಗೆ ಆರ್.ಆನಂದ್ ನೇತೃತ್ವದ ತಂಡ ಜಯಭೇರಿ ಭಾರಿಸಿತು.

ಮೈಸೂರಿನ ಶಿವರಾಂಪೇಟೆಯ ಶ್ರೀಮತಿ ಆಲಮ್ಮನ ಛತ್ರದಲ್ಲಿ ಮತ ಎಣಿಕೆ ಪ್ರಕ್ರಿಯೆ ನಡೆಯಿತು. ಇದೇ ಸ್ಥಳದಲ್ಲಿ ಜ.19ರಂದು ಸದರಿ ಚುನಾವಣೆಯ ಮತದಾನ ಪ್ರಕ್ರಿಯೆ ನಡೆದಿತ್ತು. ಸಾಮಾನ್ಯವಾಗಿ ಮತದಾನದ ದಿನದಂದೇ ಎಣಿಕೆ ನಡೆದು ಫಲಿತಾಂಶ ಪ್ರಕಟಿಸುವ ವಾಡಿಕೆ ಇದೆ. ಆದರೆ ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಅಂದು ಮತ ಎಣಿಕೆ ನಡೆದಿರಲಿಲ್ಲ.

ಮತದಾನಕ್ಕೆ ತಮ್ಮನ್ನು ಅನರ್ಹಗೊಳಿಸಿದ್ದರ ವಿರುದ್ಧ ಬ್ಯಾಂಕ್‌ನ ಕೆಲ ಸದಸ್ಯರು ಹೈಕೋರ್ಟ್ ಮೊರೆ ಹೋಗಿದ್ದರು. ಈ ಸಂಬಂಧ ರಿಟ್ ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್, ಇವರಿಗೂ ಮತದಾನಕ್ಕೆ ಅವಕಾಶ ಕಲ್ಪಿಸಿ, ಮುಂದಿನ ಆದೇಶದವರೆಗೆ ಫಲಿತಾಂಶ ಪ್ರಕಟಿಸದಂತೆ ಮಧ್ಯಂತರ ಆದೇಶ ನೀಡಿತ್ತು. ಇದೀಗ ಎಲ್ಲಾ ಮತಗಳನ್ನು ಎಣಿಕೆ ಮಾಡಿ, ಫಲಿತಾಂಶ ಪ್ರಕಟಿಸುವಂತೆ ಹೈಕೋರ್ಟ್ ಆದೇಶಿಸಿತ್ತು. ಅದರಂತೆ ಇಂದು ಪ್ರಕ್ರಿಯೆ ನಡೆಸಿ, ಫಲಿತಾಂಶ ಪ್ರಕಟಿಸಲಾಯಿತು.

ಒಟ್ಟು 13 ನಿರ್ದೇಶಕರ ಸ್ಥಾನಗಳಲ್ಲಿ ಪರಿಶಿಷ್ಟ ಜಾತಿ ಕ್ಷೇತ್ರದಿಂದ ಎಸ್.ರಾಚಪ್ಪಾಜಿ ಎಂಬುವರು ಅವಿರೋಧ ಆಯ್ಕೆಯಾಗಿ ಇನ್ನುಳಿದ 12 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ 21 ಮಂದಿ ಕಣದಲ್ಲಿದ್ದರು. ಅಂತೆಯೇ ಎಲ್ಲಾ 12 ಸ್ಥಾನಗಳಲ್ಲಿ ಆರ್.ಆನಂದ್ ನೇತೃತ್ವದ ತಂಡ ಗೆಲುವು ಸಾಧಿಸಿತು. ಸಾಮಾನ್ಯ ಕ್ಷೇತ್ರದಿಂದ ಸ್ಪರ್ಧಿಸಿದ್ದ ಆರ್.ಆನಂದ್ 2,690 ಮತಗಳನ್ನು ಗಳಿಸುವ ಮೂಲಕ ನಿರ್ದೇಶಕರಾಗಿ ಪುನರಾಯ್ಕೆಯಾದರು. ಅಂತೆಯೇ ಇವರ ತಂಡದ 11 ಮಂದಿಯೂ ಪುನರಾಯ್ಕೆಗೊಂಡರು.

ಇವರ ತಂಡದ ಬಿ.ಆರ್.ನಂದೀಶ್ (ಸಾಮಾನ್ಯ ಕ್ಷೇತ್ರ, ಪಡೆದ ಮತಗಳು 2,465), ಸಿ.ವಿ.ಸೋಮಶೇಖರ (ಸಾಮಾನ್ಯ ಕ್ಷೇತ್ರ, 2,257), ಎ.ಪ್ರಭುಪ್ರಸಾದ್ (ಸಾಮಾನ್ಯ 2,158), ಕೆ.ಪ್ರೇಮ್‌ಕುಮಾರ್ (ಸಾಮಾನ್ಯ, 2,152), ಎನ್.ಕಣ್ಣನ್ (ಸಾಮಾನ್ಯ, 2,101), ಎಂ.ಎನ್.ಮಹೇಶ್ (ಸಾಮಾನ್ಯ, 2,100), ಆರ್.ಪಿ.ಕೃಷ್ಣಮೂರ್ತಿ (ಹಿಂದುಳಿದ ವರ್ಗ ಪ್ರವರ್ಗ–ಎ, 1,952), ಬಿ.ಕೋದಂಡರಾಮು (ಹಿಂದುಳಿದ ವರ್ಗ ಪ್ರವರ್ಗ ಬಿ, 2,294), ಎನ್.ರಾಘವ (ಪರಿಶಿಷ್ಟ ಜಾತಿ, 1,582), ಎನ್.ಸುಧಾ (ಮಹಿಳಾ ಮೀಸಲು, 2,176) ಸಿ.ಎಸ್.ಗಂಗಾಂಬಿಕೆ (ಮಹಿಳಾ ಮೀಸಲು, 2,092) ಪುನರಾಯ್ಕೆ ಮೂಲಕ ಗೆಲುವು ದಾಖಲಿಸಿದರು. ಸದರಿ ತಂಡ ಬಿಟ್ಟರೆ ಎದುರಾಳಿಯಾಗಿ ಬೇರೆ ಯಾವುದೇ ತಂಡ ಇರಲಿಲ್ಲವಾದರೂ 9 ಮಂದಿ ಯಾವುದೇ ತಂಡ ರಚಿಸಿಕೊಳ್ಳದೇ ಸ್ವತಂತ್ರವಾಗಿ ಕಣದಲ್ಲಿದ್ದು ಪರಾಜಿತಗೊಂಡರು. ಒಟ್ಟು 4,848 ಮತದಾರರ ಪೈಕಿ 3,704 ಮಂದಿ ಮತ ಚಲಾಯಿಸಿದ್ದರು. ಸಹಕಾರ ಇಲಾಖೆಯ ಸಹಕಾರ ಅಭಿವೃದ್ಧಿ ಅಧಿಕಾರಿಯೂ ಆದ ಚುನಾವಣಾಧಿಕಾರಿ ಎಸ್.ವಸಂತ್‌ಕುಮಾರ್, ಮತ ಎಣಿಕೆ ಪ್ರಕ್ರಿಯೆ ನಡೆಸಿ ಫಲಿತಾಂಶ ಪ್ರಕಟಿಸಿದರು. ಜಯಭೇರಿ ಭಾರಿಸಿದ ಆರ್.ಆನಂದ್ ಮತ್ತು ಅವರ ತಂಡವನ್ನು ಅಭಿನಂದಿಸಲಾಯಿತು.

ಕರ್ನಾಟಕದಲ್ಲಿರುವುದು ಭ್ರಷ್ಟ ಕಾಂಗ್ರೆಸ್ ಸರ್ಕಾರ: ಗೌಡರ ಗುಡುಗು

● ಸರಕಾರದ ಭ್ರಷ್ಟತೆಯಿಂದ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡರು!! ● ಬೆಂಗಳೂರಿಗೆ ನೀರು ಕೊಡಿಸುವುದು ನನ್ನ ಜೀವನದ ಕೊನೆಯ ಆಸೆ



ನವದೆಹಲಿ, ಫೆ.6– ರಾಜ್ಯಸಭೆಯಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು, ಕರ್ನಾಟಕದಲ್ಲಿ ಇರುವುದು ಅತ್ಯಂತ ಭ್ರಷ್ಟ ಸರಕಾರ ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯಸಭೆಯಲ್ಲಿ ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಚರ್ಚೆಯಲ್ಲಿ ಗುರುವಾರ ಪಾಲ್ಗೊಂಡು ಅವರು ಮಾತನಾಡಿದರು. ಲೋಕಸಭೆಯಲ್ಲಿ ಬಿಜೆಪಿಗೆ ಸಿಕ್ಕಿರುವುದು 240 ಸ್ಥಾನಗಳಷ್ಟೇ ಎಂದು ಕಾಂಗ್ರೆಸ್ ನಾಯಕರು ಲೇವಡಿ ಮಾಡುತ್ತಿದ್ದಾರೆ. ಆದರೆ, ಕರ್ನಾಟಕ ವಿಧಾನಸಭೆಯಲ್ಲಿ ಕಾಂಗ್ರೆಸ್ 136 ಸ್ಥಾನಗಳನ್ನು ಗೆದ್ದುಕೊಂಡಿದೆ. ಅದರಿಂದ ಉಪಯೋಗವೇನು ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಆ ಪಕ್ಷದ ಸರಕಾರ ಯಾವ ರೀತಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಆಡಳಿತ ನಡೆಸುತ್ತಿದೆ ಎಂಬುದು ಎಲ್ಲರಿಗೂ ಗೊತ್ತು. ಅಲ್ಲಿರುವುದು ಕಡು ಭ್ರಷ್ಟ ಸರಕಾರ ಎಂದು ಅವರು ಕಿಡಿಕಾರಿದರು. ಪ್ರಗತಿಶೀಲ ರಾಜ್ಯ ಕರ್ನಾಟಕವನ್ನು ಕಾಂಗ್ರೆಸ್ ಸರಕಾರ ಹಾಳು ಮಾಡುತ್ತಿದೆ. ಅದು ಎಷ್ಟರ ಮಟ್ಟಿಗೆ ಭ್ರಷ್ಟಾಚಾರದಲ್ಲಿ ತೊಡಗಿದೆ ಎಂದರೆ ಪರಿಶಿಷ್ಟ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಹಣವನ್ನು ಚುನಾವಣೆಗೆ ಬಳಸಿಕೊಂಡಿದೆ. ಯಾವುದೇ ಅಂಜಿಕೆ ಇಲ್ಲದೆ ಭ್ರಷ್ಟಾಚಾರದಲ್ಲಿ ತೊಡಗಿರುವ ಈ ಸರಕಾರದ ಕೆಟ್ಟ ಆಡಳಿತದಿಂದ ಅನೇಕ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡರು ಎಂದು ದೇವೇಗೌಡರು ಗುಡುಗಿದರು.

ಈ ಸಂದರ್ಭದಲ್ಲಿ ಮಾಜಿ ಪ್ರಧಾನಿಗಳ ಮಾತಿಗೆ ಬೆಂಬಲ ವ್ಯಕ್ತಪಡಿಸಿದ ಬಿಜೆಪಿ ಸದಸ್ಯರು, ಕಾಂಗ್ರೆಸ್ ಪಕ್ಷದ ಬಗ್ಗೆ 'ಶೇಮ್ ಶೇಮ್' ಎಂದು ಘೋಷಣೆಗಳನ್ನು ಕೂಗಿದರು. ಕಾಂಗ್ರೆಸ್ ಸರಕಾರದ ಸಚಿವರ ಕಾರ್ಯವೈಖರಿ ಬಗ್ಗೆಯೂ ಮಾಜಿ ಪ್ರಧಾನಿಗಳು ತಮ್ಮ ಅಸಮಾಧಾನವನ್ನು ಹೊರಹಾಕಿದರು. ತಮ್ಮ ಪಕ್ಷದ ಸಚಿವರ ಕಾರ್ಯವೈಖರಿ ಬಗ್ಗೆ ಸ್ವತಃ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೇ ಬೇಸರ ವ್ಯಕ್ತಪಡಿಸಿದ್ದಾರೆ. ಈ ಕುರಿತ ಪತ್ರಿಕಾ ವರದಿಗಳನ್ನು ನಾನು ಈ ಸದನದಲ್ಲಿ ಓದಲೇ? ಎಂದು ಪ್ರಶ್ನಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಸದಸ್ಯರು ಮಾಜಿ ಪ್ರಧಾನಿಗಳ ಭಾಷಣಕ್ಕೆ ಅಡ್ಡಿಪಡಿಸಲು ಯತ್ನಿಸಿದರು.

ಬೆಂಗಳೂರಿಗೆ ನೀರು ಕೊಡಿಸುವುದು ನನ್ನ ಜೀವನದ ಕೊನೆಯ ಆಸೆಯಾಗಿದೆ ಎಂದು ಹೆಚ್.ಡಿ.ದೇವೇಗೌಡ ಹೇಳಿದರು. ಬೆಂಗಳೂರಿನಲ್ಲಿ ಒಂದೂವರೆ ಕೋಟಿ ಜನಸಂಖ್ಯೆ ಇದೆ. ನಮಗೆ 20 ಟಿಎಂಸಿ ನೀರು ಸಿಗುತ್ತಿದ್ದು, 50ಕ್ಕೂ ಅಧಿಕ ಟಿಎಂಸಿ ನೀರಿನ ಅಗತ್ಯವಿದೆ. ಕಾವೇರಿ, ಮಹದಾಯಿ, ಕೃಷ್ಣ ಮೂರು ಅಂತರ ರಾಜ್ಯ ವಿವಾದದಲ್ಲಿವೆ. ಮುಂದಿನ ತಿಂಗಳು ನೀರಿನ ಕೊರತೆಯಾಗಲಿದೆ ಎಂದರು.

ಬೆಂಗಳೂರಿನ ಕುಡಿಯುವ ನೀರಿನ ಸಮಸ್ಯೆಯನ್ನು ಎಳೆಎಳೆಯಾಗಿ ವಿವರಿಸಿದ ದೇವೇಗೌಡರು, ಕುಡಿಯುವ ನೀರಿನ ಅಗತ್ಯ ಬೆಂಗಳೂರಿಗೆ ಇದೆ. ಎಲ್ಲಿಂದ ತರುವುದು? ಮೋದಿ ಅವರು ಮಾತ್ರ ಈ ಸಮಸ್ಯೆ ಬಗೆಹರಿಸಲು ಸಾಧ್ಯ. ನಾನು ಮನಮೋಹನ್ ಸಿಂಗ್ ಅವರಲ್ಲಿ ಭಿಕ್ಷೆ ಬೇಡಿದೆ, ಆದರೆ ಅವರು ಆಗಲ್ಲ ಅಂದುಬಿಟ್ಟರು. ಮೋದಿ ಅವರು ಈ ಸಮಸ್ಯೆ ಬಗೆಹರಿಸಬಹುದು. ಬೆಂಗಳೂರಿಗೆ ನೀರು ಕೊಡಿಸುವುದು ನನ್ನ ಜೀವನದ ಕೊನೆಯ ಆಸೆಯಾಗಿದೆ ಎಂದು ನುಡಿದರು.

ಕಾಂಗ್ರೆಸ್‌ನಿಂದ 'ಸಬ್ ಕಾ ವಿಕಾಸ್' ಸಾಧ್ಯವಿಲ್ಲ, ಅವರಿಗೆ 'ಕುಟುಂಬವೇ ಮೊದಲು'

ರಾಜ್ಯಸಭೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ತೀವ್ರ ವಾಗ್ದಾಳಿ



ನವದೆಹಲಿ, ಫೆ.6– 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ಎಂಬ ತತ್ವವು ಎಲ್ಲರ ಜವಾಬ್ದಾರಿಯಾಗಿದ್ದರೂ, ಕಾಂಗ್ರೆಸ್ ಪಕ್ಷದಿಂದ ಅದನ್ನು ನಿರೀಕ್ಷಿಸುವುದು ತಪ್ಪು ಎಂದು ಗುರುವಾರ ರಾಜ್ಯಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ತೀವ್ರ ವಾಗ್ದಾಳಿ ನಡೆಸಿದರು.

ರಾಜ್ಯಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಾಂಗ್ರೆಸ್ ತನ್ನ ನೀತಿಗಳಲ್ಲಿ ಕುಟುಂಬವೇ ಮೊದಲು ಎಂಬುದಕ್ಕೆ ಆದ್ಯತೆ ನೀಡುತ್ತಿದೆ ಎಂದು ಟೀಕಿಸಿದರು.

ಬಿಜೆಪಿಯ ಗಮನ ರಾಷ್ಟ್ರ ಮೊದಲು ಎಂದು ಹೇಳಿದ ಪ್ರಧಾನಿ ಮೋದಿ, ಭಾರತದ ಜನರು ಬಿಜೆಪಿಯ ಅಭಿವೃದ್ಧಿ ಮಾದರಿಗೆ ಬಲವಾದ ಬೆಂಬಲವನ್ನು ನೀಡಿದ್ದಾರೆ. ಆದರೆ ಕಾಂಗ್ರೆಸ್ ಸುಳ್ಳು, ವಂಚನೆ, ಭ್ರಷ್ಟಾಚಾರ, ಸ್ವಜನಪಕ್ಷಪಾತದ ಮಿಶ್ರಣವಿರುವ ರಾಜಕೀಯದ ಮಾದರಿಯನ್ನು ಸೃಷ್ಟಿಸಿದೆ. ಕಾಂಗ್ರೆಸ್‌ಗೆ ಕುಟುಂಬ ರಾಜಕಾರಣವೇ ಮುಖ್ಯ ಅಂತಹವರಿಂದ ಸಬ್ ಕಾ ವಿಕಾಸ್ ಸಾಧ್ಯವಿಲ್ಲ ಎಂದು ಮೋದಿ ಲೇವಡಿ ಮಾಡಿದರು.

ನಮ್ಮ ಸರ್ಕಾರದ ಗಮನ ತುಷ್ಟೀಕರಣಕ್ಕಿಂತ ಸಂತುಷ್ಟೀಕರಣ(ತೃಪ್ತಿ)ದ ಮೇಲೆ ಇದೆ ಎಂದು ಮೋದಿ ಒತ್ತಿ ಹೇಳಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ನಡೆಸಿಕೊಂಡ ರೀತಿಗೆ ಕಾಂಗ್ರೆಸ್ ಅನ್ನು ತರಾಟೆಗೆ ತೆಗೆದು ಕೊಂಡ ಪ್ರಧಾನಿ, ಕಾಂಗ್ರೆಸ್ ಸರ್ಕಾರ ಬಿ.ಆರ್.ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡಲಿಲ್ಲ. ಆದರೆ ಇಂದು ಅವರು 'ಜೈ ಭೀಮ್' ಎಂದು ಹೇಳುವಂತೆ ಮಾಡಿದ್ದೇವೆ ಎಂದು ಹೇಳಿದರು.

1990ರಲ್ಲಿ ಜನತಾದಳದ ವಿ.ಪಿ.ಸಿಂಗ್ ಪ್ರಧಾನಿಯಾಗಿದ್ದಾಗ ಅಂಬೇಡ್ಕರ್ ಅವರಿಗೆ ಮರಣೋತ್ತರವಾಗಿ 'ಭಾರತ ರತ್ನ' ನೀಡಲಾಯಿತು. ಕಾಂಗ್ರೆಸ್‌ಗೆ ಬಿ.ಆರ್. ಅಂಬೇಡ್ಕರ್ ಬಗ್ಗೆ ದ್ವೇಷ, ಕೋಪವಿತ್ತು, ಲೋಕಸಭಾ ಚುನಾವಣೆಯಲ್ಲಿ ಅವರನ್ನು ಎರಡು ಬಾರಿ ಸೋಲಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಿತು ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದರು.

ಸಿಲಿಂಡರ್ ಸ್ಫೋಟ: ಮನೆ ಬೆಂಕಿಗಾಹುತಿ



ಚಾಮರಾಜನಗರ, ಫೆ.6–ಅಡುಗೆ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಮನೆ ಬೆಂಕಿಗಾಹುತಿ ಆದ ಘಟನೆ ತಾಲೂಕಿನ ಬಾಣಹಳ್ಳಿ ಗ್ರಾಮದಲ್ಲಿ ಗುರುವಾರ ಸಂಭವಿಸಿದೆ.

ಗ್ರಾಮದ ಗುರುಪಾದಸ್ವಾಮಿ ಅವರ ಮನೆಯಲ್ಲಿ ಸಿಲಿಂಡರ್ ಸ್ಫೋಟಗೊಂಡಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣ ಅಪಾಯ ಸಂಭವಿಸಿಲ್ಲ. ಮನೆಯಲ್ಲಿದ್ದ ಸಿಲಿಂಡರ್ ಸ್ಫೋಟಗೊಂಡಿದೆ. ಸ್ಫೋಟದ ರಭಸಕ್ಕೆ ಚಾವಣಿ ಸಂಪೂರ್ಣವಾಗಿ ಛಿದ್ರಗೊಂಡು ಬೆಂಕಿಗಾಹುತಿಯಾಗಿದೆ. ಮನೆಯಲ್ಲಿದ್ದ ಲಕ್ಷಾಂತರ ರೂ. ಬೆಲೆಬಾಳುವ ವಸ್ತುಗಳು ಹಾನಿಯಾಗಿದ್ದು, ಸದ್ಯ ಮನೆಯವರಿಗೆ ಯಾವುದೇ ಅಪಾಯವಾಗಿಲ್ಲ.

ಸ್ಥಳಕ್ಕೆ ಅಗ್ನಿ ಶಾಮಕ ದಳದ ಸಿಬ್ಬಂದಿ ಭೇಟಿ ನೀಡಿ, ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಈ ಸಂಬಂಧ ಸಂತೆಮರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಜ್ಯದ 224 ಕ್ಷೇತ್ರದಲ್ಲೂ ಕಾಂಗ್ರೆಸ್ ಸ್ವಂತ ಕಟ್ಟಡ ಇಲ್ಲವೇ ನಿವೇಶನ ಹೊಂದುವ ಯತ್ನ

ಕಾಂಗ್ರೆಸ್ ಕಚೇರಿ ಕಟ್ಟಡಗಳ ಸಮಿತಿ ಮೈಸೂರು ವಿಭಾಗದ ಅಧ್ಯಕ್ಷ ಕಿಮ್ಮನೆ ರತ್ನಾಕರ್ ಮಾಹಿತಿ



ಕಾಂಗ್ರೆಸ್ ಕಚೇರಿ ಕಟ್ಟಡಗಳ ಸಮಿತಿ ಸಭೆಯಲ್ಲಿ ಮೈಸೂರು ವಿಭಾಗದ ಅಧ್ಯಕ್ಷ ಕಿಮ್ಮನೆ ರತ್ನಾಕರ್ ಮಾತನಾಡಿದರು.

ಮೈಸೂರು, ಫೆ.6(ಎಂಕೆ)– ಬಡವ ಚುನಾಯಿತನಾದರೂ ಪಕ್ಷದ ಕಾರ್ಯಚಟುವಟಿಕೆಗಳನ್ನು ಯಾವುದೇ ತೊಂದರೆ ಇಲ್ಲದಂತೆ ಮುಂದುವರೆಸಿಕೊಂಡು ಹೋಗಲು ಸ್ವಂತ ಕಟ್ಟಡ ಅಥವಾ ಕಚೇರಿಯ ಅಗತ್ಯವಿದೆ ಎಂದು ಕಾಂಗ್ರೆಸ್ ಕಚೇರಿ ಕಟ್ಟಡಗಳ ಸಮಿತಿ ಮೈಸೂರು ವಿಭಾಗದ ಅಧ್ಯಕ್ಷ ಹಾಗೂ ಮಾಜಿ ಸಚಿವ ಕಿಮ್ಮನೆ ರತ್ನಾಕರ್ ತಿಳಿಸಿದರು.

ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಗುರುವಾರ ಸಮಿತಿ ಸಭೆ ನಡೆಸಿದ ಅವರು, ಜನತೆಯ ಕುಂದು–ಕೊರತೆ ಆಲಿಸಲು ಹಾಗೂ ಪಕ್ಷದ ಕಾರ್ಯಚಟುವಟಿಕೆಗಾಗಿ ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲಿಯೂ ಪಕ್ಷದ ಸ್ವಂತ ಕಟ್ಟಡಗಳು ಅಥವಾ ನಿವೇಶನಗಳು ಇರಬೇಕು ಎಂಬುದು ಉದ್ದೇಶವಿದೆ. ಈ ನಿಟ್ಟಿನಲ್ಲಿ ಆಯಾ ಕ್ಷೇತ್ರದ ಶಾಸಕರು, ಮುಖಂಡರು ಕಾರ್ಯೋನ್ಮುಖರಾಗಬೇಕು ಎಂದರು.

ಕ್ಷೇತ್ರದ ಎರಡೂ ಬ್ಲಾಕ್‌ನಲ್ಲಿಯೂ ಪಕ್ಷದ ಸ್ವಂತ ಕಚೇರಿ ಅಥವಾ ನಿವೇಶನ ಇದ್ದರೆ ಪಕ್ಷ ಸಂಘಟನೆಗೆ, ಮತದಾರರ ಸಮಸ್ಯೆ ಆಲಿಸಲು ಅನುಕೂಲವಾಗಲಿದೆ. ಆದ್ದರಿಂದ ಪಕ್ಷದ ಸ್ವಂತ ಕಚೇರಿ ತೆರೆಯುವ ಪ್ರಯತ್ನಗಳು ನಡೆಯಬೇಕು. ಮುಖ್ಯವಾಗಿ ಹೆಚ್ಚು ಮತದಾರರು ಇರುವ ಕ್ಷೇತ್ರದಲ್ಲಿ ಪಕ್ಷದ ಸ್ವಂತ ಕಚೇರಿ ಅಗತ್ಯವಿದೆ ಎಂದು ಹೇಳಿದರು.

ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಮಾತನಾಡಿ, ಚಾಮರಾಜ ಕ್ಷೇತ್ರದಲ್ಲಿ ಕಾಂಗ್ರೆಸ್ ಭವನವಿದ್ದು, ಇಲ್ಲಿಯೇ ಸ್ಥಳಾವಕಾಶ ಮಾಡಿಕೊಟ್ಟರೆ ಪ್ರತ್ಯೇಕ ಕಚೇರಿ ತೆರೆಯಲಾಗುವುದು. ಅಥವಾ ಬೇರೆ ಜಾಗ ನೀಡಿದರೆ ಸುಮಾರು 500 ಮಂದಿ ಕುಳಿತುಕೊಳ್ಳುವಷ್ಟು ವಿಸ್ತೀರ್ಣದ ಕಚೇರಿಯನ್ನು ಕ್ಷೇತ್ರದ ಮುಖಂಡರೊಂದಿಗೆ ಚರ್ಚಿಸಿ, ನಿರ್ಮಿಸಿಕೊಳ್ಳುತ್ತೇವೆ ಎಂದರು. ಹಾಗೆಯೇ ಚಾಮುಂಡೇಶ್ವರಿ, ಕೆ.ಆರ್ ಮತ್ತು ಎನ್.ಆರ್.ಕ್ಷೇತ್ರ ಬ್ಲಾಕ್ ಅಧ್ಯಕ್ಷರು ತಮ್ಮ ತಮ್ಮ ಬ್ಲಾಕ್‌ನಲ್ಲಿಯೂ ಪಕ್ಷದ ಸ್ವಂತ ಕಚೇರಿ ಅಗತ್ಯವಿದೆ ಎಂಬುದನ್ನು ತಿಳಿಸಿದರು.

ನಂಜನಗೂಡಲ್ಲಿ ಕಾಯ್ದಿರಿಸಲಾಗಿದೆ: ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿ, ನಂಜನಗೂಡಿನಲ್ಲಿ ಪಕ್ಷದ ಕಚೇರಿ ನಿರ್ಮಾಣಕ್ಕೆ ಜಾಗ ಕಾಯ್ದಿರಿಸಲಾಗಿದೆ. ಈ ವರ್ಷವೇ ಭವನ ನಿರ್ಮಾಣಕ್ಕೆ ಪಕ್ಷದಿಂದ ಸಹಕಾರ ನೀಡಬೇಕು ಎಂದು ಕೋರಿದರು.

ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ನಗರ ಕಾಂಗ್ರೆಸ್ ಹಿಂದುಳಿದ ವರ್ಗಗಳ ಅಧ್ಯಕ್ಷ ಎನ್.ಆರ್.ನಾಗೇಶ್, ಎಸ್ಸಿ–ಎಸ್ಟಿ ಘಟಕ ಅಧ್ಯಕ್ಷ ರೋಹಿತ್, ಚಾಮರಾಜ ಕ್ಷೇತ್ರದ ಇಂದಿರಾಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು, ದೇವರಾಜ ಬ್ಲಾಕ್ ಅಧ್ಯಕ್ಷ ರಮೇಶ್ ರಾಮಪ್ಪ ಎನ್.ಆರ್.ಬ್ಲಾಕ್ ಅಧ್ಯಕ್ಷ ಇಕ್ಬಾಲ್, ಕೆ.ಆರ್.ಕ್ಷೇತ್ರದ ಕೆ.ಆರ್.ಬ್ಲಾಕ್ ಅಧ್ಯಕ್ಷ ಶ್ರೀಧರ್, ದೇವರಾಜ ಅರಸು ಬ್ಲಾಕ್ ಅಧ್ಯಕ್ಷ ಸೋಮಶೇಖರ್ ಮತ್ತಿತರರು ಉಪಸ್ಥಿತರಿದ್ದರು.

ಶಿಕ್ಷಣ ಕೊಡಿಸುವುದರಿಂದ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ತಡೆಯಬಹುದು

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಉಷಾರಾಣಿ ಅಭಿಮತ



ಮೈಸೂರಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಉಷಾರಾಣಿ ಉದ್ಘಾಟಿಸಿದರು.

ಮೈಸೂರು, ಫೆ.6(ಆರ್‌ಕೆ)– ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಿಸುವುದರಿಂದಲೂ ಅವರ ಮೇಲಿನ ದೌರ್ಜನ್ಯಗಳನ್ನು ತಡೆಯಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಉಷಾರಾಣಿ ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ ಮೈಸೂರಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಇಂದು ಆಯೋಜಿಸಿದ್ದ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಹೆಣ್ಣು ಮಕ್ಕಳಿಗೆ ಕಡಿಮೆ ವಿದ್ಯಾಭ್ಯಾಸ ಕೊಡಿಸುವ ಮೂಲಕ ಅವರನ್ನು ಶಿಕ್ಷಣದಿಂದ ವಂಚಿತರನ್ನಾಗಿ ಮಾಡಲಾಗುತ್ತಿದೆ. ಹೀಗೆ ವಂಚಿತರಾದ ಹೆಣ್ಣು ಮಕ್ಕಳು ಬೇರೆ ಕೆಲಸಕ್ಕೆ ಹೋಗುತ್ತಾರೆ. ಅಂತಹ ಕಡೆಗಳಲ್ಲಿ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ಹೆಚ್ಚಾಗುತ್ತಿದ್ದು, ಗುಲಾಮಗಿರಿ ಪರಿಸ್ಥಿತಿ ಉಂಟಾಗಿದೆ. ಆದ್ದರಿಂದ ಇಂತಹ ದೌರ್ಜನ್ಯಗಳನ್ನು ಸಂಪೂರ್ಣವಾಗಿ ತೊಡೆದು ಹಾಕಬೇಕಾದರೆ ಮೊದಲು ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು ಎಂದರು.

ಬಾಲ್ಯವಿವಾಹ ನಿಷೇಧ ಕಾಯ್ದೆ, ಟಿಸಿಪಿ ಎನ್‌ಡಿಟಿ ಕಾಯ್ದೆ, ಪೋಕ್ಸೊ, ಮಾನವ ಕಳ್ಳ ಸಾಗಾಣಿಕೆಯಂತಹ ಪ್ರಕರಣಗಳನ್ನು ನೋಡಿದಾಗ ಈಗಲೂ ಮಹಿಳೆಯರೇ ಹೆಚ್ಚು ದೌರ್ಜನ್ಯಕ್ಕೆ ಒಳಗಾಗುತ್ತಿರುವುದು ಕಂಡು ಬರುತ್ತಿದೆ. ಬೇಟಿ ಬಚಾವೋ–ಬೇಟಿ ಪಡಾವೋ ಕಾರ್ಯಕ್ರಮದಡಿ ಇಂತಹ ಪ್ರಕರಣಗಳನ್ನು ಹತ್ತಿಕ್ಕಲು ಹಲವು ಕಾಯ್ದೆಗಳನ್ನು ಜಾರಿಗೆ ತರಲಾಗಿದೆ. ಅವುಗಳನ್ನು ಪರಿಣಾಮ ಕಾರಿಯಾಗಿ ಜಾರಿಗೊಳಿಸುವ ಮೂಲಕ ಮಹಿಳೆಯರು, ಮಕ್ಕಳು, ವೃದ್ಧರು ಹಾಗೂ ಅಬಲೆಯರಿಗೆ ರಕ್ಷಣೆ ಒದಗಿಸಬೇಕಾಗಿದೆ ಎಂದ ಅವರು, ಸರ್ವೋಚ್ಚ ನ್ಯಾಯಾಲಯವು ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಲು ಹಲವು ಮಾರ್ಗಸೂಚಿಗಳನ್ನು ನೀಡಿದೆ. ಬಾಲ್ಯವಿವಾಹ ತಡೆಗಟ್ಟುವ ಜವಾಬ್ದಾರಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳ ಮೇಲಿದೆ ಎಂದರು.

ಈ ದೇಶದ ಸಂಪತ್ತಾದ ಮಕ್ಕಳ ಹಕ್ಕುಗಳಿಗೆ ಆಪತ್ತು ಬರದಂತೆ ನಿರ್ಭೀತಿಯಿಂದ ಹಾಗೂ ನಿಷ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಇಂತಹ ಕಾರ್ಯಾಗಾರ ಅನುಕೂಲವಾಗಲಿದೆ. ಮಹಿಳೆಯರು ಕೆಲಸ ಮಾಡುವ ಸ್ಥಳದಲ್ಲಿ ಅವರಿಗೆ ಮೂಲಸೌಕರ್ಯ, ಭದ್ರತೆ ಹಾಗೂ ಸುರಕ್ಷತೆಯತ್ತ ಗಮನಹರಿಸಬೇಕು. ಅಧಿಕಾರಿಗಳು ಆಗಿಂದಾಗ್ಗೆ ಭೇಟಿ ನೀಡಿ ಪರಿಶೀಲನೆ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದೂ ಉಷಾರಾಣಿ ನುಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ ಮಾತನಾಡಿ, ಕೆಲವು ಕಡೆಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ನಿಧಾನವಾಗಿ ಕಡಿಮೆಯಾಗುತ್ತಿದ್ದರೆ ಕೆಲವೆಡೆ ಜಾಸ್ತಿಯಾಗುತ್ತಿರುವುದು ಕಂಡುಬಂದಿದೆ. ಆ ಕಾರಣಕ್ಕಾಗಿಯೇ ತರಬೇತಿ ಕಾರ್ಯಾಗಾರಗಳನ್ನು ಏರ್ಪಡಿಸಿ ಚರ್ಚೆಗಳ ಮೂಲಕ ಇಲಾಖೆಗಳ ನಡುವೆ ಸಮನ್ವಯತೆ ಸಾಧಿಸಬೇಕಾಗಿದೆ. ಮಕ್ಕಳಿಗೆ ಯಾವುದು ತಪ್ಪು, ಯಾವುದು ಸರಿ ಎಂಬುದರ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ಆತ್ಮವಿಶ್ವಾಸ ತುಂಬಬೇಕು. ಸ್ವಯಂ ರಕ್ಷಣೆಗೆ ಅವರನ್ನು ಸದೃಢಗೊಳಿಸಿ, ದೌರ್ಜನ್ಯಗಳನ್ನು ತಡೆಯಬೇಕು ಎಂದರು.

ಚಿಕ್ಕ ವಯಸ್ಸಿನಿಂದಲೇ ಮಕ್ಕಳಿಗೆ ಈ ರೀತಿಯ ತಿಳುವಳಿಕೆಯನ್ನು ನೀಡುವ ಜೊತೆಗೆ ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಿ, ಆತ್ಮಸ್ಥೈರ್ಯ ತುಂಬಬೇಕು. ಶಿಕ್ಷಣ ಪಡೆಯುವಂತೆ ಪ್ರೇರೇಪಿಸಿ ಸಮಾಜದಲ್ಲಿ ಉತ್ತಮ ಪ್ರಜೆಯನ್ನಾಗಿ ಮಾಡಲು ನಾವು ಸಹಕಾರಿಗಳಾಗಬೇಕಾಗಿದೆ. ಹೆಣ್ಣು ಮಕ್ಕಳಿಗೆ ಹೇಗೆ ಗೌರವ ಕೊಡಬೇಕು ಎಂಬುದರ ಬಗ್ಗೆ ಆಗಿಂದಾಗ್ಗೆ ಕಾರ್ಯಾಗಾರಗಳನ್ನು ಮಾಡಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜಿ.ದಿನೇಶ್ ಮಾತನಾಡಿ, ಹದಿಹರೆಯದ ಮಕ್ಕಳ ಮನಸ್ಸಿನಲ್ಲಿ ಏನಿದೆ ಎಂಬುದನ್ನು ಗಮನಿಸಿ ಶಾಲೆಗಳಲ್ಲಿ ಶಿಕ್ಷಕರು ಜಾಗೃತಿ ಮೂಡಿಸಬೇಕಾಗಿದೆ. ಮಹಿಳೆಯರು ಮತ್ತು ಮಕ್ಕಳಿಗಾಗಿ ಇರುವ ಕಾನೂನು ಕಾಯ್ದೆಗಳ ಬಗ್ಗೆ ಹಾಗೂ ಅವುಗಳನ್ನು ಬಳಸುವ ಮೂಲಕ ತಮ್ಮ ತಮ್ಮ ರಕ್ಷಣೆ ಮಾಡಿಕೊಳ್ಳುವ ಕುರಿತಂತೆ ತಿಳಿ ಹೇಳಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಅಡಿಷನಲ್ ಎಸ್‌ಪಿ ಎಲ್.ನಾಗೇಶ್, ಡಿಸಿಪಿ ಎಂ.ಮುತ್ತುರಾಜ್, ಜಿಲ್ಲಾ ಪಂಚಾಯತಿ ಯೋಜನಾಧಿಕಾರಿ ಪ್ರಭುಸ್ವಾಮಿ, ಉಪಕಾರ್ಯದರ್ಶಿ ಸವಿತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಬಸವರಾಜು, ಹಿರಿಯ ವಕೀಲರಾದ ಸುಂದರರಾಜ್, ಗೀತಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಡಿ.ಜೆ.ಮಮತಾ ಹಾಗೂ ಇತರರು ಪಾಲ್ಗೊಂಡಿದ್ದರು.

ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಪ್ರತಿಭಟನೆ

ಆತ್ಮಹತ್ಯೆಗೆ ಶರಣಾದ ಕುಟುಂಬಕ್ಕೆ ಪರಿಹಾರ ನೀಡುವುದರೊಂದಿಗೆ ಸಾಲಮನ್ನಾ ಮಾಡುವಂತೆ ಆಗ್ರಹ



ಕರ್ನಾಟಕ ಜನಶಕ್ತಿ, ಮಹಿಳಾ ಮುನ್ನಡೆ ಕಾರ್ಯಕರ್ತೆಯರು ಪ್ರತಿಭಟನೆ ನಡೆಸುತ್ತಿರುವುದು.

ಮಂಡ್ಯ, ಫೆ.6– ಜನಸಾಮಾನ್ಯರಿಗೆ ಕಿರುಕುಳ ನೀಡುತ್ತಿರುವ ಮೈಕ್ರೋ ಫೈನಾನ್ಸ್‌ಗಳಿಗೆ ರಿಸರ್ವ್ ಬ್ಯಾಂಕ್ ನಿಯಮಾವಳಿಯಂತೆ ನಿರ್ಬಂಧ ವಿಧಿಸಬೇಕು ಹಾಗೂ ಆತ್ಮಹತ್ಯೆ ಮಾಡಿಕೊಂಡವರ ಕುಟುಂಬಗಳಿಗೆ ಪರಿಹಾರದ ಜೊತೆಗೆ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ಜನಶಕ್ತಿ, ಮಹಿಳಾ ಮುನ್ನಡೆ ಕಾರ್ಯಕರ್ತೆಯರು ಮಂಡ್ಯದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನಾ ಧರಣಿ ನಡೆಸಿ ಮನವಿ ಸಲ್ಲಿಸಿದ ಕಾರ್ಯಕರ್ತೆಯರು, ಮೈಕ್ರೋ ಫೈನಾನ್ಸ್‌ಗಳ ಸಾಲದ ಸುಳಿಗೆ ಸಿಲುಕಿ ರಾಜ್ಯದಲ್ಲಿ ಮಹಿಳೆಯರು ಮತ್ತು ರೈತರು ಆತ್ಮಹತ್ಯೆಗೆ ಶರಣಾಗುತ್ತಿರುವ ಘಟನೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಹೆಚ್ಚಿನ ಬಡ್ಡಿ ಸುಲಿಗೆ, ಅಶ್ಲೀಲ ಪದ ಬಳಕೆ, ಹಣ ವಸೂಲಾತಿಗಾಗಿ ರೌಡಿಗಳ ಬಲ ಪ್ರಯೋಗದಂತಹ ಕ್ರೌರ್ಯಗಳು ಹೆಚ್ಚಾಗಿದ್ದು, ಮೈಕ್ರೋ ಫೈನಾನ್ಸ್ ಹಾವಳಿಯನ್ನು ತಪ್ಪಿಸಲು ರಾಜ್ಯ ಸರ್ಕಾರ ಸುಗ್ರೀವಾಜ್ಞೆಯನ್ನು ಹೊರಡಿಸಿ. ಕಿರುಕುಳ ನೀಡಿದವರ ವಿರುದ್ಧ ಕ್ರಮಕೈಗೊಳ್ಳುವುದಾಗಿ ತಿಳಿಸಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಸಹಾಯವಾಣಿಗಳನ್ನು ತೆರೆಯುವಂತೆ ಸೂಚಿಸಲಾಗಿದೆ, ಜನಸಾಮಾನ್ಯರನ್ನು ವಂಚಿಸುತ್ತಿರುವುದು ಬರಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಮಾತ್ರವಲ್ಲದೆ ರಾಜ್ಯದ ಪ್ರತಿಷ್ಠಿತ ಖಾಸಗಿ ಹಣಕಾಸು ಸಂಸ್ಥೆಗಳು ಮತ್ತು ಕಂಪನಿಗಳು ಕೂಡಾ ಹಣ ದೋಚಿ ವಂಚಿಸಿರುವ ಘಟನೆಗಳು ಕೂಡಾ ಬೆಳಕಿಗೆ ಬಂದಿವೆ ಎಂದರು.

ಮೈಕ್ರೋ ಫೈನಾನ್ಸ್ ಸೇರಿದಂತೆ ಯಾವುದೇ ಬ್ಯಾಂಕಿಂಗ್ ವ್ಯವಸ್ಥೆ ಸಂಘ ಸಂಸ್ಥೆಗಳ ಹಣಕಾಸಿನ ವ್ಯವಹಾರ ವಹಿವಾಟಿನ ಮೇಲೆ ನಿರ್ಬಂಧ ಮತ್ತು ನಿರ್ಣಾಯಕ ತೀರ್ಮಾನ ಮಾಡುವ ಹಕ್ಕು ರಿಸರ್ವ್ ಬ್ಯಾಂಕ್‌ಗೆ ಇರುವುದರಿಂದ ಕೇಂದ್ರ ಸರ್ಕಾರದ ಜೊತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಮಾತುಕತೆ ನಡೆಸಿ ಕಡಿವಾಣ ಹಾಕಿಸಲು ಮುಂದಾಗಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಸ್ತ್ರೀ ಶಕ್ತಿ ಯೋಜನೆ ಮೈಕ್ರೋ ಫೈನಾನ್ಸ್‌ಗಳ ಹಾವಳಿಯಿಂದ ತನ್ನ ಪ್ರಾಮುಖ್ಯತೆ ಕಳೆದುಕೊಂಡಿದ್ದು ರಾಜ್ಯ ಮತ್ತು ಕೇಂದ್ರ ಸರ್ಕಾರ ಯೋಜನೆ ಬಗ್ಗೆ ಅರಿವು ಮೂಡಿಸಬೇಕು, ಖಾಸಗಿ ಸಂಘ ಸಂಸ್ಥೆಗಳಿಗೆ ಬ್ಯಾಂಕುಗಳ ಮೂಲಕ ಸಾಲ ಒದಗಿಸುವುದನ್ನು ಬಿಟ್ಟು ನೇರವಾಗಿ ರೈತರು,ಮಹಿಳೆಯರು ಹಾಗೂ ಹಿಂದುಳಿದ ಜನಸಾಮಾನ್ಯರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯಗಳು ದೊರಕುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಜನಶಕ್ತಿಯ ಪೂರ್ಣಿಮಾ, ಸಿದ್ದರಾಜು, ಮಹಿಳಾ ಮುನ್ನಡೆ ಕಮಲ, ಶಿಲ್ಪ, ಲತಾ ಶಂಕರ್, ಪ್ರಿಯ ರಮೇಶ್, ಗಿರಿಜಾ, ಸುಮಾ ಭಾಗವಹಿಸಿದ್ದರು.

ಕೊನ್ನಾಪುರದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿಗೆ ತಾಯಿ, ಮಗ ಆತ್ಮಹತ್ಯೆ ಹಿನ್ನೆಲೆ

ಮೃತರ ನಿವಾಸಕ್ಕೆ ವಿಪಕ್ಷ ನಾಯಕ ಅಶೋಕ್ ಭೇಟಿ

ಪ್ರಕರಣದ ನ್ಯಾಯಾಂಗ ತನಿಖೆಗೆ ಆಗ್ರಹ



ಮೃತರ ಕುಟುಂಬದವರಿಗೆ ಸಾಂತ್ವನ ಹೇಳುತ್ತಿರುವ ಆರ್.ಅಶೋಕ್.

ಹಲಗೂರು, ಫೆ.6– ಮೈಕ್ರೋ ಫೈನಾನ್ಸ್ ಹಾವಳಿಯಿಂದ ಆತ್ಮಹತ್ಯೆಗೆ ಶರಣಾದ ತಾಯಿ ಪ್ರೇಮಾ ಮತ್ತು ಮಗ ರಂಜಿತ್ ಪ್ರಕರಣವನ್ನು ಮುಂದಿನ ಅಧಿವೇಶನದಲ್ಲಿ ನಿಲುವಳಿ ಸೂಚನೆ ತರುತ್ತೇನೆ. ಪ್ರೇಮಾ ಮತ್ತು ರಂಜಿತ್ ಅವರ ಆತ್ಮಹತ್ಯೆ ಪ್ರಕರಣ ನ್ಯಾಯಾಂಗ ತನಿಖೆ ಆಗಬೇಕೆಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದರು.

ಇತ್ತೀಚೆಗೆ ಸಾಲಬಾಧೆ ತಾಳಲಾರದೇ ಆತ್ಮಹತ್ಯೆ ಮಾಡಿಕೊಂಡ ಮಳವಳ್ಳಿ ತಾಲೂಕಿನ ಹಲಗೂರು ಹೋಬಳಿ ಕೊನ್ನಾಪುರ ಗ್ರಾಮದ ಪ್ರೇಮಾ ಅವರ ಮನೆಗೆ ಗುರುವಾರ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿ ಮಾತನಾಡಿದ ಅವರು, ಪ್ರಕರಣದ ಬಗ್ಗೆ ಜಿಲ್ಲಾಡಳಿತ ಸೇರಿದಂತೆ ಪೊಲೀಸರಿಂದ ವಿವಿಧ ಬಗೆಯ ಮಾಹಿತಿಗಳು ಹೊರ ಬರುತ್ತಿವೆ. ಆದರೆ ನೈಜ ಸತ್ಯ ಹೊರಬರಬೇಕಾದರೇ ತನಿಖೆ ಅಗತ್ಯವಾಗಿದೆ ಎಂದರು.

ಜನವರಿಯಿಂದಲೂ ಮೈಕ್ರೋ ಫೈನಾನ್ಸ್ ಹಾವಳಿ ತಡೆಗೆ ಸುಗ್ರೀವಾಜ್ಞೆ ತರುವುದಾಗಿ ರಾಜ್ಯ ಸರ್ಕಾರ ಹೇಳುತ್ತಲೇ ಬರುತ್ತಿದೆ. ಆದರೆ ಸುಗ್ರೀವಾಜ್ಞೆ ಜಾರಿಯಾಗಿಲ್ಲ. ಕನಿಷ್ಠ ಸರ್ಕಾರದಿಂದ ಕಟ್ಟುನಿಟ್ಟಿನ ಕ್ರಮ ಜರುಗಿಸಲು ಮುಂದಾಗಿಲ್ಲ. ಮಂಡ್ಯ ಜಿಲ್ಲೆಯಲ್ಲಿ 60 ಖಾಸಗಿ ಮೈಕ್ರೋ ಫೈನಾನ್ಸ್ ಕಂಪನಿಗಳು ಕಾರ್ಯ ನಿರ್ವಹಿಸುತ್ತಿದ್ದು, 16 ಕಂಪನಿಗಳು ಮಾತ್ರ ಪರವಾನಗಿ ಹೊಂದಿವೆ ಎಂಬ ಮಾಹಿತಿ ದೊರೆತಿದೆ. ಉಳಿದ ಎಲ್ಲಾ ಕಂಪನಿಗಳು ರೌಡಿಗಳ ಆಶ್ರಯದಲ್ಲಿ ಕಾರ್ಯ ನಿರ್ವಹಿಸುತ್ತಿವೆ ಎಂದು ಆರೋಪಿಸಿದರು.

ಉತ್ತರಪ್ರದೇಶದಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿ 30 ಮಂದಿ ಭಕ್ತಾದಿಗಳು ಮೃತಪಟ್ಟರೇ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಬಾಯಿ ಬಡಿದುಕೊಳ್ಳುತ್ತಾರೆ. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳದಿಂದಾಗಿ ನಡೆಯುತ್ತಿರುವ ಜನರ ಸಾವು ನಿಮ್ಮ ಕಣ್ಣಿಗೆ ಕಾಣಿಸುತ್ತಿಲ್ಲವೇ, ಈ ಬಗ್ಗೆ ನೀವು ಯಾಕೆ ತುಟಿ ಬಿಚ್ಚುವುದಿಲ್ಲ ಎಂದು ಪ್ರಶ್ನಿಸಿದರು. ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಕರ್ನಾಟಕದಲ್ಲಿರುವ ಬಡವರ ಎದೆ ಸೀಳುತ್ತಿವೆ. ಜನವರಿಯಲ್ಲೇ ಸುಗ್ರೀವಾಜ್ಞೆ ತರುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದ್ದರು. ಇದುವರೆಗೂ ಯಾಕೆ ತಂದಿಲ್ಲ. ಸಾಲಕ್ಕೆ ಹೆದರಬೇಡಿ ಅಂತ ಸಿಎಂ ಹೇಳುತ್ತಿದ್ದರೂ ಸಾಲಕ್ಕೆ ಹೆದರಿ ರಾಜ್ಯದಲ್ಲಿ ಒಂದು ಲಕ್ಷ ಜನ ಓಡಿ ಹೋಗಿದ್ದಾರೆ. ಇಲ್ಲಿ ತಾಯಿ, ಮಗ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಡವರ ಪರ, ದಲಿತ ಪರ ಅಂತ ಸಿಎಂ ಸಿದ್ದರಾಮಯ್ಯ ಹೇಳುತ್ತಾರೆ. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಅತಿ ಹೆಚ್ಚು ದಲಿತರೇ ಸಾವಿಗೀಡಾಗಿದ್ದಾರೆ ಆದರೆ ಇದು ಸಿದ್ದರಾಮಯ್ಯ ಅವರಿಗೆ ಕೇಳಿಸುತ್ತಿಲ್ಲ ಎಂದು ಕಿಡಿಕಾರಿದರು.

ಇಲ್ಲಿ ತಾಯಿ ಮತ್ತು ಮಗ ಇಬ್ಬರ ಸಾವು ಆಗಿದ್ದರೂ ಇದುವರೆಗೂ ಸ್ಥಳೀಯ ಶಾಸಕರಾಗಲಿ, ಜಿಲ್ಲಾ ಉಸ್ತುವಾರಿ ಸಚಿವರಾಗಲಿ, ಮುಖ್ಯಮಂತ್ರಿಗಳಾಗಲಿ ಸ್ಥಳಕ್ಕೆ ಬಂದಿಲ್ಲ. ಶಾಸಕರು ಹಾಗೂ ಅಧಿಕಾರಿಗಳಿಗೆ ಈ ಕುಟುಂಬಕ್ಕೆ ಸಾಂತ್ವನ ಹೇಳುವ ಮನಸ್ಥಿತಿ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಮ್ಮ ಕಷ್ಟಕ್ಕೆ ಯಾರೂ ಸ್ಪಂದಿಸಿಲ್ಲ, ಜನಪ್ರತಿನಿಧಿ ಮಂತ್ರಿಗಳೂ ಸಹ ಒಂದು ಸಾಂತ್ವನ ಹೇಳಿಲ್ಲ. ನಮ್ಮ ಕುಟುಂಬಕ್ಕೆ ಆಧಾರ ಸ್ಥಂಭ ಆಗಿದ್ದ ನಮ್ಮ ತಾಯಿ ಮತ್ತು ತಮ್ಮನ ನಿಧನದಿಂದಾಗಿ ಕುಟುಂಬ ಬೀದಿಗೆ ಬಿದ್ದಿದೆ. ಕುಟುಂಬಕ್ಕೆ ಆದ ಅನ್ಯಾಯ ಬೇರಾರಿಗೂ ಆಗದಿರಲಿ ಎಂದು ಪ್ರೇಮಾ ಪುತ್ರಿಯರಾದ ಮಾಣಿಕ್ಯ ಮತ್ತು ಸುಷ್ಮಾ ನೋವು ತೋಡಿಕೊಂಡರು. ಇದೇ ಸಂದರ್ಭದಲ್ಲಿ ಆರ್.ಅಶೋಕ್ ಅವರು ಒಂದು ಲಕ್ಷ ರೂ. ವೈಯಕ್ತಿಕ ಪರಿಹಾರ ನೀಡಿದರು.

ಚಿನಕುರಳಿ ಕೃಷಿ ಪತ್ತಿನ ಸಹಕಾರ ಸಂಘ ಜೆಡಿಎಸ್ ತೆಕ್ಕೆಗೆ



ಚಿನಕುರಳಿ: ಚಿನಕುರಳಿ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಸಿ.ಎಸ್. ಗೋಪಾಲಗೌಡ, ಉಪಾಧ್ಯಕ್ಷರಾಗಿ ಸಿ.ಸುರೇಂದ್ರ ಅವಿರೋಧವಾಗಿ ಆಯ್ಕೆಯಾದರು.

ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನ ಚುನಾವಣೆಯ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸಿ.ಎಸ್.ಗೋಪಾಲಗೌಡ, ಉಪಾಧ್ಯಕ್ಷ ಸ್ಥಾನಕ್ಕೆ ಸಿ.ಸುರೇಂದ್ರ ನಾಮಪತ್ರ ಸಲ್ಲಿಸಿದರು. ಇವರಿಬ್ಬರನ್ನು ಹೊರತುಪಡಿಸಿ ಉಳಿದ ಯಾವೊಬ್ಬ ನಿರ್ದೇಶಕರು ನಾಮಪತ್ರವನ್ನು ಸಲ್ಲಿಸದ ಹಿನ್ನೆಲೆಯಲ್ಲಿ ಸಂಘದ ನೂತನ ಅಧ್ಯಕ್ಷರಾಗಿ ಸಿ.ಎಸ್.ಗೋಪಾಲಗೌಡ, ಉಪಾಧ್ಯಕ್ಷರಾಗಿ ಸಿ.ಸುರೇಂದ್ರ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಆನಂದನಾಯ್ಕ ಘೋಷಿಸಿದರು.

ನೂತನ ಅಧ್ಯಕ್ಷರಾದ ಸಿ.ಎಸ್.ಗೋಪಾಲಗೌಡ, ಉಪಾಧ್ಯಕ್ಷ ಸಿ.ಸುರೇಂದ್ರ ಅವರನ್ನು ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್, ಜಿಪಂ ಮಾಜಿ ಸದಸ್ಯ ಸಿ.ಅಶೋಕ್ ಸೇರಿದಂತೆ ಸಂಘದ ಎಲ್ಲಾ ನಿರ್ದೇಶಕರು, ಮುಖಂಡರು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ಸಿ.ಎಂ.ಕಾಳೇಗೌಡ, ಕೆ.ಎ.ಸ್ವಾಮಿಗೌಡ, ಜಿ.ಕೆ.ಕುಮಾರ, ಕೆ.ವೈ.ಭವ್ಯ, ತಾಯಮ್ಮ, ರಾಮಕೃಷ್ಣೇಗೌಡ, ಕೆ.ಎಸ್.ಚಂದ್ರು ಸಿಂಗ್ರಯ್ಯ, ಕಾರ್ಯದರ್ಶಿ ಕಾಂತರಾಜು, ಮುಖಂಡರಾದ ಸಿ.ಎಸ್.ಗಂಗಾಧರ್, ಸಿ.ಕೆ.ಅಂಕೇಗೌಡ, ಸಿ.ಪ್ರಕಾಶ್, ವಿಎಸ್‌ಎಸ್‌ಎನ್‌ಬಿ ಮಾಜಿ ಅಧ್ಯಕ್ಷರಾದ ಮಂಜುನಾಥ್ ಭಾಗವಹಿಸಿದ್ದರು.

ಇಂದಿನಿಂದ ಮಂಡ್ಯದಲ್ಲಿ ಖಾದಿ ಉತ್ಸವ–2025

ಮಂಡ್ಯ, ಫೆ.6– ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಹಾಗೂ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಖಾದಿ ಉತ್ಸವ–2025 ರಾಜ್ಯ ಮಟ್ಟದ ಖಾದಿ ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟವನ್ನು ಫೆ.7 ರಿಂದ 21 ರವರೆಗೆ ಹಮ್ಮಿಕೊಳ್ಳಲಾಗಿದೆ.

ಫೆ.7 ರಂದು ಮಧ್ಯಾಹ್ನ 1 ಗಂಟೆಗೆ ಖಾದಿ ಉತ್ಸವ–2025 ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಮಂಡ್ಯ ವಿಶ್ವವಿದ್ಯಾನಿಲಯ ಆವರಣದಲ್ಲಿ ನಡೆಯಲಿದೆ. ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಕಾರ್ಯಕ್ರಮದ ಉಪಸ್ಥಿತಿ ವಹಿಸಲಿದ್ದಾರೆ. ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ಅವರು ವಸ್ತುಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮದ ಸಚಿವರಾದ ಶರಣಬಸಪ್ಪ ದರ್ಶನಪೂರ ಖಾದಿ ಮಳಿಗೆಗಳನ್ನು ಉದ್ಘಾಟಿಸಲಿದ್ದಾರೆ. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮ ಉದ್ಯೋಗ ಮಂಡಳಿ ಅಧ್ಯಕ್ಷ ಮತ್ತು ಮಸ್ಕಿ ವಿಧಾನಸಭಾ ಕ್ಷೇತ್ರ ಶಾಸಕರಾದ ಬಸನಗೌಡ ತುರುವಿಹಾಳ ಪ್ರಾತ್ಯಕ್ಷಿಕೆಯ ಉದ್ಘಾಟನೆ ನೆರವೇರಿಸಲಿದ್ದಾರೆ.

ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ ಅವರು ಕಾರ್ಯಕ್ರಮದ ಗೌರವ ಉಪಸ್ಥಿತಿ ವಹಿಸಲಿದ್ದು, ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕಮದಲ್ಲಿ ಮುಖ್ಯ ಅತಿಥಿಗಳಾಗಿ ವಿಧಾನಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಕೆ.ವಿವೇಕಾನಂದ, ವಿಧಾನಸಭಾ ಶಾಸಕರುಗಳಾದ ಪಿ.ಎಂ.ನರೇಂದ್ರಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ.ಮಂಜು, ಕೆ.ಎಂ ಉದಯ, ನಗರಸಭೆ ಅಧ್ಯಕ್ಷ ಎಂ.ವಿ ಪ್ರಕಾಶ್, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ನಯೀಮ್ ಭಾಗವಹಿಸಲಿದ್ದಾರೆ.

ಇಂದಿನಿಂದ ಮಳವಳ್ಳಿಯಲ್ಲಿ ಮದ್ಯ ಮಾರಾಟ ನಿಷೇಧ

ಮಂಡ್ಯ, ಫೆ.6– ಫೆ.7 ಮತ್ತು 8 ರಂದು ಮಳವಳ್ಳಿ ಪಟ್ಟಣದಲ್ಲಿ ಪಟ್ಟಲದಮ್ಮ ಸಿಡಿ ಹಬ್ಬವನ್ನು ಆಚರಿಸಲಿದ್ದು, ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಸೇರಲಿದ್ದಾರೆ.

ಮಳವಳ್ಳಿ ಅತೀ ಸೂಕ್ಷ್ಮ ಪ್ರದೇಶವಾಗಿರುವುದರಿಂದ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಫೆಬ್ರವರಿ 7 ರಂದು ಬೆಳಗ್ಗೆ 6 ಗಂಟೆಯಿಂದ ಫೆಬ್ರವರಿ 9ರ ಬೆಳಗ್ಗೆ 10 ಗಂಟೆಯವರೆಗೆ ಮಳವಳ್ಳಿ ಟೌನ್ ಹಾಗೂ ಸುತ್ತಮುತ್ತಲಿನ 5 ಕಿಲೋಮೀಟರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತರಹದ ಮದ್ಯದ ಅಂಗಡಿಗಳು, ಬಾರ್‌ಗಳನ್ನು ಮುಚ್ಚಲು ಹಾಗೂ ಮದ್ಯ ಮಾರಾಟ, ಮದ್ಯ ಸಾಗಾಣಿಕೆಯನ್ನು ಮತ್ತು ಶೇಖರಣೆ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ.

ನಿವೇಶನ ವಿವಾದ ಬಗೆಹರಿಸಲು ಲಂಚ ಸ್ವೀಕಾರ

ಮಳವಳ್ಳಿ ಗ್ರಾಪಂ ಅಧ್ಯಕ್ಷೆ ಪತಿ, ಉಪಾಧ್ಯಕ್ಷ ಲೋಕಾಯುಕ್ತ ಬಲೆಗೆ

ಮಳವಳ್ಳಿ: ನಿವೇಶನ ವಿವಾದಕ್ಕೆ ಸಂಬಂಧಿಸಿದಂತೆ ವ್ಯಕ್ತಿಯೊಬ್ಬರಿಂದ ಒಂದು ಲಕ್ಷ ರೂ ಲಂಚ ಸ್ವೀಕರಿಸುವ ವೇಳೆ ಮಳವಳ್ಳಿ ತಾಲೂಕಿನ ಶೆಟ್ಟಹಳ್ಳಿ ಗ್ರಾಮ ಪಂಚಾಯ್ತಿ ಅಧ್ಯಕ್ಷೆಯ ಪತಿ ಹಾಗೂ ಉಪಾಧ್ಯಕ್ಷ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಅಧ್ಯಕ್ಷೆಯ ಪತಿ ಶಂಕರ್ ಹಾಗೂ ಉಪಾಧ್ಯಕ್ಷ ಮನೋಹರ್ ಹಣ ಪಡೆಯುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದವರಾಗಿದ್ದಾರೆ. ಎಸ್.ಪಿ.ಶಂಕರ್ ಶೆಟ್ಟಹಳ್ಳಿ ಗ್ರಾಮದ ಶಾಲಾ ಜಾಗವನ್ನು ಒತ್ತುವರಿ ಮಾಡಿಕೊಂಡು ಕಾಂಪೌಂಡ್ ನಿರ್ಮಿಸಿದ್ದಾರೆ ಎಂಬ ವಿವಾದಕ್ಕೆ ಸಂಬಂಧಿಸಿದಂತೆ ಈ ವಿವಾದ ಬಗೆಹರಿಸಿಕೊಡಲು 10 ಲಕ್ಷ ರೂ. ಗಳಿಗೆ ಇವರು ಬೇಡಿಕೆ ಇಟ್ಟಿದ್ದರು ಎಂದು ಆರೋಪಿಸಲಾಗಿದೆ.

ಈ ಸಂಬಂಧ ಎಸ್.ಪಿ.ಶಂಕರ್ ಅವರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ಈ ಸಂಬಂಧ ಇಂದು ಮಧ್ಯಾಹ್ನ 3.30ರ ಸಮಯದಲ್ಲಿ ಕಾರ್ಯಾಚರಣೆಗೆ ಇಳಿದ ಲೋಕಾಯುಕ್ತ ಎಸ್ಪಿ ಸುರೇಶ್ ಬಾಬು ನೇತೃತ್ವದ ಡಿವೈಎಸ್ಪಿ ಸುನಿಲ್ ಕುಮಾರ್, ಇನ್ಸ್‌ಪೆಕ್ಟರ್ ಬ್ಯಾಟರೇಗೌಡ ಹಾಗೂ ಸಿಬ್ಬಂದಿಯನ್ನು ಒಳಗೊಂಡ ತಂಡ ಮಾರೇಹಳ್ಳಿ ದೇವಸ್ಥಾನದ ಬಳಿ ಒಂದು ಲಕ್ಷ ಮುಂಗಡ ಹಣವನ್ನು ಪಡೆಯುತ್ತಿದ್ದ ವೇಳೆ ದಾಳಿ ಮಾಡಿ ಮನೋಹರ್ ಹಾಗೂ ಶಂಕರ್‌ನ್ನು ಬಂಧಿಸಿದ್ದಾರೆ. ಬಂಧಿತರ ವಿರುದ್ಧ ಮೊಕದ್ದಮೆ ದಾಖಲಿಸಿಕೊಂಡು ಕ್ರಮ ಕೈಗೊಂಡಿದ್ದಾರೆ.

ಸಾಹೇಬರ ಸರ್ಕೀಟು ನಾಟಕ

ಮಂಡ್ಯ: ಹವ್ಯಾಸಿ ಹಿರಿಯ ರಂಗನಟ ಸಿ.ಎಸ್.ರಾಮಕೃಷ್ಣ ಅವರ ನೆನಪಿನಲ್ಲಿ ಕರ್ನಾಟಕ ಸಂಘದ ವತಿಯಿಂದ ಸಾಹೇಬರ ಸರ್ಕೀಟು ನಾಟಕವನ್ನು ಫೆ.9ರ ಸಂಜೆ 6.30 ಗಂಟೆಗೆ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಸಂಘದ ಎಸ್.ಬಿ.ಶಂಕರೇಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಹೇಬರ ಸರ್ಕೀಟು ಎಂ.ಆರ್.ಶ್ರೀನಿವಾಸಮೂರ್ತಿ ಅವರ ರಂಗಣ್ಣನ ಕನಸಿನ ದಿನಗಳು ಕಾದಂಬರಿ ಆಧಾರಿತ ನಾಟಕವಾಗಿದೆ ಎಂದರು.

ಒಂದನೇ ಪುಟದಿಂದ

ಸಿದ್ದರಾಮಯ್ಯ ಅಗ್ನಿ ಪರೀಕ್ಷೆ!

ತನಿಖೆಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಲೋಕಾಯುಕ್ತಗೆ ವಹಿಸಿತ್ತು. ಅದರಂತೆ ಮೈಸೂರು ಲೋಕಾಯುಕ್ತ ಎಸ್ಪಿ ಉದೇಶ್ ಅವರು ಸ್ನೇಹಮಯಿ ಕೃಷ್ಣರಿಂದ ದೂರನ್ನು ಆಧರಿಸಿ ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಮುಂದದುವರೆಸಿದರು. ಅದೇ ವೇಳೆ ತಮಗೆ ಲೋಕಾಯುಕ್ತ ತನಿಖೆಯಿಂದ ನ್ಯಾಯ ಸಿಗುವುದಿಲ್ಲ. ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಸ್ನೇಹಮಯಿ ಕೃಷ್ಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಸ್ನೇಹಮಯಿ ಕೃಷ್ಣ ಪರ ವಾದ ಮಂಡಿಸಿದ್ದ ಮಣೀಂದರ್ ಸಿಂಗ್ ಅವರು, ಲೋಕಾಯುಕ್ತ ರಾಜ್ಯ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುವ ಸಂಸ್ಥೆಯಾಗಿದೆ. ಈ ಸಂಸ್ಥೆಗೆ ಸ್ವಾಯತ್ತತೆ ಇದೆ ಎಂದು ಹೇಳಲಾಗುತ್ತಿದೆಯಾದರೂ, ಅಲ್ಲಿ ಕಾರ್ಯ ನಿರ್ವಹಿಸುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ರಾಜ್ಯ ಸರ್ಕಾರದ ಅಧೀನದಲ್ಲಿರುವ ಪೊಲೀಸ್ ಇಲಾಖೆಯಿಂದ ನಿಯೋಜನೆಗೊಂಡವರಾಗಿದ್ದಾರೆ. ಸಿದ್ದರಾಮಯ್ಯ ಹಾಲಿ ಮುಖ್ಯಮಂತ್ರಿಗಳಾಗಿದ್ದು, ಲೋಕಾಯುಕ್ತ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇರುವುದರಿಂದ ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ವಾದ ಮಂಡಿಸಿದ್ದರು. ಪ್ರಕರಣದ ಸಂಬಂಧ ಲೋಕಾಯುಕ್ತ ಪೊಲೀಸರು ನಿಷ್ಪಕ್ಷಪಾತವಾಗಿ ತನಿಖೆ ನಡೆಸದೇ ಆರೋಪಿಗಳನ್ನು ರಕ್ಷಿಸುವತ್ತ ಹೆಜ್ಜೆ ಹಾಕುತ್ತಿದ್ದಾರೆ ಎಂದು ಕೆಲವು ದಾಖಲಾತಿಗಳನ್ನೂ ಕೂಡ ಸ್ನೇಹಮಯಿ ಕೃಷ್ಣ ಪರ ವಕೀಲರು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಸಿಎಂ ಸಿದ್ದರಾಮಯ್ಯ ಪರ ಸುಪ್ರೀಂ ಕೋರ್ಟ್ ಹಿರಿಯ ವಕೀಲರಾದ ಅಶೋಕ್ ಮನು ಸಿಂಘ್ವಿ ಮತ್ತು ಹೈಕೋರ್ಟ್ ಹಿರಿಯ ವಕೀಲ ರವಿವರ್ಮ ಕುಮಾರ್ ವಾದ ಮಂಡಿಸಿದ್ದರು. ವಾದ–ಪ್ರತಿವಾದಗಳು ಮುಕ್ತಾಯವಾಗಿದ್ದು, ನ್ಯಾಯಮೂರ್ತಿ ನಾಗಪ್ರಸನ್ನ ಅವರು ತೀರ್ಪನ್ನು ಕಾಯ್ದಿರಿಸಿದ್ದು, ನಾಳೆ (ಫೆ.7) ಬೆಳಗ್ಗೆ 10.30ಕ್ಕೆ ತೀರ್ಪು ಪ್ರಕಟಿಸಲಿದ್ದಾರೆ. ಹೈಕೋರ್ಟ್ ಪ್ರಕಟಿಸಲಿರುವ ತೀರ್ಪು ಮಹತ್ವ ಪಡೆದುಕೊಂಡಿದ್ದು, ಈ ತೀರ್ಪು ನ್ನಾಧರಿಸಿ ರಾಜ್ಯದ ಆಡಳಿತ ಮತ್ತು ವಿಪಕ್ಷಗಳಲ್ಲಿ ಬಹಳಷ್ಟು ಬೆಳವಣಿಗೆಗಳು ನಡೆಯಬಹುದು ಎಂದು ನಿರೀಕ್ಷಿಸಲಾಗಿದೆ.

ಇಂದು ಹೈಕೋರ್ಟ್ ತೀರ್ಪು

ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದರು. ರಾಜ್ಯ ಸರ್ಕಾರವು ಈ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿತ್ತು. ಈ ಸಂಬಂಧ ಯಡಿಯೂರಪ್ಪ ಅವರು ಸಿಐಡಿ ಪೊಲೀಸರ ಮುಂದೆ ಹೇಳಿಕೆಯನ್ನೂ ಈಗಾಗಲೇ ನೀಡಿದ್ದಾರೆ.


ಅದೇ ವೇಳೆ ತಮ್ಮ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣವನ್ನು ರದ್ದುಪಡಿಸಬೇಕು ಎಂದು ಹೈಕೋರ್ಟ್‌ನಲ್ಲಿ ಯಡಿಯೂರಪ್ಪ ಅರ್ಜಿ ಸಲ್ಲಿಸಿದ್ದರು. ಒಂದು ವೇಳೆ ಪ್ರಕರಣ ರದ್ದಾಗದಿದ್ದರೆ ಏನು ಮಾಡುವುದು ಎಂಬ ಮುಂದಾಲೋಚನೆಯಿಂದ ಅವರು ಈ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ನೀಡಬೇಕು ಎಂದು ಮತ್ತೊಂದು ಅರ್ಜಿಯನ್ನೂ ಸಲ್ಲಿಸಿದ್ದರು. ಇವೆರಡು ಅರ್ಜಿಗಳ ವಿಚಾರಣೆ ಪೂರ್ಣಗೊಂಡಿದ್ದು, ಹೈಕೋರ್ಟ್ ನ್ಯಾಯಮೂರ್ತಿ ನಾಗಪ್ರಸನ್ನ ಅವರು ನಾಳೆ (ಫೆ.7) ತೀರ್ಪು ನೀಡಲಿದ್ದಾರೆ.

ಮತ್ತೊಂದೆಡೆ ಯಡಿಯೂರಪ್ಪ ಅವರು ನ್ಯಾಯಾಲಯಕ್ಕೆ ಖುದ್ದು ಹಾಜರಾಗುವುದಕ್ಕೆ ವಿನಾಯಿತಿಯನ್ನು ಹೈಕೋರ್ಟ್ ನೀಡಿತ್ತು. ಸಿಐಡಿ ಪೊಲೀಸರು ತಮ್ಮ ತನಿಖೆಯನ್ನು ಪೂರ್ಣಗೊಳಿಸಿ ಈಗಾಗಲೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಆರೋಪ ಪಟ್ಟಿಯನ್ನು ಸಲ್ಲಿಸಿದ್ದಾರೆ.

ನಾಲ್ವರಿಗೆ 3 ವರ್ಷ ಶಿಕ್ಷೆ

ಸಿಬಿಐ ಚಾರ್ಜ್‌ಶೀಟ್ ಸಲ್ಲಿಸಿತ್ತು. ಸಾಲ ಕೊಡಿಸುವಾಗ ನೌಕರರಲ್ಲದವರನ್ನು ನೌಕರರೆಂದು ಸುಳ್ಳು ವೇತನ ರಸೀದಿ, ಪ್ರಮಾಣಪತ್ರ ಕೊಟ್ಟು 263 ಪ್ರಕರಣಗಳಲ್ಲಿ 15.61 ಕೋಟಿ ಸಾಲ ಪಡೆದಿದ್ದು, 33 ಪ್ರಕರಣಗಳಲ್ಲಿ 1.47 ಕೋಟಿ ರೂ.ಬಾಕಿ ಪಾವತಿ ಮಾಡಬೇಕಿದೆ. 181 ಮಂದಿ ಬೇನಾಮಿ ಹೆಸರಲ್ಲಿ ಯೋಜನೆಯ ಲಾಭ ಪಡೆದಿದ್ದಾರೆ. ಬೆಂಗಳೂರು ಗ್ರಾಮಾಂತರ ನಗರ ಶಾಖೆಯ ಎಸ್‌ಬಿಎಂನ ವ್ಯವಸ್ಥಾಪಕ ಎಂ.ಟಿ.ವಿ.ರೆಡ್ಡಿ ಇದರಲ್ಲಿ ಶಾಮೀಲಾಗಿದ್ದು, ಒಂದು ಸಾಲ ಬಿಡುಗಡೆಗೆ 20 ಸಾವಿರ ರೂ. ಹಣ ಪಡೆದಿದ್ದಕ್ಕೆ ಸಾಕ್ಷ್ಯ ದೊರೆತಿದೆ. ನಾಗವಾರದ ಬಳಿ ನಿವೇಶನ ಎಂದು ತೋರಿಸಿದ್ದ ಜಾಗ ಮೊದಲೇ ಕೆಐಎಡಿಬಿಗೆ ಸೇರಿದ್ದಾಗಿತ್ತು ಇದು ವಂಚನೆಗೆ ಕಾರಣ ಎಂದು ಸಿಬಿಐ ಚಾರ್ಜ್‌ಶೀಟ್‌ನಲ್ಲಿ ಸುದೀರ್ಘ ಮಾಹಿತಿ ನೀಡಿತ್ತು. ಬೆಂಗಳೂರು ಉತ್ತರ ತಾಲೂಕಿನ ನಾಗವಾರ ಗ್ರಾಮದ ಸರ್ವೇ ನಂಬರ್ 98ರಲ್ಲಿ 3 ಎಕರೆಗೂ ಹೆಚ್ಚಿನ ಜಾಗದಲ್ಲಿ ಲೇ ಔಟ್ ನಿರ್ಮಾಣಕ್ಕಾಗಿ ಸಾಲ ಪಡೆಯಲಾಗಿತ್ತು. ಈ ಪ್ರದೇಶದಲ್ಲಿ ಗೃಹ ನಿರ್ಮಾಣ ಯೋಜನೆಗೆ ಕೃಷ್ಣಯ್ಯ ಶೆಟ್ಟಿ ಬಾಲಾಜಿ ಎಂಟರ್‌ಪ್ರೈಸಸ್ ಹೆಸರಿನಲ್ಲಿ 2003ರಿಂದ 2008 ರವರೆಗೆ ಚಾಲ್ತಿ ಖಾತೆಯಲ್ಲಿ ಎಸ್‌ಬಿಎಂ ನಿಂದ ಸಾಲ ಪಡೆದಿದ್ದಾರೆ. ಇದಕ್ಕಾಗಿ ಅವರು ನಕಲಿ ದಾಖಲೆ ಸೃಷ್ಟಿಸಿದ್ದಾರೆ ಎಂಬುದು ಸಿಬಿಐ ಆರೋಪವಾಗಿತ್ತು. ಈ ಪ್ರಕರಣದಲ್ಲಿ ನನ್ನ ತಪ್ಪಿಲ್ಲ. ನನ್ನನ್ನು ಕೈ ಬಿಡಬೇಕೆಂದು 2013ರಲ್ಲಿ ಕೃಷ್ಣಯ್ಯ ಶೆಟ್ಟಿ ಸಿಬಿಐ ವಿಶೇಷ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು. ಆದರೆ ಈ ಮನವಿ ತಿರಸ್ಕೃತಗೊಂಡಿತ್ತು. ನಂತರ 2023ರಲ್ಲಿ ಕರ್ನಾಟಕ ಹೈಕೋರ್ಟ್ ಸಹ ಕೃಷ್ಣಯ್ಯಶೆಟ್ಟಿ ಮನವಿಯನ್ನು ತಿರಸ್ಕರಿಸಿತ್ತು.

ಮೈಸೂರಲ್ಲಿ 'ತಾಜ್' ಆರಂಭದ ಶುಭ ಸೂಚನೆ



ಮೈಸೂರಿನಲ್ಲಿ ತಾಜ್ ಹೊಟೇಲ್ ಆರಂಭ ಸಂಬಂಧ ನಡೆದ ಮಾತುಕತೆ

ಮುಂಬೈ,ಫೆ.6– ಭಾರತದ ಅತಿದೊಡ್ಡ ಆತಿಥ್ಯ ಕಂಪನಿ, ಇಂಡಿಯನ್ ಹೋಟೆಲ್ಸ್ ಕಂಪನಿ (ಐಹೆಚ್‌ಸಿಎಲ್) ಗುರುವಾರ ಮೈಸೂರಿನಲ್ಲಿ ತನ್ನ ತಾಜ್ ಬ್ರ್ಯಾಂಡ್ ಹೋಟೆಲ್ ಆರಂಭಿಸುವ ಸಂಬಂಧ ಸಹಿ ಹಾಕುವುದಾಗಿ ಘೋಷಿಸಿದೆ. ಈ ಯೋಜನೆ ಐಹೆಚ್‌ಸಿಎಲ್‌ನ ಐಕಾನಿಕ್ ತಾಜ್ ಬ್ರ್ಯಾಂಡ್ ಮೈಸೂರು ನಗರ ಪ್ರವೇಶವನ್ನು ಸೂಚಿಸುತ್ತದೆ.

ಐಹೆಚ್‌ಸಿಎಲ್ ರಿಯಲ್ ಎಸ್ಟೇಟ್ ಮತ್ತು ಅಭಿವೃದ್ಧಿ ಕಾರ್ಯನಿರ್ವಾಹಕ ಉಪಾಧ್ಯಕ್ಷೆ ಸುಮಾ ವೆಂಕಟೇಶ್ ಮಾತನಾಡಿ, ಉತ್ಪಾದನಾ ಮತ್ತು ಐಟಿ ಕ್ಷೇತ್ರಗಳ ಬೆಳವಣಿಗೆಯಿಂದ ಮೈಸೂರು ವೇಗವಾಗಿ ವೈವಿಧ್ಯಮಯ ಆತಿಥ್ಯ ಮಾರುಕಟ್ಟೆಯಾಗಿ ಬದಲಾಗುತ್ತಿದೆ. ಕೊಡಗು, ಕಬಿನಿ, ಬಂಡೀಪುರ ಮತ್ತು ಊಟಿಯಂತಹ ತಾಣಗಳಿಗೆ ಮೈಸೂರು ಪ್ರವೇಶ ದ್ವಾರವಾಗುವ ಮೂಲಕ ದೇಶಿಯ ಮತ್ತು ಅಂತಾರಾಷ್ಟ್ರೀಯ ಪ್ರಯಾಣಿಕರ ಗಮನಾರ್ಹ ತಾಣವಾಗಿದೆ.

ಮೈಸೂರಿನಲ್ಲಿ ಹೋಟೆಲ್ ಆರಂಭದ ಒಪ್ಪಂದವು ಭಾರತದಾದ್ಯಂತ ಪ್ರಮುಖ ಮಾರುಕಟ್ಟೆಗಳಲ್ಲಿ ತಾಜ್ ಬ್ರ್ಯಾಂಡ್ ಅನ್ನು ವಿಸ್ತರಿಸುವ ನಮ್ಮ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಡಿಎಂ ಸೌತ್ ಇಂಡಿಯಾ ಹಾಸ್ಪಿಟಾಲಿಟಿ ಜೊತೆಗೆ ನಮ್ಮ ಪಾಲುದಾರಿಕೆಯನ್ನು ಬಲಪಡಿಸಲು ನಾವು ಉತ್ಸುಕರಾಗಿದ್ದೇವೆ ಎಂದರು.

ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ನೆಲೆಗೊಂಡಿರುವ, 5.03 ಎಕರೆ ಪ್ರದೇಶದ ಈ ಹೋಟೆಲ್, ವಾಲ್ ಆಫ್ ಮೈಸೂರ್‌ಗೆ ಹೊಂದಿಕೊಂಡಂತಿದೆ. ಜೊತೆಗೆ ಹಚ್ಚ ಹಸಿರಿನ ಗಾಲ್ಫ್ ಎಸ್ಟೇಟ್ ಮತ್ತು ಮೈಸೂರು ಮೃಗಾಲಯ ಇದರ ಸಮೀಪದಲ್ಲೇ ಇವೆ ಎಂದು ಹೇಳಿದರು.

ಡಿಎಂ ಸೌತ್ ಇಂಡಿಯಾ ಹಾಸ್ಪಿಟಾಲಿಟಿ ಪ್ರೈವೇಟ್ ಲಿಮಿಟೆಡ್‌ನ ನಿರ್ದೇಶಕ ಸುಶೇನ್ ಮೋಹನ್ ಗುಪ್ತಾ ಮಾತನಾಡಿ, ಭಾರತದ ನಿಜವಾದ ಆತಿಥ್ಯ ಪಾಲಕರಾದ ಐಹೆಚ್‌ಸಿಎಲ್‌ನೊಂದಿಗೆ ನಮ್ಮ ಸಂಬಂಧವನ್ನು ವಿಸ್ತರಿಸಲು ನಾವು ಸಂತೋಷಪಡುತ್ತೇವೆ. ಐಷಾರಾಮಿ ಆತಿಥ್ಯಕ್ಕಾಗಿ ಹೆಚ್ಚುತ್ತಿರುವ ಬೇಡಿಕೆಯನ್ನು ತಾಜ್ ಪೂರೈಸುತ್ತದೆ. ತಾಜ್ ಮೈಸೂರು ಸಾಂಸ್ಕೃತಿಕ ನಗರಿ ಮೈಸೂರಿನ ಪ್ರವಾಸೋದ್ಯಮ ಸಾಮರ್ಥ್ಯವನ್ನು ವೃದ್ಧಿಸಲಿದೆ. ಆ ಮೂಲಕ ನಮ್ಮ ಅತಿಥಿಗಳಿಗೆ ವಿಶಿಷ್ಟ ನೈಜ ಅನುಭವಗಳನ್ನು ಒದಗಿಸುವ ವಿಶ್ವಾಸವಿದೆ ಎಂದು ಹೇಳಿದರು. ಡಿಎಂ ಸೌತ್ ಇಂಡಿಯಾ ಹಾಸ್ಪಿಟಾಲಿಟಿ ಪ್ರೈವೇಟ್ ಲಿಮಿಟೆಡ್‌ನ ಉತ್ಕರ್ಷ್ ಮುನೋಟ್ ಹಾಜರಿದ್ದರು.

ವಾಲ್ಮೀಕಿ ಹಗರಣ: ಸಿಬಿಐ ತನಿಖೆ ಚುರುಕು, ಮೂವರು ಆರೋಪಿಗಳಿಗೆ ನೋಟಿಸ್

ಬೆಂಗಳೂರು, ಫೆ.6–ವಾಲ್ಮೀಕಿ ಬಹುಕೋಟಿ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆಯನ್ನು ಚುರುಕುಗೊಳಿಸಿದೆ. ಪ್ರಕರಣದ ಮೂವರು ಆರೋಪಿಗಳಿಗೆ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ. ಈ ಬೆನ್ನಲ್ಲೇ ಮಾಜಿ ಸಚಿವ ನಾಗೇಂದ್ರಗೆ ಮತ್ತೆ ಸಂಕಷ್ಟ ಎದುರಾಗುವ ಸಾಧ್ಯತೆಯಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ಪ್ರಕರಣದ ಪ್ರಮುಖ ಆರೋಪಿ ಚಂದ್ರಮೋಹನ್ ಮತ್ತು ಕುಟುಂಬಸ್ಥರಿಗೆ ಸಿಬಿಐ ನೋಟಿಸ್ ನೀಡಿದ್ದು, ಈ ಹಿಂದೆ ಚಂದ್ರಮೋಹನ್ ವಾಲ್ಮೀಕಿ ಪ್ರಕರಣದಲ್ಲಿ 89 ಕೋಟಿ ರೂ. ವರ್ಗಾವಣೆ ಮಾಡಿದ್ದ ಆರೋಪ ಹೊಂದಿದ್ದರು. ಕೋಟಿ ಕೋಟಿ ಹಣದ ವಹಿವಾಟು ಮಾಡಿದ್ದ ಚಂದ್ರಮೋಹನ್ 100ಕ್ಕೂ ಹೆಚ್ಚು ನಕಲಿ ಅಕೌಂಟ್‌ಗಳಲ್ಲಿ ಚಂದ್ರಮೋಹನ್ ಹಾಗೂ ಕುಟುಂಬಸ್ಥರು ಸೇರಿ ಹಣ ಗಳಿಸಿದ್ದರು.

ತಿ.ನರಸೀಪುರ ಕುಂಭಮೇಳಕ್ಕೆ 6 ಕೋಟಿ ಅನುದಾನ



ಬೆಂಗಳೂರು, ಫೆ.6– ಮೂರು ವರ್ಷಕ್ಕೊಮ್ಮೆ ನಡೆಯುವ ಟಿ.ನರಸೀಪುರ ಕುಂಭಮೇಳಕ್ಕೆ ಸಿದ್ಧತೆ ಶುರುವಾಗಿದೆ. ಒಂದೆಡೆ ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ಮನುಕುಲದ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ 144 ವರ್ಷಗಳಿಗೆ ಒಮ್ಮೆ ನಡೆಯುವ ಮಹಾಕುಂಭ ಮೇಳೆ ನಡೆಯುತ್ತಿದೆ. ಜನವರಿ 13 ರಿಂದ ಆರಂಭವಾಗಿರುವ ಈ ಮೇಳ ಫೆ.26 ರವರೆಗೆ ನಡೆಯಲಿದೆ. ಇದೇ ಸಮಯದಲ್ಲಿ ಕಾವೇರಿ, ಕಬಿನಿ ನದಿಗಳ ಸಂಗಮ ಸ್ಥಳವಾದ ತಿರುಮಕೂಡಲು ನರಸೀಪುರದಲ್ಲಿ ಫೆ.10 ರಿಂದ 12ರವರೆಗೆ ಕುಂಭಮೇಳ ನಡೆಯಲಿದ್ದು ಮೈಸೂರು ಜಿಲ್ಲಾಡಳಿತ ಸಕಲ ರೀತಿಯಲ್ಲಿ ಇದರ ತಯಾರಿ ನಡೆಸಿದೆ. ಸರ್ಕಾರ ಕೂಡ ಈ ಕುಂಭಮೇಳಕ್ಕೆ 6 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದು, ಮುಜರಾಯಿ ಹಾಗೂ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಇದನ್ನು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಕರುನಾಡಿನ ಐತಿಹಾಸಿಕ ಕುಂಭಮೇಳವನ್ನು ಈ ಬಾರಿ ಅದ್ಧೂರಿಯಾಗಿ ಆಚರಿಸುವ ಸಲುವಾಗಿ ಮಹತ್ವದ ನಿರ್ಧಾರವೊಂದರಲ್ಲಿ ರಾಜ್ಯ ಸರ್ಕಾರವು ಟಿ.ನರಸೀಪುರದ ಕುಂಭಮೇಳಕ್ಕೆ 6 ಕೋಟಿ ಅನುದಾನ ಬಿಡುಗಡೆ ಮಾಡಿದೆ ಎಂದು ಅವರು ಹೇಳಿದ್ದಾರೆ. ಟಿ.ನರಸೀಪುರದ ತ್ರಿವೇಣಿ ಸಂಗಮ ದಕ್ಷಿಣಕಾಶಿಯಲ್ಲಿ ನಡೆಯುವ ಕುಂಭಮೇಳ ಭಾರತೀಯರಿಗೆ ಸನಾತನ ಸಂಸ್ಕೃತಿ ಮತ್ತು ದಿವ್ಯ ಜೀವನ ಧರ್ಮವನ್ನು ಸಾರುವ ಧಾರ್ಮಿಕ ಕಾರ್ಯಕ್ರಮವಾಗಿದೆ ಎಂದು ಬರೆದುಕೊಂಡಿದ್ದಾರೆ. ಮೂರು ದಿನಗಳ ಕಾಲ ನಡೆಯುವ ಕುಂಭಮೇಳಕ್ಕೆ ಕರ್ನಾಟಕ ಮಾತ್ರವಲ್ಲ ಹೊರ ರಾಜ್ಯಗಳಿಂದಲೂ ಭಕ್ತರು, ಪ್ರವಾಸಿಗರು ಆಗಮಿಸುವುದರಿಂದ ನರಸೀಪುರ ಪಟ್ಟಣದಲ್ಲಿಯೇ ಸಕಲ ಸೌಲಭ್ಯಗಳನ್ನು ಕಲ್ಪಿಸಲು ತಯಾರಿ ಮಾಡಿಕೊಳ್ಳಲು ಈ ಅನುದಾನ ಬಳಸಿಕೊಳ್ಳಲಾಗುವುದು ಎಂದು ಸಚಿವರು ಪೋಸ್ಟ್ ಹಾಕಿದ್ದಾರೆ.

ಇದು ಟಿ.ನರಸೀಪುರದಲ್ಲಿ ನಡೆಯುತ್ತಿರುವ 12ನೇ ಕುಂಭಮೇಳವಾಗಿದೆ. ಕುಂಭಮೇಳಕ್ಕೆ ಆಗಮಿಸುವ ಜನರು ದಾರ್ಶನಿಕರು, ಸ್ವಾಮೀಜಿಗಳ ನುಡಿಗಳನ್ನು ಕೇಳಬೇಕು. ಎಲ್ಲರೂ ಭಕ್ತಿ ಮಾರ್ಗದಲ್ಲಿ ಸಾಗಬೇಕು ಎಂದು ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದ್ದಾರೆ.

ಅಧ್ಯಕ್ಷನಾಗಿ ಅನುಭವದ ಕೊರತೆ ಇದೆ; ಆದರೆ ಕಾರ್ಯಕರ್ತನಾಗಿ ಅನುಭವವಿದೆ



ವಿಜಯೇಂದ್ರ

ಬೆಂಗಳೂರು, ಫೆ.6– ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ 'ನನಗೆ ರಾಜ್ಯಾಧ್ಯಕ್ಷನಾಗಿ ಅನುಭವದ ಕೊರತೆ ಇರಬಹುದು. ಆದರೆ, ಕಾರ್ಯಕರ್ತನಾಗಿ ಅನುಭವ ಇದೆ. ಈ ಕುರಿತು ನನಗೆ ಹೆಮ್ಮೆ, ಸಂತೋಷ ಇದೆ ಎಂದು ಹೇಳಿದರು.

ಬಿಜೆಪಿಯಲ್ಲಿನ ಒಳಜಗಳ ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪಿದ್ದು. ಯತ್ನಾಳ್ ಬಣ ದೆಹಲಿಗೆ ಹೋಗಿ ರಾಜ್ಯಾಧ್ಯಕ್ಷ ಬದಲಾಯಿಸಬೇಕು ಎಂದು ಹೈಕಮಾಂಡ್ ಮೇಲೆ ಒತ್ತಡ ತರುತ್ತಿದೆ. ಇದರ ನಡುವೆ ವಿಜಯೇಂದ್ರ ಭಿನ್ನರಿಗೆ ತಿರುಗೇಟು ನೀಡಿದ್ದಾರೆ. ಮಾಧ್ಯಮ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಜಯೇಂದ್ರ, ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಯಾವಾಗ ಬೇಕಾದರು ಆಗಬಹುದು. 20ರೊಳಗೆ ಬರಬಹುದು ಅಂತ ಇದೆ. ಈ ಕುರಿತು ಕೆಲವು ನಾಯಕರ ಹೇಳಿಕೆ ಕೇಳಿದ್ದೇನೆ. ಇನ್ನು ಕೆಲವರು ಮನಸ್ಸಿಗೆ ಬಂದ ಹೇಳಿಕೆ ನೀಡುತ್ತಿದ್ದಾರೆ. ಈ ಹೇಳಿಕೆಗಳಿಗೆ ನಾನು ಪ್ರತಿಕ್ರಿಯೆ ನೀಡಲ್ಲ, ನಾನು ಹೇಳಿಕೆ ನೀಡಿದರೆ ಪಕ್ಷಕ್ಕೆ ಮುಜುಗರ ಆಗುತ್ತದೆ ಎಂದು ಹೇಳಿದರು

ಮುಂದುವರಿದು ಮಾತನಾಡಿದ ವಿಜಯೇಂದ್ರ, ಶ್ರೀರಾಮುಲು ನನಗೆ ಅನುಭವದ ಕೊರತೆ ಇದೆ ಎಂದು ಹೇಳಿದ್ದಾರೆ. ಅಧ್ಯಕ್ಷನಾಗಿ ಅನುಭವದ ಕೊರತೆ ಇರಬಹುದು, ಅದನ್ನು ನಾನು ಒಪ್ಪುತ್ತೇನೆ. ನನಗೆ ಅವರಷ್ಟು ಅನುಭವ ಇಲ್ಲ. ಆದರೆ ಕಾರ್ಯಕರ್ತನಾಗಿ ನನ್ನದೇ ಅನುಭವ ಇದೆ. ಈ ಕುರಿತು ನನಗೆ ಹೆಮ್ಮೆ, ಸಂತೋಷ ಇದೆ. ರಾಜ್ಯ ಪ್ರವಾಸ ಮಾಡುವಾಗ ವಿಜಯಣ್ಣ ಎಂದು ಕರೆಯುತ್ತಾರೆ. ನನ್ನ ಕಾರ್ಯವೈಖರಿ ಬಗ್ಗೆ ಅವರಿಗೂ ತೃಪ್ತಿ ಇದೆ ಎಂದು ಹೇಳಿದರು.

ಯಡಿಯೂರಪ್ಪನವರ ಬಗ್ಗೆ ಮಾತನಾಡಿದರೆ ಸಹಿಸಲ್ಲ!: ಯತ್ನಾಳ್ ಮತ್ತು ಇತರ ಭಿನ್ನಮತಿಯರು ಬಿಎಸ್‌ವೈ ಬಗ್ಗೆ ಹೇಳಿಕೆ ನೀಡುವ ಕುರಿತು ಮಾತನಾಡಿದ ವಿಜಯೇಂದ್ರ 'ನನ್ನ ಬಗ್ಗೆ ಮಾತನಾಡಿದರೆ ಸಹಿಸಿಕೊಳ್ಳೇನೆ, ಆದರೆ ಯಡಿಯೂರಪ್ಪನವರ ಬಗ್ಗೆ ಮಾತನಾಡಿದರೆ ಸುಮ್ಮನಿರಲ್ಲ. ಅವರು ಹೋರಾಟದ ಮೂಲಕ ಪಕ್ಷ ಕಟ್ಟಿದ್ದಾರೆ. ಆದರೆ ಅವರನ್ನ ಅವಮಾನಿಸುವ ಕೆಲಸ ಆಗ್ತಿದೆ. ಅವರ ಹೇಳಿಕೆಗಳನ್ನ ನಾನು ಸಹಿಸಲ್ಲ. ಕೆಲ ಹಿರಿಯ ನಾಯಕರು ಅವರಿಗೆ ಹೇಳುವ ಪ್ರಯತ್ನ ಮಾಡದಿರುವುದು ದುರ್ದೈವ ಎಂದರು.

ಕೆಎಂಎಫ್ ಸಿಬ್ಬಂದಿ ಸಂಬಳ ಏರಿಕೆಗೆ ಆದೇಶ

ಬೆಂಗಳೂರು, ಫೆ.6– ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದ (ಕೆಎಂಎಫ್) ಅಧಿಕಾರಿಗಳು ಹಾಗೂ ಸಿಬ್ಬಂದಿಯ ಬೇಡಿಕೆಗೆ ಮಣಿದಿರುವ ಸಹಕಾರ ಇಲಾಖೆಯು ಏಳನೇ ವೇತನ ಆಯೋಗದ ವರದಿ ಪ್ರಕಾರ ವೇತನ ಹಾಗೂ ಇತರೆ ಸೇವಾ ಸೌಲಭ್ಯಗಳ ಜಾರಿಗೆ ಸಮ್ಮತಿಸಿದೆ.

2024ರ ಆಗಸ್ಟ್ 1ರಿಂದ ಪೂರ್ವಾನ್ವಯವಾಗುವಂತೆ ಕೆಎಂಎಫ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಏಳನೇ ವೇತನ ಆಯೋಗದ ಶಿಫಾರಸುಗಳ ಪ್ರಕಾರ ಪರಿಷ್ಕೃತ ವೇತನ ಶ್ರೇಣಿ, ತುಟ್ಟಿ ಭತ್ಯೆ ಹಾಗೂ ಇತರೆ ಭತ್ಯೆಗಳನ್ನು ಮಂಜೂರು ಮಾಡುವಂತೆ ಸಹಕಾರ ಸಂಘಗಳ ನಿಬಂಧಕ (ಆರ್‌ಸಿಎಸ್) ಟಿ.ಎಚ್.ಎಂ. ಕುಮಾರ್ ಆದೇಶ ಹೊರಡಿಸಿದ್ದಾರೆ.

ಏಳನೇ ವೇತನ ಆಯೋಗದ ಜಾರಿಗೆ ಆಗ್ರಹಿಸಿ ಕೆಎಂಎಫ್ ಮತ್ತು ಅದರ ವ್ಯಾಪ್ತಿಯ 15 ಜಿಲ್ಲಾ ಸಹಕಾರಿ ಹಾಲು ಒಕ್ಕೂಟಗಳ ಅಧಿಕಾರಿಗಳು, ಸಿಬ್ಬಂದಿಯು ಫೆ.1ರಿಂದ ದೈನಂದಿನ ಕಾರ್ಯ ಚಟುವಟಿಕೆಗಳನ್ನು ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ಮುಂದಾಗಿದ್ದರು. ಬಳಿಕ ಕೆಎಂಎಫ್ ಅಧ್ಯಕ್ಷ ಭೀಮಾ ನಾಯ್ಕ್ ಅವರು ಮುಖ್ಯಮಂತ್ರಿಗಳು ಹಾಗೂ ಸಹಕಾರ ಇಲಾಖೆ ಸಚಿವರೊಂದಿಗೆ ಚರ್ಚಿಸಿ ಫೆಬ್ರವರಿ 3ರೊಳಗೆ ಬೇಡಿಕೆ ಈಡೇರಿಸುವ ಭರವಸೆ ನೀಡಿದ್ದರು.

ಷರತ್ತು ಬದ್ಧ ಅನುಮತಿ: ನಂತರ ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದ ಮತ್ತು ಜಿಲ್ಲಾ ಸಹಕಾರಿ ಹಾಲು ಒಕ್ಕೂಟಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಯು ಮುಷ್ಕರದ ನಿರ್ಧಾರದಿಂದ ಹಿಂದೆ ಸರಿದು ಫೆ.7ರ ಗಡುವು ಕೊಟ್ಟಿದ್ದರು. ಅಂತಿಮವಾಗಿ ಸಹಕಾರ ಸಂಘಗಳ ನಿಬಂಧಕರು, ಬೇಡಿಕೆ ಈಡೇರಿಕೆಗೆ ಕೆಲವು ಷರತ್ತುಗಳೊಂದಿಗೆ ಅನುಮತಿ ನೀಡಿ ಆದೇಶ ಹೊರಡಿಸಿದ್ದಾರೆ. ಆದರೆ, ಜಿಲ್ಲಾ ಸಹಕಾರಿ ಹಾಲು ಒಕ್ಕೂಟಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಯು ವೇತನ ಪರಿಷ್ಕರಣೆಗೆ ಯಾವುದೇ ಆದೇಶವಾಗಿಲ್ಲ.

ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದಲ್ಲಿ 1,275 ಉದ್ಯೋಗಿಗಳಿದ್ದು, ವೇತನ ಪರಿಷ್ಕರಣೆಯಿಂದ ವಾರ್ಷಿಕ 18.36 ಕೋಟಿ ರೂ. ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ. ಸಿಬ್ಬಂದಿಯ ವಾರ್ಷಿಕ ವೆಚ್ಚವು 173.36 ಕೋಟಿ ರೂ. ಆಗಲಿದೆ. ಇದರಿಂದ ಕೆಎಂಎಫ್‌ಗೆ ಆರ್ಥಿಕ ನಷ್ಟವಾಗದಂತೆ ವಹಿವಾಟನ್ನು ಗಣನೀಯವಾಗಿ ಹೆಚ್ಚಿಸಬೇಕು ಮತ್ತು ಅನಗತ್ಯ ವೆಚ್ಚಗಳಿಗೆ ಕಡಿವಾಣ ಹಾಕಬೇಕು. ಹೊರ ಗುತ್ತಿಗೆ ಸಿಬ್ಬಂದಿ ಸಂಖ್ಯೆಯನ್ನು ಹೆಚ್ಚಿಸುವಂತಿಲ್ಲ ಹಾಗೂ ಹಾಲಿ ಹೊರ ಗುತ್ತಿಗೆ ಸಿಬ್ಬಂದಿಯನ್ನು ಕೆಲಸದಲ್ಲಿ ಮುಂದುವರಿಸಲು ಸಹಕಾರ ಇಲಾಖೆಯು ಮೀಸಲಾತಿ ನಿರ್ದೇಶನ ಪಾಲಿಸಬೇಕೆಂದು ಆದೇಶದಲ್ಲಿ ತಿಳಿಸಲಾಗಿದೆ.

ಮೈಸೂರು ಮಿತ್ರ
ಶುಕ್ರವಾರ 7 ಫೆಬ್ರವರಿ 2025

ಸಂತೆಪೇಟೆಯಲ್ಲಿ 618 ಕೆಜಿ ಪ್ಲಾಸ್ಟಿಕ್ ಜಪ್ತಿ; ಅಂಗಡಿ ಲೈಸನ್ಸ್ ರದ್ದು

ಗೋದಾಮು ಮಾಲೀಕರಿಗೆ 25,000 ರೂ. ದಂಡ ವಿಧಿಸಿದ ಪಾಲಿಕೆ ತಂಡ



ಮೈಸೂರಿನ ಸಂತೆಪೇಟೆ ಅಂಗಡಿ ಮಳಿಗೆಯೊಂದರ ಮೇಲೆ ದಾಳಿ ನಡೆಸಿದ ಪಾಲಿಕೆ ಪರಿಸರ ಇಂಜಿನಿಯರ್‌ಗಳು, 618 ಕೆಜಿ ಪ್ಲಾಸ್ಟಿಕ್ ಜಪ್ತಿ ಮಾಡಿದ್ದಾರೆ.

ಮೈಸೂರು,ಫೆ.6(ಆರ್‌ಕೆ)– ಮೈಸೂರಿನ ಸಂತೆಪೇಟೆ ಅಂಗಡಿ ಮಳಿಗೆಯೊಂದರ ಮೇಲೆ ಇಂದು ಮಧ್ಯಾಹ್ನ ದಿಢೀರ್ ದಾಳಿ ನಡೆಸಿದ ಮಹಾನಗರ ಪಾಲಿಕೆ ಪರಿಸರ ಇಂಜಿನಿಯರ್‌ಗಳು 618 ಕೆಜಿ ಪ್ಲಾಸ್ಟಿಕ್ ಜಪ್ತಿ ಮಾಡಿದ್ದಾರೆ.

ಪರಿಸರ ಇಂಜಿನಿಯರ್ ಮೈತ್ರಿ ನೇತೃತ್ವದಲ್ಲಿ ದಾಳಿ ನಡೆಸಿದ ಅಧಿಕಾರಿಗಳು ಮತ್ತು ಅಭಯ ತಂಡದ ಸಿಬ್ಬಂದಿ, ಸಂತೆಪೇಟೆಯ ಧನ್ವಂತರಿ ಟ್ರೇಡರ್ಸ್ ಅಂಗಡಿ ಮಳಿಗೆಯಲ್ಲಿ ಪ್ಲಾಸ್ಟಿಕ್ ಮಾರುತ್ತಿದ್ದುದು ಪತ್ತೆಯಾಯಿತು. ಶೋಧ ಕಾರ್ಯ ಮುಂದುವರೆಸಿದಾಗ ಅಂಗಡಿಗೆ ಸೇರಿದ ಗೋದಾಮಿನಲ್ಲಿ 618 ಕೆಜಿ ಪ್ಲಾಸ್ಟಿಕ್ ಶೇಖರಿಸಿರುವುದು ಕಂಡು ಬಂದಿತು. ಪ್ಲಾಸ್ಟಿಕ್ ಪದಾರ್ಥಗಳನ್ನು ಜಪ್ತಿ ಮಾಡಿದ ಅಧಿಕಾರಿಗಳು, ಅಂಗಡಿ ಮಾಲೀಕನಿಂದ 25,000 ರೂ ದಂಡ ವಸೂಲಿ ಮಾಡಿ, ಟ್ರೇಡ್ ಲೈಸನ್ಸ್ ರದ್ದುಗೊಳಿಸಿದರು. ಅಂಗಡಿಯ ಜಿಎಸ್‌ಟಿ ರದ್ದುಪಡಿಸಲು ಆದಾಯ ತೆರಿಗೆ ಇಲಾಖೆಗೆ ಶಿಫಾರಸ್ಸು ಮಾಡಲಾಗುವುದು ಎಂದು ಮೈತ್ರಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಪಾಲಿಕೆ ಹೆಲ್ತ್ ಇನ್ಸ್‌ಪೆಕ್ಟರ್ ಬಸವರಾಜು, ಮಂಜುಕುಮಾರ್ ಕೃಷ್ಣ ಹಾಗೂ ಅಭಯ ತಂಡದ ಸಿಬ್ಬಂದಿ ಪ್ಲಾಸ್ಟಿಕ್ ವಿರುದ್ಧ ದಾಳಿಯಲ್ಲಿ ಪಾಲ್ಗೊಂಡಿದ್ದರು.

ಮೈಸೂರು ಜಿಲ್ಲಾ ಪೊಲೀಸರಿಂದ ಕಳೆದ ಏಳು ತಿಂಗಳಲ್ಲಿ 255 ಪ್ರಕರಣಗಳ ಭೇದಿಸಿ 3.96 ಕೋಟಿ ಮೌಲ್ಯದ ಮಾಲು ವಶ

ನ್ಯಾಯಾಲಯದ ಆದೇಶದಂತೆ 134 ಪ್ರಕರಣಗಳ 2.06 ಕೋಟಿ ಮೌಲ್ಯದ ಮಾಲು ವಾರಸುದಾರರಿಗೆ ಹಸ್ತಾಂತರ



ಮೈಸೂರಿನ ಜ್ಯೋತಿನಗರದಲ್ಲಿರುವ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಕವಾಯತು ಮೈದಾನದಲ್ಲಿ ಗುರುವಾರ ಎಸ್‌ಪಿ ಎನ್.ವಿಷ್ಣುವರ್ಧನ, ನ್ಯಾಯಾಲಯ ಅನುಮತಿ ನೀಡಿರುವ ಪ್ರಕರಣಗಳಲ್ಲಿ ಮಾಲುಗಳನ್ನು ವಾರಸುದಾರರಿಗೆ ಒಪ್ಪಿಸಿದರು.

ಮೈಸೂರು, ಫೆ.6(ಆರ್‌ಕೆ)– 2023ರ ಜುಲೈನಿಂದ 2025ರ ಜನವರಿ ಮಾಹೆವರೆಗಿನ 7 ತಿಂಗಳ ಅವಧಿಯಲ್ಲಿ ಮೈಸೂರು ಜಿಲ್ಲಾ ಪೊಲೀಸರು 255 ಅಪರಾಧ ಪ್ರಕರಣ ಭೇದಿಸಿದ್ದು, ಒಟ್ಟು 3,96,17,230 ರೂ. ಮೌಲ್ಯದ ಮಾಲನ್ನು ವಶಪಡಿಸಿಕೊಂಡಿದ್ದಾರೆ.

ಮೈಸೂರಿನ ಜ್ಯೋತಿನಗರದಲ್ಲಿರುವ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಕವಾಯತು ಮೈದಾನದಲ್ಲಿ ಎಸ್‌ಪಿ ಎನ್.ವಿಷ್ಣುವರ್ಧನ, ನ್ಯಾಯಾಲಯ ಅನುಮತಿ ನೀಡಿರುವ ಪ್ರಕರಣಗಳಲ್ಲಿ ಮಾಲುಗಳನ್ನು ವಾರಸುದಾರರಿಗೆ ಒಪ್ಪಿಸಿದರು. ಬಳಿಕ ಸುದ್ದಿಗಾರರಿಗೆ ಮಾಹಿತಿ ನೀಡಿದರು. ಕಳೆದ 7 ತಿಂಗಳ ಅವಧಿಯಲ್ಲಿ ಮೈಸೂರು ಜಿಲ್ಲೆಯ ಠಾಣೆಗಳ ವ್ಯಾಪ್ತಿಯಲ್ಲಿ ವಿವಿಧ ಒಟ್ಟು 1,279 ಪ್ರಕರಣಗಳು ದಾಖಲಾಗಿದ್ದು, ಆ ಪೈಕಿ 255 ಪ್ರಕರಣಗಳನ್ನು ಭೇದಿಸಿ ಒಟ್ಟು 3,96,17,230 ರೂ. ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ.

ವರದಿಯಾದ ಪ್ರಕರಣಗಳ ಪೈಕಿ ಪತ್ತೆಯಾದ 2 ಕೊಲೆ ಪ್ರಕರಣಗಳಲ್ಲಿ 4,240 ರೂ. ನಗದು, 3 ದರೋಡೆಯಲ್ಲಿ 40,90,000 ರೂ., 19 ಸುಲಿಗೆಯಲ್ಲಿ 11,55,670 ರೂ., 10 ಸರಗಳ್ಳತನದಲ್ಲಿ 12,20,000ರೂ., 63 ಮನೆ ಕಳ್ಳತನದಲ್ಲಿ 1,27,04,173 ರೂ., 9 ಸರ್ವೆಂಟ್ ಕಳವಿನಲ್ಲಿ 19,73,100 ರೂ., 97 ವಾಹನ ಕಳ್ಳತನದಲ್ಲಿ 66,57,260 ರೂ., 33 ಇತರೆ ಕಳ್ಳತನ ಪ್ರಕರಣಗಳಲ್ಲಿ 54,05,312 ರೂ., 11 ಜಾನುವಾರು ಕಳವಿನಲ್ಲಿ 5,85,000 ರೂ., 8 ವಂಚನೆ ಪ್ರಕರಣಗಳಲ್ಲಿ 57,92,483 ರೂ., ಸೇರಿದಂತೆ ಒಟ್ಟು 255 ಪ್ರಕರಣಗಳಲ್ಲಿ 3,96,17,238 ರೂ. ಮೌಲ್ಯದ ನಗದು, ಚಿನ್ನಾಭರಣ, ಮೊಬೈಲ್, ವಾಹನ ಹಾಗೂ ಇತರೆ ವಸ್ತುಗಳನ್ನು ಜಿಲ್ಲಾ ಪೊಲೀಸರು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ವಾರಸುದಾರರ ವಶಕ್ಕೆ: ಈ ರೀತಿ ವಶಪಡಿಸಿಕೊಂಡ ಮಾಲುಗಳನ್ನು ನ್ಯಾಯಾಲಯದ ಆದೇಶದ ಮೇರೆಗೆ ಕಳೆದು ಕೊಂಡಿದ್ದವರಿಗೆ ಇಂದು ಪೊಲೀಸರು ಹಸ್ತಾಂತರಿಸಿದರು. ಅದರಲ್ಲಿ ಒಟ್ಟು 35 ಪ್ರಕರಣಗಳಲ್ಲಿ 1,01,55,219 ರೂ. ಮೌಲ್ಯದ 2 ಕೆ.ಜಿ. 439 ಗ್ರಾಂ, 600 ಮಿಲಿ ಗ್ರಾಂ ಚಿನ್ನ ಮತ್ತು 4 ಕೆ.ಜಿ. 360 ಗ್ರಾಂ ಬೆಳ್ಳಿ ಪದಾರ್ಥ, 18 ಪ್ರಕರಣಗಳಲ್ಲಿ 42,36,585 ರೂ. ನಗದು, 62 ವಾಹನ ಕಳ್ಳತನ ಪ್ರಕರಣಗಳಲ್ಲಿ 52,12,620 ರೂ. ಮೌಲ್ಯದ 5 ಕಾರು, 3 ಆಟೋ, 2 ಟ್ರ್ಯಾಕ್ಟರ್, 3 ಟಿಪ್ಪರ್, 3 ರೋಡ್ ರೋಲರ್ ಹಾಗೂ 62 ಮೋಟಾರ್ ಬೈಕ್, 8 ಹಾರ್ಡ್‌ವೇರ್ ಮತ್ತು ಎಲೆಕ್ಟ್ರಿಕ್ ವಸ್ತುಗಳ ಪ್ರಕರಣಗಳಲ್ಲಿ 3,54,000 ರೂ. ಬೆಲೆಬಾಳುವ ಮೋಟಾರ್ ಪಂಪ್, ಬ್ಯಾಟರಿ, ಲ್ಯಾಪ್‌ಟಾಪ್, ಹಾರ್ಡ್‌ಡಿಸ್ಕ್ ಹಾಗೂ ಮೊಬೈಲ್, 4 ಪ್ರಾಣಿಗಳ ಕಳವು ಪ್ರಕರಣಗಳಲ್ಲಿ 2,95,000 ರೂ. ಬೆಲೆಯ 6 ಹಸುಗಳು ಮತ್ತು 3 ಕುರಿಗಳು, 9 ಇತರೆ ಪ್ರಕರಣಗಳಲ್ಲಿ 2,90,680 ರೂ. ಮೌಲ್ಯದ ವಸ್ತುಗಳು ಹಾಗೂ 2024ರ ಅಕ್ಟೋಬರ್‌ರಿಂದೀಚೆಗೆ ಸೆಂಟ್ರಲ್ ಎಕ್ವಿಪ್‌ಮೆಂಟ್ ಐಡೆಂಟಿಟಿ ರಿಜಿಸ್ಟ್ರಾರ್ ಪೋರ್ಟಲ್ ಮೂಲಕ ವಿವಿಧ ಕಂಪನಿಗಳ 13,50,000 ರೂ. ಮೌಲ್ಯದ ಒಟ್ಟು 90 ಮೊಬೈಲ್ ಫೋನ್‌ಗಳನ್ನು ವಾರಸುದಾರರಿಗೆ ಒಪ್ಪಿಸಲಾಯಿತು.

ಅಡಿಷನಲ್ ಎಸ್‌ಪಿಗಳಾದ ಸಿ.ಮಲ್ಲಿಕ್, ಎಲ್.ನಾಗೇಶ್, ಡಿವೈಎಸ್‌ಪಿಗಳಾದ ಕರೀಂ ರಾವತರ್, ಜಿ.ಎಸ್.ರಘು, ಗೋಪಾಲಕೃಷ್ಣ, ಎನ್.ರಘು ಇತರ ಅಧಿಕಾರಿಗಳು ಇದ್ದರು.

ಪಾಲಿಕೆ ಸರ್ವರ್ ಸಮಸ್ಯೆ ಹಿಂದೆ ಮಧ್ಯವರ್ತಿಗಳ ಕೈವಾಡ ಶಂಕೆ

ಇ–ಖಾತೆಗೆ ಅಲೆದು ಸುಸ್ತಾಗಿರುವ ಜನರು

ಮೈಸೂರು, ಫೆ.6(ಜಿಎ)– ಇ–ಖಾತಾ ಆರಂಭವಾದಾಗಿನಿಂದಲೂ ನಗರದ ನಾಗರಿಕರು ಸಮಸ್ಯೆ ಎದುರಿಸುತ್ತಿದ್ದಾರೆ. ಪಾಲಿಕೆ ಕಚೇರಿಗಳಿಗೆ ಭೇಟಿ ನೀಡಿದಲ್ಲಿ ಸರ್ವರ್ ಸಮಸ್ಯೆ ಎನ್ನುತ್ತಾರೆ. ಈ ಸಬೂಬು ಹೇಳುವುದರ ಹಿಂದೆ ಮಧ್ಯವರ್ತಿಗಳ ಮೊರೆ ಹೋಗಲಿ ಎಂಬ ಪಿತೂರಿ ಇರಬಹುದಾದ ಸಾಧ್ಯತೆ ಇದೆ ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಪದಾಧಿಕಾರಿ ನೂರ್ ಮಹಮ್ಮದ್ ಮರ್ಚೆಂಟ್ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಮ್ಮಲ್ಲಿರುವ ದಾಖಲೆ ಪತ್ರಗಳನ್ನು ಹಿಡಿದು ಇ–ಖಾತೆಗಾಗಿ ಸಾರ್ವಜನಿಕರು ನಿತ್ಯ ಅಲೆದಾಡುತ್ತಿದ್ದಾರೆ. ಈ ವೇಳೆ ಪಾಲಿಕೆ ಕಚೇರಿಗಳಿಗೆ ಭೇಟಿ ನೀಡಿದಲ್ಲಿ ಸರ್ವರ್ ಸಮಸ್ಯೆ ಸೇರಿದಂತೆ ಒಂದಲ್ಲ ಒಂದು ಸಬೂಬು ಹೇಳುತ್ತಿದ್ದಾರೆ. ಸುಮಾರು 50–60 ವರ್ಷ ಹಿಂದಿನ ಮನೆಗೂ ಟೈಟಲ್ ಡೀಡ್ ತನ್ನಿ ಎಂದು ಹೇಳುವ ಹಲವಾರು ಉದಾಹರಣೆ ಇವೆ. ಈ ರೀತಿಯ ಮನೆ ನಿವಾಸಿಗಳು ಇದನ್ನು ತರಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಪಾಲಿಕೆ ಕಚೇರಿಗಳಲ್ಲಿ ಇ–ಖಾತೆ ಬಗ್ಗೆ ಸರಿಯಾದ ಮಾಹಿತಿ ನೀಡುವುದಿಲ್ಲ. ತಿಂಗಳಲ್ಲಿ ಹತ್ತು ದಿನ ರಜೆ, ಮೂರು ದಿನ ಸರ್ವರ್ ಡೌನ್, ಮೂರು ದಿನ ಸಿಬ್ಬಂದಿ ಸಿಗುವುದಿಲ್ಲ. ಹೀಗಾಗಿ ಮಧ್ಯವರ್ತಿಗಳ ಮೊರೆ ಹೋದರೆ ಕೆಲಸ ಸುಲಭ ಎನ್ನುವಂತಾಗಿದೆ. ಆದ್ದರಿಂದ ಪಾಲಿಕೆ ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಇತ್ತ ಗಮನಹರಿಸಬೇಕೆಂದು ಕೋರಿದರು. ಗೋಷ್ಠಿಯಲ್ಲಿ ಗಂಗಾಧರ್ ಹೈವೇ, ಅನ್ವರ್ ಅನ್ಸರ್, ಸಯ್ಯದ್ ಅಬ್ಬಾಸ್, ಸಂಯ್ಯದ್ ಉಮರ್ ಉಪಸ್ಥಿತರಿದ್ದರು.

ರಾಷ್ಟ್ರಕವಿ ಜಿ.ಎಸ್.ಶಿವರುದ್ರಪ್ಪನವರ ಮೊಮ್ಮಗಳು ಅನನ್ಯ 'ಸಾಗರ ಸಾಧನೆ'




ಸಮುದ್ರಯಾನದಲ್ಲಿ ದಾಖಲೆ ಬರೆದ ಅನನ್ಯ ಪ್ರಸಾದ್.

ಮೈಸೂರು, ಫೆ.6– ಕರ್ನಾಟಕದ ಖ್ಯಾತ ಸಾಹಿತಿ, ರಾಷ್ಟ್ರಕವಿ ಜಿ.ಎಸ್.ಶಿವರುದ್ರಪ್ಪ ಅವರ ಮೊಮ್ಮಗಳು ಅನನ್ಯ ಪ್ರಸಾದ್ ಸಮುದ್ರಯಾನದಲ್ಲಿ ದಾಖಲೆ ನಿರ್ಮಿಸಿದ್ದಾರೆ. ಅಟ್ಲಾಂಟಿಕ್ ಸಮುದ್ರದಲ್ಲಿ ಒಬ್ಬಂಟಿಯಾಗಿ ದೋಣಿಯಲ್ಲಿ ಹುಟ್ಟು ಹಾಕುತ್ತಾ 3000 ಕಿ.ಮೀ. ದೂರವನ್ನು ಯಶಸ್ವಿಯಾಗಿದ್ದಾರೆ. ಈ ಮೂಲಕ ಯಾವುದೇ ಸಾಗರವನ್ನು ಏಕಾಂಗಿಯಾಗಿ ಮತ್ತು ಯಾವುದೇ ಸಹಾಯವಿಲ್ಲದೆ ದೋಣಿಯಲ್ಲಿ ದಾಟಿದ ಮೊದಲ ಕಂದು ವರ್ಣೀಯ ಮಹಿಳೆ ಎಂದು 34 ವರ್ಷದ ಅನನ್ಯ ಪ್ರಸಾದ್ ದಾಖಲೆ ಪುಸ್ತಕ ಪ್ರವೇಶಿಸಿದ್ದಾರೆ. ಕರ್ನಾಟಕ ಮೂಲದ ಅನನ್ಯ ಪ್ರಸಾದ್, ಯುಕೆಯಲ್ಲಿ ನೆಲೆಸಿರುವ ಡಾ.ಶಿವಪ್ರಸಾದ್ ಹಾಗೂ ಡಾ.ಪೂರ್ಣಿಮಾ ಪ್ರಸಾದ್ ದಂಪತಿಯ ಪುತ್ರಿ. ಇವರು ಏಕಾಂಗಿ ಯಾನ ಕೈಗೊಂಡು 52 ದಿನ 5 ಗಂಟೆ 44 ನಿಮಿಷಗಳಲ್ಲಿ ಜಗತ್ತಿನಲ್ಲೇ ಅತ್ಯಂತ ಕಠಿಣ ಸಮುದ್ರ ಮಾರ್ಗದ ರೋಯಿಂಗ್ ಪೂರ್ಣಗೊಳಿಸಿದ್ದಾರೆ.

ಸವಾಲಿಗೂ ಮುನ್ನ ಯಾವುದೇ ರೋಯಿಂಗ್ ಅನುಭವವಿಲ್ಲದ ಕಾರಣ, ಅಗತ್ಯವಿರುವ ದೈಹಿಕ ಮತ್ತು ಮಾನಸಿಕ ಸ್ಥಿತಿಸ್ಥಾಪಕತ್ವವನ್ನು ನಿರ್ಮಿಸಲು ಅನನ್ಯ ಅವರು ಮೂರು ವರ್ಷಗಳ ತರಬೇತಿಯನ್ನು ಪಡೆದಿದ್ದರು. ದೋಣಿಯ ತಾಂತ್ರಿಕ ದುರಸ್ತಿಗಳನ್ನು ಹೇಗೆ ನಿರ್ವಹಿಸುವುದು ಹಾಗೂ ಸಹಾಯಕ ಸಿಬ್ಬಂದಿ ಇಲ್ಲದೆ ಬದುಕುವುದು ಹೇಗೆ ಎಂಬುದನ್ನೂ ಕಲಿತು ಏಕಾಂಗಿಯಾಗಿ ಅಂಟ್ಲಾಟಿಕ್ ಸಾಗರವನ್ನು ದಾಟಿದ್ದಾರೆ.

ದಕ್ಷಿಣ ಭಾರತದಲ್ಲಿ ಅನಾಥ ಮಕ್ಕಳಿಗೆ ಶಿಕ್ಷಣ ಒದಗಿಸುವ ಉದ್ದೇಶದೊಂದಿಗೆ ಚಾಮರಾಜನಗರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 'ದೀನಬಂಧು ಟ್ರಸ್ಟ್' ಹಾಗೂ ಇಂಗ್ಲೆಂಡ್‌ನ 'ಮಾನಸಿಕ ಆರೋಗ್ಯ ಪ್ರತಿಷ್ಠಾನ'ಕ್ಕೆ ಅನನ್ಯ ಪ್ರಸಾದ್ ತಮ್ಮ ಸಾಹಸದ ಮೂಲಕ ಬೆಂಬಲ ನೀಡಿರುವುದು ವಿಶೇಷವಾಗಿದೆ.

ಫೆ.13, ಮೈಸೂರಲ್ಲಿ ಪ್ರೊ.ಎಂಡಿಎನ್ ನೆನಪಿನಾರ್ಥ ರೈತ ಸಮಾವೇಶ



ಮೈಸೂರು, ಫೆ.6(ಜಿಎ)– ರಾಜ್ಯ ರೈತ ಸಂಘದ ವತಿಯಿಂದ ಫೆ.13ರ ಮಧ್ಯಾಹ್ನ 12ಕ್ಕೆ ಮೈಸೂರಿನ ಪುರಭವನದ ಆವರಣದಲ್ಲಿ ರೈತ ಮುಖಂಡ ಪ್ರೊ.ಎಂ.ಡಿ. ನಂಜುಂಡಸ್ವಾಮಿ ನೆನಪಿನಲ್ಲಿ ಜಿಲ್ಲಾ ರೈತ ಸಮಾವೇಶ ಆಯೋಜಿಸಲಾಗಿದೆ ಎಂದು ರಾಜ್ಯ ಉಪಾಧ್ಯಕ್ಷ ಎ.ಎಲ್.ಕೆಂಪುಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 11.55ಕ್ಕೆ ಯಧುಶೈಲ ಸಂಘದ ಧ್ವಜಾರೋಹಣ ನೆರವೇರಿಸುವರು, 12ಕ್ಕೆ ಸಮಾಜವಾದಿ ಚಿಂತಕ ಡಾ.ಸುನೀಲಂ ಅವರು ಸಮಾವೇಶ ಉದ್ಘಾಟಿಸುವರು. ಜಿಲ್ಲಾಧ್ಯಕ್ಷರಾದ ಹೊಸೂರು ಕುಮಾರ್ ಅಧ್ಯಕ್ಷತೆ ವಹಿಸುವರು. ಶಾಸಕ ಬಿ.ಆರ್.ಪಾಟೀಲ್, ಡಾ.ವಿ.ವಾಸು, ಡಾ.ಪ್ರಕಾಶ್ ಕಮ್ಮರಡಿ, ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ಚಾಮರಸ ಮಾಲೀ ಪಾಟೀಲ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ಈ ವೇಳೆ ಹೊಸಕೋಟೆ ಬಸವರಾಜು ಮಾತನಾಡಿ, ಮೈಕ್ರೋಫೈನಾನ್ಸ್ ವಸೂಲಿಗೆ ವಾಮಮಾರ್ಗ ಅನುಸರಿಸಿ ರೈತರು, ಕೂಲಿ ಕಾರ್ಮಿಕರು ಮೊದಲಾದವರಿಗೆ ಕಿರುಕುಳ ನೀಡುತ್ತಿವೆ. ಆರ್‌ಬಿಐ ನಿಯಮವನ್ನು ಪಾಲಿಸುತ್ತಿಲ್ಲ. ಆದಾಯ ಮೀರಿ ಸಾಲ ನೀಡಲಾಗಿದೆ. ರಾಷ್ಟ್ರೀಕೃತ ಬ್ಯಾಂಕ್‌ಗಳು, ಸೊಸೈಟಿಗಳು ರೈತರಿಗೆ ಸಾಲ ನೀಡುವುದಕ್ಕೆ ಆದ್ಯತೆ ನೀಡದಿರುವುದೇ ಜನತೆ ಮೈಕ್ರೋ ಫೈನಾನ್ಸ್‌ಗಳಿಗೆ ಸಿಲುಕಲು ಕಾರಣವಾಗಿದೆ ಎಂದು ಕೆಂಪುಗೌಡ ದೂರಿದರು.

ನಬಾರ್ಡ್ ಸಹ ರಾಜ್ಯಕ್ಕೆ ಕಡಿಮೆ ಹಣ ನೀಡುವುದರಿಂದಲೂ ಸೊಸೈಟಿಗಳಲ್ಲಿ ಸಾಲ ಸಿಗುತ್ತಿಲ್ಲ. ಇನ್ನು, ಸುಗ್ರೀವಾಜ್ಞೆ ಹೊರಡಿಸಿದರೂ ಹೆಚ್ಚಿನ ಪ್ರಯೋಜನವಾಗುವುದಿಲ್ಲ. ಆದ್ದರಿಂದಾಗಿ ವಾಣಿಜ್ಯ ಬ್ಯಾಂಕ್‌ಗಳು ರೈತರಿಗೆ ಸಾಲ ನೀಡುವುದಕ್ಕೆ ಆದ್ಯತೆ ನೀಡಬೇಕು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ನಾಗನಹಳ್ಳಿ ವಿಜೇಂದ್ರ, ಚಿಕ್ಕಳ್ಳಿ ಮಹೇಶ್ ಮತ್ತಿತರರು ಉಪಸ್ಥಿತರಿದ್ದರು.

ಸಬ್ ರಿಜಿಸ್ಟ್ರಾರ್ ಕಚೇರಿಗಳಲ್ಲಿ ಸಾಫ್ಟ್‌ವೇರ್ ವೈಫಲ್ಯದಿಂದ ಜನರಿಗೆ ಭಾರಿ ಸಮಸ್ಯೆ

ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್ ಟೀಕಾ ಪ್ರಹಾರ



ಬೆಂಗಳೂರು, ಫೆ.6(ಕೆಎಂಶಿ)–ಸಬ್ ರಿಜಿಸ್ಟ್ರಾರ್ ಕಚೇರಿಗಳಲ್ಲಿ 28 ದಿನಗಳಿಂದ ಯಾವ ಸಾಫ್ಟ್‌ವೇರ್ ಉಪಕರಣಗಳೂ ಕೆಲಸ ಮಾಡುತ್ತಿಲ್ಲ ಎಂದು ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇ–ಖಾತೆ ಇಲ್ಲದೆ ನೋಂದಣಿ ಇಲ್ಲ ಎಂಬ ಹೊಸ ಷರತ್ತು ಜಾರಿ ಮಾಡಲಾಗಿದೆ. ಪೂರ್ವಾಪರ ಯೋಚಿಸದೆ ಹೀಗೆ ಮಾಡಲಾಗಿದೆ. ಬೆಂಗಳೂರಿನಲ್ಲಿ 1 ಲಕ್ಷ 70 ಸಾವಿರ ಬಿಡಿಎ ನಿವೇಶನಗಳಿವೆ, ಹೌಸಿಂಗ್ ಸೊಸೈಟಿಯ 60 ಸಾವಿರ ನಿವೇಶನಗಳಿವೆ, 30ರಿಂದ 35 ಸಾವಿರ ಬಿಡಿಎ ಅಪ್ರೂವ್ಡ್ ಸೈಟ್‌ಗಳಿವೆ. ಉಳಿದ 17 ಲಕ್ಷ ಪ್ರಾಪರ್ಟಿಗಳನ್ನು ಕಾನೂನು ಬಾಹಿರ ಎಂದಿದ್ದಾರೆ. ಇದರ ಪರಿಣಾಮ ಕಳೆದ 3 ತಿಂಗಳಿಂದ ಸರ್ಕಾರಕ್ಕೆ ಸುಮಾರು ನಾಲ್ಕೈದು ಸಾವಿರ ಕೋಟಿ ರೂ. ಆದಾಯ ಕೈತಪ್ಪಿದೆ ಎಂದರು.

ಕಂದಾಯ ಸಚಿವ ಕೃಷ್ಣಬೈರೇಗೌಡ ಇದರ ಕಡೆ ಗಮನಕೊಡುತ್ತಿಲ್ಲ, ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಮನೀಷ್ ಮುದ್ಗಲ್ ತಮ್ಮದೇ ರೀತಿಯಲ್ಲಿ ಸಲಹೆಗಳನ್ನು ನೀಡುತ್ತಿದ್ದು, ಕೆಲಸಗಳೇ ಆಗುತ್ತಿಲ್ಲ, ಮಂಜೂರಾದ ವೈದ್ಯಕೀಯ ಸೀಟ್ ಪ್ರವೇಶಕ್ಕೆ ಹಣ ಕಟ್ಟಲು ಆಸ್ತಿ ಮಾರಾಟ ಮಾಡಲೂ ಸಾಧ್ಯವಾಗುತ್ತಿಲ್ಲ ಎಂದರು.

ಎನ್‌ಕಂಬರೆನ್ಸ್, ಸರ್ಟಿಫೈಡ್ ಕಾಪಿ ಸಿಗುತ್ತಿಲ್ಲ, ಎನ್‌ಕಂಬರೆನ್ಸ್ ಕೇಳಿದರೆ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಸರ್ವರ್ ಡೌನ್ ಎನ್ನುತ್ತಾರೆ. ಒಟಿಪಿ ಬಾರದೆ ನೋಂದಣಿ ನಡೆಯುತ್ತಿಲ್ಲ. ಕಾವೇರಿ–2 ಆ್ಯಪ್ ಬಂದ ಬಳಿಕ ಒಂದು ದಿನದ ಮುಂಚಿತವಾಗಿ ಹಣ ಪಾವತಿಸಬೇಕಿದೆ. ಸಾಫ್ಟ್‌ವೇರ್ ಸರ್ವರ್‌ಡೌನ್‌ನಿಂದ ನೋಂದಣಿ ನಡೆಯದೆ ಗೊಂದಲ ನಿರ್ಮಾಣವಾಗಿದೆ, ರಾಜ್ಯದಲ್ಲಿ ಕಳೆದ ಎರಡು ತಿಂಗಳುಗಳಿಂದ ಇ–ಖಾತಾ ಹೆಸರಿನಲ್ಲಿ ಉಪನೋಂದಣಿ ಕಚೇರಿಯಲ್ಲಿ ಕೆಲಸ ಸ್ಥಗಿತವಾಗಿದ್ದು, ಸಾಮಾನ್ಯ ಜನರು, ಬಡವರು ಕಷ್ಟಕಾಲಕ್ಕೆ ಆಸ್ತಿ ಮಾರಾಟ ಮಾಡಲಾಗದೆ, ಬ್ಯಾಂಕ್‌ನಲ್ಲಿ ಅಡಮಾನ ಮಾಡಿ ಸಾಲ ಪಡೆಯಲು ಹಾಗೂ ಕೈಸಾಲಕ್ಕೆ ತೊಂದರೆ ಆಗುತ್ತಿದೆ. ಕಂದಾಯ ಸಚಿವ ಕೃಷ್ಣಬೈರೇಗೌಡರು ಇಲಾಖೆ ಕೆಲಸ ಬಿಟ್ಟು ಬೇರೆ ಇಲಾಖೆಗಳ ಕೆಲಸಕ್ಕೆ ಮೂಗು ತೂರಿಸುತ್ತಿದ್ದಾರೆ. ಸಬ್‌ರಿಜಿಸ್ಟ್ರಾರ್ ಕಚೇರಿಯಲ್ಲಿ ಕಾವೇರಿ–2 ಸಾಫ್ಟ್‌ವೇರ್ ಹೆಸರಿನಲ್ಲಿ ಒಂದೊಂದು ಕೆಲಸಕ್ಕೆ ಒಂದೊಂದು ಸಾಫ್ಟ್‌ವೇರ್ ಅಭಿವೃದ್ಧಿಪಡಿಸಿದ್ದಾರೆ ಎಂದು ವಿವರಿಸಿದರು.

ಕೇಂದ್ರ ಬಜೆಟ್ ವಿರೋಧಿಸಿ ಸಿಐಟಿಯು ಪ್ರತಿಭಟನೆ

ಇದು ಜನ ವಿರೋಧಿ, ಕಾರ್ಮಿಕ ವಿರೋಧಿ, ಬಡವರ ವಿರೋಧಿ ಬಜೆಟ್



ಕೇಂದ್ರ ಸರ್ಕಾರದ ಬಜೆಟ್ ಖಂಡಿಸಿ ಸಿಐಟಿಯು (ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್) ಪದಾಧಿಕಾರಿಗಳು ಗುರುವಾರ ಹಳೇ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು.

ಮೈಸೂರು, ಫೆ.6(ಜಿಎ)–ಕೇಂದ್ರ ಸರ್ಕಾರದ ಬಜೆಟ್ ಖಂಡಿಸಿ ಸಿಐಟಿಯು (ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್) ಪದಾಧಿಕಾರಿಗಳು ಗುರುವಾರ ಹಳೇ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು.

ಕೇಂದ್ರ ಸರ್ಕಾರದ ಹಣಕಾಸು ಸಚಿವರು ಮಂಡಿಸಿರುವ ಕೇಂದ್ರ ಬಜೆಟ್ ಕಾರ್ಪೊರೇಟ್ ಪರವಾಗಿದ್ದು, ಜನ ವಿರೋಧಿ, ಕಾರ್ಮಿಕ ವಿರೋಧಿ, ಬಡವರ ವಿರೋಧಿಯಾಗಿದೆ. ಜನಪರ, ಅಭಿವೃದ್ಧಿ ಪರ ಇಲ್ಲ. ಸರ್ಕಾರ ತನ್ನ ಕಾರ್ಪೊರೇಟ್ ವರ್ಗದ ಪರವಾದ ಪಕ್ಷಪಾತವನ್ನು ಬಜೆಟ್‌ನಲ್ಲಿ ಪ್ರದರ್ಶಿಸಿದೆ. ಆರ್ಥಿಕ ಸಮೀಕ್ಷೆಯ ಕಟುವಾದ ಸಂಶೋಧನೆಗಳ ಬಗ್ಗೆ ಅಸಡ್ಡೆ ತೋರಿಸಿದೆ. ವಾಸ್ತವವಾಗಿ ಎನ್‌ಡಿಎ ಸರ್ಕಾರದ ವಿನಾಶಕಾರಿ ಯೋಜನೆ ಅದರ ವಿಕಾಸ್ ಭಾರತ್ ಕಾರ್ಯಕ್ರಮದ ಘೋರ ಶಬ್ದದ ನಿಜವಾದ ಮುಖವನ್ನು ಬಹಿರಂಗಪಡಿಸಿದೆ ಎಂದು ಅವರು ಕಿಡಿಕಾರಿದರು.

ಆರ್ಥಿಕತೆಯಲ್ಲಿ ನಿಧಾನಗತಿಯ ಬೆಳವಣಿಗೆ, ಜನಸಾಮಾನ್ಯರ ಜೀವನ ಮತ್ತು ಜೀವನೋಪಾಯದ ಮೇಲೆ ವಿನಾಶಕಾರಿ ಪರಿಣಾಮ ಬೀರುತ್ತದೆ. ಕಾರ್ಪೊರೇಟ್‌ಗಳು ಲಾಭ ಮಾಡಿಕೊಳ್ಳುವ ಆರ್ಥಿಕ ನೀತಿಯ ಕೊಳಕು ವಿಕೃತಿ ಪ್ರತಿಬಿಂಬಿಸುತ್ತದೆ. ಗುಣಮಟ್ಟದ ಉದ್ಯೋಗ ಸೃಷ್ಟಿ, ರಾಷ್ಟ್ರೀಯ ಬೊಕ್ಕಸಕ್ಕೆ ಸಂಪತ್ತು ಸೃಷ್ಟಿಗೆ ಮೌಲ್ಯಯುತ ಕೊಡುಗೆ ನೀಡದೆ ಮೋದಿ ಆಡಳಿತ ನೀತಿ ಪಕ್ಷಪಾತದಿಂದ, ಕಾನೂನುಬಾಹಿರ ಸಂಪತ್ತನ್ನು ಗಳಿಸಿದ ಕಾರ್ಪೊರೇಟ್ ಮತ್ತು ಶ್ರೀಮಂತರ ಪರವಾಗಿದೆ. ನಿರುದ್ಯೋಗ, ಬಡತನ, ರೈತರು, ಕೃಷಿ ಕ್ಷೇತ್ರಕ್ಕೆ ಯಾವುದೇ ಕೊಡುಗೆ ನೀಡಿಲ್ಲ ಎಂದು ಅವರು ದೂರಿದರು.

ಕೃಷಿ ಬಗ್ಗೆ ಹೆಚ್ಚು ಮಾತನಾಡುತ್ತಿದ್ದರೂ, ಬಜೆಟ್‌ನಲ್ಲಿ ಕಡಿಮೆ ಅನುದಾನ ಮೀಸಲಿಟ್ಟಿದ್ದಾರೆ. ಗ್ರಾಮೀಣಾಭಿವೃದ್ಧಿಗೂ ಹೆಚ್ಚು ಅನುದಾನ ನೀಡಿಲ್ಲ. ರೈಲ್ವೆಗೆ ಮೀಸಲಿಡುತ್ತಿದ್ದ ಅನುದಾನವನ್ನೂ ಕಡಿತಗೊಳಿಸಿದೆ. ದೇಶಾದ್ಯಂತ ಉಲ್ಬಣಗೊಳ್ಳುತ್ತಿರುವ ಮತ್ತು ವಿಸ್ತರಿಸುತ್ತಿರುವ ಬಡತನದ ಹಿನ್ನೆಲೆಯಲ್ಲಿ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಮೇಲಿನ ಹಂಚಿಕೆಯನ್ನು ಕಡಿಮೆ ಮಾಡಲಾಗಿದೆ. ಕಾರ್ಮಿಕರಿಗೆ ಅನುಕೂಲವಾಗುವ ಯಾವ ಯೋಜನೆಯನ್ನೂ ಸರ್ಕಾರ ಘೋಷಿಸಿಲ್ಲ. ಅಲ್ಲದೆ ಎಲ್ಲಾ ರಾಜ್ಯಗಳನ್ನು ಸಮಾನವಾಗಿ ಕಾಣದೆ ತಾರತಮ್ಯ ಮಾಡಿ ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿ ನಡೆದುಕೊಂಡಿದೆ ಎಂದು ಅವರು ಆರೋಪಿಸಿದರು. ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ಎನ್.ಕೆ.ಬಾಲಾಜಿ ರಾವ್ ಮತ್ತಿತರರು ಪಾಲ್ಗೊಂಡಿದ್ದರು.

ಫೆ.21, ರಾಜ್ಯ ಮಟ್ಟದ ಸಮೂಹ ಜಾನಪದ ಗೀತೆ, ಭಜನೆ ಸ್ಪರ್ಧೆ

ಮೈಸೂರು, ಫೆ.6–ಮೈಸೂರಿನ ಮಹಾರತ್ನ ಟ್ರಸ್ಟ್ ವತಿಯಿಂದ ಮೂರನೇ ವಾರ್ಷಿಕೋತ್ಸವದ ಪ್ರಯುಕ್ತ ರಾಜ್ಯ ಮಟ್ಟದ ಸಮೂಹ ಜಾನಪದ ಗೀತೆ, ಭಜನೆ ಸ್ಪರ್ಧೆಯನ್ನು ಫೆ.21ರಂದು ಬೆಳಗ್ಗೆ 9.30ಕ್ಕೆ ನಂಜುಮಳಿಗೆ ಹತ್ತಿರವಿರುವ ನಾದಬ್ರಹ್ಮ ಸಂಗೀತ ಸಭಾದಲ್ಲಿ ಏರ್ಪಡಿಸಲಾಗಿದೆ.

16 ವರ್ಷ ಮೇಲ್ಪಟ್ಟ ಮಹಿಳಾ ಮತ್ತು ಪುರುಷರು ಭಾಗವಹಿಸಬಹುದು (ಕಾಲೇಜು ವಿದ್ಯಾರ್ಥಿಗಳು ಮಾತ್ರ), ಗಾಯನದ ಅವಧಿ ಕನಿಷ್ಠ 4 ನಿಮಿಷ, ಗರಿಷ್ಠ 5 ನಿಮಿಷ. ಗಾಯನಕ್ಕೆ ಅವಶ್ಯಕವಾದ ಪರಿಕರಗಳನ್ನು ಸ್ಪರ್ಧಿಗಳೇ ತರತಕ್ಕದ್ದು. ಕರೋಕೆ ಹಿನ್ನೆಲೆ ಸಂಗೀತಕ್ಕೆ ಅವಕಾಶವಿರುವುದಿಲ್ಲ. ಕನಿಷ್ಠ 5 ಜನ ಗರಿಷ್ಠ 8 ಸ್ಪರ್ಧಾಳುಗಳು (ಇಬ್ಬರು ಪಕ್ಕವಾದ್ಯದವರನ್ನು ಬಳಸಿಕೊಳ್ಳಬಹುದು), ಭಜನಾ ಸ್ಪರ್ಧೆಯಲ್ಲಿ ಅಂಕಿತನಾಮವುಳ್ಳ ಭಕ್ತಿಗೀತೆಗಳನ್ನು ಹಾಡಬಹುದು. ಭಾಗವಹಿಸಿದ ಎಲ್ಲಾ ಸ್ಪರ್ಧಿಗಳಿಗೆ ಪ್ರಶಂಸನಾ ಪತ್ರ ನೀಡಲಾಗುವುದು. ವಿಜೇತರಿಗೆ ಪ್ರಥಮ ಬಹುಮಾನ ರೂ. 5000, ದ್ವಿತೀಯ ರೂ. 3000, ತೃತೀಯ ರೂ. 2000 ನೀಡಲಾಗುವುದು. ಮಾಹಿತಿಗೆ ಮೊ. 9141537956, 9740287860 ಸಂಪರ್ಕಿಸಬಹುದು.

ದೇಶ – ವಿದೇಶ

ಜಿ20 ಸಭೆಯಲ್ಲಿ ಭಾಗವಹಿಸುವುದಿಲ್ಲ: ಯುಎಸ್ ಮತ್ತೊಂದು ಶಾಕ್



ವಾಷಿಂಗ್‌ಟನ್: ಅಮೆರಿಕಾದಲ್ಲಿ ಡೊನಾಲ್ಡ್ ಟ್ರಂಪ್ ಸರ್ಕಾರ ಅಸ್ತಿತ್ವಕ್ಕೆ ಬಂದ ಬೆನ್ನಲ್ಲೆ ಹಲವು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದೆ. WHOದಿಂದ ಹೊರಬರುವುದಾಗಿ ಘೋಷಣೆ ಮಾಡಿರುವ ಟ್ರಂಪ್ ಸರ್ಕಾರ, ಈಗ ದಕ್ಷಿಣ ಆಫ್ರಿಕಾದಲ್ಲಿ ನಡೆಯಲಿರುವ ಜಿ20 ಸಭೆಯಲ್ಲಿಯೂ ಭಾಗವಹಿಸುವುದಿಲ್ಲ ಎಂದು ಹೇಳಿದೆ. ಅಮೇರಿಕಾ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ಈ ವಿಷಯವನ್ನು ಸ್ಪಷ್ಟಪಡಿಸಿದ್ದಾರೆ. ಖಾಸಗಿ ಆಸ್ತಿಯನ್ನು ಸ್ವಾಧೀನಪಡಿಸಿಕೊಳ್ಳುವುದು ಸೇರಿದಂತೆ ಹಲವು ವಿಷಯಗಳಲ್ಲಿ ದಕ್ಷಿಣ ಆಫ್ರಿಕಾದ ನಡೆಯನ್ನು ಅಮೆರಿಕ ವಿರೋಧಿಸುತ್ತಿದ್ದು, ತನ್ನ ಪ್ರತಿಭಟನೆಯನ್ನು ವ್ಯಕ್ತಪಡಿಸುವುದಕ್ಕಾಗಿ ಅಮೆರಿಕಾ ಜೋಹಾನ್ಸ್ ಬರ್ಗ್‌ನಲ್ಲಿ ನಡೆಯಲಿರುವ ಜಿ20 ಸಭೆಯಲ್ಲಿ ಭಾಗಿಯಾಗುವುದಿಲ್ಲ ಎಂದು ವಿದೇಶಾಂಗ ಕಾರ್ಯದರ್ಶಿ ಹೇಳಿದ್ದಾರೆ. ಐಕಮತ್ಯ, ಸಮಾನತೆ ಮತ್ತು ಸುಸ್ಥಿರತೆಯನ್ನು ಉತ್ತೇಜಿಸಲು ದಕ್ಷಿಣ ಆಫ್ರಿಕಾ ಜಿ20 ವೇದಿಕೆಯನ್ನು ಬಳಸುವುದನ್ನು ಟೀಕಿಸಿದರು. ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಗಳನ್ನು ಕಾಪಾಡುವುದು ತನ್ನ ಪ್ರಾಥಮಿಕ ಜವಾಬ್ದಾರಿ. ನನ್ನ ಕೆಲಸ ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಗಳನ್ನು ಮುನ್ನಡೆಸುವುದು, ಅಮೆರಿಕನ್ ವಿರೋಧಿತ್ವವನ್ನು ಮರೆಮಾಚುವುದು ಅಲ್ಲ ಎಂದರು.

ಕೊಯಮತ್ತೂರು ಬಳಿ ಒಂಟಿಸಲಗನ ದಾಳಿಗೆ ಜರ್ಮನ್ ಪ್ರವಾಸಿಗ ಸಾವು



ಕೊಯಮತ್ತೂರು: ತನ್ನ ದುಬಾರಿ ಬೈಕ್‌ನಲ್ಲಿ ಭಾರತ ಪ್ರವಾಸ ಕೈಗೊಂಡಿದ್ದ ಜರ್ಮನಿ ಮೂಲದ ಪ್ರವಾಸಿಗನ ಮೇಲೆ ಒಂಟಿಸಲಗವೊಂದು ದಾಳಿ ಮಾಡಿರುವ ಭೀಕರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

ತಮಿಳುನಾಡಿನ ಕೊಯಮತ್ತೂರಿನ ವಾಲ್ಪಾರೈ ಬಳಿಯ ಘಾಟಿ ರಸ್ತೆಯಲ್ಲಿ ಈ ಘಟನೆ ನಡೆದಿದ್ದು, ಸುಮಾರು 77 ವರ್ಷ ವಯಸ್ಸಿನ ಜರ್ಮನ್ ಪ್ರವಾಸಿಗನ ಮೇಲೆ ಒಂಟಿಸಲಗ ದಾಳಿ ಮಾಡಿದೆ. ಕಾಡಾನೆ ದಾಳಿಯಿಂದಾಗಿ ಜರ್ಮನ್ ಪ್ರವಾಸಿಗ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಬೈಕ್‌ನಲ್ಲಿ ತೆರಳುತ್ತಿದ್ದ ಜರ್ಮನ್ ಪ್ರವಾಸಿಗ ರಸ್ತೆ ಪಕ್ಕಕ್ಕಿದ್ದ ಆನೆಯನ್ನು ನೋಡಿ, ಮತ್ತೊಂದು ಬದಿಯಲ್ಲಿ ತಾನು ಹೋಗಬಹುದು ಎಂದು ಭಾವಿಸಿ ವೇಗವಾಗಿ ಬೈಕ್ ನುಗ್ಗಿಸಿದ್ದಾನೆ. ಈ ವೇಳೆ ಬೈಕ್‌ನ ಶಬ್ದ ಕೇಳಿ ತಿರುಗಿದ ಕಾಡಾನೆ ಏಕಾಏಕಿ ಪ್ರವಾಸಿಗನ ಬೈಕ್‌ನತ್ತ ನುಗ್ಗಿ ದಾಳಿ ಮಾಡಿದೆ. ಮೊದಲು ಆತನನ್ನು ತಳ್ಳಿದ ಆನೆ ಬಳಿಕ ಹಿಂದೆ ಬಂದಿತ್ತು. ಆದರೆ ಆತ ಯಾವಾಗ ಮತ್ತೆ ಎದ್ದು ಬರಲು ಪ್ರಯತ್ನಿಸಿದನೋ ಆಗ ಮತ್ತೆ ಆತನ ಮೇಲೆ ದಾಳಿ ಮಾಡಿದೆ. ಈ ವೇಳೆ ಆತ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.

ಬಾಂಗ್ಲಾದೇಶದಲ್ಲಿ ಮಾಜಿ ಅಧ್ಯಕ್ಷ ಶೇಕ್ ಮುಜಿಬುರ್ ಮನೆಗೆ ಬೆಂಕಿ



ಢಾಕಾ: ಬಾಂಗ್ಲಾದಲ್ಲಿ ಮತ್ತೆ ಹಿಂಸಾಚಾರ ಭುಗಿಲೆದ್ದಿದೆ, ಮಾಜಿ ಅಧ್ಯಕ್ಷ ಶೇಕ್ ಮುಜಿಬುರ್ ರೆಹಮಾನ್ ಮನೆಗೆ ಬೆಂಕಿ ಹಚ್ಚಲಾಗಿದೆ. ಫೆ.6ರಂದು ಅವಾಮಿ ಲೀಗ್ ದೇಶಾದ್ಯಂತ ಪ್ರತಿಭಟನೆ ನಡೆಸಲು ಉದ್ದೇಶಿಸಿರುವ ಹಿನ್ನೆಲೆಯಲ್ಲಿ ರಾಜಧಾನಿ ಢಾಕಾ ಸೇರಿದಂತೆ ಬಾಂಗ್ಲಾದೇಶದ ಹಲವಾರು ನಗರಗಳಲ್ಲಿ ಹಿಂಸಾಚಾರ ಭುಗಿಲೆದ್ದಿದೆ.

ಬಾಂಗ್ಲಾದೇಶದಲ್ಲಿ ಸಾರಿಗೆ ವ್ಯವಸ್ಥೆಯನ್ನು ಸ್ಥಗಿತಗೊಳಿಸಲು ಮತ್ತು ಹೆದ್ದಾರಿಗಳು ಸೇರಿದಂತೆ ಹಲವಾರು ನಗರಗಳನ್ನು ನಿರ್ಬಂಧಿಸಲು ಅವಾಮಿ ಲೀಗ್ ಸಿದ್ಧತೆ ನಡೆಸಿತ್ತು. ಮೊಹಮ್ಮದ್ ಯೂನಸ್ ನೇತೃತ್ವದ ಪ್ರಸ್ತುತ ಮಧ್ಯಂತರ ಸರ್ಕಾರ ಮತ್ತು ಅವಾಮಿ ಲೀಗ್ ನಾಯಕರು ಹಾಗೂ ಕಾರ್ಮಿಕರ ಮೇಲಿನ ಹಿಂಸಾಚಾರದ ವಿರುದ್ಧ ಅವಾಮಿ ಲೀಗ್ ಬೃಹತ್ ಪ್ರತಿಭಟನೆಗೆ ಕರೆ ನೀಡಿತ್ತು. ಈ ವೇಳೆ ಹಿಂಸಾಚಾರ ಭುಗಿಲೆದ್ದು, ಬಾಂಗ್ಲಾದೇಶದ ಸ್ವಾತಂತ್ರ್ಯ ಚಳವಳಿಯ ನಾಯಕ ಶೇಖ್ ಮುಜಿಬುರ್ ರೆಹಮಾನ್ ಅವರ ನಿವಾಸಕ್ಕೆ ಬೆಂಕಿ ಹಚ್ಚಲಾಯಿತು. ಅವರು 1971ರಲ್ಲಿ ಪಾಕಿಸ್ತಾನದಿಂದ ದೇಶವನ್ನು ಬೇರ್ಪಡಿಸುವುದಾಗಿ ಘೋಷಿಸಿದರು. 1975ರಲ್ಲಿ ಅದೇ ಮನೆಯಲ್ಲಿ ಅವರನ್ನು ಕೊಲ್ಲಲಾಯಿತು.

ಸರ್ಕಾರಿ ಶಾಲೆಯ ಬಾಲಕಿ ಮೇಲೆ ಅತ್ಯಾಚಾರ; ಶಿಕ್ಷಕರ ಬಂಧನ



ಕೃಷ್ಣಗಿರಿ: ನಕಲಿ ಎನ್‌ಸಿಸಿ ಶಿಬಿರಗಳಲ್ಲಿ ವಿದ್ಯಾರ್ಥಿನಿಯರ ಮೇಲೆ ಲೈಂಗಿಕ ದೌರ್ಜನ್ಯ ನಡೆದ ಆರು ತಿಂಗಳ ನಂತರ, ಬರ್ಗೂರ್ ಸರ್ಕಾರಿ ಶಾಲೆಯ ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಶಿಕ್ಷಕರನ್ನು ಬಂಧಿಸಲಾಗಿದೆ. ಬಾಲಕಿಯ ಸಂಬಂಧಿಕರು ಆರೋಪಿಗೆ ಮರಣದಂಡನೆ ವಿಧಿಸಬೇಕೆಂದು ಶಾಲೆಯ ಮುಂದೆ ಪ್ರತಿಭಟನೆ ನಡೆಸಿದರು. 50ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಸ್ಥಳಕ್ಕೆ ಕರೆಸಲಾಯಿತು. ಅಧಿಕಾರಿಗಳೊಂದಿಗೆ ಮಾತುಕತೆ ನಂತರ ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳಲಾಯಿತು. ಸೋಮವಾರ ಸಂಜೆ, ಬಾಲಕಿಯ ತಾಯಿ ಶಾಲೆಗೆ ತೆರಳಿ ಜ.3ರಿಂದ ಅನಾರೋಗ್ಯ ರಜೆಯಲ್ಲಿರುವ ತನ್ನ ಮಗಳ ಬಗ್ಗೆ ಯಾರೂ ಏಕೆ ವಿಚಾರಿಸಲಿಲ್ಲ ಎಂದು ಮುಖ್ಯೋಪಾಧ್ಯಾಯಿನಿ ಅವರನ್ನು ಪ್ರಶ್ನಿಸಿದ್ದಾರೆ. ನಂತರ ಮುಖ್ಯೋಪಾಧ್ಯಾಯಿನಿ ಮತ್ತು ಒಬ್ಬ ಶಿಕ್ಷಕಿ ಸಂತ್ರಸ್ತೆ ಬಾಲಕಿ ಮನೆಗೆ ಭೇಟಿ ನೀಡಿದ್ದಾರೆ. ಈ ವೇಳೆ ಜನವರಿ 2 ಮತ್ತು 3ರಂದು ಮೂವರು ಶಿಕ್ಷಕರು ತನ್ನ ಮೇಲೆ ಅತ್ಯಾಚಾರ ಮಾಡಿದ್ದಾರೆ ಎಂದು ಬಾಲಕಿ ಹೇಳಿದ್ದಳು.

ಮಧ್ಯಪ್ರದೇಶದಲ್ಲಿ ಐಎಎಫ್‌ನ ಮಿರಾಜ್ ಯುದ್ಧ ವಿಮಾನ ಪತನ



ಶಿವಪುರಿ: ಮಧ್ಯಪ್ರದೇಶದ ಶಿವಪುರಿ ಜಿಲ್ಲೆಯ ಬಹ್ರೆತಾ ಸಾನಿ ಗ್ರಾಮದ ಬಳಿ ಗುರುವಾರ ಭಾರತೀಯ ವಾಯುಪಡೆ (ಐಎಎಫ್)ಯ ಮಿರಾಜ್ 2000 ತರಬೇತಿನಿರತ ಯುದ್ಧ ವಿಮಾನ ಪತನಗೊಂಡಿದೆ. ವಿಮಾನದಲ್ಲಿದ್ದ ಇಬ್ಬರೂ ಪೈಲಟ್‌ಗಳು ಸುರಕ್ಷಿತವಾಗಿ ಹೊರ ಜಿಗಿದಿದ್ದು, ಘಟನೆಯಲ್ಲಿ ಯಾವುದೇ ಸಾವುನೋವುಗಳು ವರದಿಯಾಗಿಲ್ಲ. ಅಪಘಾತದ ನಂತರ, ಸ್ಥಳೀಯ ಅಧಿಕಾರಿಗಳು, ರಕ್ಷಣಾ ತಂಡವನ್ನು ತ್ವರಿತವಾಗಿ ಸ್ಥಳಕ್ಕೆ ಕಳುಹಿಸಿದರು. ಯುದ್ಧ ವಿಮಾನ ಪತನಕ್ಕೆ ಕಾರಣ ಇನ್ನೂ ತಿಳಿದಿಲ್ಲ. ಘಟನಾ ಸ್ಥಳದಲ್ಲಿ ಬೆಂಕಿ ಮತ್ತು ಹೊಗೆ ಕಂಡು ಬಂದ ಹಿನ್ನೆಲೆಯಲ್ಲಿ ಸ್ಥಳೀಯರು ಸ್ಥಳಕ್ಕೆ ಧಾವಿಸಿ, ವಿಡಿಯೋ ಮಾಡಿದ್ದಾರೆ. ವಿಡಿಯೋದಲ್ಲಿ ಹೊಲದಲ್ಲಿ ವಿಮಾನದ ಅವಶೇಷಗಳು ಬಿದ್ದಿದ್ದು, ನೂರಾರು ಜನ ಅವಶೇಷಗಳ ಸುತ್ತಲೂ ಜಮಾಯಿಸಿದ್ದಾರೆ. ಇನ್ನು ರಕ್ಷಣಾ ಸಚಿವಾಲಯ ಘಟನೆ ಬಗ್ಗೆ ತನಿಖೆ ನಡೆಸಲು ಸೂಚಿಸಿದೆ ಎಂದು ತಿಳಿದುಬಂದಿದೆ.

ಮೈಸೂರು ಮಿತ್ರ ಶುಕ್ರವಾರ 7 ಫೆಬ್ರವರಿ 2025

ಇಂದು ಮಡಿಕೇರಿಯಲ್ಲಿ ಪಾದಯಾತ್ರೆ ಸಮಾರೋಪ

- 15 ರಿಂದ 25 ಸಾವಿರಕ್ಕೂ ಹೆಚ್ಚಿನ ಜನರು ಭಾಗವಹಿಸುವ ನಿರೀಕ್ಷೆ
- 'ಕೊಡವಾಮೆ ಬಾಳೋ' ಘೋಷಣೆಯಡಿ ಕೊಡವರ ಹೋರಾಟ



'ಕೊಡವಾಮೆ ಬಾಳೋ' ಪಾದಯಾತ್ರೆಯಲ್ಲಿ ಭಾರಿ ಸಂಖ್ಯೆಯಲ್ಲಿ ಭಾಗವಹಿಸಿದ್ದ ಕೊಡವ ಮತ್ತು ಕೊಡವ ಭಾಷಿಕ ಸಮುದಾಯಗಳು.

ಮಡಿಕೇರಿ, ಫೆ.6–ದಕ್ಷಿಣ ಕೊಡಗಿನ ಕುಟ್ಟದಿಂದ ಕಳೆದ ಭಾನುವಾರದಿಂದ ಆರಂಭವಾಗಿರುವ 'ಕೊಡವಾಮೆ ಬಾಳೋ' ಘೋಷಣೆಯ ಕೊಡವ ಮತ್ತು ಕೊಡವ ಭಾಷಿಕರ ಬೃಹತ್ ಪಾದಯಾತ್ರೆ ಫೆ.7ರಂದು (ಶುಕ್ರವಾರ) ಜಿಲ್ಲಾ ಕೇಂದ್ರ ಮಡಿಕೇರಿಯಲ್ಲಿ ಸಮಾರೋಪಗೊಳ್ಳಲಿದೆ.

ಅಖಿಲ ಕೊಡವ ಸಮಾಜದ ನೇತೃತ್ವದಲ್ಲಿ ಕೊಡವ ಭಾಷೆ ಹಾಗೂ ಸಂಸ್ಕೃತಿ ಉಳಿವಿಗೆ ಅಗತ್ಯ ಕ್ರಮಕ್ಕೆ ಆಗ್ರಹಿಸಿ ಸರ್ಕಾರದ ಗಮನ ಸೆಳೆಯುವ ನಿಟ್ಟಿನಲ್ಲಿ ಕೊಡವರು ಕುಟ್ಟ–ಮಡಿಕೇರಿಯ 84 ಕಿ.ಮೀ. ಪಾದಯಾತ್ರೆ ನಡೆಸುತ್ತಿದ್ದಾರೆ. ಪ್ರತಿನಿತ್ಯದ ಪಾದಯಾತ್ರೆಯಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಕೊಡವರು ಪಾಲ್ಗೊಳ್ಳುತ್ತಿದ್ದು, ಶುಕ್ರವಾರ ಮಡಿಕೇರಿಯಲ್ಲಿ ನಡೆಯುವ ಸಮಾರೋಪದಲ್ಲಿ 15 ರಿಂದ 25 ಸಾವಿರಕ್ಕೂ ಹೆಚ್ಚಿನ ಜನರು ಭಾಗವಹಿಸಲಿದ್ದಾರೆ.

ಪೊಲೀಸ್ ಸರ್ಪಗಾವಲು: ಭಾರಿ ಸಂಖ್ಯೆಯಲ್ಲಿ ಕೊಡವ ಸಮುದಾಯವರು ಸಮಾರೋಪದಲ್ಲಿ ಪಾಲ್ಗೊಳ್ಳುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಜಿಲ್ಲಾ ಪೊಲೀಸ್ ಹಾಗೂ ಹೊರ ಜಿಲ್ಲೆಗಳ ವಿವಿಧ ಘಟಕಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿದೆ.

ಬಂದೋಬಸ್ತ್‌ನಲ್ಲಿ ಪೊಲೀಸ್ ಅಧೀಕ್ಷಕರು, ಹೆಚ್ಚುವರಿ ಪೊಲೀಸ್ ಅಧೀಕ್ಷಕರೊಂದಿಗೆ 6 ಉಪಾಧೀಕ್ಷಕರು, 18 ನಿರೀಕ್ಷಕರು, 35 ಉಪನಿರೀಕ್ಷಕರು, 55 ಸಹಾಯಕ ಉಪನಿರೀಕ್ಷಕರು, 430 ಹೆಡ್ ಕಾನ್ಸ್‌ಟೇಬಲ್ಸ್ ಮತ್ತು ಕಾನ್ಸ್‌ಟೇಬಲ್ಸ್, 5 ಪ್ಲಟೂನ್ ಕೆಎಸ್‌ಆರ್‌ಪಿ, 70 ಡಿಎಆರ್ ಸಿಬ್ಬಂದಿ ಸೇರಿದಂತೆ 700ಕ್ಕೂ ಅಧಿಕ ಪೊಲೀಸರನ್ನು ನಿಯುಕ್ತಗೊಳಿಸಲಾಗಿದೆ.

'ಕೊಡವಾಮೆ ಬಾಳೋ' ಪಾದಯಾತ್ರೆ ಹಿನ್ನೆಲೆಯಲ್ಲಿ ಫೆ.7ರಂದು ನಗರದಲ್ಲಿ ವಾಹನ ಪಾರ್ಕಿಂಗ್ ವ್ಯವಸ್ಥೆಯಲ್ಲಿ ತಾತ್ಕಾಲಿಕ ಬದಲಾವಣೆ ಮಾಡಲಾಗಿದೆ. ಸುದರ್ಶನ ರಸ್ತೆ, ಜಿಲ್ಲಾ ಆಸ್ಪತ್ರೆ, ಜನರಲ್ ತಿಮ್ಮಯ್ಯ ವೃತ್ತದಿಂದ ಮಂಗಳೂರು ರಸ್ತೆ, ವಿನೋದ್ ಮೆಡಿಕಲ್ ಮುಂಭಾಗ, ಬಾಲಾಜಿ ಸ್ಟೋರ್ ಮುಂಭಾಗ, ಹಳೇ ಖಾಸಗಿ ಬಸ್ ನಿಲ್ದಾಣ ಆವರಣ, ಟ್ಯಾಕ್ಸಿ ನಿಲ್ದಾಣ, ಕಾಲೇಜು ರಸ್ತೆ, ಗಣಪತಿ ಬೀದಿ, ಮಾರುಕಟ್ಟೆ ಆವರಣ, ಜೂನಿಯರ್ ಕಾಲೇಜು ರಸ್ತೆ ಸೇರಿದಂತೆ ಜನಸಂದಣಿ ಪ್ರದೇಶಗಳಲ್ಲಿ ಎಲ್ಲಾ ವಾಹನ ಪಾರ್ಕಿಂಗ್ ನಿಷೇಧ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವಾಹನ ಪಾರ್ಕಿಂಗ್ ವ್ಯವಸ್ಥೆ: ಪಾದಯಾತ್ರೆ ಮೂರ್ನಾಡು ಮಾರ್ಗವಾಗಿ ಮಡಿಕೇರಿಗೆ ಬರುವ ಹಿನ್ನೆಲೆಯಲ್ಲಿ ಕಗ್ಗೋಡ್ಲು ಅಂಬರ ರೆಸಾರ್ಟ್ ಮೈದಾನ, ಮೇಕೇರಿ ಶಾಲಾ ಮೈದಾನದಲ್ಲಿ ವಾಹನ ನಿಲುಗಡೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಭಾಗಮಂಡಲ ಕಡೆಯಿಂದ ಬರುವ ವಾಹನಗಳ ನಿಲುಗಡೆಗೆ ತಾಳತ್‌ಮನೆ ನೇತಾಜಿ ಮೈದಾನ, ಗ್ಲಾಸ್ ಬ್ರಿಡ್ಜ್ ಬಳಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಸಿದ್ದಾಪುರ, ಚೆಟ್ಟಳ್ಳಿ, ಕುಶಾಲನಗರ ವಿಭಾಗಗಳಿಂದ ಬರುವವರಿಗೆ ಚೈನ್ ಗೇಟ್ ಬಳಿಯ ಕೊಡವ ಸಮಾಜದ ಜಾಗ, ಆರ್‌ಎಂಸಿ ಮೈದಾನ, ಗಾಳಿಬೀಡು ವಿಭಾಗದಿಂದ ಬರುವವರಿಗೆ ಐಟಿಐ ಮೈದಾನ, ಸಂತ ಜೋಸೆಫರ ಶಾಲಾ ಮೈದಾನ ಮತ್ತು ಹೊಸ ಖಾಸಗಿ ಬಸ್ ನಿಲ್ದಾಣದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

ಇಂದು ಮದ್ಯ ಮಾರಾಟ ನಿಷೇಧ

ಮಡಿಕೇರಿ: 'ಕೊಡವಾಮೆ ಬಾಳೋ' ಪಾದಯಾತ್ರೆ ಹಿನ್ನೆಲೆಯಲ್ಲಿ ಫೆ.7ರಂದು ಬೆಳಗ್ಗೆ 6 ರಿಂದ ಮಧ್ಯರಾತ್ರಿ 12 ಗಂಟೆವರೆಗೆ ಮಡಿಕೇರಿ ನಗರ ವ್ಯಾಪ್ತಿಯ ಎಲ್ಲಾ ಮದ್ಯದ ಅಂಗಡಿ, ಬಾರ್, ಹೋಟೆಲ್ ಮತ್ತು ಕ್ಲಬ್‌ಗಳಲ್ಲಿ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಆದೇಶಿಸಿದ್ದಾರೆ.

ಯಾವುದೇ ಅಹಿತಕರ ಘಟನೆ ಸಂಭವಿಸಿದಲ್ಲಿ ಜಿಲ್ಲಾ ಪೊಲೀಸ್ ಕಚೇರಿ ದೂ.ಸಂ:08272–228330 ಅಥವಾ ಮೊ.ಸಂ: 9480804900, ಸ್ಥಳೀಯ ಪೊಲೀಸ್ ಠಾಣೆ, ತುರ್ತು ಸಹಾಯವಾಣಿ 112ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ತಿಳಿಸಿದ್ದಾರೆ.

ಮಹಾನ್ ಪುರುಷರ ಬೃಹತ್ ಫ್ಲೆಕ್ಸ್‌ಗಳ ಅಳವಡಿಕೆ

ಕೊಡವಾಮೆ ಬಾಳೋ ಪಾದಯಾತ್ರೆ 5ನೇ ದಿನವಾದ ಗುರುವಾರ ವಿರಾಜಪೇಟೆಯ ನೆಲ್ಲಿಮಾನಿಯಿಂದ ಮೇಕೇರಿ ತಲುಪಿದೆ. ಸಹಸ್ರಾರು ಸಂಖ್ಯೆಯ ಕೊಡವ ಮತ್ತು ಕೊಡವ ಭಾಷಿಕ ಸಮುದಾಯಗಳ ಸದಸ್ಯರು ಪಾಲ್ಗೊಂಡಿದ್ದರು.

ಕೊಡವ ಸಮುದಾಯದಲ್ಲಿ ತಮ್ಮ ಪರಾಕ್ರಮ, ಕೆಚ್ಚೆದೆಯ ಹೋರಾಟಗಳಿಂದ ಗಮನ ಸೆಳೆದಿರುವ ಐತಿಹಾಸಿಕ ಮಹಾನ್ ಪುರುಷರ ಬೃಹತ್ ಫ್ಲೆಕ್ಸ್‌ಗಳನ್ನು ಮಡಿಕೇರಿ ನಗರದ ಮುಖ್ಯ ರಸ್ತೆಯಲ್ಲಿ ಅಳವಡಿಸುವ ಮೂಲಕ ಪಾದಯಾತ್ರೆಗೆ ವಿಶೇಷ ಮೆರುಗು ನೀಡುವ ಪ್ರಯತ್ನ ನಡೆದಿದೆ.

ಕೊಡವರ ಐತಿಹಾಸಿಕ ಪುರುಷರಾದ ಅಪ್ಪಚ್ಚೀರ ಮಂದಣ್ಣ, ಬೊಟ್ಟೋಳಂಡ ಮಾಣಿಚ, ಕುಲ್ಲೇಟಿರ ಪೊನ್ನಣ್ಣ, ಕನ್ನಂಡ ದೊಡ್ಡಯ್ಯ ಅವರ ಫ್ಲೆಕ್ಸ್‌ಗಳು ಗಮನ ಸೆಳೆಯುತ್ತಿವೆ. ಪಾದಯಾತ್ರೆ ಸಮಾರೋಪ ನಡೆಯಲಿರುವ ಮಡಿಕೇರಿ ಜನರಲ್ ತಿಮ್ಮಯ್ಯ ಕ್ರೀಡಾಂಗಣದ ಬಳಿಯ ಕೊಡವ ಸಮಾಜ 'ಮಂದ್' ಅನ್ನು ಸ್ವಚ್ಛಗೊಳಿಸಿ, ಅಲಂಕಾರ ಮಾಡಲಾಗಿದೆ. ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಸಹಸ್ರಾರು ಜನರಿಗೆ ಮಧ್ಯಾಹ್ನದ ಭೋಜನಕ್ಕಾಗಿ ಅಗತ್ಯ ಸಿದ್ಧತೆ ನಡೆದಿದೆ. 20 ಊಟದ ಕೌಂಟರ್‌ಗಳನ್ನು ವ್ಯವಸ್ಥೆಗೊಳಿಸಲಾಗಿದೆ.



ಮಡಿಕೇರಿಯಲ್ಲಿ ಅಳವಡಿಸಲಾಗಿರುವ ಕೊಡವ ಸಮುದಾಯದ ವೀರ ಪುರುಷರ ಫ್ಲೆಕ್ಸ್‌ಗಳು.



ಪಾದಯಾತ್ರೆ ಸಮಾಗಮವಾಗುವ ಮಡಿಕೇರಿ ಕೊಡವ ಸಮಾಜದ ಕೋಲ್ ಮಂದ್.

ವಿ.ಪೇಟೆ ಪುರಸಭೆ ನೂತನ ಮುಖ್ಯಾಧಿಕಾರಿ ನಾಚಪ್ಪ



ನಾಚಪ್ಪ

ವಿರಾಜಪೇಟೆ, ಫೆ.6– ವಿರಾಜಪೇಟೆ ಪುರಸಭೆ ನೂತನ ಮುಖ್ಯಾಧಿಕಾರಿಯಾಗಿ ಪಟ್ಟಚರವಂಡ ಕೆ.ನಾಚಪ್ಪ ಗುರುವಾರ ಅಧಿಕಾರ ವಹಿಸಿಕೊಂಡರು.

ನಾಚಪ್ಪ ಅವರು ಸೋಮವಾರಪೇಟೆ ಪಟ್ಟಣ ಪಂಚಾಯಿತಿಯಲ್ಲಿ 7 ವರ್ಷ ಮುಖ್ಯಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು. ವಿರಾಜಪೇಟೆ ಪುರಸಭೆಯಲ್ಲಿ ಕಾರ್ಯನಿರ್ವಹಿಸಿದ್ದ ಮುಖ್ಯಾಧಿಕಾರಿ ಎ.ಚಂದ್ರ ಕುಮಾರ್ ಅವರನ್ನು ಚಾಮರಾಜನಗರ ಜಿಲ್ಲೆಯ ಹನೂರಿಗೆ ವರ್ಗಾವಣೆ ಮಾಡಲಾಗಿದೆ.

ಪಾದಯಾತ್ರೆಗೆ ಕಲಿಯಂಡ ಕುಟುಂಬಸ್ಥರ ಬೆಂಬಲ

ನಾಪೋಕ್ಲು, ಫೆ.6(ದುಗ್ಗಳ)–ಅಖಿಲ ಕೊಡವ ಸಮಾಜ ನೇತೃತ್ವದಲ್ಲಿ ವಿವಿಧ ಕೊಡವ ಸಮಾಜ ಹಾಗೂ ಸಂಘ–ಸಂಸ್ಥೆಗಳು ಸೇರಿದಂತೆ ಕೊಡವ ಭಾಷಿಕ ಸಮುದಾಯಗಳು ಕೈಗೊಂಡಿರುವ 'ಕೊಡವಾಮೆ ಬಾಳೋ' ಪಾದಯಾತ್ರೆಯಲ್ಲಿ ಕಲಿಯಂಡ ಕುಟುಂಬಸ್ಥರು ಸಂಪೂರ್ಣ ಬೆಂಬಲದೊಂದಿಗೆ ಭಾಗವಹಿಸಲಿದ್ದೇವೆ ಎಂದು ಕಲಿಯಂಡ ವಿಜಯ ತಿಳಿಸಿದ್ದಾರೆ.



ಕೊಳಕೇರಿ ಗ್ರಾಮದ ಕಲಿಯಂಡ ಐನ್‌ಮನೆಯಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿದ್ದ ಕಲಿಯಂಡ ಕುಟುಂಬಸ್ಥರು.

ಸಮೀಪದ ಕೊಳಕೇರಿ ಗ್ರಾಮದ ಕಲಿಯಂಡ ಐನ್‌ಮನೆಯಲ್ಲಿ ಕುಟುಂಬ ಅಭಿವೃದ್ಧಿ ಸಂಘದ ಅಧ್ಯಕ್ಷ ಕಲಿಯಂಡ ವಿಜಯ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಶುಕ್ರವಾರ ಮಡಿಕೇರಿಯಲ್ಲಿ ಜರುಗಲಿರುವ ಪಾದಯಾತ್ರೆ ಸಮಾವೇಶದಲ್ಲಿ ಕುಟುಂಬದ ಎಲ್ಲಾ ಸದಸ್ಯರೂ ಭಾಗವಹಿಲಿದ್ದಾರೆ. ಪಾದಯಾತ್ರೆ ಸಮಾವೇಶ ಯಶಸ್ವಿಗೊಳಿಸಲು ಸಹಕರಿಸುವ ನಿಟ್ಟಿನಲ್ಲಿ ಒಮ್ಮತದ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಕಲಿಯಂಡ ಕುಟುಂಬದ ಪ್ರಮುಖ ಪ್ರಕಾಶ್, ಐನ್ ಮನೆ ಅಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಗುಂಡ್ಲುಪೇಟೆಯಲ್ಲಿ ನಾರಾಯಣಸ್ವಾಮಿ ರಥೋತ್ಸವ

ಗುಂಡ್ಲುಪೇಟೆ: ರಥಸಪ್ತಮಿ ಅಂಗವಾಗಿ ಪಟ್ಟಣದ ಅಧಿದೇವತೆ ಶ್ರೀ ವಿಜಯ ನಾರಾಯಣಸ್ವಾಮಿ ದೇವಾಲಯದಲ್ಲಿ ರಥೋತ್ಸವ ವಿಜೃಂಭಣೆಯಿಂದ ನೆರವೇರಿತು.

ರಥೋತ್ಸವ ಹಿನ್ನೆಲೆಯಲ್ಲಿ ದೇವಾಲಯವನ್ನು ತಳಿರು ತೋರಣ ಹಾಗೂ ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ನಂತರ ವಿಜಯ ನಾರಾಯಣ ಸ್ವಾಮಿಗೆ ವಿಶೇಷ ಅಲಂಕಾರ ಹಾಗೂ ಪೂಜೆ ನೆರವೇರಿಸಲಾಯಿತು. ಉತ್ಸವ ಮೂರ್ತಿಯನ್ನು ಹೊತ್ತಿದ್ದ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಮತ್ತು ಮುಜರಾಯಿ ಅಧಿಕಾರಿ ಆದ ತಹಸೀಲ್ದಾರ್ ಟಿ.ರಮೇಶ್ ಬಾಬು ಪೂಜೆ ಸಲ್ಲಿಸಿದರು. ಬಳಿಕ ಸಹಸ್ರಾರು ಭಕ್ತರು ರಥವನ್ನು ದೇವಾಲಯ ಸುತ್ತು ಎಳೆದು ಸ್ವಸ್ಥಾನ ತಲುಪಿಸಿದರು.



ಶ್ರೀ ವಿಜಯ ನಾರಾಯಣಸ್ವಾಮಿ ರಥೋತ್ಸವ ವಿಜೃಂಭಣೆಯಿಂದ ನೆರವೇರಿತು.

ಇದೇ ವೇಳೆ ಭಕ್ತರಿಗೆ ಮಜ್ಜಿಗೆ, ಪಾನಕ ಮತ್ತು ಪ್ರಸಾದ ವಿತರಿಸಲಾಯಿತು. ಸರ್ಕಲ್ ಇನ್ಸ್‌ಪೆಕ್ಟರ್ ಪರಶಿವಮೂರ್ತಿ ಮತ್ತು ಸಬ್ ಇನ್ಸ್‌ಪೆಕ್ಟರ್ ಸಾಹೇಬಗೌಡ ಮತ್ತು ಸಿಬ್ಬಂದಿ ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು.

ಇಂದು ಹೆಗ್ಗಡಹಳ್ಳಿಯಲ್ಲಿ ಧಾರ್ಮಿಕ ಕಾರ್ಯಕ್ರಮ



ಹೆಗ್ಗಡಹಳ್ಳಿ ನಂಜುಂಡೇಶ್ವರ ನೂತನ ದೇವಸ್ಥಾನ.

ಬೇಗೂರು, ಫೆ. 6– ಸಮೀಪದ ಹೆಗ್ಗಡಹಳ್ಳಿ ಗ್ರಾಮದ ನಂಜುಂಡೇಶ್ವರ ಸ್ವಾಮಿ ದೇವಸ್ಥಾನ ಪುನರ್ ನಿರ್ಮಾಣ ಹಾಗೂ ಧಾರ್ಮಿಕ ಕಾರ್ಯಕ್ರಮ ಫೆ.7ರಂದು ನಡೆಯಲಿವೆ.

ಮುಂಜಾನೆ 5 ಗಂಟೆಗೆ ಕಳಶ ಸ್ಥಾಪನೆ, ಪ್ರಧಾನ ದೇವರಿಗೆ ಅಷ್ಟಬಂಧ ನ್ಯಾಸ, ನಾಡೀಸಂಧಾನ, ಪ್ರಾಣ ಪ್ರತಿಷ್ಠೆ, ಕೂರ್ಚ ಬಂಧನ, ಪ್ರಧಾನ ಹೋಮ ನಡೆಯಲಿವೆ. ಬೆಳಗ್ಗೆ 10 ಗಂಟೆಗೆ ಸುತ್ತೂರು ಮಠಾಧೀಶರಾದ ಶ್ರೀ ಶಿವರಾತ್ರಿ ದೇಶಿಕೇಂದ್ರಸ್ವಾಮೀಜಿ ಸಾನ್ನಿಧ್ಯದಲ್ಲಿ ಧಾರ್ಮಿಕ ಸಭೆ ನಡೆಯಲಿದ್ದು, ಸಿದ್ಧಗಂಗಾ ಮಠಾಧೀಶರಾದ ಶ್ರೀ ಸಿದ್ಧಲಿಂಗ ಸ್ವಾಮೀಜಿ, ಕೊಪ್ಪಳ ಗವಿಸಿದ್ದೇಶ್ವರ ಸಂಸ್ಥಾನ ಗವಿ ಮಠಾಧೀಶರಾದ ಶ್ರೀ ಅಭಿನವ ಗವಿಸಿದ್ದೇಶ್ವರಸ್ವಾಮೀಜಿ, ದೇವನೂರು ಮಠದ ಶ್ರೀ ಮಹಾಂತ ಸ್ವಾಮೀಜಿ, ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್, ಗುಂಡ್ಲುಪೇಟೆ ಕ್ಷೇತ್ರದ ಮಾಜಿ ಶಾಸಕ ಸಿ.ಎಸ್.ನಿರಂಜನ್ ಕುಮಾರ್ ಭಾಗ ವಹಿಸಲಿದ್ದಾರೆ.

ಆಯತಪ್ಪಿ ಚರಂಡಿಗೆ ಬಿದ್ದ ಮಗು

ಬೇಗೂರು, ಫೆ.6–ಗುಂಡ್ಲುಪೇಟೆ ತಾಲೂಕಿನ ಬೇಗೂರು ಗ್ರಾಮದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಮುಂಭಾಗದ ಚರಂಡಿಗೆ ಎರಡು ವರ್ಷದ ಮಗು ಆಯತಪ್ಪಿ ಬಿದ್ದಿದ್ದು, ಸ್ಥಳೀಯರ ಸಮಯ ಪ್ರಜ್ಞೆಯಿಂದ ದೊಡ್ಡ ಅನಾಹುತ ತಪ್ಪಿದಂತಾಗಿದೆ.



ಸ್ಲ್ಯಾಬ್ ಒಡೆದು ಹೋಗಿರುವ ಚರಂಡಿ.

ಬಸ್ ನಿಲ್ದಾಣ ಮುಂಭಾಗದ ಬಸಪ್ಪ ಕಾಂಪ್ಲೆಕ್ಸ್ ಎದುರು ಚರಂಡಿ ಸ್ಲ್ಯಾಬ್ ಒಡೆದು ಹೋಗಿದ್ದು, ಪೋಷಕರೊಂದಿಗೆ ಹೋಗುತ್ತಿದ್ದ ಮಗು ಚರಂಡಿಗೆ ಬಿದ್ದಿದೆ. ಕೂಡಲೇ ಇದನ್ನು ಗಮನಿಸಿದ ಸ್ಥಳೀಯರು ಮಗುವನ್ನು ಚರಂಡಿಯಿಂದ ಮೇಲೆತ್ತಿದ್ದರು. ಇದರಿಂದ ದೊಡ್ಡ ಅನಾಹುತ ತಪ್ಪಿದಂತಾಗಿದೆ. ಸದ್ಯ ಮಗು ಪಾರಾಗಿದೆ.

ಕೂಡಲೇ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಧಿಕಾರಿಗಳು ಚರಂಡಿಗೆ ಸ್ಲ್ಯಾಬ್ ಅಳವಡಿಸಿ, ಮುಂದೆ ಇಂತಹ ಅನಾಹುತಗಳು ಆಗದಂತೆ ಎಚ್ಚರ ವಹಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಕಳಪೆ ಗುಣಮಟ್ಟದ ಉಪ್ಪು ತಯಾರಿಸಿದ್ದ ತಮಿಳುನಾಡಿನ ಕಂಪನಿಗೆ ಲಕ್ಷ ದಂಡ

ಚಾಮರಾಜನಗರ, ಫೆ.6–ಕಳಪೆ ಗುಣಮಟ್ಟದ ಉಪ್ಪು ತಯಾರಿಸಿದ್ದ ತಮಿಳುನಾಡಿನ ಕಂಪನಿಯೊಂದಕ್ಕೆ ನ್ಯಾಯ ನಿರ್ಣಾಯಕ ಅಧಿಕಾರಿ ಆದ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ 1 ಲಕ್ಷ ರೂ. ದಂಡ ವಿಧಿಸಿದ್ದಾರೆ.

ಹನೂರು ಪಟ್ಟಣದ ಬಂಡಳ್ಳಿ ರಸ್ತೆಯ ಶ್ರೀ ಮಹದೇಶ್ವರ ಸ್ಟೋರ್‌ಗೆ ಕಳೆದ ಜುಲೈ 29ರಂದು ಕೊಳ್ಳೇಗಾಲ ತಾಲೂಕಿನ ಆಹಾರ ಸುರಕ್ಷಿತಾಧಿಕಾರಿ ಶ್ರೀನಿವಾಸ್ ಭೇಟಿ ನೀಡಿ, ಪರಿಶೀಲನೆ ನಡೆಸಿದಾಗ ಅಂಗಡಿಯಲ್ಲಿ ಸಂಶಯಾಸ್ಪದವಾಗಿ ಕಂಡು ಬಂದ ವಿಕೆಎಸ್ ಟ್ರೋ ಸಾಲ್ಟ್ ಹೆಸರಿನ ಉಪ್ಪಿನ ಆಹಾರ ಮಾದರಿಯನ್ನು ಸಂಗ್ರಹಿಸಿ ಮೈಸೂರಿನ ವಿಭಾಗೀಯ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಿದ್ದರು.

ಸದರಿ ಉಪ್ಪಿನ ಮಾದರಿ ವಿಶ್ಲೇಷಣಾ ವರದಿಯಿಂದ ಕಳಪೆ ಗುಣಮಟ್ಟ (ಸಬ್ ಸ್ಟ್ಯಾಂಡರ್ಡ್) ಎಂದು ಧೃಢಪಟ್ಟಿದೆ.

ಈ ಸಂಬಂಧ ನ್ಯಾಯ ನಿರ್ಣಯಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿತ್ತು. ನಂತರ ಗೀತಾ ಹುಡೇದ ಪ್ರಕರಣದ ವಿಚಾರಣೆ ನಡೆಸಿ ತಯಾರಕರಾದ ತಮಿಳುನಾಡಿನ ತೂತುಕುಡಿಯ ವಿಕೆಎಸ್ ಫುಡ್ ಪ್ರಾಡಕ್ಟ್ಸ್ ಕಂಪನಿಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯಡಿ ಒಂದು ಲಕ್ಷ ರೂ. ದಂಡ ವಿಧಿಸಿ ಆದೇಶಿಸಿದ್ದಾರೆ.

ಶಿಕ್ಷಕ ಎಂ.ವೀರಭದ್ರಸ್ವಾಮಿ ಅಮಾನತು ಹಿನ್ನೆಲೆ; 2ನೇ ದಿನವೂ ತರಗತಿಗೆ ಗೈರಾದ ವಿದ್ಯಾರ್ಥಿಗಳು

ಗುಂಬಳ್ಳಿಯಲ್ಲಿ ಪ್ರತಿಭಟನೆ: ಓರ್ವ ವಿದ್ಯಾರ್ಥಿನಿ ಅಸ್ವಸ್ಥ

ಯಳಂದೂರು, ಫೆ.6–ತಾಲೂಕಿನ ಗುಂಬಳ್ಳಿ ಪ್ರೌಢಶಾಲೆ ಶಿಕ್ಷಕ ಎಂ.ವೀರಭದ್ರಸ್ವಾಮಿ ಅವರನ್ನು ಶಿಕ್ಷಣ ಇಲಾಖೆ ಉಪನಿರ್ದೇಶಕರು ಅಮಾನತುಗೊಳಿಸಿರುವ ಕ್ರಮ ಖಂಡಿಸಿ ಎಸ್‌ಡಿಎಂಸಿ ಸದಸ್ಯರು, ವಿದ್ಯಾರ್ಥಿಗಳು, ಪೋಷಕರು ನಡೆಸುತ್ತಿರುವ ಪ್ರತಿಭಟನೆ 2ನೇ ದಿನವಾದ ಗುರುವಾರವೂ ಮುಂದುವರೆದಿದ್ದು, ತರಗತಿಗೆ ಗೈರಾಗಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಓರ್ವ ವಿದ್ಯಾರ್ಥಿನಿ ಅಸ್ವಸ್ಥಗೊಂಡಿದ್ದಾಳೆ.

ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಗೆದ್ದು ಶಾಲೆಗೆ ಕೀರ್ತಿ ತಂದಿದ್ದ ವಿದ್ಯಾರ್ಥಿನಿ ಐಶ್ವರ್ಯ ಅಸ್ವಸ್ಥಗೊಂಡ ವಿದ್ಯಾರ್ಥಿನಿ. ಈಕೆ ಉಪನಿರ್ದೇಶಕರ ಮುಂದೆ ವೀರಭದ್ರಸ್ವಾಮಿ ಅವರ ಅಮಾನತು ಆದೇಶ ವಾಪಸ್ ಪಡೆಯಬೇಕು ಎಂದು ಗೋಗರೆಯುತ್ತಿದ್ದ ದೃಶ್ಯ ಮನ ಕಲಕುವಂತಿತ್ತು. ಈಕೆಯನ್ನು ಶಿಕ್ಷಕರು ಸಂತೈಸಲು ಮುಂದಾದರು. ಆದರೆ, ಈಕೆ ಅತ್ತು ಅತ್ತು ಅಸ್ವಸ್ಥಳಾಗಿ ಶಾಲೆ ಹೊರಭಾಗದಲ್ಲಿ ಕುಸಿದು ಬಿದ್ದಳು. ತಕ್ಷಣ ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು ಹಾಗೂ ಈಕೆಯ ಪೋಷಕರು ಈಕೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ವಾಹನದಲ್ಲೇ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದರು.



ಯಳಂದೂರು ತಾಲೂಕಿನ ಗುಂಬಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಡಿಡಿಪಿಐ ರಾಮಚಂದ್ರ ರಾಜೇ ಅರಸು ಎಸ್‌ಡಿಎಂಸಿ ಸದಸ್ಯರು, ಪೋಷಕರೊಂದಿಗೆ ಸಭೆ ನಡೆಸಿದರು.

ಶಾಲಾ ಶೈಕ್ಷಣಿಕ ಪ್ರವಾಸದ ವೇಳೆ ಬಸ್ ಚಾಲಕ ಅನಾರೋಗ್ಯಕ್ಕೆ ತುತ್ತಾದ ಹಿನ್ನೆಲೆಯಲ್ಲಿ ಆತನನ್ನು ಆಸ್ಪತ್ರೆಗೆ ಕರೆದೊಯ್ಯಲು ಶಿಕ್ಷಕ ಎಂ.ವೀರಭದ್ರಸ್ವಾಮಿ ಅವರು ಬಸ್ ಚಾಲನೆ ಮಾಡಿದ್ದಾರೆ. ಆದರೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಮಕ್ಕಳು ಹಾಗೂ ಇತರೆ ಶಿಕ್ಷಕರ ಹೇಳಿಕೆಯನ್ನು ಪಡೆಯದೆ ಉಪನಿರ್ದೇಶಕರಿಗೆ ಈ ಬಗ್ಗೆ ವರದಿ ಸಲ್ಲಿಸಿದ್ದಾರೆ. ಈ ವರದಿ ಆಧಾರದ ಮೇಲೆ ಏಕಾಏಕಿ ಉಪನಿರ್ದೇಶಕರು ಶಿಕ್ಷಕ ಎಂ.ವೀರಭದ್ರಸ್ವಾಮಿ ಅವರನ್ನು ಅಮಾನತುಗೊಳಿಸಿದ್ದಾರೆ. ಶಿಕ್ಷಕ ವೀರಭದ್ರಸ್ವಾಮಿ ಮಾನವೀಯತೆ ತೋರಿ, ಮಕ್ಕಳ ಪ್ರಾಣ ರಕ್ಷಣೆ ಮಾಡಿರುವುದು ತಪ್ಪೇ? ಎಂದು ಪೋಷಕರು, ವಿದ್ಯಾರ್ಥಿಗಳು ಹಾಗೂ ಎಸ್‌ಡಿಎಂಸಿ ಸದಸ್ಯರು ಪ್ರತಿಭಟನೆ ನಡೆಸಿದರು. ವಿದ್ಯಾರ್ಥಿಗಳು ತರಗತಿಗಳಿಗೆ ಗೈರಾಗಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಪ್ರತಿಭಟನಾ ಸ್ಥಳಕ್ಕೆ ಡಿಡಿಪಿಐ ರಾಮಚಂದ್ರ ರಾಜೇ ಅರಸ್ ಗುರುವಾರ ಶಾಲೆಗೆ ಭೇಟಿ ನೀಡಿ, ಸಭೆ ನಡೆಸಿದರು. ಈ ವೇಳೆ ಎಸ್‌ಡಿಎಂಸಿ ಅಧ್ಯಕ್ಷ ರಾಜಣ್ಣ, ಸದಸ್ಯರು, ಪೋಷಕರು ಮತ್ತು ಗ್ರಾಮಸ್ಥರು, ಏಕಾಏಕಿ ವೀರಭದ್ರಸ್ವಾಮಿ ಅವರನ್ನು ಅಮಾನತುಗೊಳಿಸಿರುವ ಬಗ್ಗೆ ಸ್ಪಷ್ಟನೆ ನೀಡಬೇಕು. ಈ ಆದೇಶವನ್ನು ಹಿಂಪಡೆಯಬೇಕು ಶಿಕ್ಷಕ ಎಂ.ವೀರಭದ್ರಸ್ವಾಮಿ ಮತ್ತೆ ಶಾಲೆಗೆ ಬರಬೇಕು ಎಂದು ಪಟ್ಟುಹಿಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ನೀಡಿರುವ ವರದಿಯಲ್ಲಿ ಲೋಪವಿದೆ. ಒಂದು ವಾರದೊಳಗೆ ಈ ಸಮಸ್ಯೆಗೆ ಪರಿಹಾರ ಸೂಚಿಸಬೇಕು. ವೀರಭದ್ರಸ್ವಾಮಿ ಅಮಾನತು ಆದೇಶ ವಾಪಸ್ ಪಡೆಯಬೇಕು. ಇಲ್ಲವಾದಲ್ಲಿ ಮಕ್ಕಳನ್ನು ಶಾಲೆಗೆ ಕಳುಹಿಸುವುದಿಲ್ಲ. ಪ್ರತಿಭಟನೆ ಮುಂದುವರೆಸುವುದಾಗಿ ಪೋಷಕರು ಎಚ್ಚರಿಕೆ ನೀಡಿದರು. ನಂತರ ಮಾತನಾಡಿದ ಡಿಡಿಪಿಐ, ಮೇಲಾಧಿಕಾರಿಗಳಿಗೆ ವರದಿ ನೀಡಿ ಸೂಕ್ತ ಕ್ರಮ ವಹಿಸುವ ಭರವಸೆ ನೀಡಿದರು.

ಇದೇ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಮಾರಯ್ಯ, ಬಿಆರ್‌ಸಿ ನಂಜುಂಡಯ್ಯ, ಬಿಆರ್‌ಪಿ ರೇಚಣ್ಣ, ಎಸ್‌ಡಿಎಂಸಿ ಅಧ್ಯಕ್ಷ ರಾಜಣ್ಣ, ಸದಸ್ಯರು, ಮುಖ್ಯ ಶಿಕ್ಷಕ, ಸಹ ಶಿಕ್ಷಕರು ಹಾಜರಿದ್ದರು.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರ ಪ್ರತಿಭಟನೆ



ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪಣ್ಯದಹುಂಡಿ ಗ್ರಾಮದಲ್ಲಿ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಫೆ.6–ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ತಾಲೂಕಿನ ಪಣ್ಯದಹುಂಡಿ ಗ್ರಾಮದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಗ್ರಾಮದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ರಸ್ತೆ ತಡೆ ನಡೆಸಿ, ಜಿಲ್ಲಾಡಳಿತ ಹಾಗೂ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಪಣ್ಯದಹುಂಡಿ, ಹೆಗ್ಗೋತಾರ, ಮುತ್ತಿಗೆ ಸೇರಿದಂತೆ ಇನ್ನಿತರ ಗ್ರಾಮಗಳಲ್ಲಿ ಸರ್ಕಾರಿ ಗೋಮಾಳವನ್ನು ಕೆಲವರು ಅತಿಕ್ರಮಣ ಮಾಡಿಕೊಂಡು ಗಣಿಗಾರಿಕೆ ನಡೆಸುತ್ತಿದ್ದಾರೆ. ಈ ಬಗ್ಗೆ ಹಲವು ವರ್ಷಗಳಿಂದ ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಸಚಿವರಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರಿದರು.

ಇತ್ತೀಚಿನ ದಿನಗಳಲ್ಲಿ ಈ ಭಾಗದ ರಸ್ತೆಗಳಲ್ಲಿ ಅಧಿಕ ಭಾರದ ಟಿಪ್ಪರ್ ಹಾಗೂ ಲಾರಿಗಳ ಓಡಾಟ ಹೆಚ್ಚಾಗಿದ್ದು, ಇದರಿಂದ ರಸ್ತೆಗಳು ಹದಗೆಟ್ಟಿವೆ. ಜೊತೆಗೆ ರಸ್ತೆಬದಿ ಮನೆಗಳ ಗೋಡೆಗಳು ಸಹ ಬಿರುಕು ಬಿಟ್ಟಿವೆ. ಅಲ್ಲದೇ, ಜನರು ಭಯದಿಂದಲೇ ಓಡಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಹೈಕೋರ್ಟ್ ಆದೇಶ ಪಾಲಿಸಲು ಜಿಲ್ಲಾಡಳಿತ ಹಾಗೂ ಅಧಿಕಾರಿಗಳು ವಿಫಲವಾಗಿದ್ದಾರೆ. ಹಾಗಾಗಿ ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಬಂದು ನಮ್ಮ ಅಹವಾಲು ಸ್ವೀಕರಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಬಸವಣ್ಣ, ಕಾರ್ಯದರ್ಶಿ ಹೆಗ್ಗೋತಾರ ವಿಜಯ ಕುಮಾರ್, ಮೇಲಾಜಿಪುರ ಕುಮಾರ್, ಪದಾಧಿಕಾರಿಗಳಾದ ಮರಿಸ್ವಾಮಪ್ಪ, ಶಿವಲಿಂಗೇಗೌಡ, ಮಾದಪ್ಪ, ಚಿನ್ನಸ್ವಾಮಿ, ನಾಗರಾಜಮೂರ್ತಿ, ಸ್ವಾಮಿ, ಸಂತೋಷ್, ಮಹೇಶ್, ಭಾಗ್ಯಮ್ಮ, ರೂಪಾ, ಕವಿತಾ, ಸವಿತಾ, ಶಾರದಮ್ಮ, ಪಾರ್ವತಿ, ಪವಿತ್ರಾ ಇದ್ದರು.

ನಿಧನ

ಶಿವನಪ್ಪನ ಗುರುಸ್ವಾಮಪ್ಪ



ಚಾಮರಾಜನಗರ, ಫೆ.6–ತಾಲೂಕಿನ ಹರವೆ ಗ್ರಾಮದ ಶಿವನಪ್ಪನ ಗುರುಸ್ವಾಮಪ್ಪ (80) ಗುರುವಾರ ನಿಧನರಾದರು.

ಮೃತರು ಪತ್ನಿಯನ್ನು ಅಗಲಿದ್ದಾರೆ. ಶುಕ್ರವಾರ ಮಧ್ಯಾಹ್ನ ಹರವೆ ಗ್ರಾಮದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



ತರುಣ್ ಸುಧೀರ್ ಚಿತ್ರಕ್ಕೆ ಪ್ರಿಯಾಂಕಾ ಆಚಾರ್ ನಾಯಕಿ

ತರುಣ್ ಸುಧೀರ್ ನಿರ್ಮಾಣದ, ಏಳುಮಲೆಯ ಮಡಿಲಲ್ಲಿ ಎದೆನಡುಗಿಸಿದ ಪ್ರೇಮಕಥೆ ಎನ್ನುವ ಅಡಿಬರಹ ಇರುವ ಚಿತ್ರದ ನಾಯಕನಾಗಿ ರಕ್ಷಿತಾ ಪ್ರೇಮ್ ಸಹೋದರ ರಾಣಾ ನಟಿಸುತ್ತಿದ್ದಾರೆ. ಇದೀಗ ಚಿತ್ರದ ನಾಯಕಿಯಾಗಿ ಮೈಸೂರಿನ ಪ್ರಿಯಾಂಕಾ ಆಚಾರ್ ಆಯ್ಕೆಯಾಗಿದ್ದಾರೆ. ಗುರುಶಿಷ್ಯರು, ಕಾಟೇರ ಯಶಸ್ಸಿನ ಬಳಿಕ ತರುಣ್ ಸುಧೀರ್, ಅಟ್ಲಾಂಟಾ ನಾಗೇಂದ್ರ ಸೇರಿ ನಿರ್ಮಿಸುತ್ತಿರುವ ಈ ಚಿತ್ರದ ಟೈಟಲ್ ಇನ್ನೂ ಫೈನಲ್ಲಾಗಿಲ್ಲ. ತರುಣ್ ಬಳಗದಲ್ಲೇ ಕೆಲಸ ಕಲಿತಿರುವ ಪುನೀತ್ ರಂಗಸ್ವಾಮಿ ಈ ಚಿತ್ರಕ್ಕೆ ಆಕ್ಷನ್‌ಕಟ್ ಹೇಳುತ್ತಿದ್ದಾರೆ. ಇದೊಂದು ನೈಜ ಘಟನೆಯಾಧಾರಿತ ಪ್ರೇಮಕಥೆಯಾಗಿದ್ದು, ಮಹಾನಟಿ ವಿಜೇತೆ ಪ್ರಿಯಾಂಕಾ ಆಚಾರ್ ಈ ಮೂಲಕ ಬಣ್ಣದ ಲೋಕದಲ್ಲಿ ಮೊದಲಹೆಜ್ಜೆ ಇಟ್ಟಿದ್ದಾರೆ. ಕಾರ್ಯಕ್ರಮದ ಜಡ್ಜ್ ಆಗಿದ್ದ ತರುಣ್, ಆಗಲೇ ಪ್ರಿಯಾಂಕಾ ಅವರ ಅಭಿನಯ, ತಲ್ಲೀನತೆ ನೋಡಿ ಮೆಚ್ಚಿ, ನನ್ನ ಚಿತ್ರದಲ್ಲಿ ಅವಕಾಶ ನೀಡುವುದಾಗಿ ಹೇಳಿದ್ದರು. ಅದರಂತೆ ಇದೀಗ ಅವರದೇ ನಿರ್ಮಾಣದ ಚಿತ್ರದಲ್ಲಿ ಹೀರೋಯಿನ್ ಆಗಿ ನಟಿಸೋ ಅವಕಾಶವನ್ನು ಪ್ರಿಯಾಂಕಾ ಆಚಾರ್‌ಗೆ ನೀಡಿದ್ದಾರೆ. ಮೂಲತಃ ಮೈಸೂರಿನವರಾದ ಪ್ರಿಯಾಂಕಾಗೆ ಮೊದಲಿಂದಲೂ ನಟಿಯಾಗಬೇಕೆಂಬ ಕನಸಿತ್ತು. ಆ ಕನಸಿಗೆ ಇದೀಗ ತರುಣ್ ಸುಧೀರ್ ಸಾಥ್ ನೀಡಿದ್ದಾರೆ. ತರುಣ್ ಸುಧೀರ್ ತಮ್ಮ ಬಹುತೇಕ ಸಿನಿಮಾಗಳಲ್ಲಿ ಹೊಸ ನಾಯಕಿಯರನ್ನು ಪರಿಚಯಿಸುತ್ತಲೇ ಬಂದಿದ್ದಾರೆ. ರಾಬರ್ಟ್ ಮೂಲಕ ಆಶಾಭಟ್, ಕಾಟೇರ ಮೂಲಕ ಆರಾಧನಾ ರಾಮ್‌ರನ್ನು ಕನ್ನಡಿಗರಿಗೆ ಇಂಟ್ರಡ್ಯೂಸ್ ಮಾಡಿದ್ದರು. ಈಗ ಪ್ರಿಯಾಂಕಾ ಆಚಾರ್ ಅವರನ್ನು ತಮ್ಮ ನಿರ್ಮಾಣದ ಹೊಸ ಚಿತ್ರದಲ್ಲಿ ರಾಣಾ ಜೋಡಿಯಾಗಿ ಕರೆತಂದಿದ್ದಾರೆ. ಅದ್ವೈತ್ ಗುರುಮೂರ್ತಿ ಅವರ ಕ್ಯಾಮೆರಾವರ್ಕ್ ಈ ಚಿತ್ರಕ್ಕಿದೆ.


'ಗೆಲುವಿನ ಹೆಜ್ಜೆ'ಗೆ ಪ್ರಿಯಾಂಕ ಉಪೇಂದ್ರ ಚಾಲನೆ



ಓದು, ಬರಹ ಕಲಿಯಬೇಕೆಂಬ ಹಸಿವಿರುವ ಮಕ್ಕಳು ಹಾಗೂ ಅನಕ್ಷರಸ್ಥ ಪೋಷಕರ ಸುತ್ತ ನಡೆಯುವ ಕಥಾಹಂದರ ಇರುವ ಚಿತ್ರ ಗೆಲುವಿನ ಹೆಜ್ಜೆ. ನಟ, ನಿರ್ಮಾಪಕ ಬಿ.ಗುರುಪ್ರಸಾದ್ ಅವರ ಪಿ.ವಿ. ಫಿಲಂ ಇನ್‌ಸ್ಟಿಟ್ಯೂಟ್ ನಿರ್ಮಿಸುತ್ತಿರುವ ಈ ಚಿತ್ರದ ಮುಹೂರ್ತ ಇತ್ತೀಚೆಗೆ ನೆರವೇರಿತು, ತಮ್ಮಲ್ಲಿ ಕಲಿತ ಪ್ರತಿಭಾವಂತ ವಿದ್ಯಾರ್ಥಿಗಳನ್ನೇ ಇಟ್ಟುಕೊಂಡು ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದು, ನಾಗಾರ್ಜುನ ದಿಗ್ಗಿ ಅವರ ನಿರ್ದೇಶನವಿರುವ ಗೆಲುವಿನ ಹೆಜ್ಜೆ ಚಿತ್ರದ ಟೈಟಲ್ ಲಾಂಚ್ ಹಾಗೂ ಮುಹೂರ್ತ ಸಮಾರಂಭ ಇತ್ತೀಚೆಗೆ ನೆರವೇರಿತು. ಚಿತ್ರದ ಪ್ರಥಮ ದೃಶ್ಯಕ್ಕೆ ಪ್ರಿಯಾಂಕಾ ಉಪೇಂದ್ರ ಅವರು ಕ್ಲಾಪ್ ಮಾಡಿದರೆ, ಬಿಗ್‌ಬಾಸ್ ಪ್ರಥಮ್ ಆಕ್ಷನ್‌ಕಟ್ ಹೇಳಿದರು. ಹಿರಿಯನಟ ಬ್ಯಾಂಕ್ ಜನಾರ್ಧನ್ ಕ್ಯಾಮೆರಾ ಚಾಲನೆ ಮಾಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದ ಪ್ರಿಯಾಂಕ ಉಪೇಂದ್ರ, ಪ್ರಥಮ್ ಅವರ ಉತ್ಸಾಹ ನೋಡಿದಾಗ ನಮಗೂ 100% ಎನರ್ಜಿ ಸಿಗುತ್ತದೆ. ರೇಖಾದಾಸ್ ಅವರೊಂದಿಗೆ ನಾನೂ ತೆರೆ ಹಂಚಿಕೊಂಡಿದ್ದೇನೆ. ಈಗಿನ ದಿನಗಳಲ್ಲಿ ಅಭಿನಯ, ನೃತ್ಯ ಕಲಿಯುವವರಿಗೆ ಇಂಥ ಶಾಲೆಗಳು ಅವಶ್ಯಕವಾಗಿವೆ. ಮಕ್ಕಳ ಪ್ರತಿಭೆಯನ್ನು ಜಗತ್ತಿಗೆ ತೋರಿಸಲು ಈಗ ಸಿನಿಮಾ ಕೂಡ ಮಾಡುತ್ತಿದ್ದಾರೆ ಎಂದು ಹೇಳಿದರು.

ನಟ ಪ್ರಥಮ್ ಮಾತನಾಡುತ್ತ, ಪ್ರಿಯಾಂಕ ಮೇಡಂ ಮೆಸೇಜ್ ಇರೋ ಸಾಕಷ್ಟು ಸಿನಿಮಾಗಳಲ್ಲಿ ನಟಿಸಿದ್ದಾರೆ. ಅವರ ಪಾತ್ರಗಳು ಇಂದಿನ ಯುವಕರಿಗೆ ಸ್ಫೂರ್ತಿಯಾಗಿದೆ. ಅವರು ಸಿನಿಮಾವನ್ನು ಅದೆಷ್ಟು ಪ್ರೀತಿಸುತ್ತಾರೆ ಎಂಬುದಕ್ಕೆ ಸಾಕಷ್ಟು ಉದಾಹರಣೆಗಳಿವೆ. ಅವರಿಗೆ ಗ್ಲಾಮರ್, ವಿನಯ ಎಲ್ಲಾ ಇರೋದಕ್ಕೇ ಇವತ್ತು ಅವರು ಸ್ಟಾರ್ ಆಗಿದ್ದಾರೆ. ಆ ಕಾರಣಕ್ಕೆ ಅವರನ್ನು ನಾನು ತುಂಬಾ ಗೌರವಿಸುತ್ತೇನೆ ಎಂದು ಹೇಳಿದರು.

ದುನಿಯಾ ವಿಜಯ್ ಈಗ 'ಮಾರುತ'



ಬಹಳ ದಿನಗಳ ನಂತರ ಎಸ್. ನಾರಾಯಣ್ ಹಾಗೂ ದುನಿಯಾ ವಿಜಯ್ ಕಾಂಬಿನೇಶನ್‌ನ ಚಿತ್ರವೊಂದು ತೆರೆಗೆ ಬರುತ್ತಿದೆ, ಆ ಚಿತ್ರದ ಹೆಸರು ಮಾರುತ. ಈಗಾಗಲೇ ಈ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದ್ದು, ಬೆಂಗಳೂರು, ಮೈಸೂರು, ಚಿಕ್ಕಮಗಳೂರು, ಧಾರವಾಡ, ಸವದತ್ತಿ, ಬೆಳಗಾವಿ ಹಾಗೂ ಗೋವಾ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ. ಚಂಡ ಹಾಗೂ ದಕ್ಷ ನಂತರ ಎಸ್. ನಾರಾಯಣ್ ಹಾಗೂ ದುನಿಯಾ ವಿಜಯ್ ಜೋಡಿಯ ಮೂರನೇ ಚಿತ್ರ ಇದಾಗಿದೆ. ನಿರ್ದೇಶಕ ಎಸ್. ನಾರಾಯಣ್ ಅವರು ಕಥೆಯ ಬಗ್ಗೆ ಮಾತನಾಡುತ್ತ, ಮಾರುತ ಕಂಟೆಂಟ್ ಓರಿಯಂಟೆಡ್ ಚಿತ್ರ. ಇದು ನಿಮ್ಮ ಕಥೆ. ನಮ್ಮ, ನಿಮ್ಮೆಲ್ಲರ ಮನೆಯ ಕಥೆಯೂ ಹೌದು. ನಮಗೆ ಗೊತ್ತಿಲ್ಲದ ಹಾಗೆ ನಮ್ಮನ್ನೆಲ್ಲಾ ಆವರಿಸಿಕೊಂಡಿರುವ ಭೂತ. ಅದರಿಂದ ಸಮಾಜದ ಮೇಲೆ ಆಗುತ್ತಿರುವ ದುಷ್ಪರಿಣಾಮಗಳೇನು? ಎಂಬುದನ್ನು ಈ ಚಿತ್ರದಲ್ಲಿ ತೋರಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ದುನಿಯಾ ವಿಜಯ್, ಶ್ರೇಯಸ್ ಮಂಜು ಪ್ರಮುಖ ಪಾತ್ರಗಳಲ್ಲಿರುವ ಈ ಚಿತ್ರದ ನಾಯಕಿಯಾಗಿ ನಟಿ ಬೃಂದಾ ಕಾಣಿಸಿಕೊಂಡಿದ್ದಾರೆ. ಉಳಿದಂತೆ ಹಾಸ್ಯನಟ ಸಾಧು ಕೋಕಿಲಾ, ನಿಶ್ವಿಕಾ ನಾಯ್ಡು, ರಂಗಾಯಣ ರಘು, ತಾರಾ ಅನುರಾಧಾ, ಶರತ್ ಲೋಹಿತಾಶ್ವ, ಪ್ರಮೋದ್ ಶೆಟ್ಟಿ, ಮಂಜು ಪಾವಗಡ, ಚಿತ್ರಾ ಶೆಣೈ ಸೇರಿದಂತೆ ಅನೇಕ ಅನುಭವಿ ಕಲಾವಿದರ ಬಳಗವೇ ಇರುವ ಮಾರುತ ಚಿತ್ರದ ವಿಶೇಷ ಪಾತ್ರದಲ್ಲಿ ಕ್ರೇಜಿಸ್ಟಾರ್ ರವಿಚಂದ್ರನ್ ಅವರು ಕಾಣಿಸಿಕೊಂಡಿದ್ದಾರೆ.

ಎಸ್.ನಾರಾಯಣ್ ಅವರ ರಚನೆ ಹಾಗೂ ನಿರ್ದೇಶನದ ಈ ಚಿತ್ರಕ್ಕೆ ಪಿ.ಕೆ.ಹೆಚ್.ದಾಸ್ ಅವರ ಛಾಯಾಗ್ರಹಣ, ಶಿವಪ್ರಸಾದ್ ಯಾದವ್ ಅವರ ಸಂಕಲನ, ವಿನೋದ್ ಹಾಗೂ ಅರ್ಜುನ್ ಅವರ ಸಾಹಸ ನಿರ್ದೇಶನ ಮತ್ತು ಮೋಹನ್‌ಕುಮಾರ್, ಸಂತು ಅವರ ನೃತ್ಯ ನಿರ್ದೇಶನವಿದೆ.

'ಸರ್ಕಾರಿ ನ್ಯಾಯಬೆಲೆ ಅಂಗಡಿ'ಯಲ್ಲಿ ರಾಗಿಣಿ



'ಸರ್ಕಾರಿ ನ್ಯಾಯಬೆಲೆ ಅಂಗಡಿ, ಸೋಮನಹಳ್ಳಿ' ಹೀಗೊಂದು ವಿನೂತನ ಶೀರ್ಷಿಕೆಯ ಚಿತ್ರ ಸೆಟ್ಟೇರುತ್ತಿದೆ. ಈ ಚಿತ್ರದಲ್ಲಿ ತುಪ್ಪದ ಬೆಡಗಿ ರಾಗಿಣಿ ದ್ವಿವೇದಿ ಅವರು ನ್ಯಾಯಬೆಲೆ ಅಂಗಡಿಯ ಓನರ್ ಆಗಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಚಿತ್ರದ ಹಾಡುಗಳ ಧ್ವನಿಮುದ್ರಣ ಸಮಾರಂಭ ಇತ್ತೀಚೆಗೆ ನೆರವೇರಿತು. ಸಾತ್ವಿಕ್ ಪವನ್‌ಕುಮಾರ ಅವರ ನಿರ್ದೇಶವಿರುವ ಈ ಚಿತ್ರದ ಕಥೆ, ಚಿತ್ರಕಥೆ, ಸಂಭಾಷಣೆಗಳನ್ನು ಬಿ.ರಾಮಮೂರ್ತಿ ಅವರು ರಚಿಸಿದ್ದಾರೆ. ಅನಂತ ಆರ್ಯನ್ ಅವರ ಸಂಗೀತ ಸಂಯೋಜನೆಯ 2 ಹಾಡುಗಳು ಈ ಚಿತ್ರದಲ್ಲಿವೆ. ಫಿಲಂ ಚೇಂಬರ್ ಮಾಜಿ ಅಧ್ಯಕ್ಷ ಭಾ.ಮ.ಹರೀಶ್ ಈ ಚಿತ್ರತಂಡಕ್ಕೆ ಬೆನ್ನೆಲುಬಾಗಿ ನಿಂತಿದ್ದಾರೆ.

ತೇಜುಮೂರ್ತಿ ಹಾಗೂ ಎಸ್.ಪದ್ಮಾವತಿ ಚಂದ್ರಶೇಖರ್ ಸೇರಿ ಸರ್ಕಾರಿ ನ್ಯಾಯಬೆಲೆ ಅಂಗಡಿಗೆ ಬಂಡವಾಳ ಹೂಡುತ್ತಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ರಾಗಿಣಿ ದ್ವಿವೇದಿ, ಇಷ್ಟು ದಿನ ಕ್ಲಾಸ್, ಮಾಸ್ ಎಂಥ ಪಾತ್ರವನ್ನಾದರೂ ಧೈರ್ಯದಿಂದ ನಿಭಾಯಿಸುತ್ತಿದ್ದೆ. ಆದರೆ ಈ ಪಾತ್ರ ಹೇಗೆ ಮಾಡ್ತೀನೋ ಅಂತ ಭಯವಾಗ್ತಿದೆ. ಏಕೆಂದರೆ ಇಡೀ ಚಿತ್ರಕಥೆ ನನ್ನ ಪಾತ್ರದ ಮೇಲೆ ನಿಂತಿದೆ. ನ್ಯಾಯಬೆಲೆ ಅಂಗಡಿಯಲ್ಲಿ ಗ್ರಾಹಕರ ಜತೆ ಸಂಯಮದಿಂದ ವರ್ತಿಸಿ, ನಂತರ ಮನೆಯ ಜವಾಬ್ದಾರಿಯನ್ನೂ ನಿಭಾಯಿಸುವ ಜವಾಬ್ದಾರಿಯುತ ಮಹಿಳೆಯಾಗಿ ಕಾಣಿಸಿಕೊಳ್ಳುತ್ತಿದ್ದೇನೆ. ಇವತ್ತಿನ ಸಮಾಜದಲ್ಲಿ ಏನೇನೆಲ್ಲ ನಡೆಯುತ್ತಿದೆಯೋ ಅದನ್ನೇ ಚಿತ್ರದಲ್ಲಿ ಹೇಳಲಾಗುತ್ತಿದೆ, ನಿಜಕ್ಕೂ ಇದು ತುಂಬಾ ಜವಾಬ್ದಾರಿಯ ಕೆಲಸ. ಕೆಲವೊಂದು ಶಾಕಿಂಗ್ ಎಲಿಮೆಂಟ್ಸ್ ಸಹ ಚಿತ್ರದಲ್ಲಿದೆ ಎಂದರು. ಛಾಯಾಗ್ರಾಹಕ ಕಮ್ ನಿರ್ದೇಶಕ ಪವನ್ ಮಾತನಾಡುತ್ತ ಇದೊಂದು ಬ್ರಿಡ್ಜ್ ಸಿನಿಮಾ, ಮಹಿಳಾ ಪ್ರಧಾನ ಫ್ಯಾಮಿಲಿ ಡ್ರಾಮಾ ಎಂದರು. ಕಥೆ, ಚಿತ್ರಕಥೆ ಬರೆದಿರುವ ಬಿ. ರಾಮಮೂರ್ತಿ ಮಾತನಾಡುತ್ತ ಮಹಿಳಾ ಪ್ರಧಾನ ಚಿತ್ರಗಳು ತುಂಬಾ ಕಮ್ಮಿಯಾಗಿವೆ. ನ್ಯಾಯಬೆಲೆ ಅಂಗಡಿಯ ಸುತ್ತ ನಡೆಯೋ ಕಥೆಯಿದು ಎಂದು ವಿವರಿಸಿದರು. ಪಡಿತರ ವಿತರಕರ ಸಂಘದ ಟಿ.ಕೃಷ್ಣಪ್ಪ ಪ್ರಮುಖ ಪಾತ್ರ ನಿರ್ವಹಿಸುತ್ತಿದ್ದಾರೆ.

ಸಿನಿಪದಬಂಧ-563



ಉಮ್ಮತ್ತೂರು ಇಂದುಶೇಖರ್
ಮೊ.9880820462

1		2		3	■	4				5
	■		■		■		■	■	■	
6		■	■	7				8		
	■	9			■		■		■	■
	■	■	■		■	■	■	■	10	■
	■	11	■	12						■
13				■	■	■	■	■		■
	■		■	14	■	15				
	■	■	■		■		■	■		■
16					■		■	17	■	■
■	■	■	■		■	18				

ಹೆಸರು ______
ವಿಳಾಸ ______
______
ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1."ಧರೆ"ಗಿಳಿದ "ಅರಸ"ನಂತಿರುವ ಸಂಗೀತ ನಿರ್ದೇಶಕ 5
4.ರಾಜಣ್ಣನ ಸತಿ ಸಾವಿತ್ರಿ 5
6._ _ ಸುಬ್ಬಯ್ಯ 2
7.ಶಿವಣ್ಣನಿಗೆ ಮೀರಾ ಜಾಸ್ಮಿನ್ ಭಗವಂತನ ಕೊಡುಗೆ! 7
9.ದುನಿಯಾ ವಿಜಯ್ "ಬಂಗಾರ"ದಂತಹವನು 3
12.ಜಿ.ಪಿ.ರಾಜರತ್ನಂ ನೆನಪಿಸಿಕೊಳ್ಳಿ ಡಾಲಿ ಧನಂಜಯ್ ಲೋಕವಿದೆ 6
13.ಈ ಕಲಾ ನಿರ್ದೇಶಕ ನಗೆ ಬೀರಿದ್ದಾನೆ 4
15.ರವಿಚಂದ್ರನ್ ಯಾರಿಗೂ ಹೆದರದವನು 5
16.ನಾನು ನಿನ್ನನ್ನು ಬಿಡಬೇಕೆ? ಎನ್ನುವರ್ಥದ ಚಿತ್ರವನ್ನು ಕೊನೆಯಲ್ಲಿ ಸ್ವಲ್ಪ ಎಳೆಯಿರಿ 5
18.ಕಲ್ಯಾಣ್ ಕುಮಾರ್ ಅಭಿನಯದ ಘನರೂಪದ ವಸ್ತು ತುಂಬಾ ಸಿಹಿ! 5

ಮೇಲಿನಿಂದ ಕೆಳಕ್ಕೆ

1.ರವಿತೇಜ ಕಣ್ಣು ತೆರೆಯಲು ಭೂಮಿಯು ಹಿಮದಿಂದ ಆವೃತಗೊಂಡಿದೆ 10
2.ಲೂಸ್ ಮಾದ ಯೋಗಿಯ ಚಿತ್ರಕ್ಕೆ ರಮೇಶ್ ಆರ್.ಭಾಗವತ್ ನಿರ್ದೇಶಕ 2
3.ವಿಷ್ಣುವರ್ಧನ್ – ರೋಹಿಣಿ ಅಭಿನಯದ ಚಿತ್ರ 6
4.ಅಜಯ್‌ರಾವ್ – ಅಮೂಲ್ಯಳ ಪ್ರಣಯ ಕಾವ್ಯ! 4
5.ನಟ ಲೋಕೇಶ್ ಅವರ ಶಿವಸತಿ ಇಲ್ಲಿ ಅಸ್ತವ್ಯಸ್ತ 3
8.ಪಟ್ಟಣಕ್ಕೆ ಬಂದ ಚಿಕ್ಕವನು ಇಲ್ಲಿ ತಲೆಕೆಳಗು 2
10.ಶಿವರಾಜ್‌ಕುಮಾರ್ ಅಭಿನಯದ ಪರ್ವತ ತುಂಬಾ ಎತ್ತರ! 5
11.ಗುಂಡಾ _ _ _ 3
14.ಸುಬ್ಬಿ ಸುಬ್ಬಕ್ಕನ ಜೋಗುಳವಿದು 4
15.ಪ್ರಜ್ವಲ್ ದೇವರಾಜ್‌ನ ಮಂಗಳ ಗ್ರಹ 4
17.ದರ್ಶನ್ "ಸೇವಕ" 2

ಸಿನಿ ಪದಬಂಧ 562ರ ಉತ್ತರ

ಮ	ಹಾ	ಚ	ತು	ರ	■	ಕ	ರಾ	ಳ	ರಾ	ತ್ರಿ
ಕ್ಕ	■	ಕ್ರ	■	ಸಿ	■	ರ	■	■	■	ನೇ
ಳಿ	ಬಿ	■	■	ಕ	ರ್ನಾ	ಟ	ಕ	ಸು	ಪು	ತ್ರ
ರ	■	ಸ	ಮ	ರ	■	ಕ	■	ಳ್ಳ	■	■
ಲ	■	■	■	ರಾ	■	■	■	■	ಸಾ	■
ವ್ವ	■	ಶಿ	■	ಜ	ಯ	ಮ್ಮ	ನ	ಮ	ಗ	■
ಮ	ಹಾ	ಕಾ	ಳಿ	■	■	■	■	■	ರ	■
ನೆ	■	ರಿ	■	ಅ	■	ಬ	ಯ	ಲು	ದೀ	ಪ
ತುಂ	■	■	■	ಮೋ	■	ಲ	■	■	ಪ	■
ಬ	ಯ	ಲು	ದಾ	ರಿ	■	ರಾ	■	ನ	■	■
■	■	■	■	ಕಾ	■	ಮ	ಕ್ಕ	ಳ	ಸೈ	ನ್ಯ

ವಿಜೇತರು: ಮಹದೇವಸ್ವಾಮಿ ಬಿನ್ ಮಾದಯ್ಯ ಬಸವಟ್ಟಿ, ಸಂತೇಮರಹಳ್ಳಿ ಅಂಚೆ, ಚಾಮರಾಜನಗರ.

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

'ತಾಯವ್ವ'ನಿಗೆ ಕಿಚ್ಚ ಸುದೀಪ್ ಸಾಥ್




ಎರಡೂವರೆ ದಶಕಗಳ ಹಿಂದೆ ತೆರೆಕಂಡಿದ್ದ ಚಿತ್ರ ತಾಯವ್ವ. ಕಿಚ್ಚ ಸುದೀಪ್ ಮೊದಲ ಬಾರಿಗೆ ಅಭಿನಯಿಸಿದ್ದ ಆ ಚಿತ್ರದಲ್ಲಿ ಸುದೀಪ್ ಜತೆ ಹಿರಿಯ ನಟಿ ಉಮಾಶ್ರೀ ತಾಯವ್ವನ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಈಗ ಅದೇ ತಾಯವ್ವ ಹೆಸರಿನಲ್ಲಿ, ಮತ್ತೊಂದು ಚಿತ್ರ ತೆರೆಗೆ ಬರಲು ತಯಾರಾಗುತ್ತಿದೆ. ಈ ಸಲ ತಾಯವ್ವನಾಗಿ ಹೊಸ ಪ್ರತಿಭೆ ಗೀತಪ್ರಿಯ ಅವರು ಕಾಣಿಸಿಕೊಳ್ಳುತ್ತಿದ್ದಾರೆ.

ಈಗಾಗಲೇ ತಾಯವ್ವ ಚಿತ್ರದ ಬಹುತೇಕ ಕೆಲಸಗಳು ಪೂರ್ಣಗೊಂಡಿದ್ದು, ಇತ್ತೀಚೆಗೆ ತಾಯವ್ವ ಚಿತ್ರದ ಹಾಡುಗಳ ಬಿಡುಗಡೆ ಕಾರ್ಯಕ್ರಮ ನಡೆಯಿತು. ಅನಂತ ಆರ್ಯನ್ ಅವರ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದಿರುವ ತಾಯವ್ವ ಚಿತ್ರದ ಗೀತೆಗಳಿಗೆ ನಾಯಕಿ ಗೀತಪ್ರಿಯ ಅವರೇ ಧ್ವನಿಯಾಗಿದ್ದಾರೆ. ಅಪ್ಪಟ ಕನ್ನಡದ ಗ್ರಾಮೀಣ ಸೊಗಡಿನ ಜನಪದ ಗೀತೆಗಳ ಗುಚ್ಛವನ್ನು ತಾಯವ್ವ ಚಿತ್ರದಲ್ಲಿ ಹೊಸರೂಪದಲ್ಲಿ ತರಲಾಗುತ್ತಿದೆ. ಈ ಸಮಾರಂಭದಲ್ಲಿ ನಟ ಕಿಚ್ಚ ಸುದೀಪ್ ಮುಖ್ಯ ಅತಿಥಿಯಾಗಿ ಆಗಮಿಸಿ, ತಾಯವ್ವ ಚಿತ್ರದ ಆಡಿಯೋ ಬಿಡುಗಡೆಗೊಳಿಸಿ ಶುಭ ಹಾರೈಸಿದರು.

ನಂತರ ಮಾತನಾಡಿದ ಸುದೀಪ್, ನಾನು ಆಗಷ್ಟೇ ಕಾಲೇಜು ಮುಗಿಸುತ್ತಿರುವ ಸಂದರ್ಭದಲ್ಲಿ ತಾಯವ್ವ ಚಿತ್ರದಲ್ಲಿ ಅಭಿನಯಿಸುವ ಅವಕಾಶ ಸಿಕ್ಕಿತ್ತು. ಮೊದಲ ಬಾರಿಗೆ ಮುಖ್ಯಪಾತ್ರದಲ್ಲಿ ಅಭಿನಯಿಸಿದ್ದ ಈ ಸಿನಿಮಾ ನನಗೆ ಸಾಕಷ್ಟು ವಿಷಯಗಳನ್ನು ಹೇಳಿಕೊಟ್ಟಿತ್ತು. ನನ್ನ ವೃತ್ತಿ ಜೀವನದಲ್ಲಿ ಈ ಸಿನಿಮಾ ಇಂದಿಗೂ ಒಂದು ಸುಮಧುರ ನೆನಪಾಗಿ ಉಳಿದಿದೆ. ಈಗ ಅದೇ ತಾಯವ್ವ ಹೆಸರಿನಲ್ಲಿ ಅಂಥದ್ದೇ ಮತ್ತೊಂದು ಚಿತ್ರ ತೆರೆಗೆ ಬರುತ್ತಿದೆ. ತಾಯವ್ವ ಎಂಬ ಹೆಸರಿನಲ್ಲೇ ಒಂದು ಭಾವನಾತ್ಮಕ ಸೆಳೆತವಿದೆ. ಈ ಸಿನಿಮಾದಲ್ಲೂ ಅದೇ ಅಂಶಗಳಿರಬಹುದು ಎಂಬ ನಿರೀಕ್ಷೆಯಿದೆ. ಚಿತ್ರಕ್ಕೆ ಒಳ್ಳೆಯದಾಗಲಿ ಎಂದು ಶುಭ ಹಾರೈಸಿದರು.


ಈ ಚಿತ್ರದ ಮೂಲಕ ಮೊದಲ ಬಾರಿಗೆ ಗೀತಪ್ರಿಯ ಚಿತ್ರರಂಗಕ್ಕೆ ಪ್ರವೇಶಿಸುತ್ತಿದ್ದಾರೆ. ಇದೊಂದು ಅಪ್ಪಟ ಗ್ರಾಮೀಣ ಸೊಗಡಿನ ಸಿನೆಮಾ. ಹೆಣ್ಣುಮಕ್ಕಳನ್ನು ಉಳಿಸಿ, ಬೆಳೆಸಿ ಎಂಬ ಸಂದೇಶ ಇಟ್ಟುಕೊಂಡು ಈ ಸಿನಿಮಾ ಮಾಡಲಾಗಿದೆ. ಇದರಲ್ಲಿ ನಾನು ತಾಯವ್ವನ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಎಲ್ಲರಿಗೂ ತಲುಪುವಂಥ ಸಂದೇಶ ಈ ಸಿನೆಮಾದಲ್ಲಿದೆ. ಕಿಚ್ಚ ಸುದೀಪ್ ಅವರ ಮೊದಲ ಸಿನೆಮಾದ ಹೆಸರನ್ನೇ ನಮ್ಮ ಸಿನೆಮಾಗಿಟ್ಟು ತೆರೆಗೆ ತರುತ್ತಿದ್ದೇವೆ. ನಮಗೆ ಬೆಂಬಲವಾಗಿ ಸುದೀಪ್ ನಿಂತಿರುವುದು ದೊಡ್ಡ ಬಲ ತಂದಂತಾಗಿದೆ. ಈಗಾಗಲೇ ಚಿತ್ರದ ಬಹುತೇಕ ಕೆಲಸ ಮುಗಿದಿದ್ದು, ಆದಷ್ಟು ಬೇಗ ಪ್ರೇಕ್ಷಕರ ಮುಂದೆ ಬರಲಿದ್ದೇವೆ ಎಂದರು. ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷ ಭಾ.ಮ.ಹರೀಶ್ ಅವರು ಭಾ.ಮ. ಹರೀಶ್ ಆಡಿಯೋ ಎಂಬ ಹೊಸ ಆಡಿಯೋ ಕಂಪೆನಿಯನ್ನು ಪ್ರಾರಂಭಿಸಿದ್ದು ಇದರ ಅಡಿಯಲ್ಲಿ ತಾಯವ್ವ ಸಿನೆಮಾದ ಆಡಿಯೋ ಬಿಡುಗಡೆಯಾಗಿದೆ.

ಫೆ.10ರಿಂದ ತ್ರಿವೇಣಿ ಸಂಗಮದಲ್ಲಿ ಕುಂಭಮೇಳ



- ಜಿಲ್ಲಾಡಳಿತದಿಂದ ಭರದ ಸಿದ್ಧತಾ ಕಾರ್ಯ
- ಲಕ್ಷಾಂತರ ಭಕ್ತರು ಭಾಗವಹಿಸುವ ನಿರೀಕ್ಷೆ





ತಿ.ನರಸೀಪುರ, ಫೆ.6– ಕಾವೇರಿ, ಕಪಿಲ ಮತ್ತು ಸ್ಪಟಿಕ ಸರೋವರ ಸೇರುವ ತಾಲೂಕಿನ ತಿರುಮಕೂಡಲಿನ ತ್ರಿವೇಣಿ ಸಂಗಮದಲ್ಲಿ ಫೆ.10ರಿಂದ 3 ದಿನಗಳ ಕಾಲ ಕುಂಭಮೇಳ ನಡೆಯಲಿದ್ದು, ಜಿಲ್ಲಾಡಳಿತದಿಂದ ಸಿದ್ಧತಾ ಕಾರ್ಯ ಭರದಿಂದ ಸಾಗಿದೆ.

ಇಲ್ಲಿನ ತ್ರಿವೇಣಿ ಸಂಗಮದಲ್ಲಿ 3 ವರ್ಷಗಳಿಗೊಮ್ಮೆ ಕುಂಭಮೇಳ ನಡೆಯಲಿದ್ದು, 2021ರಲ್ಲಿ ಕೋವಿಡ್ ಕಾರಣದಿಂದಾಗಿ ಕುಂಭಮೇಳ ನಡೆದಿರಲಿಲ್ಲ. 6 ವರ್ಷಗಳ ಬಳಿಕ ಇದೀಗ ಫೆ.10ರಿಂದ 12ರವರೆಗೆ ಕುಂಭಮೇಳ ನಡೆಯಲಿದೆ. ಅಲ್ಲದೇ ಈ ಧಾರ್ಮಿಕ ಆಚರಣೆಯಲ್ಲಿ ಲಕ್ಷಾಂತರ ಭಕ್ತರು ಸೇರುವ ನಿರೀಕ್ಷೆ ಇರುವುದರಿಂದ ಸಕಲ ಸಿದ್ಧತೆ ಕೈಗೊಳ್ಳಲಾಗುತ್ತಿದೆ.

ಭರದ ಸಿದ್ಧತಾ ಕಾರ್ಯ: ಈಗಾಗಲೇ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀನಿರ್ಮಲಾನಂದನಾಥ ಸ್ವಾಮೀಜಿ ಅವರ ನೇತೃತ್ವದಲ್ಲಿ ಕುಂಭಮೇಳದ ಪೂರ್ವ ಸಿದ್ಧತಾ ಸಭೆ ನಡೆಸಲಾಗಿದ್ದು, ರಾಜ್ಯ ಸರ್ಕಾರದಿಂದ ಕಾರ್ಯಕ್ರಮಕ್ಕೆ 6 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ.

ಧಾರ್ಮಿಕ ಕಾರ್ಯಕ್ರಮಕ್ಕಾಗಿ ವೇದಿಕೆ ನಿರ್ಮಾಣ ಕಾರ್ಯ, ಸ್ವಚ್ಛತಾ ಕಾರ್ಯ, ಲೈಟಿಂಗ್ಸ್ ಅಳವಡಿಕೆ ಕಾರ್ಯ ಪ್ರಗತಿಯಲ್ಲಿದೆ. ನದಿ ಒಳಗೆ ಬೊಂಬುಗಳಿಂದ ತಡೆ ಬೇಲಿ ನಿರ್ಮಾಣ ಮಾಡಲಾಗಿದ್ದು, ಅಹಿತಕರ ಘಟನೆಗಳು ಜರುಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿದೆ. ನದಿ ಪಾತ್ರದ ಹಲವೆಡೆ ಮುಳುಗು ತಜ್ಞರನ್ನು ನಿಯೋಜನೆ ಮಾಡಲಾಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ನೂರಾರು ಪೊಲೀಸರು ನಿಯೋಜನೆ ಮಾಡಲಾಗಿದೆ.

3 ಸ್ನಾನ ಘಟ್ಟಕ್ಕೆ ವ್ಯವಸ್ಥೆ: ಫೆ.12 ರಂದು ಸಾವಿರಾರು ಜನರು ಕುಂಭಸ್ನಾನ ಮಾಡಲಿದ್ದು, ಅಂದು ಬೆಳಗ್ಗೆ 9 ರಿಂದ 9.30 ರೊಳಗಿನ ಶುಭ ಮೀನ ಲಗ್ನ ಮತ್ತು ಮಧ್ಯಾಹ್ನ 12 ರಿಂದ 1 ಗಂಟೆಯೊಳಗಿನ ಶುಭ ವೃಷಭ ಲಗ್ನದಲ್ಲಿ ಕುಂಭಮೇಳದ ಪುಣ್ಯಸ್ನಾನ ಮಾಡಲು ಮುಹೂರ್ತ ನಿಗದಿ ಮಾಡಲಾಗಿದೆ. ಹೀಗಾಗಿ ಪುಣ್ಯ ಸ್ನಾನ ಮಾಡಲು ಅಗಸ್ತ್ಯೇಶ್ವರ, ಗುಂಜಾ ನರಸಿಂಹಸ್ವಾಮಿ ಮತ್ತು ಭಿಕ್ಷೇಶ್ವರ ಸ್ವಾಮಿ ದೇವಾಲಯದ ಬಳಿ ಮೂರು ಕಡೆ ಸ್ನಾನ ಘಟ್ಟದ ವ್ಯವಸ್ಥೆ ಮಾಡಲಾಗುತ್ತಿದೆ.

ನದಿಯಲ್ಲಿ ಬ್ಯಾರಿಕೇಡ್: ಸದ್ಯಕ್ಕೆ ನದಿಯಲ್ಲಿ ನೀರು ಹೆಚ್ಚಿರುವುದರಿಂದ 6 ಅಡಿಯಷ್ಟು ಆಳವಿದೆ. ಇದರಿಂದ ವಯಸ್ಸಾದವರು ಮತ್ತು ಮಕ್ಕಳು ಮುಳುಗದಂತೆ ಕ್ರಮ ವಹಿಸಲಾಗಿದ್ದು, 3 ಅಡಿ ಆಳದ ವರೆಗೆ – ಹೋಗಿ ಸ್ನಾನಕ್ಕೆ ಅವಕಾಶ ಮಾಡಿ ಕೊಡಲಾಗುತ್ತಿದೆ. 3 ಅಡಿ ಆಳದ ನಂತರ ಬ್ಯಾರಿಕೇಡ್ ನಿರ್ಮಾಣ ಮಾಡಿ, ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ. ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಿರುವುದರಿಂದ ಈ ಬಾರಿ ತೇಲುವ ಸೇತುವೆ ನಿರ್ಮಾಣ ಮಾಡುತ್ತಿಲ್ಲ.

15ಕ್ಕೂ ಹೆಚ್ಚು ಬೋಟ್ ಬಳಕೆ: 3 ದಿನಗಳ ಕಾಲ ನಡೆಯುವ ಕುಂಭಮೇಳದಲ್ಲಿ ಜನರು ಮುಳುಗಿ ಅಥವಾ ನೀರಿನಲ್ಲಿ ಕೊಚ್ಚಿಕೊಂಡು ಹೋಗದಂತೆ ಮುಂಜಾಗ್ರತ ಕ್ರಮವಾಗಿ ಜಿಲ್ಲಾಡಳಿತ 15ಕ್ಕೂ ಹೆಚ್ಚು ಬೋಟ್ ನಿಯೋಜಿಸಲು ವ್ಯವಸ್ಥೆ ಮಾಡಲಾಗಿದೆ.

> 13ನೇ ಕುಂಭಮೇಳಕ್ಕೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು, ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ವೇದಿಕೆ ನಿರ್ಮಾಣ ಮಾಡಲಾಗುತ್ತಿದೆ. ಭದ್ರತೆಗೆ ಪೊಲೀಸ್ ಮತ್ತು ಅಗ್ನಿಶಾಮಕ ಸಿಬ್ಬಂದಿ ಬಳಕೆ ಮಾಡಿಕೊಳ್ಳಲಿದ್ದೇವೆ. ಪಟ್ಟಣದಲ್ಲಿ 3 ದಿನ ದೀಪಾಲಂಕಾರ ವ್ಯವಸ್ಥೆ ಮಾಡಲಾಗುತ್ತಿದೆ.
>
> - ರಕ್ಷಿತ್, ಕುಂಭಮೇಳದ ನೋಡಲ್ ಅಧಿಕಾರಿ.

ರಂಗನತಿಟ್ಟು ಪಕ್ಷಿಧಾಮದಿಂದ 2, ಸ್ಥಳೀಯವಾಗಿ 12, ರೆಸಾರ್ಟ್‌ಗಳಿಂದ 4 ಬೋಟ್ ಪಡೆದುಕೊಳ್ಳಲಾಗಿದೆ. ಹಾಗೆಯೇ ವಿವಿಧ ಭಾಗಗಳಿಂದ ನುರಿತ ಈಜು ತಜ್ಞರನ್ನು ನಿಯೋಜಿಲಾಗುತ್ತಿದೆ.

ಮೂಲ ಸೌಲಭ್ಯಕ್ಕೆ ಒತ್ತು: ತಿ.ನರಸೀಪುರದ ತ್ರಿವೇಣಿ ಸಂಗಮದಲ್ಲಿ ನಿತ್ಯವೂ ಲಕ್ಷಾಂತರ ಮಂದಿ ಆಗಮಿಸುವ ನಿರೀಕ್ಷೆ ಇದೆ. ಈ ಸಂದರ್ಭ ಯಾವುದೇ ಸಮಸ್ಯೆ ಆಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದ್ದು, ಸ್ನಾನ ಘಟ್ಟಗಳಲ್ಲಿ 20 ಬಟ್ಟೆ ಬದಲಿಸಲು ತಾತ್ಕಾಲಿಕ ಕೊಠಡಿ ನಿರ್ಮಾಣ ಮಾಡಲಾಗಿದೆ. ಹಾಗೆಯೇ ಪ್ರತಿ ಸ್ನಾನ ಘಟ್ಟದ ಬಳಿ 10 ಶೌಚಾಲಯ ನಿರ್ಮಿಸಲಾಗುತ್ತಿದೆ.

ಗಣ್ಯರು, ಮಠಾಧೀಶರು ಭಾಗಿ



ಫೆ.10 ರಂದು ಶ್ರೀಅಗಸ್ತ್ಯೇಶ್ವರಸ್ವಾಮಿ ಸನ್ನಿಧಿಯಲ್ಲಿ ಅನುಜ್ಞಾ ಕಾರ್ಯಕ್ರಮ, ಅಂಕುರಾರ್ಪಣೆ ಮತ್ತು ಧ್ವಜಾರೋಹಣ ನಡೆಯಲಿದ್ದು, ಮಠಾಧೀಶರು, ಗಣ್ಯರು ಭಾಗವಹಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಲಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಉಪಸ್ಥಿತರಿರುವರು. ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಕುಂಭಮೇಳ ಉದ್ಘಾಟಿಸಲಿದ್ದು, ವಿಶೇಷ ಆಹ್ವಾನಿತರಾಗಿ ಸಚಿವರಾದ ಕೆ.ವೆಂಕಟೇಶ್, ರಾಮಲಿಂಗಾರೆಡ್ಡಿ, ವಿಪಕ್ಷ ನಾಯಕ ಆರ್.ಅಶೋಕ್ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಸುನೀಲ್ ಬೋಸ್, ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಅನಿಲ್, ರಮೇಶ್‌ಬಾಬು ಬಂಡಿಸಿದ್ದೇಗೌಡ, ಸಿ.ಪುಟ್ಟರಂಗಶೆಟ್ಟಿ, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ.ಮಾನಸ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್ ಉಪಸ್ಥಿತರಿರುವರು. ಆದಿಚುಂಚನಗಿರಿ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮೈಸೂರಿನ ಅವಧೂತ ದತ್ತಪೀಠದ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಉಡುಪಿ ಪೇಜಾವರ ಮಠದ ಶ್ರೀವಿಶ್ವಪ್ರಸನ್ನ ತೀರ್ಥ ಶ್ರೀಪಾದರು ಸೇರಿದಂತೆ ಹರಗುರುಚರಮೂರ್ತಿಗಳು ಕಾರ್ಯಕ್ರಮದ ಸಾನಿಧ್ಯ ವಹಿಸಲಿದ್ದಾರೆ.

ಫೆ.11ರಂದು ನಡೆಯುವ ಧಾರ್ಮಿಕ ಸಭೆಯ ಅಧ್ಯಕ್ಷತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಲಿದ್ದು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಉಪಸ್ಥಿತರಿರುವರು. ಸಚಿವ ಕೆ.ವೆಂಕಟೇಶ್ ಧಾರ್ಮಿಕ ಸಭೆ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸಚಿವರಾದ ಎಂ.ಬಿ.ಪಾಟೀಲ್, ದಿನೇಶ್ ಗುಂಡೂರಾವ್, ಎಂ.ಸಿ.ಸುಧಾಕರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಭಾಗವಹಿಸುವರು.

ಫೆ.12ರಂದು ನಡೆಯುವ ಧರ್ಮಸಭೆಯ ಅಧ್ಯಕ್ಷತೆ ಮತ್ತು ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸುವರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಉಪಸ್ಥಿತರಿರುವರು. ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಸಮಾರೋಪ ಭಾಷಣ ಮಾಡುವರು. ಈ ವೇಳೆ ಸಚಿವರಾದ ಕೆ.ವೆಂಕಟೇಶ್, ರಾಮಲಿಂಗಾರೆಡ್ಡಿ, ಡಾ.ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ, ಕೃಷ್ಣ ಭೈರೇಗೌಡ, ಪ್ರಿಯಾಂಕ್ ಖರ್ಗೆ, ಎನ್.ಚಲುವರಾಯಸ್ವಾಮಿ, ಕೆ.ಎನ್.ರಾಜಣ್ಣ, ಸಂಸದರಾದ ಸುನೀಲ್ ಬೋಸ್, ಯದುವೀರ್, ಶಾಸಕರಾದ ಅನಿಲ್, ರಮೇಶ್ ಬಾಬು ಬಂಡಿಸಿದ್ದೇಗೌಡ, ಸಿ.ಪುಟ್ಟರಂಗಶೆಟ್ಟಿ, ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಡಿ.ರವಿಶಂಕರ್, ಜಿ.ಡಿ.ಹರೀಶ್‌ಗೌಡ, ದರ್ಶನ್, ಟಿ.ಎಸ್.ಶ್ರೀವತ್ಸ ಕೆ.ಹರೀಶ್‌ಗೌಡ, ಡಾ.ಯತೀಂದ್ರ ಕೆ.ವಿವೇಕಾನಂದ, ನರೇಂದ್ರಸ್ವಾಮಿ, ಗಣಿಗ ರವಿ, ಕೆ.ಎಂ.ಉದಯ್, ಹೆಚ್.ಟಿ.ಮಂಜು, ಎ.ಆರ್.ಕೃಷ್ಣ ಮೂರ್ತಿ, ಹೆಚ್.ಎಂ.ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್, ವಿಧಾನಪರಿಷತ್ ಸದಸ್ಯರಾದ ಹೆಚ್.ವಿಶ್ವನಾಥ್, ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ.ಮಾನಸ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಕಾವೇರಿ ಜಲಾನಯನ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ, ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಸರ್ಕಾರದ ಪ್ರಧಾನ ಕಾರ್ಯದರ್ಶಿ ರಾಜೇಂದ್ರಕುಮಾರ್ ಕಠಾರಿಯಾ, ಎಸ್.ಸೆಲ್ವಕುಮಾರ್, ಧಾರ್ಮಿಕ ದತ್ತಿ ಆಯುಕ್ತ ಡಾ.ವೆಂಕಟೇಶ್ ಭಾಗವಹಿಸುವರು.

ಸುಗಮ ಸಂಚಾರಕ್ಕೆ ವ್ಯವಸ್ಥೆ: ಪುಣ್ಯ ಸ್ನಾನಕ್ಕೆ ಲಕ್ಷಾಂತರ ಮಂದಿ ಒಮ್ಮೆಗೆ ಆಗಮಿಸುವುದರಿಂದ ಕಾಲ್ತುಳಿತ ಉಂಟಾಗದಂತೆ ಪ್ರತ್ಯೇಕವಾಗಿ ಪ್ರವೇಶ ಮತ್ತು ನಿರ್ಗಮನಕ್ಕೆ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಅಲ್ಲದೇ ತಿ.ನರಸೀಪುರ ಪಟ್ಟಣದ ಹಲವೆಡೆ ವಾಹನಗಳ ನಿಲುಗಡೆಗೆ ಪಾರ್ಕಿಂಗ್ ಸ್ಥಳ ನಿಗದಿ ಮಾಡಲಾಗಿದೆ.

11ಕ್ಕೆ ಕಾಶಿ ಮಾದರಿ ಆರತಿ: ಕುಂಭಮೇಳದ 2ನೇ ದಿನವಾದ ಮಂಗಳವಾರ ರಾತ್ರಿ ತ್ರಿವೇಣಿ ಸಂಗಮದಲ್ಲಿ ಕಾಶಿಯಲ್ಲಿ ಗಂಗಾನದಿಗೆ ನಡೆಯುವ ಗಂಗಾರತಿ ಮಾದರಿಯಲ್ಲಿ ಮಹಾಆರತಿ ನಡೆಯಲಿದೆ. ಇದಕ್ಕಾಗಿ ಕಾಶಿಯಿಂದ 15 ಮಂದಿಯನ್ನು ಕರೆಸಿಕೊಳ್ಳಲಾಗುತ್ತಿದ್ದು ಪ್ರತ್ಯೇಕ ವೇದಿಕೆ ನಿರ್ಮಾಣ ಮಾಡಲಾಗುತ್ತಿದೆ. ಹಾಗೆಯೇ ಸಂಚಾರ ದಟ್ಟಣೆ ಹೆಚ್ಚಾಗದಂತೆ ತ್ರಿವೇಣಿ ಸಂಗಮದ ಬಳಿ ವಾಹನ ಸಂಚಾರ ನಿಷೇಧಿಸಿದ್ದು, ವಾಹನ ನಿಲುಗಡೆಗೆ ಪ್ರತ್ಯೇಕ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಒತ್ತು: ಈ ಬಾರಿಯ 13ನೇ ಕುಂಭಮೇಳದಲ್ಲಿ ಧಾರ್ಮಿಕ ಕಾರ್ಯಕ್ರಮದೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗೂ ಒತ್ತು ನೀಡಲಾಗಿದೆ. ಅದಕ್ಕಾಗಿ ಸಂಗಮ ಸ್ಥಳದ 3 ಕಡೆ ವೇದಿಕೆ ನಿರ್ಮಾಣ ಮಾಡಲಾಗುತ್ತಿದ್ದು, 3 ದಿನ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಇದರೊಂದಿಗೆ ಬೆಳ್ಳಿ ರಥದ ಮೂಲಕ ಸಂತರ, ಮಠಾಧೀಶರ ಮೆರವಣಿಗೆ ಇರಲಿದೆ. ಹಾಗೆಯೇ ಸಂಕಲ್ಪ ಹೋಮ, ಅಗಸ್ತ್ಯೇಶ್ವರನಿಗೆ ರುದ್ರಾಭಿಷೇಕ, ಅನುಜ್ಞೆ ಧ್ವಜಾರೋಹಣ, ಹೋಮ ಹವನ ಸೇರಿ ಅನೇಕ ಧಾರ್ಮಿಕ ಕಾರ್ಯ ನೆರವೇರಲಿವೆ.



ವಿವಿಧ ಧಾರ್ಮಿಕ ಕಾರ್ಯಕ್ರಮಗಳು

- ಫೆ.10ರ ಸೋಮವಾರ, ತ್ರಯೋದಶಿ, ಪುಷ್ಯ ಪ್ರಾತ:ಕಾಲ 9 ಗಂಟೆಗೆ ಶ್ರೀ ಅಗಸ್ತ್ಯೇಶ್ವರ ಸನ್ನಿಧಿಯಲ್ಲಿ, ಅನುಜ್ಞೆ, ಪುಣ್ಯಾಹ, ಗಣಹೋಮ, ಪೂರ್ಣಾಹುತಿ, ಅಭಿಷೇಕ, ಮಹಾಮಂಗಳಾರತಿ ನೆರವೇರಿಕೆ. ಸಂಜೆ 5 ಗಂಟೆಗೆ–ಧರ್ಮಸಭೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆ ಮತ್ತು ಧ್ವಜಾರೋಹ ನೆರವೇರಿಕೆ.
- ಫೆ.11ರ ಮಂಗಳವಾರ, ಚತುರ್ದಶಿ, ಆಶ್ಲೇಷ, ಪ್ರಾತ: ಪುಣ್ಯಾಹ–ನವಗ್ರಹಗಹೋಮ, ಸುದರ್ಶನಹೋಮ ನೆರವೇರಿಕೆ. ಬೆಳಗ್ಗೆ 11 ಗಂಟೆಗೆ ಧರ್ಮಸಭೆ. ಸಂಜೆ 4 ಗಂಟೆಗೆ ಮಹಾತ್ಮರ ಸಂತರ, ಮಹಾಮಂಡಲೇಶ್ವರರ ತ್ರಿವೇಣಿ ಸಂಗಮ ಕ್ಷೇತ್ರ ಪ್ರವೇಶ: ಗುಂಜಾನರಸಿಂಹ ಸ್ವಾಮಿದೇವಸ್ಥಾನದಿಂದ ತಿ.ನರಸೀಪುರದ ಪ್ರಮುಖ ಬೀದಿಗಳಲ್ಲಿ ನಡೆಯಲಿರುವ ಮೆರವಣಿಗೆ ಸಂಜೆ 6 ಗಂಟೆಗೆ ಶ್ರೀರುದ್ರಹೋಮ, ಪೂರ್ಣಾಹುತಿ, ರಾತ್ರಿ 7 ಗಂಟೆಗೆ ನಡೆಯುವ ಗಂಗಾಪೂಜೆಯ ವೇಳೆ ವಾರಣಾಸಿ ಮಾದರಿಯಲ್ಲಿ ದೀಪಾರತಿ ಕಾರ್ಯಕ್ರಮ ಆಯೋಜನೆ.
- ಫೆ.12ರ ಬುಧವಾರ ಮಾಘ ಪೂರ್ಣಿಮೆಯಂದು ಬೆಳಗ್ಗೆ ಮಖಾ ನಕ್ಷತ್ರದಲ್ಲಿ ಚಂಡಿಹೋಮ, ಪೂರ್ಣಾಹುತಿ, ಕುಂಭೋದ್ವಾಸನ ಹಾಗೂ ಸಪ್ತ ಪವಿತ್ರ ನದಿಗಳಿಂದ ತಂದ ತೀರ್ಥಗಳನ್ನು ತ್ರಿವೇಣಿ ಸಂಗಮದಲ್ಲಿ ಸಂಯೋಜನೆ, ಪುಣ್ಯಸ್ನಾನ, ಧರ್ಮಸಭೆ ಮೊದಲಾದ ಕಾರ್ಯಕ್ರಮಗಳು ಆಯೋಜನೆ. ಮಹೋದಯಕಾಲದ ಮಹಾಮಾಘ ಪುಣ್ಯಸ್ನಾನಕ್ಕೆ ಬೆಳಗ್ಗೆ 9 ರಿಂದ 9.30ರವರೆಗಿನ ಮೀನ ಲಗ್ನ ಮತ್ತು ಮಧ್ಯಾಹ್ನ 12ರಿಂದ 1ವರೆಗಿನ ವೃಷಭ ಲಗ್ನ ಪ್ರಶಸ್ತವಾಗಿದೆ ಎಂದು ಸಮಯ ನಿಗದಿ.

ಜಿಲ್ಲಾ ಉಸ್ತುವಾರಿ ಸಚಿವರಿಂದ ಅಭಿವೃದ್ಧಿ ಕಡೆಗಣನೆ

ಕಾಂಪೋಸ್ಟ್ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ಆರೋಪ



ಕಾಂಪೋಸ್ಟ್ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ಮಾತನಾಡಿದರು.

ನಂಜನಗೂಡು, ಫೆ.6– ತಾಲೂಕಿನಲ್ಲಿ ಮೈಕ್ರೋ ಫೈನಾನ್ಸ್ ಹಾವಳಿಯಿಂದ 50ಕ್ಕೂ ಹೆಚ್ಚು ಕುಟುಂಬಗಳು ಗ್ರಾಮ ತೊರೆದಿದ್ದು, ಇಬ್ಬರು ಆತ್ಮಹತ್ಯೆ ಮಾಡಿಕೊಂಡರೂ ಜಿಲ್ಲಾ ಉಸ್ತುವಾರಿ ಸಚಿವರು ಭೇಟಿ ನೀಡಿ ಸಾಂತ್ವನ ಹೇಳಲು ಮುಂದಾಗಲಿಲ್ಲ. ಜೊತೆಗೆ ಕೆಡಿಪಿ ಸಭೆ ನಡೆಸದೆ, ಕ್ಷೇತ್ರದ ಅಭಿವೃದ್ಧಿ ಕಡೆಗಣಿಸಿದ್ದಾರೆ ಎಂದು ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ಆರೋಪಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಡಿಯಾಲ, ಬಳ್ಳೂರುಹುಂಡಿ, ದೇವರಾಯಶೆಟ್ಟಿಪುರ, ಮಾಕನಪುರ, ದೇಪೇಗೌಡನಪುರ ಸೇರಿದಂತೆ ತಾಲೂಕಿನ ಹಲವು ಕಾಡಂಚಿನ ಗ್ರಾಮಗಳಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದಾಗಿ ರೈತರ ಬೆಳೆ ನಷ್ಟವಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಅಲ್ಲದೇ ಈ ಗ್ರಾಮಗಳಲ್ಲಿ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು, ಮುಖ್ಯ ರಸ್ತೆಯಲ್ಲಿ ಸಂಚರಿಸುವುದೇ ಕಷ್ಟವಾಗಿದೆ. ಸಾರ್ವಜನಿಕರು ಯಾವ ಸಮಯದಲ್ಲಿ ಏನಾಗುವುದೋ ಎಂಬ ಭೀತಿಯಲ್ಲಿದ್ದಾರೆ. ಓಂಕಾರ್ ಮತ್ತು ಹೆಡಿಯಾಲ ವಲಯದ ಅರಣ್ಯಾಧಿಕಾರಿಗಳು ಇದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ಒಬ್ಬರ ಮೇಲೆ ಮತ್ತೊಬ್ಬರು ಸಬೂಬು ಹೇಳುತ್ತಾ ಹೊಣೆಯಿಂದ ನುಣಿಚಿಕೊಳ್ಳುತ್ತಿದ್ದು, ಕಾಡು ಪ್ರಾಣಿಗಳ ಹಾವಳಿ ತಡೆಯಲು ವಿಫಲರಾಗಿದ್ದಾರೆ. ಅಲ್ಲದೆ ರೈತರು ಬೆಳೆ ನಷ್ಟವಾಗಿ ಅರಣ್ಯ ಇಲಾಖೆಗೆ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದರೆ ಎಕರೆಗೆ 2 ಸಾವಿರ ಪರಿಹಾರ ನೀಡಿ ರೈತರನ್ನು ವಂಚಿಸುತ್ತಿದ್ದಾರೆ. ಆದ್ದರಿಂದ ಜಿಲ್ಲಾ ಉಸ್ತುವಾರಿ ಸಚಿವರು ಇಬ್ಬರು ವಲಯ ಅರಣ್ಯಾಧಿಕಾರಿಗಳ ಸಭೆ ನಡೆಸಿ ಕಟ್ಟುನಿಟ್ಟಿನ ಸೂಚನೆ ನೀಡಿ ಕಾಡುಪ್ರಾಣಿಗಳ ಹಾವಳಿ ತಡೆಗೆ ಮುಂದಾಗಬೇಕಿದೆ ಎಂದರು.

ತಾಲೂಕಿನಲ್ಲಿ ಮೈಕ್ರೋ ಫೈನಾನ್ಸ್ ಹಾವಳಿಯಿಂದಾಗಿ ಶಿರಮಳ್ಳಿಯಲ್ಲಿ 20, ಹುರದಲ್ಲಿ 7, ಕಗ್ಗಲೂರಲ್ಲಿ 4, ರಾಂಪುರದಲ್ಲಿ 15 ಸೇರಿದಂತೆ ಸುಮಾರು 50ಕ್ಕೂ ಹೆಚ್ಚು ಕುಟುಂಬಗಳು ಗ್ರಾಮ ತೊರೆದಿದ್ದಾರೆ. ಸರ್ಕಾರ ಸುಗ್ರೀವಾಜ್ಞೆ ತರಲು ಮುಂದಾಗಿದ್ದರೂ ಸರ್ಕಾರದ ಆದೇಶ ಬರುವವರೆಗೆ ಮೈಕ್ರೋ ಫೈನಾನ್ಸ್ ಪ್ರತಿನಿಧಿಗಳು ಗೂಂಡಾ ರೀತಿ ವರ್ತಿಸಿ ಜನರನ್ನು ಸುಲಿಗೆ ಮಾಡುತ್ತಿದ್ದಾರೆ. ಆದರಿಂದ ಜಿಲ್ಲಾ ಉಸ್ತುವಾರಿ ಸಚಿವರು ಸರ್ಕಾರದ ಆದೇಶ ಬರುವವರೆಗೆ ಮೈಕ್ರೋ ಫೈನಾನ್ಸ್ ಕಂಪನಿಗಳು ಸಾಲ ವಸೂಲಿ ಮಾಡದಂತೆ ತಹಸೀಲ್ದಾರ್ ನೇತೃತ್ವದಲ್ಲಿ ಸಭೆ ನಡೆಸಿ ಸೂಚನೆ ನೀಡಬೇಕು. ಅಲ್ಲದೇ ಸಚಿವರು ಜಿಲ್ಲೆಯ ಯಾವುದೇ ತಾಲೂಕಿನಲ್ಲಿ ಕೆಡಿಪಿ ಸಭೆ ನಡೆಸದೆ ಅಭಿವೃದ್ಧಿ ಕಡೆಗಣಿಸಿದ್ದಾರೆ. ಅವರು ಕೆಡಿಪಿ ಸಭೆ ನಡೆಸಿದಲ್ಲಿ ಜನರ ಕಷ್ಟ ಅರಿವಾಗಲಿದೆ. ಜಿಪಂ ಮತ್ತು ತಾಪಂ ಪ್ರತಿನಿಧಿಗಳು ಇಲ್ಲದೇ ಇರುವುದರಿಂದ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಕೆಲಸ ಮಾಡಲು ಮುಂದಾಗುತ್ತಿಲ್ಲ. ಜೊತೆಗೆ ಎಲ್ಲಾ ಇಲಾಖೆಗಳಲ್ಲೂ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಈ ಎಲ್ಲಾ ಸಮಸ್ಯೆಗಳನ್ನು, ರೈತರ ಸಂಕಷ್ಟ ಪರಿಹರಿಸಲು ಮುಂದಾಗಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಪಂ ಮಾಜಿ ಸದಸ್ಯ ಎಸ್.ಎಂ.ಕೆಂಪಣ್ಣ, ತಾಪಂ ಮಾಜಿ ಸದಸ್ಯ ರವೀಂದ್ರ, ಕಸುವಿನಹಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ಮಂಜುನಾಥ್, ವೃಷಬೇಂದ್ರಪ್ಪ, ಬಿಜೆಪಿ ಹಿಂದುಳಿದ ವರ್ಗ ಮೋರ್ಚಾ ತಾಲೂಕು ಅಧ್ಯಕ್ಷ ಉಮೇಶ್ ಮೋದಿ ಉಪಸ್ಥಿತರಿದ್ದರು.

ತಿ.ನರಸೀಪುರದ ರಸ್ತೆಗಳ ಅಭಿವೃದ್ಧಿ ಪಡಿಸದಿದ್ದರೆ

ಕುಂಭಮೇಳದ ಸಭೆ, ಸಮಾರಂಭಗಳಲ್ಲಿ ಕಪ್ಪು ಬಾವುಟ ಪ್ರದರ್ಶನ

ನಾಗರಿಕ ಸೇವಾ ವೇದಿಕೆ ಕಾರ್ಯದರ್ಶಿ ಕರೋಹಟ್ಟಿ ಕೆ.ಎನ್.ಪ್ರಭುಸ್ವಾಮಿ ಎಚ್ಚರಿಕೆ



ಹದಗೆಟ್ಟ ರಸ್ತೆಗಳನ್ನು ಅಭಿವೃದ್ಧಿ ಪಡಿಸಬೇಕೆಂದು ನಾಗರಿಕ ಸೇವಾ ವೇದಿಕೆ ಸದಸ್ಯರು, ಆಟೋ ಚಾಲಕರು ಒತ್ತಾಯಿಸಿದರು.

ತಿ.ನರಸೀಪುರ, ಫೆ.6– ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರ ಸ್ವಕ್ಷೇತ್ರ ತಿ.ನರಸೀಪುರ ಪಟ್ಟಣದ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ಕೂಡಲೇ ಸರ್ಕಾರ ಎಚ್ಚೆತ್ತು ರಸ್ತೆ ದುರಸ್ತಿ ಮಾಡದಿದ್ದರೇ ಕುಂಭಮೇಳದಲ್ಲಿ ನಡೆಯುವ ಧಾರ್ಮಿಕ ಆಚರಣೆ ಹೊರತು ಪಡಿಸಿ ಪಟ್ಟಣದಲ್ಲಿ ನಡೆಯುವ ಸಭೆ ಸಮಾರಂಭಗಳಲ್ಲಿ ಕಪ್ಪು ಬಾವುಟ ಪ್ರದರ್ಶನ ಮಾಡಲಾಗುವುದು ಎಂದು ನಾಗರಿಕ ಸೇವಾ ವೇದಿಕೆ ಕಾರ್ಯದರ್ಶಿ ಕರೋಹಟ್ಟಿ ಕೆ.ಎನ್. ಪ್ರಭುಸ್ವಾಮಿ ಎಚ್ಚರಿಸಿದರು.

ಪಟ್ಟಣದ ನಾಗರಿಕ ಸೇವಾ ವೇದಿಕೆ ಕಾರ್ಯಕರ್ತರು ಹಾಗೂ ಕಾರು ಚಾಲಕರ ಸಂಘದ ಸದಸ್ಯರೊಂದಿಗೆ ಪಟ್ಟಣದಲ್ಲಿ ಹಳ್ಳ ಬಿದ್ದಿರುವ ರಸ್ತೆಗಳ ದುರಸ್ತಿ ಮಾಡಬೇಕೆಂಬ ಸದುದ್ದೇಶದೊಂದಿಗೆ ಸರ್ಕಾರ ಮತ್ತು ಅಧಿಕಾರಿಗಳ ಗಮನ ಸೆಳೆಯಲು ಗುಂಡಿ ಬಿದ್ದ ರಸ್ತೆ ಬಳಿ ತೆರಳಿ ಅವ್ಯವಸ್ಥೆ ಬಗ್ಗೆ ಕಿಡಿಕಾರಿ ಅವರು ಮಾತನಾಡಿದರು.

ತ್ರಿವೇಣಿ ಸಂಗಮದ ಅಗಸ್ತ್ಯೇಶ್ವರ, ಶ್ರೀ ಗುಂಜಾ ನರಸಿಂಹಸ್ವಾಮಿ ಪ್ರಖ್ಯಾತ ದೇವಾಲಯಗಳಿರುವ ತಿ.ನರಸೀಪುರ ಕ್ಷೇತ್ರದಲ್ಲಿ ಫೆ.10ರಿಂದ 3 ದಿನಗಳ ಕಾಲ ಕುಂಭಮೇಳ ನಡೆಯುತ್ತಿದೆ. ಆದರೆ ಪಟ್ಟಣದ ಯಾವುದೇ ರಸ್ತೆಗಳು ವ್ಯವಸ್ಥಿತವಾಗಿಲ್ಲ. ತಿ.ನರಸೀಪುರ ಪುರಸಭೆಯ 23 ವಾರ್ಡ್‌ಗಳ ಪೈಕಿ 17 ವಾರ್ಡ್‌ಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಮತಕ್ಷೇತ್ರವಾಗಿರುವ ವರುಣ ಕ್ಷೇತ್ರಕ್ಕೆ ಸೇರಿದ್ದು, ಉಳಿದ 6 ವಾರ್ಡ್‌ಗಳು ಉಸ್ತುವಾರಿ ಸಚಿವ ಮಹದೇವಪ್ಪ ಕ್ಷೇತ್ರಕ್ಕೆ ಸೇರುತ್ತವೆ. ಆದರೂ ಇಲ್ಲಿನ ಯಾವುದೇ ರಸ್ತೆಗಳು ಸಂಚಾರಕ್ಕೆ ಯೋಗ್ಯವಾಗಿಲ್ಲ. ಪಟ್ಟಣದ ಎಣ್ಣೆ ಮಿಲ್ ರಸ್ತೆ ಸ್ಥಿತಿಯಂತೂ ಹೇಳ ತೀರದಾಗಿದ್ದು, ಸಾರ್ವಜನಿಕರು ಓಡಾಡಲಾಗದ ಪರಿಸ್ಥಿತಿ ಎದುರಾಗಿದೆ. ಆ ರಸ್ತೆಯಲ್ಲಿ ಸಂಸದರು, ಸಚಿವರು ಓಡಾಡಿದರೂ ಯಾವುದೋ ರಾಜಕೀಯ ಕಾರಣಕ್ಕೆ ಅಭಿವೃದ್ಧಿ ಕಾಮಗಾರಿಗೆ ಕೈಗೊಂಡಿರುವ ಟೆಂಡರ್ ಅನ್ನು ತಮ್ಮ ಹಿಂಬಾಲಕರಿಗೆ ನೀಡಲು ತಡೆ ಹಿಡಿದಿದ್ದಾರೆ. ಈ ರಸ್ತೆಯಲ್ಲಿ ಅದೆಷ್ಟೋ ಬೈಕ್ ಸವಾರರು ಬಿದ್ದು ಮಾರಣಾಂತಿಕವಾಗಿ ಗಾಯಗೊಂಡಿದ್ದಾರೆ. ಉಳಿದಂತೆ ಲಿಂಕ್ ರಸ್ತೆ ತಾಲೂಕು ಕಚೇರಿ ರಸ್ತೆ ಹಾಗೂ ಕೆನರಾ ಬ್ಯಾಂಕ್ ರಸ್ತೆ ತೀವ್ರ ಹದಗೆಟ್ಟ ಸ್ಥಿತಿಯಲ್ಲಿದ್ದು, ಈ ಬಗ್ಗೆ ಅಧಿಕಾರಿ, ಜನಪ್ರತಿನಿಧಿಗಳಾಗಲೀ ಗಮನ ಹರಿಸದೇ ಇರುವುದು ವಿಪರ್ಯಾಸ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಎಂ ಸಿದ್ದರಾಮಯ್ಯ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವರ ಸ್ವಕ್ಷೇತ್ರ ವ್ಯಾಪ್ತಿಯ ಎಲ್ಲಾ ರಸ್ತೆಗಳು ಸಂಪೂರ್ಣ ಹದಗೆಟ್ಟಿವೆ. ಕೂಡಲೇ ರಸ್ತೆ ಅಭಿವೃದ್ಧಿ ಪಡಿಸಬೇಕಾಗಿದೆ. ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷ ಕಳೆದಿದ್ದು, ಕ್ಷೇತ್ರದ ಜನತೆ ನಿಮ್ಮ ಮೇಲೆ ಭರವಸೆ ಇಟ್ಟು ನಿಮ್ಮನ್ನು ಆಯ್ಕೆ ಮಾಡಿದ್ದಾರೆ. ಅವರ ನಂಬಿಕೆಗೆ ದ್ರೋಹ ಬಗೆಯದೆ ಶೀಘ್ರ ರಸ್ತೆ ಅಭಿವೃದ್ಧಿ ಪಡಿಸಿ. ಕುಂಭಮೇಳ ಐತಿಹಾಸಿಕ ಧಾರ್ಮಿಕ ಕಾರ್ಯಕ್ರಮ. ಇಂತಹ ಸಂದರ್ಭ ರಸ್ತೆ ಅವ್ಯವಸ್ಥೆಯಿಂದ ಕೂಡಿದ್ದರೆ ನೋಡಲು ನಗೆ ಪಾಟಲಿಗೀಡಾಬೇಕಾಗುತ್ತದೆ ಎಂದರು.

ಕ್ಷೇತ್ರ ಅಭಿವೃದ್ಧಿ ಮಾಡದವರಿಂದ ರಾಜ್ಯದ ಅಭಿವೃದ್ಧಿ ಸಾಧ್ಯವೇ: ಕುಂಭಮೇಳಕ್ಕೆ ದೇಶದ ವಿವಿಧ ರಾಜ್ಯಗಳಿಂದ ಭಕ್ತರು ಆಗಮಿಸುತ್ತಾರೆ. ಅವರೆಲ್ಲಾ ಪಟ್ಟಣದ ರಸ್ತೆ ಅವ್ಯವಸ್ಥೆ ಬಗ್ಗೆ ಜನಪ್ರತಿನಿಧಿಗಳಿಗೆ ಶಾಪ ಹಾಕುವಂತಾಗಬೇಕೆ, ತಿ.ನರಸೀಪುರದ ಮಾನ ಬೀದಿಯಲ್ಲಿ ಹರಾಜಾಗುವುದಿಲ್ಲವೇ? ತಮ್ಮ ಕ್ಷೇತ್ರವನ್ನೇ ಅಭಿವೃದ್ಧಿ ಪಡಿಸದವರು ರಾಜ್ಯವನ್ನು ಅಭಿವೃದ್ಧಿ ಹೇಗೆ ಮಾಡುತ್ತಾರೆ ಎಂದು ಸಿದ್ದರಾಮಯ್ಯ, ಮಹದೇವಪ್ಪರನ್ನು ಗೇಲಿ ಮಾಡುವುದಿಲ್ಲವೇ ಎಂದು ವ್ಯಂಗ್ಯವಾಡಿದರು. ಈ ವೇಳೆ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಎನ್.ಲಿಂಗಪ್ಪಾಜಿ, ಕಾರ್ ಮಲ್ಲಪ್ಪ, ಸ್ವಾಮಿ, ಆರ್ಕೆಸ್ಟ್ರಾ ಮಂಜು, ಫ್ಯಾನ್ಸಿ ಮೋಹನ್, ಮಹೇಶ್, ಸತೀಶ್, ರೇವಣ್ಣ ಮಡಿವಾಳ ಸಂಘದ ಬಸವರಾಜು, ಮಹದೇವಸ್ವಾಮಿ, ರಾಜೇಶ ಮತ್ತಿತರರಿದ್ದರು.

> ಪಟ್ಟಣದ ರಸ್ತೆಗಳ ಅವ್ಯವಸ್ಥೆ ಬಗ್ಗೆ ಅದರಲ್ಲೂ ಕುಂಭಮೇಳದಲ್ಲಿ ಸಾಧು ಸಂತರು ಮೆರವಣಿಗೆ ಬರುವ ಲಿಂಕ್ ರಸ್ತೆ ಅವ್ಯವಸ್ಥೆ ಬಗ್ಗೆ ಉಪ ವಿಭಾಗಾಧಿಕಾರಿಗಳನ್ನು ಕೇಳಿದರೆ ಕೊನೆಗಳಿಗೆಯಲ್ಲಿ ಗುಂಡಿಗಳನ್ನು ಮಣ್ಣು ಹಾಕಿ ಮುಚ್ಚುತ್ತೇವೆ ಎಂಬ ಉಡಾಫೆ ಉತ್ತರ ನೀಡುತ್ತಾರೆ. ಕೂಡಲೇ ಸರ್ಕಾರ ಎಚ್ಚೆತ್ತುಕೊಳ್ಳಬೇಕು, ಅಧಿಕಾರಿಗಳು, ಜನಪ್ರತಿನಿಧಿಗಳು ತುರ್ತಾಗಿ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೆತ್ತುಕೊಳ್ಳಬೇಕು. ಇಲ್ಲವಾದಲ್ಲಿ ಸಭೆ ಸಮಾರಂಭಗಳಿಗೆ ಕಪ್ಪು ಬಾವುಟ ಪ್ರದರ್ಶನ ಮಾಡಬೇಕಾಗುತ್ತದೆ.
>
> - ಹೆಚ್.ಆರೀಫ್, ನಾಗರಿಕ ಸೇವಾ ವೇದಿಕೆ ಅಧ್ಯಕ್ಷ.

ಹೊಗೆಸೊಪ್ಪಿಗೆ ಉತ್ತಮ ಬೆಲೆ ಕೊಡಿಸಲು ಕ್ರಮ

ರಾಜ್ಯ ತಂಬಾಕು ಮಂಡಳಿ ನಿರ್ದೇಶಕ ಶ್ರೀನಿವಾಸ್‌ಗೌಡ



ಹೆಚ್.ಡಿ.ಕೋಟೆ ತಂಬಾಕು ಹರಾಜು ಮಾರುಕಟ್ಟೆಗೆ ರಾಜ್ಯ ತಂಬಾಕು ಮಂಡಳಿ ನಿರ್ದೇಶಕ ಶ್ರೀನಿವಾಸ್‌ಗೌಡ ಭೇಟಿ ನೀಡಿ ಪರಿಶೀಲಿಸಿದರು.

ಹೆಚ್.ಡಿ.ಕೋಟೆ, ಫೆ.6– ಹೊಗೆಸೊಪ್ಪಿಗೆ ಉತ್ತಮ ಬೆಲೆ ಕೊಡಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಕಂಪನಿಗ ಳೊಂದಿಗೆ ಮಾತುಕತೆ ನಡೆಸಲಾಗುವುದು ಎಂದು ರಾಜ್ಯ ತಂಬಾಕು ಮಂಡಳಿ ನಿರ್ದೇಶಕ ಶ್ರೀನಿವಾಸ್‌ಗೌಡ ಭರವಸೆ ನೀಡಿದರು.

ಪಟ್ಟಣದ ಹೆಬ್ಬಾಳದಲ್ಲಿರುವ ತಂಬಾಕು ಹರಾಜು ಮಾರುಕಟ್ಟೆಗೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿ ಹೊಗೆಸೊಪ್ಪು ಗುಣಮಟ್ಟ ಮತ್ತು ಅಧಿಕಾರಿಗಳ ಕಾರ್ಯ ವೈಖರಿ ಹಾಗೂ ಮೂಲ ಸೌಕರ್ಯಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ಮೈಸೂರು ಭಾಗದಲ್ಲಿ ಬೆಳೆಯುವ ಹೊಗೆಸೊಪ್ಪು ಗುಣಮಟ್ಟದಿಂದ ಕೂಡಿದೆ. ಆದರೆ ಬೆಲೆ ಕಡಿಮೆಯಾಗಿದೆ. ಆಂಧ್ರಪ್ರದೇಶದಲ್ಲಿ ಬೆಳೆಯುವ ಹೊಗೆಸೊಪ್ಪಿನ ಗುಣಮಟ್ಟ ಕಡಿಮೆಯಾಗಿದ್ದರೂ, ಅಲ್ಲಿ ಹೆಚ್ಚಿನ ಬೆಲೆ ನೀಡಲಾಗುತ್ತಿದೆ. ಹೀಗಾಗಿ ರಾಜ್ಯದ ರೈತರಿಗೆ ಅನ್ಯಾಯವಾಗಬಾರದು ಎಂಬ ನಿಟ್ಟಿನಲ್ಲಿ ಕೆಜಿ ಹೊಗೆಸೊಪ್ಪಿಗೆ ಸರಾಸರಿ 150 ರೂ. ನೀಡಲಾಗುತ್ತಿದೆ. ಆದರೆ ರೈತರು 200 ರೂ.ನೀಡಬೇಕೆಂದು ಒತ್ತಾಯಿಸುತ್ತಿದ್ದು, ಉತ್ತಮ ಬೆಲೆ ಕೊಡಿಸುವ ನಿಟ್ಟಿನಲ್ಲಿ ಶ್ರಮಿಸಲಾಗುವುದು ಎಂದರು.

ಹಿರಿಯ ರೈತ ಮುಖಂಡ ಬಿ.ವಿ. ಬಸವರಾಜು ಮಾತನಾಡಿ, ರಾಜ್ಯದಲ್ಲಿ ತಂಬಾಕು ಬೆಳೆದ ರೈತರಿಗೆ ಉತ್ತಮ ಬೆಲೆ ಸಿಗುತ್ತಿಲ್ಲ. ಅಲ್ಲದೇ ಖರ್ಚು ಮಾಡಿದ ಹಣವು ಕೈಗೆ ಸಿಗುತ್ತಿಲ್ಲ. ಹೊಗೆಸೊಪ್ಪಿಗೆ ಉತ್ತಮ ಬೆಲೆ ಕೊಡಿಸಿದಾಗ ಮಾತ್ರ ರೈತರು ಬದುಕಲು ಸಾಧ್ಯ. ಇದಕ್ಕಾಗಿ ಹೋರಾಟ ನಡೆಯುತ್ತಿದೆ. ಇದಕ್ಕೆ ಸ್ಪಂದಿಸುವ ಕೆಲಸ ಅಧಿಕಾರಿ ವರ್ಗ ಮತ್ತು ಜನಪ್ರತಿನಿಧಿಗಳು ಮಾಡಬೇಕು. ಅತೀ ಹೆಚ್ಚು ಹೊಗೆಸೊಪ್ಪು ಬೆಳೆದವರಿಗೆ ಕಾರ್ಡ್ ನೀಡಬೇಕು. ಅಲ್ಲದೇ ನಿರ್ದೇಶಕರು ನಮ್ಮ ಕರ್ನಾಟಕದವರೇ ಆಗಿದ್ದು, ರೈತರಿಗೆ ಸ್ಪಂದಿಸುವ ಕೆಲಸ ಮಾಡುತ್ತಾರೆಂಬ ಆಶಾಭಾವನೆಯಲ್ಲಿ ರೈತರಿದ್ದಾರೆ ಎಂದರು.

ಈ ವೇಳೆ ಹರಾಜು ಮಾರುಕಟ್ಟೆ ಅಧೀಕ್ಷಕ ವಿಜಯಕುಮಾರ್‌ಗೌಡ, ರೈತ ಮುಖಂಡರಾದ ಎ.ಜೆ.ಕಾಳೇಗೌಡ, ತಂಬಾಕು ಮಂಡಳಿ ಸದಸ್ಯರಾದ ಪರಶಿವಮೂರ್ತಿ, ವೆಂಕಟೇಗೌಡ, ಅಧಿಕಾರಿಗಳಾದ ಸುಗಂಧರಾಜ, ನಾರಾಯಣ, ಶಿವು, ಸುನೀಲ್ ಕುಮಾರ್, ಅರುಣ್, ನಯನ ಸೇರಿದಂತೆ ಇತರರಿದ್ದರು.

ಪ್ರತಿಯೊಬ್ಬರಿಗೂ ಕಾನೂನು ಅರಿವು ಮುಖ್ಯ



ಹೆಗ್ಗಡಹಳ್ಳಿ ಗ್ರಾಪಂ ಆವರಣದಲ್ಲಿ ಕಾನೂನು ಅರಿವು ಕಾರ್ಯಕ್ರಮ ನಡೆಯಿತು.

ಮಲ್ಕುಂಡಿ, ಫೆ.6– ಗ್ರಾಮೀಣ ಭಾಗದ ಪ್ರತಿಯೊಬ್ಬರಿಗೂ ಕಾನೂನು ಅರಿವು ಮುಖ್ಯ ಎಂದು ಗ್ರಾಪಂ ಅಧ್ಯಕ್ಷ ಕಾಂತರಾಜು ತಿಳಿಸಿದರು.

ನಂಜನಗೂಡು ತಾಲೂಕಿನ ಹೆಗ್ಗಡಹಳ್ಳಿ ಗ್ರಾಪಂ ಆವರಣದಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಉತ್ತಮ ಜೀವನ ಸಾಗಿಸಲು ಕಾನೂನಿನ ಅರಿವು ಮುಖ್ಯವಾಗಿದೆ.

ಗ್ರಾಮೀಣ ಮಹಿಳೆಯರಿಗೆ ಯಾವುದೇ ಕಾನೂನು ಅರಿವು ಇರುವುದಿಲ್ಲ. ಹೀಗಾಗಿ ಮೊದಲು ಮಹಿಳೆಯರು ಕಾನೂನಿನ ಬಗ್ಗೆ ತಿಳಿದುಕೊಳ್ಳಬೇಕು. ಇತ್ತೀಚಿನ ದಿನಗಳಲ್ಲಿ ಮಹಿಳೆಯರ ಮೇಲೆ ಹೆಚ್ಚು ದೌರ್ಜನ್ಯ ನಡೆಯುತ್ತಿವೆ. ಅದನ್ನು ತಡೆಗಟ್ಟಲು ಗ್ರಾಮೀಣ ಭಾಗದಲ್ಲಿ ಇಂತಹ ಕಾರ್ಯಕ್ರಮ ಅಗತ್ಯವಾಗಿದೆ. ಅಲ್ಲದೇ ಅತೀ ಹೆಚ್ಚು ಬಾಲ್ಯವಿವಾಹ ಹಳ್ಳಿಗಳಲ್ಲಿ ನಡೆಯುತ್ತಿದ್ದು, ಅದನ್ನು ತಡೆಗಟ್ಟಲು ಪ್ರತಿಯೊಬ್ಬರ ಸಹಕಾರ ಅಗತ್ಯ ಎಂದರು.

ಈ ವೇಳೆ ಪಿಡಿಓ ನಾಗರಾಜು, ಗ್ರಾಪಂ ಸದಸ್ಯ ಮನೋಜ್, ರಂಗಸ್ವಾಮಿ, ಅಶೋಕ್, ಮಂಜುನಾಥ, ಬಸವರಾಜ್, ವಕೀಲರಾದ ಮುತ್ತುರಾಜ್, ಕೆಂಪಲಿಂಗಸ್ವಾಮಿ, ಎಸ್‌ಡಿಎ ಮಹೇಶ್, ಬಿಲ್ ಕಲೆಕ್ಟರ್ ಜನಾರ್ಧನ್, ಆಶಾ ಕಾರ್ಯಕರ್ತೆ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಹಾಜರಿದ್ದರು.

ತಾಂತ್ರಿಕ ಸಮಸ್ಯೆಗೆ ಅಂತೂ ಪರಿಹಾರ: ನೋಂದಣಿ ಪ್ರಕ್ರಿಯೆ ಪುನರಾರಂಭ

• ರಾಜ್ಯದ 256 ಸಬ್ ರಿಜಿಸ್ಟ್ರಾರ್ ಕಚೇರಿಗಳಲ್ಲಿ ಸಮಸ್ಯೆ • ಸರ್ಕಾರದ ಆದಾಯ ಕೂಡ ಖೋತಾ • ಪತ್ರ ಬರಹಗಾರರು ಸೇರಿ ಇತರರು ನಿಟ್ಟುಸಿರು

ಮೈಸೂರು, ಫೆ.6(ಬಿಎಲ್‌ಯು)–ತಾಂತ್ರಿಕ ಕಾರಣದಿಂದ (ಡಿಸ್ಟ್ರಿಬ್ಯೂಟೆಡ್ ಡಿನೈಯಲ್ ಆಫ್ ಸರ್ವೀಸ್–DDoS) ವಾರ ಕಾಲ ಸಮಸ್ಯೆಯಿಂದಿದ್ದ ಉಪ ನೋಂದಣಾಧಿಕಾರಿಗಳ ಕಚೇರಿ ಕೆಲಸ–ಕಾರ್ಯಗಳು ಇಂದು ಪುನರಾರಂಭಗೊಂಡವು. ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಸೇರಿದಂತೆ ರಾಜ್ಯದ ಎಲ್ಲಾ ಉಪ ನೋಂದಣಿ ಕಚೇರಿಗಳಲ್ಲಿ ಇಸಿ (ಋಣಭಾರ ಪತ್ರ) ವಿತರಣೆ, ವಿವಾಹ ನೋಂದಣಿ, ಆಸ್ತಿ ನೋಂದಣಿ ಪ್ರಕ್ರಿಯೆ ಆರಂಭಗೊಂಡಿದ್ದು, ರಿಯಲ್ ಎಸ್ಟೇಟ್ ವ್ಯವಹಾರ ಮತ್ತೆ ಬಿರುಸುಗೊಂಡಿದೆ.

ಮೈಸೂರಿನ ಉತ್ತರ, ದಕ್ಷಿಣ, ಪೂರ್ವ ಹಾಗೂ ಪಶ್ಚಿಮ ಉಪ ನೋಂದಣಿ ಕಚೇರಿಯಲ್ಲಿ ತ್ವರಿತ ಕಾರ್ಯಚಟುವಟಿಕೆ ಕಂಡು ಬಂದಿತು. ನೋಂದಣಿ ಮಾಡಿಸಲು ವಾರದಿಂದ ಸಾಧ್ಯವಾಗದ ಹಿನ್ನೆಲೆಯಲ್ಲಿ ಆಸ್ತಿ ನೋಂದಣಿ, ವಿವಾಹ ನೋಂದಣಿ, ಇಸಿ ಪಡೆಯಲು ಜನರು ಮುಗಿ ಬಿದ್ದಿದ್ದರು. ಸರದಿ ಸಾಲಿನಲ್ಲಿ ಗಂಟೆ ಗಟ್ಟಲೆ ಕಾದು ನಿಂತು ನೋಂದಣಿ ಮಾಡಿಸಿದರು.

ಕಳೆದ ವಾರ ಉಪ ನೋಂದಣಿ ಕಚೇರಿಗಳಲ್ಲಿ ನೋಂದಣಿ ಪ್ರಕ್ರಿಯೆ ದಿಢೀರ್ ಸ್ಥಗಿತಗೊಂಡಿತ್ತು. ಕಾವೇರಿ 2.0 ಸರ್ವರ್ ಡೌನ್ ಇದಕ್ಕೆ ಕಾರಣವಿರಬಹುದು. ನಾಳೆ ಸರಿ ಹೋಗುತ್ತದೆ ಎಂದು ಕಂದಾಯ ಇಲಾಖೆಯ ಅಧಿಕಾರಿಗಳು ಅಂದುಕೊಂಡಿದ್ದರು. ಆದರೆ ಮಾರನೇ ದಿನವೂ ಇದೇ ಪರಿಸ್ಥಿತಿ ಮುಂದುವರೆದಿತ್ತು. ನಾಲ್ಕೈದು ದಿನವಾದರೂ ತಾಂತ್ರಿಕ ದೋಷ ನಿವಾರಣೆ ಆಗಲೇ ಇಲ್ಲ.

ತರುವಾಯ ಕಂದಾಯ ಇಲಾಖೆಯ ಸರ್ವರ್‌ಗೆ ತಾಂತ್ರಿಕ ತೊಡಕುಂಟಾಗಿ (ಡಿಸ್ಟ್ರಿಬ್ಯೂಟೆಡ್ ಡಿನೈಯಲ್ ಆಫ್ ಸರ್ವೀಸ್) ಆನ್‌ಲೈನ್ ಸೇವೆಯಲ್ಲಿ ಅನಗತ್ಯ ತೊಡಕು ಸೃಷ್ಟಿಸುವ ಒಂದು ರೀತಿಯ ಸೈಬರ್ ದಾಳಿ ಇದಾಗಿದೆ ಎಂದು ತಾಂತ್ರಿಕ ಪರಿಣತರು ಕಂದಾಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು.



ಮೈಸೂರಿನ ದಕ್ಷಿಣ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ಎಂದಿನಂತೆ ನೋಂದಣಿ ಕಾರ್ಯ ಸಾಗಿದೆ.

ಎಷ್ಟೇ ಪ್ರಯತ್ನಿಸಿದರೂ ತಾಂತ್ರಿಕ ಸಮಸ್ಯೆ ಪರಿಹರಿಸಲು ಸಾಧ್ಯವಾಗದೇ ಇದ್ದಿದ್ದರಿಂದ ಮೈಸೂರು ಸೇರಿದಂತೆ ರಾಜ್ಯಾದ್ಯಂತ ನೋಂದಣಿ ಪ್ರಕ್ರಿಯೆ ಸಂಪೂರ್ಣ ಸ್ಥಗಿತವಾಗಿತ್ತು. ನೋಂದಣಿಗೆ ಬರುವ ಬಹಳಷ್ಟು ಜನರು ಸಬ್ ರಿಜಿಸ್ಟ್ರಾರ್ ಕಚೇರಿಗೆ ಎಡತಾಕುತ್ತಿದ್ದರು. ತುರ್ತಾಗಿ ನೋಂದಣಿ ಮಾಡಿಸುವವರ ಪಾಡು ಹೇಳತೀರದಾಗಿತ್ತು. ಇದರಿಂದ ಸದಾ ಗಿಜಿಗಿಡುತ್ತಿದ್ದ ಉಪ ನೋಂದಣಾಧಿಕಾರಿ ಕಚೇರಿ ಬಿಕೋ ಎನ್ನುತ್ತಿತ್ತು.

ರಾಜ್ಯದ 256 ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಕೆಲಸವಾಗದೆ ಕಾದು ಕುಳಿತರು. ಪ್ರತಿದಿನ ರಾಜ್ಯಾದ್ಯಂತ ಎಲ್ಲಾ ಉಪ ನೋಂದಣಿ ಕಚೇರಿಯಲ್ಲಿ ಕನಿಷ್ಠ 7 ಸಾವಿರದಿಂದ 8 ಸಾವಿರದವರೆಗೆ ದಸ್ತಾವೇಜುಗಳು ನೋಂದಣಿ ಆಗುತ್ತಿತ್ತು. ಹಾಗಾಗಿ ಪ್ರತಿದಿನ 100 ಕೋಟಿ ರೂಪಾಯಿ ವಹಿವಾಟು ನಡೆಯುತ್ತಿತ್ತು. ಸರ್ಕಾರಕ್ಕೆ ಹೆಚ್ಚು ಆದಾಯ ಬರುತ್ತಿತ್ತು.

ಪ್ರತಿ ಸಬ್ ರಿಜಿಸ್ಟ್ರಾರ್ ಕಚೇರಿ ಬಳಿ ಪತ್ರ ಬರಹಗಾರರು, ಅರ್ಜಿ ಮಾರಾಟಗಾರರು, ಅರ್ಜಿ ಭರ್ತಿ ಮಾಡುವವರು, ಜೆರಾಕ್ಸ್ ಮಾಡಿಕೊಡುವವರು ಸೇರಿದಂತೆ ನೂರಾರು ಮಂದಿ ಬದುಕು ಕಟ್ಟಿಕೊಂಡಿದ್ದಾರೆ. ಆದರೆ ಕಳೆದ ಒಂದು ವಾರದಿಂದ ನೋಂದಣಿ ಸ್ಥಗಿತವಾಗಿ ವಹಿವಾಟು ಶೂನ್ಯವಾದ ಕಾರಣದಿಂದ ಅವರ ದಿನದ ಆದಾಯ ಇಲ್ಲದಂತಾಗಿತ್ತು. ಇದರಿಂದ ಸಬ್ ರಿಜಿಸ್ಟ್ರಾರ್ ಕಚೇರಿ ನೋಂದಣಿ ಪ್ರಕ್ರಿಯೆ ಯಾವಾಗ ಆರಂಭವಾಗುತ್ತದೋ ಎಂದು ಕಾದು ಕುಳಿತಿದ್ದರು. ಸದ್ಯ, ಇಂದಿನಿಂದ ನೋಂದಣಿ ಪ್ರಕ್ರಿಯೆ ಆರಂಭವಾಗಿರುವುದರಿಂದ ನಿಟ್ಟುಸಿರು ಬಿಟ್ಟಿದ್ದಾರೆ.

ಕೊನೆಗೂ ತಾಂತ್ರಿಕ ಪರಿಣತರು ಕಾವೇರಿ 2.0 ಸರ್ವರ್ ಸಮಸ್ಯೆಯನ್ನು ಸರಿಪಡಿಸಿದ್ದಾರೆ. ಕಾವೇರಿ ಸರ್ವರ್‌ಗೆ ಡಿಸ್ಟ್ರಿಬ್ಯೂಟೆಡ್ ಡಿನೈಯಲ್ ಆಫ್ ಸರ್ವೀಸ್ (DDoS) ವೈರಸ್ ಅನ್ನು ಮುಕ್ತಗೊಳಿಸಿದ್ದಾರೆ. ಇದರಿಂದ ಮೈಸೂರು ಸೇರಿದಂತೆ ರಾಜ್ಯಾದ್ಯಂತ ಎಲ್ಲಾ ಸಬ್ ರಿಜಿಸ್ಟ್ರಾರ್ ಕಚೇರಿಗಳು ಪುನರಾರಂಭಗೊಂಡಿವೆ.

ಅಪಾಯ ಎದುರಿಸಲು ಭದ್ರತಾ ಕ್ರಮ

ಉಪ ನೋಂದಣಿ ಕಚೇರಿಯ ಸರ್ವರ್‌ಗೆ ಇಂತಹ ಅನಿರೀಕ್ಷಿತ ದಾಳಿ ತಡೆದು, ಭವಿಷ್ಯದಲ್ಲಿ ಎದುರಾಗುವ ಅಪಾಯಗಳನ್ನು ತಗ್ಗಿಸಲು ವರ್ಧಿತ ಭದ್ರತಾ ಕ್ರಮ ಕೈಗೊಳ್ಳಲಾಗಿದೆ. ತಾಂತ್ರಿಕ ಸಮಸ್ಯೆಯ ಕಾರಣದಿಂದ ಕೆಲ ದಿನಗಳಿಂದ ಆಸ್ತಿ ನೋಂದಣಿ ಪ್ರಕ್ರಿಯೆ, ಇಸಿ ಸೇವೆಗಳ ಮೇಲೆ ಪರಿಣಾಮ ಉಂಟಾಗಿತ್ತು. ಇದರಿಂದ ಆದಾಯ ಸಂಗ್ರಹ ಮತ್ತಷ್ಟು ಕುಸಿದಿತ್ತು. ಆದರೆ ಮುಂದೆ ಇಂತಹ ತಾಂತ್ರಿಕ ಸಮಸ್ಯೆ ಎದುರಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಈ ಸಂಬಂಧ ಇ– ಆಡಳಿತ ಇಲಾಖೆ ನಿರಂತರವಾಗಿ ಮೇಲ್ವಿಚಾರಣೆ ನಡೆಸಲಿದೆ.

- ಕೃಷ್ಣ ಬೈರೇಗೌಡ, ಕಂದಾಯ ಸಚಿವ

ಮೈಸೂರಿನ ದಕ್ಷಿಣ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ನೋಂದಣಿ ಪ್ರಕ್ರಿಯೆ ಪುನರಾರಂಭಗೊಂಡಿದೆ. ಈಗ ಯಾವುದೇ ಸಮಸ್ಯೆ ಇಲ್ಲ. ಎಲ್ಲಾ ರೀತಿಯ ನೋಂದಣಿ ಸರಾಗವಾಗಿ ನಡೆಯುತ್ತಿದೆ.

-ಯಶಸ್ವಿನಿ, ಉಪ ನೋಂದಣಾಧಿಕಾರಿ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಅನ್‌ಲಾಕ್ ರಾಘವ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ತಂಡೇಲ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ದೇವ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ವಿದಾಮುಯರ್ಚಿ (ತ)	4 ಪ್ರದರ್ಶನಗಳು
ಗಾಯಿತ್ರಿ	
ಮಾರ್ಕೋ (ತ)+ ಮಾರ್ಕೋ (ಕ)	1+4 ಪ್ರದರ್ಶನಗಳು
ರಾಜಕಮಲ್	
ವಿದಾಮುಯರ್ಚಿ (ತ)	4 ಪ್ರದರ್ಶನಗಳು
ಸಂಗಂ	
ರಾಯಲ್ (ಕ)	4 ಪ್ರದರ್ಶನಗಳು
ಲಿಡೋ	
ತಲ್ವಾರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವಿದಾಮುಯರ್ಚಿ (ಹಿಂ)	4 ಪ್ರದರ್ಶನಗಳು
ಪ್ರಭಾ	
ರಾಜರಾಣಿ(ತ) + ಅಲ್ಲೇ ಡ್ರಾ ಅಲ್ಲೇ ಬಹುಮಾನ (ಕ)	2+2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ರಾ.7.05ಕ್ಕೆ, ವಿದ್ದಾಮುಯರ್ಚಿ (ತ): ರಾ.10ಕ್ಕೆ.
ಸ್ಕ್ರೀನ್ 3	ಭೂ ಮಂತರ್ (ಕ): ಬೆ.10.45ಕ್ಕೆ, ರಾ.7.15ಕ್ಕೆ, ಕಾಡು ಮಲ್ಲೆ (ಕ): ಮ.1.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ, ಪೊನ್ಮನ್ (ಮ): ರಾ.10.15.
ಸ್ಕ್ರೀನ್ 4	ಮ್ಯಾಕ್ಸ್ (ಕ): ಮ.1ಕ್ಕೆ, ದೇವ (ಹಿಂ): ಸಂ.4ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಭೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಏಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮಾಲಿನ್ಯ ನಿಯಂತ್ರಣ ಮಂಡಳಿ ನೇತೃತ್ವದಲ್ಲಿ ಚಾಮುಂಡಿಬೆಟ್ಟದಲ್ಲಿ ವಿಶೇಷ ಸ್ವಚ್ಛತೆ



ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಗುರುವಾರ ಸ್ವಚ್ಛತಾ ಅಭಿಯಾನ ನಡೆಸಿ, ಅಪಾರ ಪ್ರಮಾಣದ ಪ್ಲಾಸ್ಟಿಕ್, ಇನ್ನಿತರ ತ್ಯಾಜ್ಯವನ್ನು ಸಂಗ್ರಹಿಸಲಾಯಿತು.

ಮೈಸೂರು, ಫೆ.6(ಎಸ್‌ಬಿಡಿ)– ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ಚಾಮುಂಡಿಬೆಟ್ಟದಲ್ಲಿ ಗುರುವಾರ ವಿಶೇಷ ಸ್ವಚ್ಛತಾ ಅಭಿಯಾನ ನಡೆಸಲಾಯಿತು.

ಚಾಮುಂಡಿಬೆಟ್ಟ ಸ್ವಚ್ಛತೆ ಹಾಗೂ ಪ್ಲಾಸ್ಟಿಕ್ ತ್ಯಾಜ್ಯ ನಿರ್ಮೂಲನಾ ಅಭಿಯಾನಕ್ಕೆ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿಯ ನಗರ ಹಾಗೂ ಗ್ರಾಮಾಂತರ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ, ಮಡಿಲು ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಚಾಮುಂಡಿಬೆಟ್ಟ ಗ್ರಾಮ ಪಂಚಾಯಿತಿ ಎಸ್‌ಜೆಸಿಇ ಹಾಗೂ ಎಂಐಟಿ ಕಾಲೇಜು ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಹಾಗೂ ಕಾರ್ಖಾನೆಗಳ ಸಿಬ್ಬಂದಿ ಕೈ ಜೋಡಿಸಿದ್ದರು.

ಚಾಮುಂಡಿಬೆಟ್ಟದ ದೇವಸ್ಥಾನಗಳ ಆವರಣ, ಮೆಟ್ಟಿಲು ಮಾರ್ಗ, ವಾಹನ ನಿಲುಗಡೆ ಪ್ರದೇಶ ಹಾಗೂ ಬೆಟ್ಟದ ರಸ್ತೆಯಲ್ಲಿ ಕಸ ಸಂಗ್ರಹಿಸಲಾಯಿತು. ಇದೇ ವೇಳೆ ಭಕ್ತರು ಹಾಗೂ ಪ್ರವಾಸಿಗರಿಗೆ ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸಲಾಯಿತು. ತಾಯಿ ಚಾಮುಂಡೇಶ್ವರಿ ನೆಲೆಸಿರುವ ಈ ಪವಿತ್ರ ಕ್ಷೇತ್ರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಎಲ್ಲರ ಜವಾಬ್ದಾರಿ. ಕಸವನ್ನು ಎಲ್ಲೆಂದರಲ್ಲಿ ಬಿಸಾಡದೆ ಡಸ್ಟ್‌ಬಿನ್‌ಗಳಲ್ಲಿ ಹಾಕಬೇಕು. ಬೆಟ್ಟಕ್ಕೆ ಯಾವುದೇ ರೀತಿಯ ಪ್ಲಾಸ್ಟಿಕ್ ತರಬಾರದು. ಇಲ್ಲಿನ ಸ್ವಚ್ಛತೆ ನಿರ್ವಹಣೆಗೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಮನವಿ ಮಾಡಲಾಯಿತು.

ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಪರಿಸರ ಅಧಿಕಾರಿ ಎಸ್.ರಾಜಶೇಖರ, ಪರಿಸರ ಅಧಿಕಾರಿಗಳಾದ ವಿ.ಎಸ್.ಕುಮಾರ್, ವಿ.ಸುನಿಲ್, ಎಸ್‌ಜೆಸಿಇ ಸಂಸ್ಥೆಯ ಸದಾಶಿವಮೂರ್ತಿ, ಮಡಿಲು ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಕೆ.ಶ್ರೀನಿವಾಸ್, ಕಾರ್ಖಾನೆ ನೌಕರರು ಸೇರಿದಂತೆ ನೂರಾರು ಮಂದಿ ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಫೆ.6– ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿ ನಿರ್ವಹಣಾ ಕೆಲಸ ನಿಮಿತ್ತ ಫೆ.8 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಇಲವಾಲ, ಹಳೆ–ಕಾಮನಕೊಪ್ಪಲು, ಮೈದನಹಳ್ಳಿ, ಮೇಗಳಾಪುರ, ಭದ್ರೇಗೌಡನಕೊಪ್ಪಲು, ಚಿಕ್ಕೆಗೌಡನಕೊಪ್ಪಲು, ಹೊಸಕೋಟೆ, ಸರಕಟ್ಟೆ, ಯಾಚೇಗೌಡನಹಳ್ಳಿ, ದಡಕನಹಳ್ಳಿ, ರಾಮೇನಹಳ್ಳಿ, ಯಡಹಳ್ಳಿ, ಕಲ್ಲೂರು, ನಾಗನಹಳ್ಳಿ, ಗುಂಗ್ರಾಲ್‌ಛತ್ರ, ಛತ್ರದಕೊಪ್ಪಲು, ರಟ್ನಳ್ಳಿ, ವೀರಪ್ಪನಕೊಪ್ಪಲು ಮತ್ತು ಸುತ್ತಮುತ್ತಲಿನ ಪ್ರದೇಶಗಳು.

ಬನ್ನಿಮಂಟಪ ವಿದ್ಯುತ್ ವಿತರಣಾ ಕೇಂದ್ರದ ಬೆಲವತ್ತ, ಬೆಲವತ್ತ ಮಂಡಿ, ಶಾದನಹಳ್ಳಿ, ನಾಗನಹಳ್ಳಿ ಹೊಸ ಬಡಾವಣೆ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಭಾರತೀಯರ ಗಡಿಪಾರಿನಲ್ಲಿ ಅಮೆರಿಕದಿಂದ ಅಮಾನವೀಯ ನಡೆ ಖಂಡಿಸಿ ವಿಪಕ್ಷ ನಾಯಕರಿಂದ ಸಂಸತ್ ಆವರಣದಲ್ಲಿ ಕೈಕೋಳ ಧರಿಸಿ ಪ್ರತಿಭಟನೆ



ನವದೆಹಲಿ, ಫೆ.6– ಅಕ್ರಮವಾಗಿ ನೆಲೆಸಿದ್ದ ಭಾರತೀಯರನ್ನು ಅಮೆರಿಕ ಅಮಾನವೀಯವಾಗಿ ಗಡಿಪಾರು ಮಾಡಿರುವುದನ್ನು ಖಂಡಿಸಿ ವಿರೋಧ ಪಕ್ಷದ ನಾಯಕರು ಸಂಸತ್ತಿನಲ್ಲಿ ಇಂದು (ಫೆ.6) ಪ್ರತಿಭಟನೆ ನಡೆಸಿದರು. ಸಂಸದ ಕೆ.ಸಿ. ವೇಣುಗೋಪಾಲ್ ಸೇರಿದಂತೆ ಹಲವು ವಿರೋಧ ಪಕ್ಷದ ನಾಯಕರು 'ಕೈಗೆ ಕೋಳ' ಧರಿಸಿ ಪ್ರತಿಭಟಿಸಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕಾ ಗಾಂಧಿ, ಎಸ್‌ಪಿ ಮುಖ್ಯಸ್ಥ ಅಖಿಲೇಶ್ ಯಾದವ್ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಂಸತ್ತಿನಲ್ಲಿ ಕಲಾಪ ಪುನರಾರಂಭವಾಗುತ್ತಿದ್ದಂತೆಯೇ ವಿರೋಧ ಪಕ್ಷದ ನಾಯಕರು 104 ಭಾರತೀಯ ವಲಸಿಗರ ಗಡಿಪಾರು ಪ್ರಕ್ರಿಯೆ ಕುರಿತು ಚರ್ಚೆಗೆ ಒತ್ತಾಯಿಸಿದರು. ಸಂಸದರು ಘೋಷಣೆಗಳನ್ನು ಕೂಗುತ್ತಾ, ಸದನದ ಬಾವಿಗಿಳಿದು ಪ್ರತಿಭಟಿಸಿದರು. ಆಗ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, 'ಅನಗತ್ಯ ಗಲಾಟೆ ಎಬ್ಬಿಸಬೇಡಿ' ಎಂದರು.

ನೀವು ಪ್ರತಿಭಟಿಸುತ್ತಿರುವ ವಿಷಯ ವಿದೇಶಾಂಗ ಸಚಿವಾಲಯದ ವ್ಯಾಪ್ತಿಯಲ್ಲಿದ್ದು, ಸರ್ಕಾರಕ್ಕೆ ಸಂಬಂಧಿಸಿದ್ದಾಗಿದೆ. ಮುಖ್ಯವಾಗಿ ಇದು ಬೇರೆ ದೇಶಕ್ಕೆ ಸಂಬಂಧಿಸಿದೆ. ಅಮೆರಿಕ ಭಾರತೀಯರನ್ನು ಗಡಿಪಾರು ಮಾಡಿರುವ ಕ್ರಮ ಸರ್ಕಾರದ ಗಮನಕ್ಕೆ ಬಂದಿದೆ ಎಂದು ಸ್ಪೀಕರ್ ಓಂ ಬಿರ್ಲಾ ತಿಳಿಸಿದರು. ಆದರೂ ಸಂಸದರು ಪ್ರತಿಭಟನೆ ಮುಂದುವರಿಸಿದಾಗ ಸ್ಪೀಕರ್ ಸದನವನ್ನು ಕೆಲಕಾಲ ಮುಂದೂಡಿದರು.

ಇದಕ್ಕೂ ಮುಂಚಿತವಾಗಿ ಕಾಂಗ್ರೆಸ್ ನಾಯಕ ಕೆ.ಸಿ.ವೇಣುಗೋಪಾಲ್ ಅಮೆರಿಕ ಗಡಿಪಾರು ಕ್ರಮದ ಬಗ್ಗೆ ಲೋಕಸಭೆಯಲ್ಲಿ ಚರ್ಚಿಸಲು ನಿಲುವಳಿ ಸೂಚನೆಯನ್ನು ಮಂಡಿಸಿದರು. ಡೊನಾಲ್ಡ್ ಟ್ರಂಪ್ ಆಡಳಿತದೊಂದಿಗೆ ಮಾತುಕತೆ ನಡೆಸಲು ತೆಗೆದುಕೊಳ್ಳುತ್ತಿರುವ ರಾಜತಾಂತ್ರಿಕ ಕ್ರಮಗಳನ್ನು ವಿವರಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಡೊನಾಲ್ಡ್ ಟ್ರಂಪ್ ಸರ್ಕಾರ ಭಾರತೀಯ ಪ್ರಜೆಗಳನ್ನು ಕೈಕೋಳದಲ್ಲಿ ಅಮೆರಿಕದಿಂದ ಗಡೀಪಾರು ಮಾಡಿರುವ ಕ್ರಮವು ದೇಶಕ್ಕೆ ಮಾಡಿದ ಅವಮಾನವಾಗಿದೆ ಎಂದು ಕಾಂಗ್ರೆಸ್ ಸಂಸದ ಶಶಿ ತರೂರ್ ಹೇಳಿದರು. ಕೈಕೋಳ ಹಾಕಿ ಗಡಿಪಾರು ಮಾಡಿರುವ ಕ್ರಮದ ವಿರುದ್ಧ ಪ್ರತಿಭಟಿಸುತ್ತಿದ್ದೇವೆ. ತಮ್ಮ ದೇಶದಲ್ಲಿ ಅಕ್ರಮವಾಗಿ ವಾಸಿಸುವ ಜನರನ್ನು ಗಡಿಪಾರು ಮಾಡುವ ಎಲ್ಲಾ ಹಕ್ಕನ್ನು ಅವರು ಹೊಂದಿದ್ದಾರೆ. ಆದರೆ ಅವರನ್ನು ಮಿಲಿಟರಿ ವಿಮಾನದಲ್ಲಿ ಕೈಕೋಳದಲ್ಲಿ ಹಾಕಿ ಕಳುಹಿಸಿರುವುದು ಭಾರತಕ್ಕೆ ಹಾಗೂ ಭಾರತೀಯರ ಘನತೆಗೆ ಮಾಡಿದ ಅವಮಾನ ಎಂದು ಆಕ್ಷೇಪಿಸಿದರು.

ಅಮೆರಿಕದ ನೀತಿಯಂತೆ ವಲಸಿಗರ ಕೈ–ಕಾಲಿಗೆ ಕೋಳ; ಎಸ್.ಜೈಶಂಕರ್

ಅಕ್ರಮ ವಲಸಿಗರನ್ನು ಅಮೆರಿಕದಿಂದ ಗಡಿಪಾರು ಮಾಡುವುದು ಹೊಸ ಬೆಳವಣಿಗೆಯಲ್ಲ. ಅದು ಹಲವು ವರ್ಷಗಳಿಂದ ನಡೆಯುತ್ತಿದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ.

104 ಅಕ್ರಮ ವಲಸಿಗರ ಗಡಿಪಾರಿಗೆ ಸಂಬಂಧಿಸಿದಂತೆ ರಾಜ್ಯಸಭೆಯಲ್ಲಿ ವಿವರಣೆ ನೀಡಿದ ಅವರು, ಗಡಿಪಾರಾದವರಿಗೆ ಅಮೆರಿಕದ ಎಸ್‌ಒಪಿಯಂತೆ ಕೈ–ಕಾಲಿಗೆ ಕೋಳ ಹಾಕಲಾಗಿದೆ. ಅವರಿಗೆ ವಿಮಾನದಲ್ಲಿ ಯಾವುದೇ ರೀತಿಯ ಕಿರುಕುಳವನ್ನು ನೀಡಿಲ್ಲ ಎಂದು ಸ್ಪಷ್ಟನೆ ನೀಡಿದರು. 2012ರಿಂದಲೂ ಗಡಿಪಾರಾದವರ ಕೈ–ಕಾಲಿಗೆ ಕೋಳ ಹಾಕಲಾಗುತ್ತಿದೆ, ಅದೇನು ಹೊಸದಲ್ಲ. ನಾವು ಈ ಬಗ್ಗೆ ಅಮೆರಿಕದ ಜೊತೆ ಮಾತನಾಡುತ್ತೇವೆ ಎಂದು ಹೇಳಿದರು. ಅದಲ್ಲದೇ ವಿಮಾನದಲ್ಲಿರುವ ಸೌಲಭ್ಯಗಳ ಬಗ್ಗೆ ಹಾಗೂ ಭಾರತೀಯರನ್ನು ಅಮೆರಿಕದ ಸೇನಾ ವಿಮಾನದಲ್ಲಿ ನಡೆಸಿಕೊಂಡಿರುವುದನ್ನು ಎಸ್ ಜೈಶಂಕರ್ ವಿವರಿಸಿದರು. ಅದಲ್ಲದೇ 2009ರಿಂದ ಅಮೆರಿಕದಿಂದ ಗಡಿಪಾರಾದ ಭಾರತೀಯರ ಅಂಕಿ–ಸಂಖ್ಯೆಯನ್ನು ಸದನ ಮುಂದೆ ಇಟ್ಟರು. ಅದಾದ ಬಳಿಕ ಇದೇ ವಿಚಾರವಾಗಿ ಚರ್ಚೆ ಕೂಡ ನಡೆಯಿತು. ವಿರೋಧ ಪಕ್ಷಗಳು ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದರು.

ಉಚಿತ ಆರೋಗ್ಯ ಶಿಬಿರ

ಮೈಸೂರು, ಫೆ.6– ಎನ್‌ಜೆಎಸ್ ಚಾರಿಟೇಬಲ್ ಟ್ರಸ್ಟ್ ಹಾಗೂ ಮೈಸೂರು ವೀರಶೈವ ಸಜ್ಜನ ಸಂಘದ ಸಹಯೋಗದಲ್ಲಿ ಫೆ.11ರಂದು ಮೈಸೂರಿನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಮಂಡಿ ಮೊಹಲ್ಲಾದ ಕಬೀರ್ ರಸ್ತೆಯಲ್ಲಿರುವ ಕಂಠಿ ಮಲ್ಲಣ್ಣನವರ ಕಲ್ಯಾಣ ಮಂಟಪದಲ್ಲಿ ಅಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 2 ಗಂಟೆವರೆಗೆ ಶಿಬಿರ ನಡೆಯಲಿದ್ದು, ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬಹುದು. ಮಾಹಿತಿಗೆ ಹೆಚ್.ಎನ್. ಬಸವರಾಜ್ (9448753597) ಅಥವಾ ಎಂ.ಎನ್. ಜೈಪ್ರಕಾಶ್(9448738657) ಅವರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ಖಂಡಿಸುವುದೇ ಪೌರುಷ

ಯುವ ಜನ ಸಂಕಲ್ಪ ಸಮಾವೇಶದಲ್ಲಿ ಡಾ.ಸುಧಾ ಕಾಮತ್ ಪ್ರತಿಪಾದನೆ

ಮೈಸೂರು, ಫೆ.6(ಜಿಎ)–ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯವನ್ನು ಖಂಡಿಸಿ, ಅನಗತ್ಯವಾಗಿ ಪ್ರತಿಭಟಿಸುವುದೇ ಪೌರುಷ. ಅದು ಬಿಟ್ಟು ಆಕ್ರಮಣಕಾರಿಯಾಗಿ ಇರುವುದು ಪೌರುಷ ವಲ್ಲ ಎಂದು ಪ್ರತಿಪಾದಿಸಿದ ಮೆಡಿಕಲ್ ಸರ್ವಿಸ್ ಸೆಂಟರ್‌ನ ರಾಜ್ಯಾಧ್ಯಕ್ಷೆ ಡಾ.ಸುಧಾ ಕಾಮತ್ ಈ ರೀತಿ ಸಾಮಾಜಿಕ ಬದ್ಧತೆ ತೋರುವುದು ಪುರುಷ ವ್ಯಕ್ತಿತ್ವ ಭಾಗವಾಗಬೇಕು ಎಂದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಆಲ್ ಇಂಡಿಯಾ ಡೆಮಾಕ್ರಟಿಕ್ ಯೂತ್ ಆರ್ಗನೈಸೇಷನ್ (ಎಐಡಿವೈಓ) ವತಿಯಿಂದ ಆಯೋಜಿಸಿದ್ದ ಯುವ ಜನ ಸಂಕಲ್ಪ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ನೀನು ಗಂಡಸು ಯಾವ ರೀತಿಯಾದರು ಬೆಳೆಯಬಹುದು. ಗಂಡು ಪೌರುಷದಿಂದ ಆಕ್ರಮಣಕಾರಿಯಾಗಿ ಇರಬೇಕು ಎಂಬುದನ್ನು ಬಾಲ್ಯದಿಂದಲೇ ಕಲಿಸುತ್ತಾರೆ. ಇದು ನಿಜವಾದ ಪೌರುಷ ಅಲ್ಲ. ಸಮಾಜದ ಅನ್ಯಾಯಗಳನ್ನು, ಹೆಣ್ಣು ಮಕ್ಕಳ ದೌರ್ಜನ್ಯವನ್ನು ಖಂಡಿಸಿ ಪ್ರತಿಭಟಿಸುವುದು ಪೌರುಷ. ಈ ರೀತಿ ಸಾಮಾಜಿಕ ಬದ್ಧತೆ ತೋರುವುದು ಪುರುಷ ವ್ಯಕ್ತಿತ್ವದ ಭಾಗವಾಗಬೇಕು ಎಂದರು.



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಆಲ್ ಇಂಡಿಯಾ ಡೆಮಾಕ್ರಟಿಕ್ ಯೂತ್ ಆರ್ಗನೈಸೇಷನ್ (ಎಐಡಿವೈಓ) ವತಿಯಿಂದ ಆಯೋಜಿಸಿದ್ದ ಯುವ ಜನ ಸಂಕಲ್ಪ ಸಮಾವೇಶವನ್ನು ಮೆಡಿಕಲ್ ಸರ್ವಿಸ್ ಸೆಂಟರ್‌ನ ರಾಜ್ಯಾಧ್ಯಕ್ಷೆ ಡಾ.ಸುಧಾ ಕಾಮತ್ ಉದ್ಘಾಟಿಸಿ, ಮಾತನಾಡಿದರು.

ಈ ರೀತಿಯ ಪೌರುಷವುಳ್ಳ ಗುಣವನ್ನು ಸುಭಾಷ್ ಚಂದ್ರಬೋಸ್, ಭಗತ್ ಸಿಂಗ್, ರಾಜರಾಮ್ ಮೋಹನ್ ರಾಯ್, ವಿದ್ಯಾ ಸಾಗರ್, ಶರತ್ ಚಂದ್ರ ಚಟರ್ಜಿ, ಜ್ಯೋತಿ ಬಾ ಪುಲೆ, ಪಂಡಿತ್ ತಾರಾನಾಥ್, ಕುದ್ಮಲ್ ರಂಗರಾವ್, ಕುವೆಂಪು ಹೊಂದಿದ್ದರು. ಮಹಿಳೆಯರ ಬಗ್ಗೆ ಕಾಳಜಿ ಇದ್ದವರು. ಸ್ತ್ರೀ ಸಮಾನತೆಯ ನೆಲೆಗೊಳಿಸಲು ಹೋರಾಡಿದರು ಎಂದರು.

ಹೆಣ್ಣನ್ನು ನಿಂದಿಸುವ, ಹಾಸ್ಯದ ವಸ್ತುವಾಗಿ ಬಳಸುವ ಪ್ರವೃತ್ತಿ ನಮ್ಮಲ್ಲಿದೆ. ಪ್ರಸ್ತುತ ಸನ್ನಿವೇಶದಲ್ಲಿ ಭಯದಲ್ಲಿ ಓಡಾಡುವ ಪರಿಸ್ಥಿತಿ ಇದೆ. ಶಾಲಾ–ಕಾಲೇಜುಗಳಲ್ಲಿ ಶಿಕ್ಷಕರಿಂದ, ಬಸ್ಸುಗಳಲ್ಲಿ, ಹೊರಗೆ ಓಡಾಡುವಾಗ ಅಷ್ಟೇ ಯಾಕೇ ಕುಟುಂಬದಲ್ಲಿಯೂ ದೌರ್ಜನ್ಯ ಎದುರಿಸುತ್ತಿದ್ದಾರೆ. ಇದಕ್ಕೆ ಕಾರಣ ಹೆಣ್ಣು ಮಕ್ಕಳ ಶೀಲವನ್ನು ವೈಭವೀಕರಿಸಿ ನಡತೆ ಮೇಲೆ ಪೂರ್ವಗ್ರಹ ಹೊಂದಿರುವುದು. ಹೀಗಾಗಿ ವರದಿಯಾಗುತ್ತಿರುವ ಪ್ರಕರಣಗಳಿಗಿಂತ ಹೆಚ್ಚಿನ ಪಟ್ಟು ಮಹಿಳೆ ಲೈಂಗಿಕ ದೌರ್ಜನ್ಯಕ್ಕೆ ಒಳಗಾಗುತ್ತಿದ್ದಾಳೆ ಎಂದು ಬೇಸರ ವ್ಯಕ್ತಪಡಿಸಿದರು.


ಇದೊಂದು ಪುರುಷ ಕೇಂದ್ರಿತ ಸಮಾಜ. ಪುರುಷನ ದರ್ಪಕ್ಕೆ ಒಳಗಾಗಿ ಮಹಿಳೆ ಎರಡನೇ ದರ್ಜೆ ನಾಗರಿಕರಾಗಿ ಬೆಳೆಯಬೇಕು ಎಂಬ ಚಿಂತನೆ ದೇಶದಲ್ಲಿದೆ. ಕುಟುಂಬಸ್ಥರೇ ತಮ್ಮ ಹೆಣ್ಣು ಮಕ್ಕಳಿಗೆ ತಲೆ ತಗ್ಗಿಸಿ ಎಲ್ಲವನ್ನು ಸಹಿಸಿಕೊಳ್ಳಬೇಕು. ಪುರುಷನ ಎದುರು ಜೋರಾಗಿ ಮಾತನಾಡಬಾರದು ಎಂಬಿತ್ಯಾದಿ ಲಕ್ಷ್ಮಣರೇಖೆ ಹಾಕಿ ಕಟ್ಟುಪಾಡಿನಲ್ಲಿ ಬೆಳೆಸುತ್ತಿದ್ದಾರೆ. ಹೀಗಾಗಿ ಮಹಿಳೆಯರು ತಮ್ಮ ಮೇಲಾದ ದೌರ್ಜನ್ಯಗಳನ್ನು ವಿರೋಧಿಸುವುದಿಲ್ಲ ಎಂದರು.

ಮಹಿಳೆಯರು ಸಮಾಜದಲ್ಲಿ ಪ್ರಗತಿಯಲ್ಲಿ ತೊಡಗಿ ಸಮಾನತೆಯ ಸಮಾಜ ಕಟ್ಟಬೇಕು. ಸಾಂಸ್ಕೃತಿಕ ಕಾರ್ಯಕ್ರಮ, ಕ್ರೀಡೆ, ಸಾಮಾಜಿಕ ಚಟುವಟಿಕೆಗಳು ತೊಡಗಬೇಕು. ಈ ನಿಟ್ಟಿನಲ್ಲಿ ಮಹಿಳೆಯರು ಸಾಗಿದರೆ ಲೈಂಗಿಕ ಮತ್ತು ಇತರೆ ದೌರ್ಜನ್ಯಗಳಿಂದ ತಪ್ಪಿಸಿಕೊಳ್ಳಬಹುದು ಎಂದು ಲೇನಿನ್ ಹೇಳಿದ್ದಾರೆ. ಹೆಣ್ಣು ಭೋಗದ ವಸ್ತುವಲ್ಲ ಎಂಬುದನ್ನು ಸಮಾಜ ಅರಿಯಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಲೈಂಗಿಕ ಅಪರಾಧಗಳು–ಕಾರಣ ಮತ್ತು ಪರಿಹಾರಗಳ ಕುರಿತು ಜೆಎಸ್‌ಎಸ್ ಆಸ್ಪತ್ರೆಯ ಹಿರಿಯ ಮನೋವೈದ್ಯ ಡಾ.ಎಂ.ಕಿಶೋರ್ ಮಾತನಾಡಿದರು. ಅಖಿಲ ಭಾರತ ಎಐಡಿವೈಓನ ಉಪಾಧ್ಯಕ್ಷ ಡಾ.ಜಿ.ಎಸ್.ಕುಮಾರ್ ಇಂದಿನ ಯುವ ಮನಸ್ಸಿನ ತಲ್ಲಣಗಳ ಕುರಿತ ವಿಷಯ ಮಂಡಿಸಿದರು. ಎಐಡಿವೈಓ ರಾಜ್ಯ ಕಾರ್ಯದರ್ಶಿ ಸಿದ್ದಲಿಂಗ ಬಾಗೇವಾಡಿ, ಜಿಲ್ಲಾಧ್ಯಕ್ಷ ಟಿ.ಆರ್.ಸುನೀಲ್, ಜಿಲ್ಲಾ ಕಾರ್ಯದರ್ಶಿ ಎಸ್.ಸುಮಾ ಮತ್ತಿತರರು ಉಪಸ್ಥಿತರಿದ್ದರು.

ಅನಧಿಕೃತ ತಂಬಾಕು ಮಾರಾಟಕ್ಕೆ ಅವಕಾಶ ಕಲ್ಪಿಸಲು

ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್‌ಗೆ ಯದುವೀರ್ ಮನವಿ



ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರನ್ನು ಸಂಸದ ಯದುವೀರ್ ಭೇಟಿಯಾಗಿದ್ದರು.

ಮೈಸೂರು, ಫೆ6(ಎಸ್‌ಬಿಡಿ)– ಪರವಾನಗಿ ಇಲ್ಲದ ತಂಬಾಕು ಬೆಳೆಗಾರರಿಗೂ ಮಾರಾಟಕ್ಕೆ ಅವಕಾಶ ಕಲ್ಪಿಸುವಂತೆ ಮೈಸೂರು–ಕೊಡಗು ಸಂಸದ ಯದುವೀರ್ ಅವರು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರನ್ನು ಒತ್ತಾಯಿಸಿದ್ದಾರೆ.

ನವದೆಹಲಿಯಲ್ಲಿ ಕೇಂದ್ರ ಸಚಿವರನ್ನು ಭೇಟಿ ಮಾಡಿದ ಸಂಸದ ಯದುವೀರ್, ಮೈಸೂರು ಜಿಲ್ಲೆಯಲ್ಲಿ ತಂಬಾಕು ಬೆಳೆದಿರುವ ಹಲವು ರೈತರು ಪರವಾನಗಿ ಹೊಂದಿಲ್ಲ ಎಂಬ ಕಾರಣದಿಂದ ತೀವ್ರ ತೊಂದರೆಯಾಗಿದೆ. ಆದ್ದರಿಂದ ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೂ ಮಾರಾಟಕ್ಕೆ ಅವಕಾಶ ಕಲ್ಪಿಸಿಕೊಡಬೇಕು. ಜೊತೆಗೆ ಪರವಾನಗಿ ಹೊಂದಿರುವ ಬೆಳೆಗಾರರಿಗೆ ವಿಧಿಸಲಾಗುತ್ತಿದ್ದ ದಂಡವನ್ನೂ ಮನ್ನಾ ಮಾಡಬೇಕು ಎಂದು ಮನವಿ ಮಾಡಿದರು.


ಕೇಂದ್ರ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಕಾರ್ಡ್ ಹೊಂದಿರದ (ಪರವಾನಗಿ ರಹಿತ) ತಂಬಾಕು ಬೆಳೆಗಾರರ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸುವುದರ ಜೊತೆಗೆ ಪರವಾನಗಿ ಹೊಂದಿರುವ ತಂಬಾಕು ಬೆಳೆಗಾರರಿಗೆ ವಿಧಿಸುತ್ತಿದ್ದ ದಂಡವನ್ನು ಮನ್ನಾ ಮಾಡುವ ಸಂಬಂಧ ತಂಬಾಕು ಮಂಡಳಿಗೆ ಸೂಕ್ತ ನಿರ್ದೇಶನ ನೀಡುವುದಾಗಿ ಭರವಸೆ ನೀಡಿದ್ದಾರೆ. ಅತಿ ಶೀಘ್ರದಲ್ಲೇ ನಿರ್ಧಾರ ಹೊರಬೀಳುವ ನಿರೀಕ್ಷೆ ಇದೆ. ನಮ್ಮ ಕ್ಷೇತ್ರದ ಬೆಳಗಾರರ ಪರವಾಗಿ ದನಿ ಎತ್ತಲು ನಾನು ಸದಾ ಬದ್ಧನಾಗಿದ್ದೇನೆ ಎಂದು ಯದುವೀರ್ ತಿಳಿಸಿದ್ದಾರೆ.

ಕಥೆ ಕೇಳೋಣ ಬನ್ನಿ ಕಾರ್ಯಕ್ರಮ

ಮೈಸೂರು, ಫೆ. 6– ಮೈಸೂರಿನ ಕುವೆಂಪುನಗರದ ಕಲಾಸುರುಚಿ ರಂಗ ಮನೆಯಲ್ಲಿ ಫೆ. 8 ರಂದು ಸಂಜೆ 4.30 ರಿಂದ 5.30 ರವರೆಗೆ ಕಥೆ ಕೇಳೋಣ ಬನ್ನಿ ಕಾರ್ಯಕ್ರಮ ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಕುವೆಂಪುನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಆರ್. ನಾಗಭೂಷಣ್ ಮಕ್ಕಳಿಗೆ ಕಥೆ ಹೇಳಲಿದ್ದಾರೆ. ಹೆಚ್ಚಿನ ಮಾಹಿತಿಗೆ 9243581097 ಸಂಪರ್ಕಿಸಬಹುದು.



ಕೃಷ್ಣರಾಜ ಕ್ಷೇತ್ರದ ಜನಪ್ರಿಯ ಮಾಜಿ ಶಾಸಕರಾದ
ಶ್ರೀ ಎಂ.ಕೆ. ಸೋಮಶೇಖರ್‌ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಶುಭಕೋರುವವರು :
ಗೋವಿಂದರಾಜು,
ಕಾಂಗ್ರೆಸ್ ಮುಖಂಡರು



ಬಡವರ ಬಂಧು, ಧೀಮಂತ ನಾಯಕ
ಸರಳ ಸಜ್ಜನಿಕೆಯ ರಾಜಕಾರಿಣಿ ಮಾಜಿ ಶಾಸಕರಾದ
ಎಂ.ಕೆ. ಸೋಮಶೇಖರ್ ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
–: ಶುಭಾಶಯ ಕೋರುವವರು :–
SHIVA SANGAMA DEVELOPERS
AMOOLYAKIRANA CHITS PVT. LTD.
KAUSTHUBHA FINANCE CORPORATION
IndianOil SHIVA SERVICE STATION
ಎಂ.ಕೆ.ಎಸ್. ಅಭಿಮಾನಿ ಬಳಗ



ಕೃಷ್ಣರಾಜ ಕ್ಷೇತ್ರದ ಮಾಜಿ ಶಾಸಕರಾದ
ಶ್ರೀ ಎಂ.ಕೆ.ಸೋಮಶೇಖರ್ ರವರಿಗೆ ಹುಟ್ಟು ಹಬ್ಬದ ಶುಭಾಶಯಗಳು
ಶುಭಕೋರುವವರು: ಚೇತನ್‌ರಾಜ್ ಎನ್.
ಅಭಿಮಾನಿಗಳ ಬಳಗ, ಮೈಸೂರು
SHIVU PRINTERS 9060363617